ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 23 ಶುಕ್ರವಾರ 2024

ಸಂಪುಟ: 45 | ಸಂಚಿಕೆ: 128 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಶಶಿಕಲಾ ಜೊಲ್ಲೆ, ಮುರುಗೇಶ್ ನಿರಾಣಿ, ಜನಾರ್ಧನ ರೆಡ್ಡಿ ವಿರುದ್ಧ

ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡಿ

ರಾಜ್ಯಪಾಲರಿಗೆ ಸಲಹೆ ನೀಡಿ ಸಂಪುಟ ಸಭೆ ನಿರ್ಣಯ


ಕುಮಾರಸ್ವಾಮಿ


ಶಶಿಕಲಾ ಜೊಲ್ಲೆ


ನಿರಾಣಿ


ಜನಾರ್ಧನರೆಡ್ಡಿ

ಬೆಂಗಳೂರು, ಆ.22 (ಕೆಎಂಶಿ)– ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವರಾದ ಶಶಿಕಲಾ ಜೊಲ್ಲೆ, ಮುರುಗೇಶ್ ನಿರಾಣಿ, ಜನಾರ್ಧನ ರೆಡ್ಡಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ರಾಜ್ಯಪಾಲರನ್ನು ಕೋರಿ ರಾಜ್ಯ ಸಚಿವ ಸಂಪುಟ ಇಂದಿಲ್ಲಿ ಮಹತ್ವದ ನಿರ್ಣಯ ಕೈಗೊಂಡಿದೆ.

ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ.ಪಾಟೀಲ್, ಇವರ ವಿರುದ್ಧ ಭ್ರಷ್ಟಾಚಾರ ತಡೆ ಕಾಯಿದೆಯಡಿ ತನಿಖಾ ಸಂಸ್ಥೆಗಳು ಆರೋಪ ಪಟ್ಟಿ


ಸುದ್ದಿಗೋಷ್ಠಿಯಲ್ಲಿ ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ.ಪಾಟೀಲ್

ಸಹಿತ ಸಲ್ಲಿಸಿರುವ ಅರ್ಜಿಗಳಿಗೆ ತನಿಖೆಗೆ ಆದೇಶ ನೀಡಿ ಎಂಬ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ ಎಂದರು.

ಸಾರ್ವಜನಿಕರ ದೃಷ್ಟಿಯಲ್ಲಿ ರಾಜ್ಯಪಾಲರ ಕಚೇರಿ ತಪ್ಪು ಮಾಡಬಾರದೆಂಬ ಉದ್ದೇಶದಿಂದ ಸಂವಿಧಾನ ವಿಧಿ 163ರಡಿ ಸಂಪುಟಕ್ಕೆ ಇರುವ ಅಧಿಕಾರವನ್ನು ಬಳಕೆ ಮಾಡಿಕೊಂಡು ಸಲಹೆ ಮಾಡುವ ನಿರ್ಣಯ ಕೈಗೊಂಡಿದ್ದೇವೆ. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಖಾಸಗಿ ವ್ಯಕ್ತಿ ನೀಡಿದ ದೂರನ್ನು ಆಧಾರವಾಗಿ ಇಟ್ಟುಕೊಂಡು ನೀವು ತನಿಖೆಗೆ ಆದೇಶ ಮಾಡಿದ್ದೀರಿ. ಭ್ರಷ್ಟಾಚಾರ ಪ್ರಕರಣಗಳಿಗೆ ಸಂಬಂಧಿಸಿದಂತೆ ನಿಮ್ಮ ಮುಂದೆ ಅನೇಕ ಪ್ರಕರಣಗಳಿವೆ. ಅದರಲ್ಲಿ ಈ ನಾಲ್ವರ ವಿರುದ್ಧ ತನಿಖಾ ಸಂಸ್ಥೆಗಳು ತನಿಖೆ ನಡೆಸಿ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ನಿಮ್ಮ ಉತ್ತರಕ್ಕೆ ಕಾಯುತ್ತಿವೆ.

ಸಿದ್ದರಾಮಯ್ಯ ಅವರ ವಿಷಯದಲ್ಲಿ ರಾಜಭವನ ತೆಗೆದುಕೊಂಡ ತರಾತುರಿ ಇವರುಗಳ ಬಗ್ಗೆ ಏಕೆ ಇಲ್ಲ ಎಂದು ಸಭೆ ಪ್ರಶ್ನೆ ಮಾಡಿರುವುದಲ್ಲದೆ, ಸಾರ್ವಜನಿಕ ಹಿತದೃಷ್ಟಿಯಿಂದ ಈ ನಾಲ್ಕೂ ಪ್ರಕರಣಗಳಲ್ಲಿ ತನಿಖೆ ನಡೆಸಲು ಅನುಮತಿ ನೀಡಬೇಕು ಎಂದು ಸಲಹೆ ಮಾಡುತ್ತೇವೆ.

197, 17ಎ ಅಡಿ ಕೆಲವು ಕೇಸ್ ಬಾಕಿ ಇವೆ, ಅದರಲ್ಲಿ ವಿಶೇಷವಾಗಿ ಶಶಿಕಲಾ ಜೊಲ್ಲೆ ವಿರುದ್ಧ 9/12/21 ರಂದು ಅರ್ಜಿ ಇದೆ, ಮುರುಗೇಶ್ ನಿರಾಣಿ ವಿರುದ್ಧ 26/2/24 ರಂದು ಅರ್ಜಿ ಇದೆ, 21/11/23ರಂದು ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಅರ್ಜಿ ಹಾಗೂ ಜನಾರ್ದನ ರೆಡ್ಡಿ ವಿರುದ್ಧದ ಅರ್ಜಿಗಳು ಬಾಕಿ ಇವೆ.

ಅದರಲ್ಲೂ ಕುಮಾರಸ್ವಾಮಿ ಹಾಗೂ ಜನಾರ್ದನ ರೆಡ್ಡಿ ವಿರುದ್ಧ ಲೋಕಾಯುಕ್ತ ಮತ್ತು ಎಸ್‌ಐಟಿ ತನಿಖೆ ನಡೆಸಿ ಆರೋಪ ಪಟ್ಟಿ ಸಲ್ಲಿಸಿವೆ. ಕುಮಾರಸ್ವಾಮಿ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜಭವನ ಜುಲೈ 29ರ 2024ರಂದು ಸ್ಪಷ್ಟೀಕರಣ ಕೇಳಿದ ಪತ್ರ ಎಸ್‌ಐಟಿಗೆ ಆ.8ರಂದು ತಲುಪಿದೆ.

ರಾಜಭವನದ ಪತ್ರಕ್ಕೆ ಎಸ್‌ಐಟಿ ಆಗಸ್ಟ್ 16ರಂದು ಸ್ಪಷ್ಟೀಕರಣ ನೀಡಿದೆ. ಅದರ ನಂತರವೂ ನೀವು ಯಾವುದೇ ತೀರ್ಮಾನ ಕೈಗೊಂಡಿಲ್ಲ. ಸಾರ್ವಜನಿಕರ ಮನೋಭಾವನೆ ಅರ್ಥ ಮಾಡಿಕೊಂಡಿರುವ ಸಂಪುಟ, ತನಗಿರುವ ಅಧಿಕಾರ ಬಳಕೆ ಮಾಡಿ, ಈ ನಾಲ್ಕೂ ವಿಶೇಷ ಪ್ರಕರಣಗಳನ್ನು ಪ್ರಾಸಿಕ್ಯೂಷನ್‌ಗೆ ನೀಡುವಂತೆ ಸಲಹೆ ಮಾಡಿದೆ. ಮುಖ್ಯಮಂತ್ರಿ ವಿರುದ್ಧ ಪ್ರಾಸಿಕ್ಯೂಷನ್ ನೋಟಿಸ್ ನೀಡಿದ ನಂತರ ಆಗಸ್ಟ್ 1ರಂದು ಮಂತ್ರಿ ಪರಿಷತ್ ಸಭೆ ತೆಗೆದುಕೊಂಡ ಖಂಡನಾ ನಿರ್ಣಯಕ್ಕೆ ಇಂದಿನ ಸಭೆ ಘಟನೋತ್ತರ ಅನುಮೋದನೆ ನೀಡಿದೆ ಎಂದು ತಿಳಿಸಿದರು.

ವಿವಾದಾತ್ಮಕವಾಗಿದ್ದ ಜೆಎಸ್‌ಡಬ್ಲ್ಯೂ ಸ್ಟೀಲ್ ಕಂಪನಿಗೆ ಸಂಡೂರು ತಾಲೂಕಿನಲ್ಲಿ 3,666 ಎಕರೆ ಭೂಮಿಗೆ ಶುದ್ಧ ಕ್ರಯ ಪತ್ರ ನೀಡುವ ನಿರ್ಧಾರ ಸಭೆ ಕೈಗೊಂಡಿತೆಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಹೆಬ್ಬಾಳದಿಂದ ಸಿಲ್ಕ್‌ಬೋರ್ಡ್ ವೃತ್ತದವರೆಗೂ 12,690 ಕೋಟಿ ರೂ. ವೆಚ್ಚದಲ್ಲಿ ಸುರಂಗ ರಸ್ತೆ ಮಾರ್ಗಕ್ಕೆ ಸಂಪುಟ ಅನುಮೋದನೆ ನೀಡಿದೆ. ರಾಜಧಾನಿಯಲ್ಲಿ 250 ಅಡಿ ಎತ್ತರದ ಆಕಾಶ ಗೋಪುರ ನಿರ್ಮಾಣಕ್ಕೆ 500 ಕೋಟಿ ರೂ. ವೆಚ್ಚ ಹಾಗೂ 52 ಇಂದಿರಾ ಕ್ಯಾಂಟೀನ್ ಆರಂಭಕ್ಕೆ ಸಂಪುಟ ಅನುಮೋದನೆ ನೀಡಿದೆ ಎಂದು ಅವರು ತಿಳಿಸಿದರು.

ಹೈಕಮಾಂಡ್‌ನಿಂದ ಇಂದು ಸಿದ್ದರಾಮಯ್ಯ ರಾಜಕೀಯ ಭವಿಷ್ಯ ನಿರ್ಧಾರ

ಸಿಎಂ, ಡಿಸಿಎಂಗೆ ದೆಹಲಿ ವರಿಷ್ಠರ ಬುಲಾವ್

ಬೆಂಗಳೂರು, ಆ.22(ಕೆಎಂಶಿ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನಗಳ ಹಂಚಿಕೆ ಹಗರಣದಲ್ಲಿ ಸಿಲುಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜಕೀಯ ಭವಿಷ್ಯದ ಬಗ್ಗೆ ಕಾಂಗ್ರೆಸ್ ವರಿಷ್ಠರು ನಾಳೆ ಮಹತ್ವದ ತೀರ್ಮಾನ ತೆಗೆದುಕೊಳ್ಳಲಿದ್ದಾರೆ.

ಈ ಪ್ರಕರಣ ರಾಷ್ಟ್ರಮಟ್ಟದಲ್ಲಿ ಪಕ್ಷಕ್ಕೆ ಭಾರಿ ಮುಜುಗರ ತಂದಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಜೊತೆಗೆ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನೂ ದೆಹಲಿಗೆ ಬರುವಂತೆ ಬುಲಾವ್ ಮಾಡಿದ್ದಾರೆ.

ವರಿಷ್ಠರ ಕರೆಯ ಮೇರೆಗೆ ನಾಳೆ ಬೆಳಗ್ಗೆ ದೆಹಲಿಗೆ ತೆರಳುವ ಉಭಯ ನಾಯಕರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಪಕ್ಷದ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರನ್ನು ಭೇಟಿ ಮಾಡಲಿದ್ದಾರೆ. ವರಿಷ್ಠರ ಕರೆ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಅವರು ಇಂದು ನಡೆದ ಸಂಪುಟ ಸಭೆ, ಆ ನಂತರ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ, ಸಚಿವರು ಮತ್ತು ಶಾಸಕರ ವಿಶ್ವಾಸ ತಮಗೆ ಇದೆ ಎಂಬುದನ್ನು ಮತ್ತೊಮ್ಮೆ ಖಾತ್ರಿಪಡಿಸಿಕೊಂಡಿದ್ದಾರೆ. ಸಂಪುಟ ಹಾಗೂ ಶಾಸಕಾಂಗ ಸಭೆ ತಮ್ಮ ಬೆಂಬಲಕ್ಕಿದೆ ಎಂಬುದನ್ನು ಮುಖ್ಯಮಂತ್ರಿ ಅವರು ನಾಳೆ ■5ನೇ ಪುಟಕ್ಕೆ

ನಾವು ನಿಮ್ಮೊಂದಿಗಿದ್ದೇವೆ, ಎದೆಗುಂದಬೇಡಿ; ಸಿಎಂ ಸಿದ್ದರಾಮಯ್ಯಗೆ ಕಾಂಗ್ರೆಸ್ ಶಾಸಕರ ಒಕ್ಕೊರಲ ಬೆಂಬಲ

ಬೆಂಗಳೂರು, ಆ.22– ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿ ರಾಜ್ಯಪಾಲರ ಆದೇಶದ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ರಾಜೀನಾಮೆಗೆ ವಿರೋಧ ಪಕ್ಷಗಳು ಒತ್ತಾಯಿಸುತ್ತಿವೆ. ಈ ನಡುವೆ ವಿಧಾನಸೌಧದಲ್ಲಿ ಗುರುವಾರ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಶಾಸಕರು ಸಿಎಂ ಸಿದ್ದರಾಮಯ್ಯ ಬೆಂಬಲಕ್ಕೆ ನಿಂತಿದ್ದಾರೆ.

ಸಿದ್ದರಾಮಯ್ಯ ನೇತೃತ್ವದಲ್ಲಿ ಗುರುವಾರ ವಿಧಾನಸೌಧ ಸಮ್ಮೇಳನ ಸಭಾಂಗಣದಲ್ಲಿ ಶಾಸಕಾಂಗ ಪಕ್ಷದ ಸಭೆ ನಡೆಯಿತು. ಸಚಿವರು, ಶಾಸಕರು ಹಾಗೂ ಪರಿಷತ್ ಸದಸ್ಯರು ಸಭೆಯಲ್ಲಿ ಭಾಗಿಯಾಗಿದ್ದರು. ನಾವು ನಿಮ್ಮೊಂದಿಗಿದ್ದೇವೆ ಎಂದು ಸಭೆಯಲ್ಲಿ ಶಾಸಕರು ಅಭಯ ನೀಡಿದ್ದು, ಯಾವುದೇ ಕಾರಣಕ್ಕೂ ಎದೆಗುಂದಬೇಡಿ, ನಿಮ್ಮೊಂದಿಗೆ ನಾವಿದ್ದೇವೆ ಎಂದು ಒಕ್ಕೊರಲ ಬೆಂಬಲ ಸೂಚಿಸಿದ್ದಾರೆ. ಶಾಸಕಾಂಗ ಸಭೆಯ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಮಾತನಾಡಿ, ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಯಶಸ್ವಿಯಾಗಿ ನಡೆದಿದೆ. ಆರೇಳು ಜನರು ಭಾಗಿಯಾಗಲು ಆಗಿಲ್ಲ. ಸದ್ಯದ ■5ನೇ ಪುಟಕ್ಕೆ

ಸರ್ಕಾರದ ಆದೇಶ ಬದಿಗಿಟ್ಟು, ಮನಸೋ ಇಚ್ಛೆ

ಸಾವಿರಾರು ನಿವೇಶನ ಪರಭಾರೆ ಮಾಡಿದ ಮುಡಾ ಅಧಿಕಾರಿಗಳು

● ಕಾಯ್ದೆ, ನಿಯಮಗಳಿಗೆ ವ್ಯತಿರಿಕ್ತವಾಗಿ ಕೈಗೊಂಡ ನಿರ್ಣಯದಿಂದ ಉಂಟಾಗುವ ನಷ್ಟಕ್ಕೆ ಪ್ರಾಧಿಕಾರವೇ ಜವಾಬ್ದಾರಿಯಾಗುತ್ತದೆ ಎಂದು 2023ರ ಮಾರ್ಚ್ 14ರಂದು ಎಚ್ಚರಿಕೆ ● ಶೇ.50:50ರ ಅನುಪಾತದಲ್ಲಿ ನಿವೇಶನ ನೀಡಲು ಕೈಗೊಂಡ ಮುಡಾ ನಿರ್ಣಯವನ್ನು ರದ್ದುಪಡಿಸಿ 2023ರ ಅಕ್ಟೋಬರ್ 27ರಂದು ಸರ್ಕಾರ ಆದೇಶಿಸಿದೆ ● ಮುಂದೆ ಅಭಿವೃದ್ಧಿಪಡಿಸುವ ವಸತಿ ಯೋಜನೆಗಳಿಗೆ ರೈತರ ಸಹಭಾಗಿತ್ವದಲ್ಲಿ ಶೇ.50ರಷ್ಟು ಜಾಗವನ್ನು ಭೂ ಮಾಲೀಕರಿಗೆ ಹಂಚಿಕೆ ಮಾಡಲು 2015ರ ಫೆಬ್ರವರಿ 11ರಂದು ಸರ್ಕಾರ ಆದೇಶ ● ಆದರೆ, ಆದೇಶ ದುರುಪಯೋಗಪಡಿಸಿಕೊಂಡು ಈ ಹಿಂದಿನ 50 ವರ್ಷಗಳ ಪ್ರಕರಣಗಳಿಗೂ ಅಕ್ರಮವಾಗಿ ನಿವೇಶನ ಮಂಜೂರು



ಎಸ್.ಟಿ.ರವಿಕುಮಾರ್

ಮೈಸೂರು, ಆ.22–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ನಡೆದಿರುವ ಬ್ರಹ್ಮಾಂಡ ಭ್ರಷ್ಟಾಚಾರಕ್ಕೆ ಶೇ.50:50ರ ಅನುಪಾತದಲ್ಲಿ ಭೂ ಮಾಲೀಕರಿಗೆ ಅಭಿವೃದ್ಧಿಪಡಿಸಿದ ನಿವೇಶನ ನೀಡಬೇಕೆಂಬ ಪ್ರಾಧಿಕಾರದ ನಿಯಮಬಾಹಿರ ನಿರ್ಣಯಗಳು, ಇಂದು ಕರ್ನಾಟಕ ರಾಜ್ಯದ ಇತಿಹಾಸದಲ್ಲಿ ಹಿಂದೆಂದೂ ಕೇಳರಿಯದ ಭಾರಿ ಭ್ರಷ್ಟಾಚಾರ ಮುಡಾದಲ್ಲಿ ನಡೆಯಲು ಕಾರಣವಾಗಿದೆ. ಮುಡಾ ಸದಸ್ಯರಾಗಿದ್ದವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಜನಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು, ಇಂಜಿನಿಯರ್‌ಗಳು ಪ್ರಾಧಿಕಾರದ ಸಾಮಾನ್ಯ ಸಭೆಗಳಲ್ಲಿ ಕೂಲಂಕುಷವಾಗಿ ಚರ್ಚಿಸಿ ಕೈಗೊಂಡ ನಿರ್ಣಯವೇ ಇಷ್ಟೆಲ್ಲಾ ಅವ್ಯವಹಾರ, ಅವಾಂತರಗಳಿಗೆ ಕಾರಣವಾಗಿದೆ ಎಂಬುದಿಲ್ಲಿ ಗಮನಾರ್ಹ.

2020ರ ನವೆಂಬರ್ 20ರ ಸಭಾ ನಿರ್ಣಯ: 2020ರ ನ20ರಂದು ಮುಡಾ ಅಧ್ಯಕ್ಷರಾಗಿದ್ದ ಹೆಚ್.ವಿ.ರಾಜೀವ್ ಅವರ ಅಧ್ಯಕ್ಷತೆಯಲ್ಲಿ ನಡೆದ ಪ್ರಾಧಿಕಾರದ ಸಭೆಯು **'ಪ್ರಾಧಿಕಾರ ಭೂ ಸ್ವಾಧೀನಪಡಿಸದೇ ಉಪಯೋಗಿಸಿಕೊಂಡ ಪ್ರಕರಣಗಳಲ್ಲಿ ಭೂ ಪರಿಹಾರದ ರೂಪದಲ್ಲಿ ಅಭಿ ವೃದ್ಧಿಪಡಿಸಿದ ಒಟ್ಟು ವಿಸ್ತೀರ್ಣದ ಪೈಕಿ ಶೇ. 50ರಷ್ಟು ಜಾಗವನ್ನು ಒಪ್ಪುವ ಪ್ರಕರಣಗಳಲ್ಲಿ ಭೂ ಮಾಲೀಕರಿಗೆ ನೀಡುವುದು'** ಎಂದು ತೀರ್ಮಾನಿಸಿತ್ತು. ■5ನೇ ಪುಟಕ್ಕೆ

<u>ಸರ್ಕಾರದ ಆದೇಶ ಸಂಖ್ಯೆ: ನಅಇ 296 ಮೈಅಪ್ರಾ 2020, ಬೆಂಗಳೂರು, ದಿನಾಂಕ:27.10.2023</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ದಿನಾಂಕ: 14.09.2020ರ ಸಭೆಯ ವಿಷಯ ಸಂಖ್ಯೆ:18ರಲ್ಲಿ ಪ್ರಾಧಿಕಾರದ ಬಡಾವಣೆ ಮತ್ತು ಇತರೆ ಉದ್ದೇಶಗಳಿಗೆ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸದೇ, ಪರಿಹಾರ ನೀಡದೇ ಜಮೀನನ್ನು ಉಪಯೋಗಿಸಿದ ಪ್ರಕರಣಗಳಲ್ಲಿ ಶೇ.50:50 ಅನುಪಾತದಲ್ಲಿ ನಿವೇಶನ ನೀಡುವ ಕುರಿತು ಕೈಗೊಂಡಿರುವ ನಿಯಮಬಾಹಿರ ನಿರ್ಣಯವನ್ನು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ, 1987ರ ಕಲಂ 67ರಡಿಯಲ್ಲಿ ಪ್ರದತ್ತವಾದ ಅಧಿಕಾರದನ್ವಯ ರದ್ದುಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ

ಮುಡಾ ನಿರ್ಣಯ ರದ್ದುಪಡಿಸಿದ ಸರ್ಕಾರದ ಆದೇಶ ಪ್ರತಿ

ಶೇ.50:50ರ ಯೋಜನೆ 2015ರ ನಂತರದ ಬಡಾವಣೆಗಳಿಗೆ ಮಾತ್ರ ಅನ್ವಯ

ಮೈಸೂರು, ಆ.22 (ಆರ್‌ಕೆ)–ರೈತರ ಸಹಭಾಗಿತ್ವದಲ್ಲಿ ಹೊಸ ವಸತಿ ಬಡಾವಣೆ ಅಭಿವೃದ್ಧಿ ಪಡಿಸಲು ಸರ್ಕಾರ 2015ರ ಫೆಬ್ರವರಿ 11ರಂದು ಶೇ 50:50 ಅನುಪಾತದ ಭೂಮಿಯನ್ನು ಭೂ ಮಾಲೀಕನಿಗೆ ನೀಡುವಂತೆ ಅಧಿಸೂಚನೆ (ಸಂಖ್ಯೆ ನಅಇ08 ಟಿಟಿಪಿ 2014) ಹೊರಡಿಸಿದೆ. ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ವಿ.ರಾಜೇಂದ್ರ ಅವರು 2015ರ ಏಪ್ರಿಲ್ 8ರಂದು ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಆಯುಕ್ತರಿಗೆ ಬರೆದಿರುವ ಪತ್ರದಲ್ಲಿ ಕುಡಾ ಕಾಯ್ದೆ 2009ರನ್ವಯ ಭೂಮಾಲೀಕರೊಂದಿಗೆ 60:40ರ ಅನುಪಾತದಲ್ಲಿ ಒಪ್ಪಂದಗಳನ್ವಯ ಪ್ರಾಧಿಕಾರಗಳು ವಸತಿ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ಕಷ್ಟವಾಗಿರುವುದರಿಂದ ಸದರಿ ನಿಯಮಕ್ಕೆ ಸರ್ಕಾರವು ತಿದ್ದುಪಡಿ ತಂದು ವಸತಿ ಯೋಜನೆಯಲ್ಲಿ ಕಾಯ್ದಿರಿಸಿದ ಜಾಗದಲ್ಲಿ ಗರಿಷ್ಟ ಶೇ.50ರಷ್ಟು ಅಭಿವೃದ್ಧಿಪಡಿಸಿದ ಜಾಗವನ್ನು ಭೂ ಮಾಲೀಕರಿಗೆ ಹಂಚಿಕೆ ಮಾಡಲು ನಿರ್ಧರಿಸಿದೆ ಎಂದು ತಿಳಿಸಿದ್ದಾರೆ.

ಹೊಸ ವಸತಿ ಯೋಜನೆಗಳನ್ನು ರೈತರ ಸಹಭಾಗಿತ್ವದಡಿ ಶೇ.50:50ರ ಅನುಪಾತದಲ್ಲಿ ರೂಪಿಸಿ ಈ ಹಿಂದೆ ನಿಗದಿಪಡಿಸಿರುವ ಗುರಿ ತಲುಪಬೇಕೆಂದೂ ವಿ.ರಾಜೇಂದ್ರ ಅವರು ಸರ್ಕಾರದ ಅಧಿಸೂಚನೆ ಹಾಗೂ ಕರ್ನಾಟಕ ರಾಜ್ಯಪತ್ರದಲ್ಲಿ 2015ರ ನವೆಂಬರ್ 11ರಂದು ಪ್ರಕಟವಾದ ಸ್ಪೆಷಲ್ ಗೆಜೆಟೆಡ್ ಪ್ರತಿಗಳೊಂದಿಗೆ ಮುಡಾ ಆಯುಕ್ತರಿಗೆ ರವಾನಿಸಿದ್ದರು. ಈ ಅಧಿಸೂಚನೆ ಪ್ರಕಾರ 2015ರ ನವೆಂಬರ್ 11ರ ನಂತರ ಹೊಸ ಬಡಾವಣೆಗಳಿಗೆ ಮಾತ್ರ ಶೇ.50:50ರ ಅನುಪಾತ ಅನ್ವಯವಾಗಬೇಕು ಆದರೆ, ಅದನ್ನು ದುರುಪಯೋಗಪಡಿಸಿಕೊಂಡು ಮುಡಾ ಸಭಾ ನಿರ್ಣಯವನ್ನು ಮುಂದಿಟ್ಟು ಆಯುಕ್ತರು, ಹಿಂದಿನ 50–60 ವರ್ಷಗಳ ಹಳೇ ಪ್ರಕರಣಗಳಿಗೂ ಅನ್ವಯವಾಗುವಂತೆ ಬೇಕಾಬಿಟ್ಟಿಯಾಗಿ ನಿವೇಶನಗಳನ್ನು ಮಂಜೂರು ಮಾಡಿರುವುದಿಲ್ಲಿ ಗಮನಾರ್ಹ ಅಂಶವಾಗಿದೆ.

ಮುಡಾ ಅಧ್ಯಕ್ಷ ಕೆ.ಮರಿಗೌಡರ ಟಿಪ್ಪಣಿಗೂ ಸಿಎಂ ಸಿದ್ದರಾಮಯ್ಯ ಅವರ ಪತ್ನಿಗೆ ಹಂಚಿಕೆಯಾದ ನಿವೇಶನಗಳಿಗೂ ಸಂಬಂಧವಿಲ್ಲ

● ಹಿಂದುಳಿದ ವರ್ಗಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ● ಮಾವಿನಹಳ್ಳಿ ಸಿದ್ದೇಗೌಡ ಬುಕ್ಕಿಂಗ್ ಗಿರಾಕಿ ● ಮುಡಾ ಹಗರಣಗಳಿಗೆ ವಿಜಯೇಂದ್ರ ಕಿಚನ್ ಟೀಂ ಕಾರಣ

ಮೈಸೂರು, ಆ.22(ಜಿಎ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಲ್ಲಿ ನಡೆಯುತ್ತಿರುವ ಸಮಸ್ಯೆಗಳ ಕುರಿತು ಸಭೆಯಲ್ಲಿ ಚರ್ಚಿಸಲು ಮುಡಾ ಅಧ್ಯಕ್ಷ ಕೆ.ಮರಿಗೌಡ ಟಿಪ್ಪಣಿ ಬರೆದಿದ್ದಾರೆ ಹೊರತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿಗೆ ಹಂಚಿಕೆಯಾಗಿರುವ ನಿವೇಶನಕ್ಕೂ ಯಾವುದೇ ಸಂಬಂಧವಿಲ್ಲ ಎಂದು ರಾಜ್ಯ ಹಿಂದುಳಿದ ವರ್ಗಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಡಾದಲ್ಲಿ 50:50 ಅನುಪಾತದಲ್ಲಿ ಹಂಚಿಕೆ ಮಾಡುತ್ತಿರುವ ನಿವೇಶನ, ಪ್ರೋತ್ಸಾಹಕ ನಿವೇಶನ ಹಾಗೂ ಸರ್ವೆ ನಂ57 ಮತ್ತು 77ರ ಜಮೀನಿನಲ್ಲಿ ನಿವೇಶನ ಹಂಚಿಕೆಯನ್ನು ತಡೆ ಹಿಡಿಯಬೇಕೆಂದು ಶಾಸಕ ಕೆ.ಹರೀಶ್‌ಗೌಡ ದೂರು ನೀಡಿದ್ದು, ಮೈಸೂರಿನ ಕಸಬಾ ಹೋಬಳಿ ಸರ್ವೆ ನಂ.86ರ ಜಮೀನಿಗೆ 50:50ರಡಿ ನಿವೇಶನ ಹಂಚಿಕೆಯೂ ಕಾನೂನುಬಾಹಿರವಾಗಿದೆ ಎಂದು ಗಂಗರಾಜು ದೂರು ನೀಡಿದ ಹಿನ್ನೆಲೆಯಲ್ಲಿ ಈ ವಿಷಯಗಳನ್ನು ಪ್ರಾಧಿಕಾರದ ಸಭೆಗೆ ಮಂಡಿಸಿ, ಸಭೆ ತೀರ್ಮಾನವನ್ನು ಸರ್ಕಾರದಿಂದ ಅನುಮೋದನೆ ಸಲ್ಲಿಸಿ, ಸರ್ಕಾರದ ನಿರ್ದೇಶನದಂತೆ ಕ್ರಮ ವಹಿಸಲು ಮರಿಗೌಡರು ಟಿಪ್ಪಣಿ ಬರೆದಿದ್ದಾರೆ ಎಂದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಕೆ.ಎಸ್.ಶಿವರಾಮು ಮಾತನಾಡಿದರು

ಮರಿಗೌಡರು ಬರೆದಿರುವ ಟಿಪ್ಪಣಿಯಿಂದ ಅಧಿಕಾರಿಗಳು ರಾಜಕಾರಣಿಗಳ ಹಿತಾಸಕ್ತಿ ಕಾಯಲು ಬಿಜೆಪಿ ಮತ್ತು ಜೆಡಿಎಸ್ ನಾಯಕರ ಅಕ್ರಮಗಳು ಹೊರಬರಬಾರದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ವಿಚಾರವನ್ನು ಮುಂದಿಟ್ಟುಕೊಂಡು, ಮರಿಗೌಡರನ್ನು ಖಳನಾಯಕನಾಗಿ ಬಿಂಬಿಸುತ್ತಿದ್ದಾರೆ. ಮರಿಗೌಡರು ಕಳೆದ 40 ವರ್ಷಗಳಿಂದ ಸಿದ್ದರಾಮಯ್ಯ ಅವರ ಪರವಾಗಿದ್ದು, ರಾಮನಿಗೆ ಭಂಟನಂತೆ ಇದ್ದಾರೆ ಎಂದು ತಿಳಿಸಿದರು.

ಇಂತಹವರ ವಿರುದ್ಧ ಮಾವಿನಹಳ್ಳಿ ಸಿದ್ದೇಗೌಡ ಇಲ್ಲಸಲ್ಲದ ಆರೋಪ ಮಾಡುತ್ತಿರುವುದು ಸರಿಯಲ್ಲ. ಪ್ರಾಮಾಣಿಕ ರಾಜಕಾರಣ ಮಾಡಿದರೆ, ಚುನಾವಣೆಯಲ್ಲಿ ಗೆಲ್ಲಬಹುದಾಗಿತ್ತು. ಆದರೆ, ಸಿದ್ದೇಗೌಡ ಬುಕ್ಕಿಂಗ್ ಗಿರಾಕಿಯಾಗಿದ್ದು, ಚುನಾವಣೆಯ ಹಿಂದಿನ ದಿನ ಎಷ್ಟಕ್ಕೆ ಬುಕ್ಕಿಂಗ್ ಆಗಿದ್ದಾರೆ ಎಂಬುದು ಗೊತ್ತಿದೆ ಎಂದು ಕಿಡಿಕಾರಿದರು.

ಕಾಂಗ್ರೆಸ್ ಪಕ್ಷದ ಸದಸ್ಯನೇ ಆಗಿರದ ಇವರನ್ನು ಸಿದ್ದರಾಮಯ್ಯ ಕರೆದು ಟಿಕೆಟ್ ನೀಡಿದರು. ಚುನಾವಣೆ ಎರಡು ದಿನ ಇರುವಾಗ ಫೋನ್ ಸ್ವಿಚ್ ಆಫ್ ಮಾಡಿಕೊಂಡಿದ್ದಾರೆ. ಬೂತ್‌ನಲ್ಲಿ ಕಾರ್ಯಕರ್ತರ ಖರ್ಚು ವೆಚ್ಚಕ್ಕೆ ಹಣವಿಲ್ಲದೇ ಪರದಾಡುವ ಸ್ಥಿತಿ ನಿರ್ಮಾಣವಾಯಿತು. ಆದರೂ ಕಾರ್ಯಕರ್ತರು ಶ್ರಮದಿಂದ 83 ಸಾವಿರ ಓಟ್ ಲಭಿಸಿದೆ. ಸಿದ್ದೇಗೌಡರ ಬದಲು ಮರಿಗೌಡರಿಗೆ ಟಿಕೆಟ್ ನೀಡಿದ್ದರೆ ಜಿಟಿಡಿ ವಿರುದ್ಧ ಸುಲಭವಾಗಿ ಗೆಲ್ಲುತ್ತಿದ್ದರು. ಮರಿಗೌಡರು ಮುಡಾ ಅಧ್ಯಕ್ಷರಾಗಿ ಸಮರ್ಥವಾಗಿ ನಿಭಾಯಿಸಿದ್ದಾರೆ. ನಿಮ್ಮ ಬಗ್ಗೆ ಎಲ್ಲವೂ ತಿಳಿದಿದೆ. ಬನ್ನಿ ನಿಮ್ಮ ತೋಟದ ಮನೆಯಲ್ಲಿ ಕುಳಿತು ಚರ್ಚೆ ಮಾಡೋಣ ಎಂದು ಬಹಿರಂಗ ಸವಾಲೆಸೆದರು. ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಲೋಕಾಯುಕ್ತ ಸಂಸ್ಥೆ ತನಿಖೆಗೆ ಅನುಮತಿಗೆ ಕೋರಿದೆ. ಭ್ರಷ್ಟಾಚಾರ ನಿಮ್ಮ ರಕ್ತದಲ್ಲಿದೆ ನೀವು ಸಿದ್ದರಾಮಯ್ಯ ಅವರ ವಿರುದ್ಧ ಮಾತನಾಡುವ ನೈತಿಕತೆ ಇಲ್ಲ ಎಂದು ವಾಗ್ದಾಳಿ ನಡೆಸಿ, ಮುಡಾ ಆಯುಕ್ತರಾದ ಡಿ.ಬಿ.ನಟೇಶ್ ಮತ್ತು ದಿನೇಶ್ ಅವರನ್ನು ಅಮಾನತುಗೊಳಿಸಬೇಕು ಎಂದು ಆಗ್ರಹಿಸಿದರು.


ಮುಡಾದಲ್ಲಿ ನಡೆದಿರುವ ಎಲ್ಲಾ ಹಗರಣಗಳಿಗೆ ಬಿ.ವೈ.ವಿಜಯೇಂದ್ರ ಅವರ ಕಿಚನ್ ಟೀಂ ಸದಸ್ಯರಾದ ಮೃಗಾಲಯ ಮಾಜಿ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಪುಸ್ತಕ ಪ್ರಾಧಿಕಾರ ಮಾಜಿ ಅಧ್ಯಕ್ಷ ನಂದೀಶ್ ಹಂಚೆ, ಡಿ.ಬಿ.ನಟೇಶ್ ಮತ್ತು ದಿನೇಶ್ ಕರ್ತೃಗಳಾಗಿದ್ದು, ತಮ್ಮ ತಪ್ಪುಗಳು ಹೊರಗೆ ಬರಬಾರದೆಂದು ಸಿದ್ದರಾಮಯ್ಯ ಅವರ ಪತ್ನಿ ವಿಚಾರವನ್ನು ಮುಂದಿಟ್ಟಿದ್ದಾರೆ ಎಂದು. ಗೋಷ್ಠಿಯಲ್ಲಿ ಯೋಗೇಶ್ ಉಪ್ಪಾರ್, ಮೋಗಣ್ಣಚಾರ್, ಲೋಕೇಶ್ ಮಾದಾಪುರ, ರವಿನಂದನ್, ರಾಜೇಶ್ ಉಪಸ್ಥಿತರಿದ್ದರು.

ಆ.26ರಂದು ಶ್ರೀ ವಾಸುದೇವ ಮಹಾರಾಜ್ ಸದ್ಭಾವನಾ ಪ್ರಶಸ್ತಿ ಪ್ರದಾನ





ಡಾ.ಶರತ್‌ಕುಮಾರ್



ಡಾ.ನಟರಾಜ್ ಜೋಯಿಸ್

ಮೈಸೂರು, ಆ. 22– ಮೈಸೂರಿನ ಶ್ರೀ ವಾಸುದೇವ ಮಹಾರಾಜ ಫೌಂಡೇಶನ್ ವತಿಯಿಂದ ಶ್ರೀ ವಾಸುದೇವ ಮಹಾರಾಜ್ ಅವರ 18ನೇ ಆರಾಧನಾ ಮಹೋತ್ಸವದ ಅಂಗವಾಗಿ ಶ್ರೀ ವಾಸುದೇವ ಮಹಾರಾಜ್ ಸದ್ಭಾವನಾ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆ.26ರಂದು ಸಂಜೆ 5 ಗಂಟೆಗೆ ಜೆಎಲ್‌ಬಿ ರಸ್ತೆಯ ರೋಟರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಚಂದ್ರವನ ಆಶ್ರಮದ ಡಾ. ಶ್ರೀ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿಗಳು ನೆರವೇರಿಸುವರು. ಶ್ರೀಗಳ ಭಾವಚಿತ್ರಕ್ಕೆ ವಿಧಾನಪರಿಷತ್ ಸದಸ್ಯ ಡಾ.ಡಿ ತಿಮ್ಮಯ್ಯ ಪುಷ್ಪಾರ್ಚನೆ ನೆರವೇರಿಸಲಿದ್ದು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹಿರಿಯ ಸಮಾಜ ಸೇವಕ ಡಾ.ಕೆ.ರಘುರಾಮ ವಾಜಪೇಯಿ, ಶ್ರೀ ಲಕ್ಷ್ಮಿ ನರಸಿಂಹ ಸ್ವಾಮಿ ದೇವಸ್ಥಾನದ ಸಿಇಒ ಕೆ.ಆರ್.ಯೋಗಾನರಸಿಂಹನ್ ಹಾಗೂ ಶ್ರೀ ವಾಸುದೇವ ಮಹಾರಾಜ್ ಫೌಂಡೇಶನ್‌ನ ಅಧ್ಯಕ್ಷ ಡಾ.ಗುರುರಾಜ್ ಪೋತೆಟ್ಟಿಹಳ್ಳಿ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯ ಎಂ.ಮೋಹನ್ ಉಪಸ್ಥಿತರಿರಲಿದ್ದಾರೆ. ಇದೇ ಸಂದರ್ಭ ಸಂಧ್ಯಾ ಸುರಕ್ಷಾ ಟ್ರಸ್ಟ್ ಅಧ್ಯಕ್ಷ ಡಾ.ಬಿ.ಆರ್.ನಟರಾಜ ಜೋಯಿಸ್ ಹಾಗೂ ಅಂತರಾಷ್ಟ್ರೀಯ ಖ್ಯಾತಿಯ ಲೈಂಗಿಕ ಮತ್ತು ಗರ್ಭಧಾರಣಾ ತಜ್ಞ ವೈದ್ಯ ಡಾ.ಸಿ.ಶರತ್‌ಕುಮಾರ್ ಅವರಿಗೆ ಈ ಸಾಲಿನ ಶ್ರೀ ವಾಸುದೇವ ಮಹಾರಾಜ್ ಸದ್ಭಾವನಾ ಪ್ರಶಸ್ತಿಯನ್ನು ಅವರ ಜೀವಮಾನ ಸಾಧನೆಗಾಗಿ ಪ್ರದಾನ ಮಾಡಲಾಗುವುದು. ಖ್ಯಾತ ಕೊಳಲು ವಾದನ ವಿದ್ವಾನ್ ಶ್ರೀ ವಿನಾಯಕ ಹೊನ್ನಾವರ ಅವರಿಂದ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಎಂ ವಿ. ನಾಗೇಂದ್ರಬಾಬು ಹಾಗೂ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕರಾದ ಎನ್ ಅನಂತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇಘಾಲಯ ರಾಜ್ಯಪಾಲರಿಗೆ ಅಭಿನಂದನೆ



ಮೈಸೂರಿಗೆ ಆಗಮಿಸಿದ ಮೇಘಾಲಯದ ರಾಜ್ಯಪಾಲರಾದ ಸಿ.ಹೆಚ್. ವಿಜಯಶಂಕರ್ ಅವರನ್ನು ಅಭಿನಂದಿಸಲಾಯಿತು. ಹಾಲುಮತ ಮಹಾಸಭಾದ ಮಾಜಿ ಜಿಲ್ಲಾಧ್ಯಕ್ಷ ವಿಜಯ್‌ಕುಮಾರ್, ಈಶ್ವರ್, ಕಡಕೊಳ ಮಹೇಶ್, ಮುಖಂಡರಾದ ಕಲೀಮ್ ಶರೀಫ್, ಶಶಿರಾಜ್ ಇನ್ನಿತರರು ಉಪಸ್ಥಿತರಿದ್ದರು.

ರಾಘವೇಂದ್ರ ಸ್ವಾಮಿ ದರ್ಶನ ಪಡೆದ ಶಾಸಕ ಕೆ.ಹರೀಶ್‌ಗೌಡ



ಮೈಸೂರಿನ ಸುಬ್ಬರಾಯನಕೆರೆಯ ಶ್ರೀ ರಾಘವೇಂದ್ರ ಸ್ವಾಮಿ ಮಠಕ್ಕೆ ಶಾಸಕ ಕೆ. ಹರೀಶ್‌ಗೌಡ ಭೇಟಿ ನೀಡಿ, ದರ್ಶನ ಪಡೆದರು. ಈ ವೇಳೆ ದೇವಸ್ಥಾನದ ಮ್ಯಾನೇಜರ್ ರಾಘವೇಂದ್ರ, ನಾಗರಾಜ್, ನಂಜುಂಡಸ್ವಾಮಿ, ಮಂಜುಳಾ, ರವಿಚಂದ್ರ, ನವೀನ್, ಲೋಕೇಶ್ ಮತ್ತಿತರರಿದ್ದರು.

ನಾಳೆಯಿಂದ ಅಯೋಧ್ಯೆ ಪ್ರಸಾದ, ಸಪ್ತನದಿಗಳ ಪವಿತ್ರ ತೀರ್ಥ ವಿತರಣೆ

ಮೈಸೂರು,ಆ.22(ಜಿಎ)–ವಿಶ್ವ ಹಿಂದೂ ಪರಿಷತ್ ಸ್ಥಾಪನೆಯ ಷಷ್ಠಿ ಪೂರ್ತಿ ಕಾರ್ಯಕ್ರಮದ ಅಂಗವಾಗಿ ಮೈಸೂರಿನಲ್ಲಿ ಆ.24 ರಿಂದ ಸೆ.3ರವರೆಗೆ ನಗರದ ಹಲವೆಡೆ ಅಯೋಧ್ಯೆ ಪ್ರಸಾದ ಹಾಗೂ ಸಪ್ತನದಿಗಳ ಪವಿತ್ರ ತೀರ್ಥ ವಿತರಣೆ ಮಾಡಲಾಗುತ್ತದೆ ಎಂದು ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಪರಿಷತ್‌ನ ಜಿಲ್ಲಾಧ್ಯಕ್ಷ ಕೆ.ಮಹೇಶ್ ಕಾಮತ್ ತಿಳಿಸಿದರು. ಶ್ರೀಕೃಷ್ಣ ಅವತರಿಸಿದ ದಿನವೇ ಶ್ರಾವಣ ಕೃಷ್ಣ ಅಷ್ಟಮಿ ದಿನದಂದು ವಿಶ್ವದಲ್ಲಿ ಹಿಂದೂ ಪರಿಷತ್ ಪ್ರಾರಂಭವಾಗಿದ್ದು, ಈ ಬಾರಿ ಷಷ್ಠಿಪೂರ್ತಿ ಆಚರಿಸಲಾಗುತ್ತಿದೆ ಎಂದರು. ಗೋಷ್ಠಿಯಲ್ಲಿ ಜಗದೀಶ್ ಹೆಬ್ಬಾರ್, ಮಧುಶಂಕರ್, ಸವಿತಾ ಘಾಟ್ಗೆ, ಜನಾರ್ಧನ್ ಉಪಸ್ಥಿತರಿದ್ದರು.

ಡಿ.ದೇವರಾಜ ಅರಸು ಜಯಂತಿ...



ಮೈಸೂರು ಜಿಲ್ಲಾ ಗಂಗಾಮತಸ್ಥರ ಸಂಘದ ವತಿಯಿಂದ ದಿವಂಗತ ಡಿ.ದೇವರಾಜ ಅರಸು ಅವರ 109ನೇ ಜಯಂತ್ಯುತ್ಸವ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಸಂಘದ ಪದಾಧಿಕಾರಿಗಳಾದ ಚಿಕ್ಕಲಿಂಗಸ್ವಾಮಿ, ವೆಂಕಟಪ್ಪ, ಪ್ರಸಾದ್, ಮೈವಿವಿ ನಾಗೇಂದ್ರ, ದೇವರಾಜು ಮತ್ತಿತರರು ಉಪಸ್ಥಿತರಿದ್ದರು.

ಆ.25 ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

ಮೈಸೂರು, ಆ.22(ಜಿಎ)–ವಿಶ್ವರತ್ನ ಡಾ.ಬಿ.ಆರ್.ಅಂಬೇಡ್ಕರ್ ಪದವಿ ಪೂರ್ವ ಶಿಕ್ಷಣ ಇಲಾಖೆ ನೌಕರರ ಸಂಘದ ವತಿಯಿಂದ ಆ.25ರಂದು ಮಹಾರಾಜ ಸರ್ಕಾರಿ ಪದವಿಪೂರ್ವ ಕಾಲೇಜಿನ ಕೃಷ್ಣರಾಜ ಸಭಾಂಗಣದಲ್ಲಿ ಪ್ರತಿಭಾ ಪುರಸ್ಕಾರ ಹಾಗೂ ಅಭಿನಂದನಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಘದ ಗೌರವಾಧ್ಯಕ್ಷ ನಾಗಮಲ್ಲೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಾಮರಾಜನಗರದ ನಳಂದ ವಿವಿಯ ಸಾಮಾನ್ಯ ಕಾರ್ಯದರ್ಶಿ ಬೋಧಿದತ್ತ ಭಂತೇಜ ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಮರಿಸ್ವಾಮಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಡಾ.ವೈ.ಡಿ.ರಂಗನಾಥ್ ವಹಿಸಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ರಾಜ್ಯ ಸರ್ಕಾರಿ ಎಸ್‌ಸಿ, ಎಸ್‌ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಡಿ.ಚಂದ್ರಶೇಖರಯ್ಯ, ಗೋಪಾಲಕೃಷ್ಣ, ಮಹಾರಾಜ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಉದಯಶಂಕರ್, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಡಾ.ಆರ್.ರಾಜಣ್ಣ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಅಧ್ಯಕ್ಷ ಡಾ.ವೈ.ಡಿ. ರಂಗನಾಥ್, ಸೋಮಶೇಖರ್, ಶ್ರೀಕಂಠಯ್ಯ, ಶಿವಪ್ರಕಾಶ್ ಉಪಸ್ಥಿತರಿದ್ದರು.

ರೋಟರಿ ಮೈಸೂರು ಉತ್ತರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಕ್ಷಾ ಬಂಧನ



ವಾಜಮಂಗಲ ರೋಟರಿ ಮೈಸೂರು ಉತ್ತರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಕ್ಷಾ ಬಂಧನ ಆಚರಿಸಲಾಯಿತು. ಚಿತ್ರದಲ್ಲಿ ಶಾಲೆಯ ಆಡಳಿತ ವರ್ಗ, ಮಕ್ಕಳು ಇದ್ದಾರೆ.

ನಾಳೆ 'ಏಳು ಸಮುದ್ರದಾಚೆ' ಮೂಡಲಪಾಯ ಯಕ್ಷಗಾನ

ಮೈಸೂರು, ಆ.22(ಜಿಎ)–ಮೈಸೂರಿನ ಯಕ್ಷರಂಗ ಮತ್ತು ಕದಂಬ ರಂಗವೇದಿಕೆ ಸಹಯೋಗದೊಂದಿಗೆ ಆ.24ರಂದು ಸಂಜೆ 6.30ಕ್ಕೆ ಕಲಾಮಂದಿರದ ಕಿರುರಂಗಮಂದಿರದಲ್ಲಿ 'ಏಳು ಸಮುದ್ರದಾಚೆ ಮೂಡಲಪಾಯ ಯಕ್ಷಾನ ಆಟ ಆಯೋಜಿಸಲಾಗಿದೆ ಎಂದು ಕದಂಬ ರಂಗವೇದಿಕೆ ಅಧ್ಯಕ್ಷ ಡಾ.ರಾಜಶೇಖರ ಕದಂಬ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವೇದಿಕೆ ಕಾರ್ಯಕ್ರಮವನ್ನು ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕರ್ನಾಟಕ ಬಯಲಾಟ ಅಕಾಡೆಮಿ ಸದಸ್ಯರಾದ ಡಾ.ಚಂದ್ರು ಕಾಳೇನಹಳ್ಳಿ, ಡಾ.ಹೆಚ್.ಆರ್.ಚೇತನ ಭಾಗ ವಹಿಸಲಿದ್ದಾರೆ. ರಂಗಪಣತ ಅಧ್ಯಕ್ಷ ಯು.ಎಸ್. ರಾಮಣ್ಣ, ಯಕ್ಷರಂಗದ ಡಿ.ತಿಪ್ಪಣ್ಣ ಉಪಸ್ಥಿತರಿರುವರು ಎಂದರು. ಸುದ್ದಿಗೋಷ್ಠಿಯಲ್ಲಿ ಡಿ.ತಿಪ್ಪಣ್ಣ, ಡಿ.ಅಶ್ವಥ್ ಕದಂಬ ಮತ್ತಿತರರು ಉಪಸ್ಥಿತರಿದ್ದರು.

ಪೂರ್ಣಚೇತನ ಶಾಲೆಯ ಐವರು ವಿದ್ಯಾರ್ಥಿಗಳ ವಿಶ್ವದಾಖಲೆ

ಮೈಸೂರು, ಆ.22(ಜಿಎ)– ಮೈಸೂರಿನ ಪೂರ್ಣಚೇತನ ಶಾಲೆಯ ಐವರು ವಿದ್ಯಾರ್ಥಿಗಳು ಸಂಗೀತ ಹಾಗೂ ಸಾಂಸ್ಕೃತಿಕ ಕ್ಷೇತ್ರದಲ್ಲಿ ವೈಯಕ್ತಿಕ ಪ್ರದರ್ಶನ ನೀಡಿ ವಿಶ್ವದಾಖಲೆ ನಿರ್ಮಿಸಿದ್ದಾರೆ' ಎಂದು ಶಾಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ದರ್ಶನ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲೆಯ ಏಳನೇ ತರಗತಿ ವಿದ್ಯಾರ್ಥಿ ಎಚ್.ಎಸ್. ಮಹೇಶ್‌ಕುಮಾರ್ ಸ್ವಾಮಿ ವಿವೇಕಾನಂದರ ಕುರಿತು 14 ಗಂಟೆ ಎರಡು ನಿಮಿಷ ಸರಣಿ ಉಪನ್ಯಾಸ ನೀಡಿದ್ದಾನೆ. ಆರನೇ ತರಗತಿಯ ಮುಳುಕುಟ್ಲ ಮೋಕ್ಷದ ಏಳು ಗಂಟೆ ನಾಲ್ಕು ನಿಮಿಷಗಳಲ್ಲಿ ಭಗವದ್ಗೀತೆಯ 18 ಅಧ್ಯಾಯ ಪಠಿಸಿದ್ದಾಳೆ, ಮೂರನೇ ತರಗತಿಯ ಪೃಥು ಪಿ. ಅದ್ವೈತ್ 30 ನಿಮಿಷದಲ್ಲಿ 150 ಶ್ಲೋಕ ಪಠಿಸಿದ್ದಾನೆ. ನಾಲ್ಕನೇ ತರಗತಿಯ ವಿದ್ಯಾರ್ಥಿಗಳಾದ ತೋಶನ್ ಜಿ.ರಾವ್ 15 ಗಂಟೆ ಎರಡು ನಿಮಿಷ ಕೀ ಬೋರ್ಡ್ ನುಡಿಸಿದ್ದು, ಅಸ್ಮಿ ಎ.ಭಾರದ್ವಾಜ್ ಕಣ್ಣಿಗೆ ಬಟ್ಟೆ ಕಟ್ಟಿಕೊಂಡು ಐದು ನಿಮಿಷದಲ್ಲಿ 349 ಡಿಜಿಟಲ್ ಚಿತ್ರ ಗುರುತಿಸಿದ್ದಾಳೆ. ಈ ವಿಶ್ವದಾಖಲೆಯನ್ನು ಎಲೈಟ್ ವರ್ಲ್ಡ್ ರೆಕಾರ್ಡ್, ಏಷ್ಯನ್ ರೆಕಾರ್ಡ್ಸ್ ಅಕಾಡೆಮಿ, ಇಂಡಿಯಾ ರೆಕಾರ್ಡ್ ಅಕಾಡೆಮಿ ಪ್ರಮಾಣೀಕರಿಸಿದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಮಾಧವಿ ಉಪಸ್ಥಿತರಿದ್ದರು.

ಎಸ್‌ಯುವಿ–ಈವಿ ಕಾರು ಮಾರುಕಟ್ಟೆಗೆ ಬಿಡುಗಡೆ



ಮೈಸೂರಿನ ಹಿನಕಲ್‌ನ ಅರಸು ಕಾರ್ ಷೋರೂಮ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಟಾಟಾ ವಾಹನ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಎಂ.ಎಲ್.ಕಾಂತರಾಜ್ ಅವರು ಭಾರತದ ಮೊದಲ ಎಸ್‌ಯುವಿ–ಈವಿ ಕಾರನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದರು. ಡಿಜಿಎಂ ಅರುಣ್‌ಕುಮಾರ್ ಪಾಣಿಗ್ರಾಹಿ, ಎಜಿಎಂ ಗುರುರಾಜ್, ಮನೋಜ್, ಅಭಿಷೇಕ್ ಕುಮಾರ್, ಪಿ.ಜಿ.ಕುಟ್ಟಪ್ಪ ಉಪಸ್ಥಿತರಿದ್ದರು.

ಆ.25, ಸಪ್ತರ್ಷಿ ಸೌಹಾರ್ದ ಪತ್ತಿನ ಸಹಕಾರ ಸಂಘದ ರಜತ ಮಹೋತ್ಸವ

ಮೈಸೂರು, ಆ.22(ಜಿಎ)–ಮೈಸೂರಿನ ಸಪ್ತರ್ಷಿ ಸೌಹಾರ್ದ ಪತ್ತಿನ ಸಹಕಾರ ಸಂಘ ನಿಯಮಿತದ ರಜತ ಮಹೋತ್ಸವ ಕಾರ್ಯಕ್ರಮವನ್ನು ಆ.25ರಂದು ಬೆಳಗ್ಗೆ 10.15ಕ್ಕೆ ಶಾರದಾ ವಿಲಾಸ ಶತಮಾನೋತ್ಸವ ಭವನದಲ್ಲಿ ಏರ್ಪಡಿಸಲಾಗಿದೆ ಎಂದು ರಜತ ಮಹೋತ್ಸವ ಸಮಿತಿ ಕಾರ್ಯಾಧ್ಯಕ್ಷ ಎಸ್.ನಾಗಚಂದ್ರ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಅವಧೂತ ದತ್ತ ಪೀಠಾಧಿಪತಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಸಂಘದ ಅಧ್ಯಕ್ಷ ಎಂ.ಎಸ್.ಚಂದ್ರಶೇಖರ್ ಅಧ್ಯಕ್ಷತೆ ವಹಿಸಲಿದ್ದು, ಸಪ್ತರ್ಷಿ ಸವಿ ಸಂಚಿಕೆಯನ್ನು ಮೈಸೂರು–ಕೊಡಗು ಸಂಸದ ಯದುವೀರ ಒಡೆಯರ್ ಬಿಡುಗಡೆ ಮಾಡಲಿದ್ದಾರೆ ಎಂದರು.


ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಅಧ್ಯಕ್ಷ ಜಿ.ಟಿ. ದೇವೇಗೌಡ ಹಾಗೂ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಅಧ್ಯಕ್ಷ ಜಿ.ನಂಜನಗೌಡ ಅವರನ್ನು ಅಭಿನಂದಿಸಲಾಗುವುದು. ಸಂಘದ ಸ್ಟಾಂಪ್ ಅನ್ನು ಶಾಸಕ ಟಿ.ಎಸ್.ಶ್ರೀವತ್ಸ ಬಿಡುಗಡೆಗೊಳಿಸಲಿದ್ದಾರೆ. ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಹೆಚ್.ವಿ.ರಾಜೀವ್ ಅಂಚೆ ಕಾರ್ಡ್ ಲೋಕಾರ್ಪಣೆಗೊಳಿಸಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಅಧ್ಯಕ್ಷ ಎಂ.ಎಸ್.ಚಂದ್ರಶೇಖರ್, ಎಸ್. ಶ್ಯಾಮಲಾ, ಕೃಷ್ಣವೇಣಿ, ಹೆಚ್.ಎ.ಪುರುಷೋತ್ತಮ್ ಉಪಸ್ಥಿತರಿದ್ದರು.

ಮೈಸೂರು-ಆಂಗ್ಲೋ ಇಂಡಿಯನ್ ಅಸೋಸಿಯೇಷನ್ ಪದಾಧಿಕಾರಿಗಳು



ಇತ್ತೀಚೆಗೆ ನಡೆದ ಸರ್ವಸದಸ್ಯರ ಸಭೆಯಲ್ಲಿ ಅಖಿಲ ಭಾರತ ಆಂಗ್ಲೋ–ಇಂಡಿಯನ್ ಅಸೋಸಿಯೇಷನ್, ಮೈಸೂರು ಶಾಖೆಯ 2024–25ನೇ ಸಾಲಿನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಚಿತ್ರದಲ್ಲಿ (ಎಡದಿಂದ) ಕ್ಯಾರೋಲೈನ್ ಡಾಲಿ (ಸದಸ್ಯ), ಕ್ರೇಗ್ ಪಾರ್ಕರ್ (ಯುವ ಉಪಾಧ್ಯಕ್ಷ), ಇರೇನ್ ಮಾರಿಡವ್ (ಖಜಾಂಚಿ), ಬಾರಬಾರ ಬೇಯರ್ (ಜಂಟಿ ಖಜಾಂಚಿ), ಜೂಡ್ ಡಾಲಿ (ಉಪಾಧ್ಯಕ್ಷ), ಜೆರಾರ್ಡ್ ಎಡ್ವರ್ಡ್ಸ್ (ಕಾರ್ಯದರ್ಶಿ), ಡಾ.ಲಾರೆನ್ಸ್ ಜೆನ್‌ಕಿನ್ಸ್ (ಆಡಳಿತ ಮಂಡಳಿ ಸದಸ್ಯ), ಜಾಯ್ ಅಂತೋಣಿ ಡವ್ (ಅಧ್ಯಕ್ಷ), ಗ್ಲೇನ್ ಟೇಲರ್ (ಸದಸ್ಯ), ಶೆಲ್ಡನ್ ಟೇಲರ್ (ಯುವ ಸದಸ್ಯ), ರಿಚರ್ಡ್ ಶೇರ್‌ವುಡ್ (ಸದಸ್ಯ), ಗ್ರೇಗೋರಿ ಕಫ್ಲಿ, ಕ್ರಿಷ್ಟಿನ್ ಲೇನ್ ದೇರಜ್ (ಯುವ ಸದಸ್ಯ) ಪಾಲ್ಗೊಂಡಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

23.08.2024 ಶುಕ್ರವಾರ, ಮಳೆ ನಕ್ಷತ್ರ: ಮಖ 17.08.2024 ರಿಂದ 30.08.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ, ತಿಥಿ: ಚೌತಿ, ನಕ್ಷತ್ರ: ರೇವತಿ, ರಾಹುಕಾಲ : ಬೆಳಗ್ಗೆ 10.30 ರಿಂದ 12 ರವರೆಗೆ

■ **ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠ:** ಶ್ರೀ ರಾಘವೇಂದ್ರ ತೀರ್ಥ ಗುರು ಸಾರ್ವಭೌಮರ 353ನೇ ಆರಾಧನಾ ಮಹೋತ್ಸವ, ಶ್ರೀ ಸುಜ್ಞಾನೇಂದ್ರತೀರ್ಥರ ಆರಾಧನೆ, ಬೆಳಗ್ಗೆ 7ಕ್ಕೆ ಉತ್ಸವರಾಯರಿಗೆ ಪಾದಪೂಜೆ, ಪಂಚಾಮೃತ, ಹಸ್ತೋದಕ ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ರಾತ್ರಿ 7ಕ್ಕೆ ಆಕಾಶ್ ಪಿ. ಮತ್ತು ತಂಡದವರಿಂದ ದಾಸವಾಣಿ, ಸ್ಥಳ: ಮಠದ ಆವರಣ, ಸುಬ್ಬರಾಯನಕೆರೆ.

■ **ವೀರಭದ್ರಸ್ವಾಮಿ ಹಾಗೂ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಪ್ರಾಂಗಣ, ಡಿ.ಬನುಮಯ್ಯ ರಸ್ತೆ, ಕೆ.ಆರ್.ಮೊಹಲ್ಲಾ, ಬೆಳಗ್ಗೆಯಿಂದ.

■ **ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ಪ್ರಾದೇಶಿಕ ಜಾನಪದ ಅಧ್ಯಯನ ಮತ್ತು ಜನಪದ ಕಲಿಕಾ ಕೇಂದ್ರ, ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ, ಏಕತಾರಿ ಸಾಂಸ್ಕೃತಿಕ ಸಂಘಟನೆ :** ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಜನಪದ ನೃತ್ಯಗಳು ಮತ್ತು ಜನಪದ ಗೀತೆಗಳ ಕಲಿಕಾ ತರಬೇತಿ ಶಿಬಿರ, ಸ್ಥಳ: ಕಿರು ರಂಗಮಂದಿರ ಆವರಣ, ಕಲಾಮಂದಿರ, ಸಂಜೆ 4 ರಿಂದ.

■ **ಬಸವ ಭಾರತ ಪ್ರತಿಷ್ಠಾನ, ಸಮಸ್ತ ಬಸವಪರ ಸಂಘಟನೆಗಳ ಸಹಭಾಗಿತ್ವ :** ಬಸವ ಧರ್ಮ ಜಾಗೃತಿ, ಅಭಿಯಾನ, ಇಷ್ಟಲಿಂಗ ಧಾರಣೆ ಶಿವಯೋಗ, ವಚನ ಪಠಣ, ಶ್ರಾವಣ ಮಾಸದ ಪ್ರವಚನ ಕಾರ್ಯಕ್ರಮ, ಸಹಾಯಕ ಪ್ರಾಧ್ಯಾಪಕರಾದ ಹುಸ್ಕೂರು ಅಂಬಿಕಾ ಶಿವನಂಜಪ್ಪ, ಶ್ರೀಮತಿ ಜಿ.ಕೆ. ನಾಗರತ್ನ ಅವರಿಂದ 21ನೇ ಶತಮಾನದಲ್ಲಿ ಶರಣತತ್ವ ಪ್ರಚಾರದಲ್ಲಿ ಮಹಿಳೆಯರ ಪಾತ್ರ, 12ನೇ ಶತಮಾನದ ವಚನಗಳಲ್ಲಿ ಮಹಿಳೆಯರ ಸಬಲೀಕರಣ ಕುರಿತು ಉಪನ್ಯಾಸ, ಸ್ಥಳ: ಜ್ಯೋತಿರ್ಮಯ ಉಚಿತ ಮಹಿಳಾ ವಿದ್ಯಾರ್ಥಿ ನಿಲಯ, ರಾಮಾನುಜ ರಸ್ತೆ, ಸಂಜೆ 5ಕ್ಕೆ.

■ **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ) ಕದಳಿ ಮಹಿಳಾ ವೇದಿಕೆ :** ವಚನ–ಶ್ರಾವಣ, ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ಸಹಾಯಕ ಪ್ರಾಧ್ಯಾಪಕ ಪ್ರೊ. ಹೊನ್ನಶೆಟ್ಟಿ ಅವರಿಂದ ಅಸಿ, ಮಸಿ, ಕೃಷಿ, ವಾಣಿಜ್ಯ ಮುಂತಾದ ಕಾಯಕವ ಮಾಡಿ–ಅಕ್ಕಮ್ಮ ಕುರಿತು ಉಪನ್ಯಾಸ, ಸ್ಥಳ: ಡಾ.ಷಣ್ಮುಖಪ್ಪ ಬಿ. ಕಾಗಿನೆಲ್ಲಿ, ವಿಜಯನಗರ 2ನೇ ಹಂತ, ಸಂಜೆ 5.30ಕ್ಕೆ.

■ **ಸಂಸ್ಕೃತ ಭಾರತಿ, ಮೈಸೂರು:** ಸಂಸ್ಕೃತ ಸಪ್ತಾಹದ ಅಂಗವಾಗಿ ಉಪನ್ಯಾಸ, ವಿದ್ವಾನ್ ಟಿ.ಎನ್. ಪ್ರಭಾಕರ ಅವರಿಂದ ಕುಟುಂಬ ಪ್ರಬೋಧನಮ್ ಕುರಿತು ಉಪನ್ಯಾಸ, ಸ್ಥಳ: ಭಗಿನಿ ಸೇವಾ ಸಮಾಜ, ವಿದ್ಯೋದಯ, ಕೃಷ್ಣಮೂರ್ತಿಪುರಂ, ಸಂಜೆ 6ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 'ಬಣ್ಣದ ಬಾನಾಡಿಗಳು' ಬಾನುಲಿ ಸರಣಿ, ರಚನೆ: ಡಾ.ಎಸ್.ವಿ.ನರಸಿಂಹನ್, ಪ್ರಸ್ತುತಿ: ಜಿ. ಶಾಂತಕುಮಾರ್, 6.40 ಮತ್ತು ಸಂಜೆ 5.45 ಕರಾಮುವಿವಿ ಮುಕ್ತವಾಣಿ–ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ ಅಧ್ಯಯನ ಅವಕಾಶಗಳನ್ನು ಕುರಿತ ಪ್ರಾಯೋಜಿತ ಬಾನುಲಿ ಸರಣಿ. ಭಾಗವಹಿಸುತ್ತಾರೆ: ಡಾ.ಟಿ.ಎಸ್.ಹರ್ಷ, ಮುಖ್ಯಸ್ಥರು, ಪರಿಸರ ವಿಜ್ಞಾನ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಪ್ರಾಯೋಜಕರು: ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯ, ಮೈಸೂರು. ಪ್ರಸ್ತುತಿ: ಎನ್.ಕೇಶವಮೂರ್ತಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 9.00 ರಾಷ್ಟ್ರೀಯ ಬಾಹ್ಯಾಕಾಶ ದಿನದ ಸಂದರ್ಭದಲ್ಲಿ ವಿಶೇಷ ಕಾರ್ಯಕ್ರಮ, ಸರಣಿ–'ಬಾಹ್ಯಾಕಾಶ ವಿಸ್ಮಯ', 9.05 ನಮ್ಮ ಆರೋಗ್ಯ: 'ಕ್ಷಾರ ಸೂತ್ರ' ಕುರಿತು ಮಂಡ್ಯದ ಹೊಸಹಳ್ಳಿಯಲ್ಲಿರುವ ಜಿಲ್ಲಾ ಆಯುರ್ವೇದ ಆಸ್ಪತ್ರೆಯ ಶಲ್ಯತಂತ್ರ ವಿಭಾಗದ ಆಯುರ್ವೇದ ತಜ್ಞರಾದ ಡಾ. ಮೋಹನ್ ಕುಮಾರ್. ವಿ.ಆರ್. ಅವರೊಂದಿಗೆ ಮಾತುಕತೆ ಮತ್ತು ಬಾಯಿ ಆರೋಗ್ಯ ಮಾಸಾಚರಣೆಯ ಸಂದರ್ಭದಲ್ಲಿ ಒಸಡಿನ ಸೋಂಕು–ದೈಹಿಕ ರೋಗಗಳ ಕೇಂದ್ರಬಿಂದು' ಕುರಿತು ಮೈಸೂರಿನ ಜೆ.ಎಸ್.ಎಸ್ ದಂತ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಒಸಡು ಶಾಸ್ತ್ರ ವಿಭಾಗದ ಪ್ರೊಫೆಸರ್ ಹಾಗೂ ಮುಖ್ಯಸ್ಥರಾದ ಡಾ. ಸುಮನ್ ಬಸವರಾಜು ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಎನ್. ವಿ. ಸತ್ಯನಾರಾಯಣ – ಕೊಳಲುವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಸಂಗೀತ ಸಂಭ್ರಮ ನಾದಲಯ ಸಂಗಮ, ಪ್ರಸ್ತುತಿ : ಹೆಚ್. ಎಲ್. ಶಿವಶಂಕರಸ್ವಾಮಿ

ಮಧ್ಯಾಹ್ನ: 12.30 ದೇವರನಾಮ–ಯಶಸ್ವಿನಿ, 12.45 ಕಾದಂಬರಿ ವಿಹಾರ – ಅ.ನ.ಕೃ ಅವರ 'ಉದಯರಾಗ' ಕಾದಂಬರಿಯ ಬಾನುಲಿ ಓದು, ಪ್ರಸ್ತುತಿ: ಉಮೇಶ್. ಎಸ್. ಎಸ್, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಕುನ್ನಕುಡಿ ವೈದ್ಯನಾಥನ್ – ಪಿಟೀಲು, 4.00 ಮಹಿಳಾರಂಗ, 4.30 ವೃತ್ತಿ ಮಾರ್ಗದರ್ಶನ 'ಛಾರ್ಟರ್ಡ್ ಅಕೌಂಟೆನ್ಸಿ ಅಂದರೆ ಸಿ.ಎ. ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಮೈಸೂರಿನ ಛಾರ್ಟರ್ಡ್ ಅಕೌಂಟೆಂಡ್ ಮಹೇಶ್. ಬಿ.ವಿ. ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 6.50 ಕೃಷಿರಂಗ: ದ್ರಾಕ್ಷಿ ಬೇಸಾಯ ಕುರಿತು ನೇರ ಫೋನ್ ಇನ್ ಕಾರ್ಯಕ್ರಮ, ಭಾಗವಹಿಸುತ್ತಾರೆ: ಬೆಂಗಳೂರಿನ ಹೆಸರುಘಟ್ಟದ ಭಾರತೀಯ ತೋಟಗಾರಿಕಾ ಸಂಶೋಧನಾ ಸಂಸ್ಥೆಯ ಪ್ರಧಾನ ವಿಜ್ಞಾನಿ ಡಾ.ಜೆ.ಸತೀಶ್, ಪ್ರಸ್ತುತಿ: ಎನ್.ಕೇಶವಮೂರ್ತಿ, 7.45 ಚಿತ್ರಗೀತೆಗಳು, 8.00 ಸಂಧ್ಯಾರಾಗ–ಪರಿಸರ ಸಂರಕ್ಷಣೆಯಲ್ಲಿ ತೊಡಗಿರುವ ಮಾಲಿನ್ಯ ನಿಯಂತ್ರಣ ಮಂಡಳಿಯ ಮಾಜಿ ಅಧ್ಯಕ್ಷರಾದ ಡಾ.ಹೆಚ್.ಸಿ. ಶರತ್ಚಂದ್ರ ಅವರೊಂದಿಗೆ ಮಾತುಕತೆ. ಪ್ರಸ್ತುತಿ : ಜಿ. ಶಾಂತಕುಮಾರ್, 8.30 ಹಿಂದಿ ಚಿತ್ರಗೀತೆಗಳು, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ: ಅಭಿಷೇಕ್ ರಘುರಾಮ್–ಹಾಡುಗಾರಿಕೆ, 10.00 ಹಳ್ಳಿ ಹಾಡು, 10.30–ಸವಿನೆನಪು

■ **ಶ್ರೀ ಸುತ್ತೂರು ಮಠ, ಮೈಸೂರು ಶಾಖೆ :** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಮಹಾರಾಣಿ ಕಲಾ ಕಾಲೇಜು ಪ್ರಾಂಶುಪಾಲ ಡಾ.ಬಿ.ವಿ. ವಸಂತಕುಮಾರ್ ಅವರಿಂದ ಪ್ರವಚನ, ವಿದುಷಿ ವಸಂತ ವೆಂಕಟೇಶ್ ಅವರಿಂದ ವಾಚನ, ಸಂಜೆ 6ಕ್ಕೆ ಸಾಮೂಹಿಕ ಪ್ರಾರ್ಥನೆ, ಸಂಜೆ 6.30ಕ್ಕೆ ಪ್ರವಚನ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30 ರಿಂದ.

ಮೈಸೂರು ಮಿತ್ರ

ಸಿಎಂ ಕಪ್ಪುಚುಕ್ಕೆ ರಿಮೂವ್ಡ್ ಫ್ರಮ್ ವೈಟ್ನರ್!!

●ಸಿಎಂ ಸಿದ್ದರಾಮಯ್ಯಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿರುಗೇಟು

●ಬೇಲೆಕೇರಿಯಲ್ಲಿ ಅದಿರು ಕದ್ದ ಆಸಾಮಿಗಳ ಜತೆ 'ಸಿದ್ಧಹಸ್ತ' ಶಾಮೀಲು ಆರೋಪ



ಬೆಂಗಳೂರು, ಆ.22– ತಮ್ಮ 40 ವರ್ಷಗಳ ರಾಜಕೀಯ ಜೀವನದಲ್ಲಿ ನನ್ನ ಮೇಲೆ ಒಂದೇ ಒಂದು ಕಪ್ಪುಚುಕ್ಕೆ ಇಲ್ಲ ಎನ್ನುವ ನೀವು (ಸಿಎಂ ಸಿದ್ದರಾಮಯ್ಯ) ವೈಟ್ನರ್ ಉಜ್ಜಿ ಕಪ್ಪುಚುಕ್ಕೆ ತೆಗೆಯುವ ವ್ಯರ್ಥ ಪ್ರಯತ್ನ ಮಾಡಿದ್ದೇಕೆ? ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸಿಎಂ ಸಿದ್ದರಾಮಯ್ಯ ಅವರಿಗೆ ನೇರ ಪ್ರಶ್ನೆ ಹಾಕಿದ್ದಾರೆ.

ತಮ್ಮ ಬಗ್ಗೆ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದ ಸಿದ್ದರಾಮಯ್ಯ ಅವರಿಗೆ ತಿರುಗೇಟು ಕೊಟ್ಟಿರುವ ಕೇಂದ್ರ ಸಚಿವರು, ನಿಮ್ಮ ವಿರುದ್ಧ ಬಂದ ಮುಡಾ ಕೊಚ್ಚೆಯ ಗಮನ ಬೇರೆಡೆಗೆ ಸೆಳೆಯುವ ನಿಮ್ಮ ಹುನ್ನಾರ ನನಗೆ ಅರ್ಥವಾಗುತ್ತದೆ. ಹೇಗಾದರೂ ಅಧಿಕಾರದಲ್ಲೇ ಉಳಿದು ಲೂಟಿ ಹೊಡೆಯಬೇಕೆನ್ನುವ ನಿಮ್ಮ ಧನದಾಹದ ಹಪಾಹಪಿಯನ್ನೂ ಅರ್ಥಮಾಡಿಕೊಳ್ಳಬಲ್ಲೆ. ಕಳ್ಳನ ಜಾಗದಲ್ಲಿ ನಿಂತು ಊರಿಗೆಲ್ಲ ಗೀತೆ ಬೋಧಿಸುವ ನಿಮ್ಮ ಪ್ರಾರಬ್ಧ ಎಂಥಾ ಕೀಳುಮಟ್ಟಕ್ಕೆ ಇಳಿದಿದೆ ಎನ್ನುವುದನ್ನೂ ಅರ್ಥ ಮಾಡಿಕೊಂಡಿದ್ದೇನೆ. ಎಷ್ಟೇ ಆದರೂ ನೀವು ಸಕಲ ಕಲೆಗಳ ಸಿದ್ದಕರ್ಮಿ, ಇಂಥ ಗಲೀಜು ಕೆಲಸ ನಿಮಗೆ ಬೆಣ್ಣೆಯಿಂದ ಬಂದ ವಿದ್ಯೆ ಎಂದು ಸಚಿವರು ಕಿಡಿಕಾರಿದ್ದಾರೆ.

ಸಾಯಿ ವೆಂಕಟೇಶ್ವರಕ್ಕೆ 550 ಎಕರೆ ಮಂಜೂರು ಮಾಡಿದ್ದೇನೆ ಎಂದು ಬೊಗಳೆ ಬಿಟ್ಟಿದ್ದೀರಿ. ನನ್ನ ಬರವಣಿಗೆ ಫೋರ್ಜರಿ ಆಗಿದೆ. ಪತ್ರಿಕೆಗಳ ವರದಿಗೆ ನಾನು ಉತ್ತರ ಕೊಡುತ್ತೇನೆ, ಪಲಾಯನ ನನ್ನ ಜಾಯಮಾನವಲ್ಲ. ಆದರೆ, ಆ ವರದಿಯನ್ನೇ ನೆತ್ತಿ ಮೇಲಿಟ್ಟುಕೊಂಡು ಉಪ್ಪಿನಕಾಯಿ ಚಪ್ಪರಿಸುವ ದೈನೇಸಿ ಸ್ಥಿತಿ ನಿಮಗೇಕೆ? 40 ವರ್ಷಗಳ ರಾಜಕೀಯ ಜೀವನದಲ್ಲಿ ನನ್ನ ಮೇಲೆ ಒಂದೇ ಒಂದು ಕಪ್ಪುಚುಕ್ಕೆ ಇಲ್ಲ ಎನ್ನುವ ನೀವು, ವೈಟ್ನರ್ ಉಜ್ಜಿ ಕಪ್ಪುಚುಕ್ಕೆ ತೆಗೆಯುವ ವ್ಯರ್ಥ ಪ್ರಯತ್ನ ಮಾಡಿದ್ದೇಕೆ? ಎಂದಿರುವ ಸಚಿವರು, 'ಕಪ್ಪುಚುಕ್ಕೆ ರಿಮೂವಡ್ ಫ್ರಮ್ ವೈಟ್ನರ್' ಎಂದು ಕುಟುಕಿದ್ದಾರೆ.

ಮುಡಾದಲ್ಲಿ ನೀವು, ನಿಮ್ಮ ಸಕುಟುಂಬ ಪರಿವಾರ ಸರಕಾರಿ ಭೂಮಿಯನ್ನು ಹೇಗೆಲ್ಲಾ ಮುಕ್ಕಿತು ಎನ್ನುವುದಕ್ಕೆ ದಂಡಿದಂಡಿ ದಾಖಲೆಗಳೇ ಇವೆ. ನಿಮ್ಮ ಪಟಾಲಂ ಹೆಲಿಕಾಪ್ಟರ್‌ನಲ್ಲಿ ಕದ್ದು ಸಾಗಿಸಿದ ದಾಖಲೆಗಳು ಸುಳ್ಳಾ? ಕಪ್ಪುಚುಕ್ಕೆಯನ್ನು ನಿಮ್ಮ ವೈಟ್ನರ್ ಅಳಿಸೀತಾ ಸಿದ್ದರಾಮಯ್ಯನವರೇ? ಎಂದು ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ. ನನ್ನ ಸಹಿ ಇಲ್ಲ, ಟಿಪ್ಪಣಿಯೂ ಇಲ್ಲ ಅಂತೀರಿ. ಅಪ್ಪಣೆಯನ್ನಷ್ಟೇ ಕೊಟ್ಟಿದ್ದೀರಿ. 14 ಸೈಟಿಗೆ 62 ಕೋಟಿ ಪರಿಹಾರ ಕೇಳಲು ಹೇಳಿದ್ದು ಯಾವ ಟಿಪ್ಪಣಿ? ನಿಮ್ಮದು ನಾಲಿಗೆಯೋ, ಇನ್ನೇನೋ? ಎಂದು ಟೀಕಿಸಿರುವ ಅವರು, ಸಿದ್ದರಾಮಯ್ಯನವರೇ, ನಾನು ಕಾನೂನು ಪಂಡಿತ, ವಕೀಲ ಎನ್ನುತ್ತೀರಿ. 2011ರಲ್ಲಿ ಸುಪ್ರೀಂಕೋರ್ಟ್ SITಗೆ ಕೊಟ್ಟ ಆದೇಶವೇನು ಎಂದು ನಿಮಗೆ ಗೊತ್ತಿಲ್ಲವೇ? ನಾನು ವಕೀಲ... ನಾನು ವಕೀಲ ಎಂದು ಪದೇಪದೆ ಹೇಳಬೇಡಿ ಎಂದು ಹಿಂದೆಯೇ ಸಲಹೆ ಮಾಡಿದ್ದೆ. ಬುದ್ಧಿಗೇಡಿಗಳಿಗೆ ಬುದ್ಧಿವಾದ ರುಚಿಸದು ಎಂದು ಹೇಳಿದ್ದಾರೆ.

ರಾಜ್ಯಪಾಲರಿಗೆ ಎಸ್‌ಐಟಿ ಬರೆದ ಪತ್ರ ಇಟ್ಟುಕೊಂಡು ಹಾರಾಟ ಮಾಡುತ್ತಿದ್ದೀರಿ ನೀವು. ಪತಂಗದ ಹಾರಾಟ ನೋಡಲಿಕ್ಕೆ ಚೆಂದ, ಕೆಳಗಿರುವ ಬೆಂಕಿ ಜ್ವಾಲೆ ಅದಕ್ಕೆ ಅರಿವಿರುವುದಿಲ್ಲ. ನಿಮ್ಮ ಬಗ್ಗೆ ನನಗೆ ಕನಿಕರವಿದೆ. ನಿಮ್ಮ ಆನಂದ ತಾತ್ಕಾಲಿಕ ಸಿದ್ದರಾಮಯ್ಯನವರೇ ಎಂದು ಕೇಂದ್ರ ಸಚಿವರು ಹೇಳಿದ್ದಾರೆ.

ಸುತ್ತಲೂ ಪಟಾಲಂ ಕಟ್ಟಿಕೊಂಡು, ಹೈಕಮಾಂಡ್ ಅನ್ನೇ ಕಾಲಕಸ ಮಾಡಿಕೊಂಡು, ನಂಬಿ ಕೈಹಿಡಿದವರ ಬೆನ್ನಿಗೆ ಚೂರಿ ಹಾಕಿ ಕುರ್ಚಿಗಾಗಿ ಪಾಲಿಟಿಕ್ಸ್ ಮಾಡುವ ನಿಮ್ಮ ದಿಕ್ಕೆಟ್ಟ ದುಸ್ಥಿತಿ ನನಗಿಲ್ಲ. ನನ್ನ ರಾಜಕಾರಣ ನಿಮ್ಮಂತೆಯೇ ಹಣಕ್ಕೆ, ಅಧಿಕಾರಕ್ಕೆ ಅಲ್ಲ. ಅಧಿಕಾರ ಇದ್ದರೂ, ಇಲ್ಲದಿದ್ದರೂ ನಾನು ನಾನೇ. 'ಸೋತರೆ ಸೋಲಬೇಕು ಬಾಹುಬಲಿಯಂತೆ' ಆ ಮಹಾನ್ ವಿರಾಗಿಯೇ ನನ್ನ ಆದರ್ಶ. 20 ತಿಂಗಳ ಅಧಿಕಾರ, 14 ತಿಂಗಳ ಸರಕಾರ ತ್ಯಜಿಸುವಾಗಲೂ ನಾನು ನಿರ್ಭಾವುಕ. ಇದು ನಿಮಗೆ ಸಾಧ್ಯವೇ? ಎಂದು ಕುಮಾರಸ್ವಾಮಿ ಅವರು ಕೇಳಿದ್ದಾರೆ.

ಪ್ರಧಾನಮಂತ್ರಿಗಳ ರಕ್ಷಣೆ ಪಡೆದುಕೊಳ್ಳುವ, ಅವರ ಗೌರವಕ್ಕೆ ಧಕ್ಕೆ ತರುವ ಕೆಲಸ ನಾನೆಂದೂ ಮಾಡಲಾರೆ. ನನ್ನನ್ನು ನಾನು ರಕ್ಷಣೆ ಮಾಡಿಕೊಳ್ಳುವುದೂ ಗೊತ್ತು. ನಿಮ್ಮ ದುಷ್ಟತನದ ಭಕ್ಷಣೆಯೂ ಗೊತ್ತು. ನನ್ನ ಪುರಾಣ ಕಂತುಗಳಲ್ಲಿ ಬರುತ್ತದೆ ಎನ್ನುವ ಸಿದ್ದರಾಮಯ್ಯನವರೇ, ನಿಮ್ಮ ಹಣೆಬರಹ ನಿರ್ಧರಿಸುವ ನೂರಾರು ಪುರಾಣಗಳು ನನ್ನಲ್ಲಿವೆ. ಸಾವಿರಾರು ಚಾಪ್ಟರುಗಳ ಪ್ಯಾನ್ ಇಂಡಿಯಾ ಸಿನಿಮಾವನ್ನೇ ಮಾಡಬಹುದು ಎಂದು ಸಿದ್ದರಾಮಯ್ಯ ಅವರಿಗೆ ಎಚ್ಚರಿಕೆ ನೀಡಿರುವ ಅವರು, ಬೇಲೆಕೇರಿಯಲ್ಲಿ ಅದಿರು ಕದ್ದ ಆಸಾಮಿಗಳ ಜತೆ ನಿಮ್ಮ 'ಸಿದ್ಧಹಸ್ತ' ಶಾಮೀಲಾಗಿರುವ ಗಣಿಪುರಾಣ ಬಿಚ್ಚಿದರೆ ನಿಮ್ಮ ಮನೆಯ ಮುಂದೆ ಕಾನ್ಸ್‌ಟೇಬಲ್‌ಗಳು ಸಾಲುಗಟ್ಟಬೇಕಾಗುತ್ತದೆ ಅವರು ಎಚ್ಚರಿಕೆ ನೀಡಿದ್ದಾರೆ.

ಅನ್ನಭಾಗ್ಯ ಯೋಜನೆಗೆ ಅಕ್ಕಿ ನೀಡಲು ಕೇಂದ್ರ ಸರ್ಕಾರ ಸಿದ್ಧ

ಇನ್ನು ಮುಂದೆ 5 ಕೆಜಿ ಅಕ್ಕಿ ಹಣ ಬಂದ್



ಬೆಂಗಳೂರು, ಆ.22– ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಕಾರ್ಡುದಾರರಿಗೆ ರಾಜ್ಯ ಸರ್ಕಾರ ರೂಪಿಸಿರುವ ಅನ್ನಭಾಗ್ಯ ಯೋಜನೆಗೆ 2.36 ಲಕ್ಷ ಟನ್ ಅಕ್ಕಿ ಪೂರೈಸಲು ಭಾರತೀಯ ಆಹಾರ ನಿಗಮ (ಎಫ್‌ಸಿಐ) ಒಪ್ಪಿಗೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಯೋಜನೆಯಡಿ ರಾಜ್ಯ ಸರ್ಕಾರದ ನೀಡುತ್ತಿದ್ದ 5 ಕೆಜಿ ಅಕ್ಕಿ ಹಣ ಇನ್ನು ಮುಂದೆ ಫಲಾನುಭವಿಗಳಿಗೆ ಸಿಗುವುದು ಬಹುತೇಕ ಬಂದ್ ಆಗಲಿದೆ ಹಣದ ಬದಲು ಅಕ್ಕಿಯನ್ನೇ ನೀಡಲು ಸರ್ಕಾರ ಮುಂದಾಗುತ್ತಿದೆ.

ಅನ್ನಭಾಗ್ಯ ಯೋಜನೆಗೆ ಅಕ್ಕಿ ನೀಡಬೇಕೆಂಬ ರಾಜ್ಯ ಸರ್ಕಾರದ ಮನವಿಯನ್ನು ಕಳೆದ ವರ್ಷ ಕೇಂದ್ರ ತಿರಸ್ಕರಿಸಿತ್ತು. ಇದು ರಾಜ್ಯ ಸರ್ಕಾರ ಮತ್ತು ಕೇಂದ್ರದ ನಡುವೆ ವಾಕ್ಸಮರಕ್ಕೆ ಕಾರಣವಾಗಿತ್ತು. ಕೇಂದ್ರ ಸರ್ಕಾರ ಅಕ್ಕಿ ನೀಡಲು ನಿರಾಕರಿಸಿದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ 5 ಕೆಜಿ ಅಕ್ಕಿ ಬದಲು ಅದರ ಹಣವನ್ನು ಸರ್ಕಾರ ಫಲಾನುಭವಿಗಳಿಗೆ ನೀಡುತ್ತಿದೆ. ತಲಾ ಒಂದು ಕೆಜಿಗೆ 34 ರೂಪಾಯಿಯಂತೆ 170 ರೂಪಾಯಿ ಖಾತೆಗೆ ನೀಡುತ್ತಿದೆ. ಒಂದು ಕುಟುಂಬ ಯಜಮಾನರ ಖಾತೆಗೆ ಸದಸ್ಯರ ಅಕ್ಕಿ ಹಣವನ್ನು ನೀಡುತ್ತಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಎಫ್‌ಸಿಐನ ಪ್ರಾದೇಶಿಕ ಕಚೇರಿಯ ಪ್ರಧಾನ ವ್ಯವಸ್ಥಾಪಕ ಮಹೇಶ್ವರಪ್ಪ ಅವರು, ಕರ್ನಾಟಕ ಸರ್ಕಾರ ಅನ್ನಭಾಗ್ಯ ಯೋಜನೆಗಾಗಿ 2.38 ಲಕ್ಷ ಟನ್ ಅಕ್ಕಿಯನ್ನು ಪೂರೈಸಲು ಮನವಿ ಮಾಡಿದ್ದು, ಅದನ್ನು ಪೂರೈಸಲು ನಾವು ಸಿದ್ಧರಿದ್ದೇವೆಂದು ಹೇಳಿದ್ದಾರೆ.

ಕಳೆದ ವರ್ಷ ಮುಂಗಾರು ಮಳೆಯ ಕೊರತೆಯು ಅಕ್ಕಿ ಸಂಗ್ರಹಣೆ ಮೇಲೆ ಪರಿಣಾಮ ಬೀರಿತ್ತು. ಮುಕ್ತ ಮಾರುಕಟ್ಟೆ ಮಾರಾಟ ಯೋಜನೆ ಅನ್ನು ಅಮಾನತುಗೊಳಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಮನವಿಯನ್ನು ಪರಿಗಣಿಸಲಾಗಲಿಲ್ಲ. ಈ ವರ್ಷ ಉತ್ತಮ ಮಳೆಯಾಗಿದ್ದು, ಎಫ್‌ಸಿಐ (ಕರ್ನಾಟಕ) 7.42 ಲಕ್ಷ ಟನ್ ಅಕ್ಕಿ ದಾಸ್ತಾನು ಹೊಂದಿದೆ. 2025ರ ಮಾರ್ಚ್‌ವರೆಗೆ ಕೆಜಿಗೆ 28ರೂ.ರಂತೆ ಕರ್ನಾಟಕ ರಾಜ್ಯಕ್ಕೆ ಅಕ್ಕಿ ಪೂರೈಸಲು ಸಿದ್ಧವಿದ್ದೇವೆಂದು ತಿಳಿಸಿದ್ದಾರೆ.

ವಿಶ್ವಕರ್ಮ ಪ್ರತಿಭಾನ್ವಿತರಿಗೆ ಪುರಸ್ಕಾರ, ಸಾಧಕರಿಗೆ ಸನ್ಮಾನ

ವಿಶ್ವಕರ್ಮ ಸಮುದಾಯಕ್ಕೆ ಧ್ವನಿಯಾಗಿರುವೆ: ಯದುವೀರ್



ಮೈಸೂರು ಜಿಲ್ಲಾ ವಿಶ್ವಕರ್ಮ ಯುವ ಜಾಗೃತಿ ವೇದಿಕೆ ವತಿಯಿಂದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ನೀಲಕಂಠಾಚಾರ್ಯ ಸ್ವಾಮೀಜಿ, ಸಂಸದ ಯದುವೀರ್, ಶಿಲ್ಪಿ ಅರುಣ್ ಯೋಗಿರಾಜ್ ಮತ್ತಿತರರಿದ್ದರು.

ಮೈಸೂರು, ಆ.22– ಮೈಸೂರು ಜಿಲ್ಲಾ ವಿಶ್ವಕರ್ಮ ಯುವ ಜಾಗೃತಿ ವೇದಿಕೆ ವತಿಯಿಂದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ವಿಶ್ವಕರ್ಮ ಸಮುದಾಯ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ನಗರದ ಜಗನ್ಮೋಹನ ಅರಮನೆ ಸಭಾಂಗಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಸಂಸದರೂ ಆದ ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ, ಸಾಧಕರನ್ನು ಸನ್ಮಾನಿಸಿದರು. ಬಳಿಕ ಮಾತನಾಡಿದ ಅವರು, ದೇಶದ ಪರಂಪರೆ ಉಳಿವಿಗೆ ವಿಶ್ವಕರ್ಮ ಸಮುದಾಯ ಬಹುದೊಡ್ಡ ಕೊಡುಗೆ ನೀಡಿದೆ. ಅದಕ್ಕಾಗಿಯೇ ಕೇಂದ್ರ ಸರ್ಕಾರ ವಿಶ್ವಕರ್ಮ ಯೋಜನೆ ಜಾರಿಗೊಳಿಸಿದ್ದು, ವಿಕಸಿತ ಭಾರತ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು. ನಿಮ್ಮ ಪರವಾಗಿ ನಾನು ಧ್ವನಿಯಾಗಿ ಇರುತ್ತೇನೆ ಎಂದು ಭರವಸೆ ನೀಡಿದರು.

ಭಾರತವು ಪಾಶ್ಚಾತ್ಯ ದೇಶಗಳಿಗಿಂತಲೂ ಹೆಚ್ಚು ಅಭಿವೃದ್ಧಿ ಹೊಂದಬೇಕು. ಹಿಂದಿನಿಂದಲೂ ಹೇಳಿಕೊಂಡು ಬಂದಂತೆ ಬಡತನ ನಿವಾರಣೆಯೊಂದೇ ನಮ್ಮ ಸರ್ಕಾರದ ಗುರಿಯಲ್ಲ. ಅವರ ಜೀವನಮಟ್ಟವನ್ನು ಉತ್ತಮ ಪಡಿಸುವುದೇ ಗುರಿಯಾಗಿದೆ ಎಂದರಲ್ಲದೆ ಅಯೋಧ್ಯೆ ರಾಮಮಂದಿರದಲ್ಲಿ ಪ್ರತಿಷ್ಠಾಪಿಸಲಾದ ಬಾಲರಾಮನ ಮೂರ್ತಿ ರೂಪಿಸಿದ ಶಿಲ್ಪಿ ಅರುಣ್ ಯೋಗಿರಾಜ್ ಸೇರಿದಂತೆ ಅನೇಕ ಶಿಲ್ಪಿಗಳು ನೀಡಿರುವ ಕೊಡುಗೆ ಮಹತ್ವದ್ದಾಗಿದೆ ಎಂದು ಶ್ಲಾಘಿಸಿದರು.

ಶಿಲ್ಪಿ ಅರುಣ್ ಯೋಗಿರಾಜ್ ಮಾತನಾಡಿ, ಮಕ್ಕಳು ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಯಲ್ಲೂ ಪಾಲ್ಗೊಳ್ಳಬೇಕು. ಹಾಗೆಯೇ ನಮ್ಮ ಕುಲಕಸುಬನ್ನು ಉಳಿಸಿಕೊಂಡು ಹೋಗಬೇಕು ಎಂದು ಕಿವಿಮಾತು ಹೇಳಿದರು. ಇದೇ ವೇಳೆ ಹುಬ್ಬಳ್ಳಿ–ಧಾರವಾಡ ನಗರಪಾಲಿಕೆ ಮೇಯರ್ ರಾಮಣ್ಣ ಬಡಿಗೇರ, ಬಿಗ್‌ಬಾಸ್ ರಿಯಾಲಿಟಿ ಶೋ ವಿಜೇತ ಕಾರ್ತಿಕ್ ಮಹೇಶ್, ನಟಿ ಪ್ರಿಯಾಂಕಾ ಅವರಿಗೆ 'ವಿಶ್ವಕರ್ಮ ರತ್ನ ಪ್ರಶಸ್ತಿ' ಪ್ರದಾನ ಮಾಡಲಾಯಿತು.

ತುಮಕೂರು ಜಿಲ್ಲೆ ಮಧುಗಿರಿ ತಾಲೂಕಿನ ನಿಟ್ಟರಹಳ್ಳಿಯ ನೀಲಕಂಠಾಚಾರ್ಯ ಸ್ವಾಮೀಜಿ, ರಾಜ್ಯ ವಿಶ್ವಕರ್ಮ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎನ್. ನಂದಕುಮಾರ್, ಜಿಲ್ಲಾ ವಿಶ್ವಕರ್ಮ ಯುವ ಜಾಗೃತಿ ವೇದಿಕೆ ಅಧ್ಯಕ್ಷ ಕೆಂಡಗಣ್ಣ ವಿಶ್ವಕರ್ಮ, ಪ್ರಧಾನ ಕಾರ್ಯದರ್ಶಿ ಟಿ.ಎ.ಸಿದ್ದರಾಜು, ಸರಸ್ವತಿ, ನಗರ ಪಾಲಿಕೆ ಮಾಜಿ ಸದಸ್ಯ ರಮಣಿ, ಕೆಪಿಸಿಸಿ ಒಬಿಸಿ ಘಟಕದ ಉಪಾಧ್ಯಕ್ಷ ಪವಿತ್ರಾ ಪ್ರಭಾಕರ್ ರೆಡ್ಡಿ, ಮುಖಂಡರಾದ ವೆಂಕಟೇಶ್, ಕುಮಾರ್, ಗೌರೀಶ್, ಬಸವರಾಜ್, ಶಿವಣ್ಣ ಮತ್ತಿತರರಿದ್ದರು.

ಪಿಎಂ ಸ್ವ–ನಿಧಿ ಯೋಜನೆ ಅನುಷ್ಠಾನದಲ್ಲಿ ಮೈಸೂರು ಪಾಲಿಕೆ ರಾಷ್ಟ್ರದಲ್ಲೇ ಪ್ರಥಮ



ಮೈಸೂರು, ಆ.22(ಎಂಕೆ)– ರಾಷ್ಟ್ರೀಯ ಜೀವನೋಪಾಯ ಅಭಿಯಾನದ ಪಿಎಂ ಸ್ವ–ನಿಧಿ(ಪ್ರಧಾನ ಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ) ಯೋಜನೆ ಅನುಷ್ಠಾನದಲ್ಲಿ ಮೈಸೂರು ನಗರಪಾಲಿಕೆ ರಾಷ್ಟ್ರಮಟ್ಟದಲ್ಲಿ ಪ್ರಥಮ ರ‍್ಯಾಂಕ್ ಪಡೆದಿದೆ.

ಬೀದಿ ಬದಿ ವ್ಯಾಪಾರಸ್ಥರಿಗೆ ಪಿಎಂ ಸ್ವ–ನಿಧಿ ಯೋಜನೆಯಡಿ ಸಾಲ ವಿತರಣೆಯಲ್ಲಿ ಗಮನಾರ್ಹ ಸಾಧನೆ ಮಾಡಿರುವ (ಪ್ರಮುಖ ನಗರಗಳ ವಿಭಾಗದಲ್ಲಿ)ಮೈಸೂರು ನಗರಪಾಲಿಕೆ ರಾಷ್ಟ್ರಮಟ್ಟದಲ್ಲಿ ಪ್ರಥಮ ಹಾಗೂ ರಾಜ್ಯ ಮಟ್ಟದಲ್ಲಿ ದ್ವಿತೀಯ ರ‍್ಯಾಂಕ್ ಪಡೆದಿದೆ.

ಪಿಎಂ ಸ್ವ–ನಿಧಿ ಯೋಜನೆಯಡಿ ನಗರಪಾಲಿಕೆಗೆ ಸಲ್ಲಿಕೆಯಾಗಿದ್ದ 37,220 ಅರ್ಜಿಗಳ ಪೈಕಿ 34,010 ಅರ್ಜಿದಾರರು ಫಲಾನುಭವಿಗಳಾಗಿ ಆಯ್ಕೆಯಾಗಿದ್ದಾರೆ. ಈ ಮೂಲಕ ದೇಶದಲ್ಲಿಯೇ ಮೈಸೂರು ನಗರಪಾಲಿಕೆ ಪಿಎಂ ಸ್ವ–ನಿಧಿ ಯೋಜನೆ ಅನುಷ್ಠಾನದಲ್ಲಿ ಮುಂಚೂಣಿಯಲ್ಲಿದೆ.

ಪ್ರಶಸ್ತಿ ಸ್ವೀಕಾರ: ಬೆಂಗಳೂರು ವಿಕಾಸಸೌಧದಲ್ಲಿ ಗುರುವಾರ ನಡೆದ ಪ್ರಶಂಸಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ವೈದ್ಯಕೀಯ ಶಿಕ್ಷಣ, ಕೌಶಲಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವ ಡಾ.ಶರಣಪ್ರಕಾಶ ರುದ್ರಪ್ಪ ಪಾಟೀಲ್ ಅವರಿಂದ ಮೈಸೂರು ನಗರ ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಶರೀಫ್ ಪ್ರಶಸ್ತಿ ಸ್ವೀಕರಿಸಿದರು. ಹೆಚ್ಚುವರಿ ಆಯುಕ್ತೆ ಕುಸುಮ ಕುಮಾರಿ, ಡೇನಲ್ಮ್ ವಿಭಾಗದ ಅಭಿಯಾನ ವ್ಯವಸ್ಥಾಪಕ ಡಾ.ಜೆ.ಎಸ್.ಭೈರಲಿಂಗಯ್ಯ ಮತ್ತಿತರರಿದ್ದರು.

ಉಷಾಕಿರಣ್ ಕಣ್ಣಿನ ಆಸ್ಪತ್ರೆಯಲ್ಲಿ ಆರು ತಿಂಗಳ ಮಗುವಿಗೆ ಕ್ಲಿಷ್ಟಕರ ಕಣ್ಣಿನ ಶಸ್ತ್ರ ಚಿಕಿತ್ಸೆ

ಮೈಸೂರು, ಆ. 22– ನಗರದ ಖ್ಯಾತ ನೇತ್ರ ಶಸ್ತ್ರಚಿಕಿತ್ಸಕ ದಂಪತಿ ಡಾ. ರವಿ ಶಂಕರ್ ಹಾಗೂ ಡಾ. ಉಮಾ ರವಿಶಂಕರ್ ನೇತೃತ್ವದಲ್ಲಿ ನಗರದ ಉಷಾಕಿರಣ ಕಣ್ಣಿನ ಆಸ್ಪತ್ರೆಯಲ್ಲಿ ಇತ್ತೀಚೆಗೆ ಬೀದರ್ ಜಿಲ್ಲೆಯ ಆರು ತಿಂಗಳ ಹೆಣ್ಣು ಮಗುವಿಗೆ ಅಪರೂಪದ, ಕ್ಲಿಷ್ಟಕರ ಶಸ್ತ್ರಚಿಕಿತ್ಸೆ ನಡೆಸಿ, ಆಕೆಗೆ ದೃಷ್ಟಿ ಲಭಿಸುವಂತೆ ಮಾಡಲಾಗಿದೆ. ಜೊತೆಗೆ, ಮಗುವಿನ ಹೆತ್ತವರು ತೀರಾ ಬಡವರಾಗಿದ್ದರಿಂದ ಆಸ್ಪತ್ರೆಯ ವತಿಯಿಂದಲೇ, ಅವರಿಗೆ ಊಟ, ವಸತಿ ವ್ಯವಸ್ಥೆ ಮಾಡಿ, ಈಗ ಅವರ ಯೋಗಕ್ಷೇಮ ನೋಡಿಕೊಳ್ಳಲಾಗುತ್ತಿದೆ.

ಆರ್ಥಿಕ ಹಾಗೂ ಸಾಮಾಜಿಕವಾಗಿ ತೀರಾ ಹಿಂದುಳಿದ ಕುಟುಂಬಕ್ಕೆ ಸೇರಿದ ಧೃತಿ ಎಂಬ ಮಗುವಿಗೆ ಈ ಶಸ್ತ್ರಚಿಕಿತ್ಸೆ ಮಾಡಲಾಗಿದೆ.

ಧೃತಿ ಹುಟ್ಟಿನಿಂದಲೇ ಎರಡೂ ಕಣ್ಣುಗಳಲ್ಲಿ ಕಣ್ಣಿನ ಪೊರೆ ಹೊಂದಿದ್ದ ಮಗು. ಇದರ ಜೊತೆಗೆ ಆಕೆಯ ಕಣ್ಣುಗಳು ಬಹಳ ಚಿಕ್ಕದಾಗಿದ್ದು ವಿರೂಪ ರಚನೆ ಹೊಂದಿದೆ. ಇದರ ಜೊತೆಗೆ ಆಕೆಯ ಕಣ್ಣಿನ ಮುಂಭಾಗದ ಸಣ್ಣ ಭಾಗ (ಮೈಕ್ರೋ ಕಾರ್ನಿಯಾ) ಹಾಗು ಕಣ್ಣಿನ ಎಲ್ಲಾ ರಚನೆಗಳು ತುಂಬಾ ಕಿಕ್ಕಿರಿದಿವೆ ಮತ್ತು ಚಿಕ್ಕದಾಗಿದೆ. ಆಕೆ ಎದುರಿಸುತ್ತಿದ್ದ ಇನ್ನೊಂದು ಸಮಸ್ಯೆ ಎಂದರೆ ಆಕೆಯ ಕಣ್ಣುಗಳು ಅಲುಗಾಡುತ್ತಿದ್ದು, ಸರಿಯಾಗಿ ಕಣ್ಣಿನ ಬೆಳವಣಿಗೆ ಆಗಿಲ್ಲ. ಇವು ತಾಂತ್ರಿಕವಾಗಿ ತುಂಬಾ ಸವಾಲಿನ ಪರಿಸ್ಥಿತಿಯನ್ನು ಶಸ್ತ್ರಚಿಕಿತ್ಸಕರಿಗೆ ತಂದೊಡ್ಡಿದ್ದವು. ನಮ್ಮ 35 ವರ್ಷಗಳ ಅನುಭವ ಹಾಗು ಇದೇ ರೀತಿಯ ಕ್ಲಿನಿಕಲ್ ಪರಿಸ್ಥಿತಿಗಳಲ್ಲಿ ಸಾವಿರಾರು ಸಂಕೀರ್ಣ ಶಸ್ತ್ರಚಿಕಿತ್ಸೆಗಳ ಹೊರತಾಗಿಯೂ, ಈ ಮಗುವಿನ ಶಸ್ತ್ರ ಚಿಕಿತ್ಸೆ ನಮಗೆ ಸವಾಲಿನದ್ದಾಗಿತ್ತು ಎನ್ನುತ್ತಾರೆ ಡಾ. ರವಿಶಂಕರ್.

ಆದರೆ, ಈ ಸವಾಲನ್ನು ಕೈಗೆತ್ತಿಕೊಂಡ ಡಾ. ರವಿಶಂಕರ್ ಹಾಗೂ ಡಾ. ಉಮಾ ರವಿಶಂಕರ್ ದಂಪತಿ, ಅರವಳಿಕೆ ತಜ್ಞ ಡಾ. ಮಂಜುನಾಥ್ ನೇತೃತ್ವದ ಅರಿವಳಿಕೆ ವೈದ್ಯರ ತಂಡ, ಹಾಗೂ ಆಸ್ಪತ್ರೆಯ ಇತರ ನೇತ್ರ ಶಸ್ತ್ರ ಚಿಕಿತ್ಸಕರ ತಂಡದೊಂದಿಗೆ ಸಾಮಾನ್ಯ ಅರಿವಳಿಕೆ ಮೂಲಕ ಶಸ್ತ್ರಚಿಕಿತ್ಸೆ ನಡೆಸಿ, ಮಗುವಿಗೆ ದೃಷ್ಟಿ ಮರಳುವಂತೆ ಮಾಡಿದ್ದಾರೆ.

ಸದ್ಯಕ್ಕೆ, ಕಣ್ಣಿನ ಗಾತ್ರವು ಸಾಮಾನ್ಯಕ್ಕಿಂತ ಕಡಿಮೆ ಇರುವುದರಿಂದ ಕ್ಯಾಟರಾಕ್ಟ್ ಆಸ್ಪಿರೇಶನ್‌ನ ಮೊದಲ ಹಂತದ ಶಸ್ತ್ರಚಿಕಿತ್ಸೆ ಪ್ರಾಥಮಿಕ ಕ್ಯಾಪ್ಸುಲೋಟಮಿ ಹಾಗೂ ಮುಂಭಾಗದ ವಿಟ್ರೆಕ್ಟಮಿಯನ್ನು ಬಲಗಣ್ಣಿಗೆ ಮಾಡಲಾಗಿದೆ. ಇನ್ನು ಮುಂದಿನ ದಿನಗಳಲ್ಲಿ, ಇತರ ಚಿಕಿತ್ಸೆಗಳು ಮುಂದುವರಿಯಲಿವೆ ಎಂದು ಡಾ. ರವಿಶಂಕರ್ ತಿಳಿಸಿದ್ದಾರೆ.


ಧೃತಿಯ ಕುಟುಂಬ ತೀರಾ ಬಡವರಾಗಿರುವುದರಿಂದ, ನಾವೇ ಅವರಿಗೆ ಶಸ್ತ್ರಚಿಕಿತ್ಸೆಯ ನಂತರ ಈಗ ಅವರಿಗೆ ಊಟ ಮತ್ತು ವಸತಿ ವ್ಯವಸ್ಥೆ ಮಾಡಿದ್ದೇವೆ. ಈ ನಿಟ್ಟಿನಲ್ಲಿ ಸೇತುರಾಮ್ ಮತ್ತು ಶ್ರೀ ವಿವೇಕಾನಂದ ಸೇವಾಶ್ರಮದ ತಂಡಕ್ಕೆ ನಮ್ಮ ಜೊತೆ ಕೈಜೋಡಿಸಿದೆ ಎಂದು ಅವರು ತಿಳಿಸಿದರು. ಮಗುವಿನ ತಾಯಿ ಕೂಡಾ ಇದೆ ಸಮಸ್ಯೆಗಳನ್ನು ಹೊಂದಿದ್ದಾರೆ. ಅವರಿಗೆ ಮುಂದಿನ ದಿನಗಳಲ್ಲಿ ಶಸ್ತ್ರ ಚಿಕಿತ್ಸೆ ವ್ಯವಸ್ಥೆ ಮಾಡಲಾಗುವುದು ಎಂದು ಡಾ. ರವಿ ಶಂಕರ್ ತಿಳಿಸಿದ್ದಾರೆ.

ಗುರುಮಲ್ಲೇಶ್ವರ ಮಠದಲ್ಲಿ ಶ್ರಾವಣ ಮಾಸದ ಪ್ರವಚನ

ಮೈಸೂರು, ಆ.22– ತಾಲೂಕಿನ ದೇವಲಾಪುರ ಗ್ರಾಮದ ಶ್ರೀ ಗುರುಮಲ್ಲೇಶ್ವರ ಮಠದಲ್ಲಿ ಶುಕ್ರವಾರದಿಂದ ಮೂರು ದಿನಗಳ ಕಾಲ ಸಂಜೆ ನಿತ್ಯ 6.30ರಿಂದ ರಾತ್ರಿ 9.30ರವರೆಗೆ ಶ್ರಾವಣ ಮಾಸದ ಪ್ರಯುಕ್ತ ಪ್ರವಚನ ಕಾರ್ಯಕ್ರಮ ನಡೆಯಲಿದೆ.

ಶುಕ್ರವಾರ ಸಂಜೆ 6.30ಕ್ಕೆ ದೇವನೂರು ಶ್ರೀ ಗುರುಮಲ್ಲೇಶ್ವರ ತ್ರಿವಿಧ ದಾಸೋಹ ಮಠಾಧೀಶರಾದ ಶ್ರೀ ಮಹಾಂತಸ್ವಾಮೀಜಿ ಸಾನ್ನಿಧ್ಯ, ಬರಡನಪುರ ಮಠದ ಶ್ರೀ ಪರಶಿವಮೂರ್ತಿ ಸ್ವಾಮೀಜಿ ಸಮ್ಮುಖದಲ್ಲಿ ಶರಣು ವಿಶ್ವ ವಚನ ಫೌಂಡೇಶನ್ ಸಂಸ್ಥಾಪಕ ವಚನ ಕುಮಾರಸ್ವಾಮಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಫೌಂಡೇಶನ್ ಸಂಸ್ಥಾಪಕಿ ರೂಪಾ ಕುಮಾರಸ್ವಾಮಿ ಶರಣರ ವಿಚಾರಧಾರೆ ಕುರಿತು ಪ್ರವಚನ ನೀಡಲಿದ್ದಾರೆ. ಆ.24ರಂದು ಕುಂದೂರು ಮಠಾಧೀಶ ಶ್ರೀ ಶರತ್ಚಂದ್ರ ಸ್ವಾಮೀಜಿ ಸಾನ್ನಿಧ್ಯದಲ್ಲಿ ಚಾಮರಾಜನಗರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನಿಟಕಪೂರ್ವ ಅಧ್ಯಕ್ಷ ಬಿ.ಎಸ್.ವಿನಯ್ ಪ್ರವಚನ ನೀಡಲಿದ್ದಾರೆ. ಆ.25ರಂದು ಮಡಿವಾಳ ಮಠಾಧೀಶ ಇಮ್ಮಡಿ ಮಡಿವಾಳ ಸ್ವಾಮೀಜಿ ಸಾನ್ನಿಧ್ಯ ವಚನ ಗಾಯನ ಕಾರ್ಯಕ್ರಮ ನಡೆಯಲಿದ್ದು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ತಾಲೂಕು ಅಧ್ಯಕ್ಷ ದೇವರಾಜ್ ಮತ್ತಿತರರು ದೇವಲಾಪುರದ ಶ್ರೀ ಗುರುಮಲ್ಲೇಶ್ವರ ದಾಸೋಹ ಮಠಾಧೀಶರಾದ ಶ್ರೀ ಜಡೇಸ್ವಾಮೀಜಿ ತಿಳಿಸಿದ್ದಾರೆ.

ಬಿ.ಎಸ್. ಯಡಿಯೂರಪ್ಪ ಬಂಧನ ಬೇಡ: ಮಧ್ಯಂತರ ಆದೇಶ ವಿಸ್ತರಣೆ



ಬೆಂಗಳೂರು: 'ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪಕ್ಕೆ ಸಂಬಂಧಿಸಿದಂತೆ ಬಿಜೆಪಿ ಕೇಂದ್ರ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣದಲ್ಲಿ ಪೊಲೀಸರು ಅವರನ್ನು ಬಂಧಿಸಬಾರದು ಮತ್ತು ವಿಚಾರಣೆಗಾಗಿ ಅವರ ಖುದ್ದು ಹಾಜರಾತಿಗೆ ವಿನಾಯಿತಿ ನೀಡಲಾಗಿದೆ' ಎಂಬ ತನ್ನ ಮಧ್ಯಂತರ ಆದೇಶವನ್ನು ಹೈಕೋರ್ಟ್ ಪುನಃ ವಿಸ್ತರಿಸಿದೆ.

ಪ್ರಕರಣ ರದ್ದುಪಡಿಸುವಂತೆ ಕೋರಿ ಬಿ.ಎಸ್.ಯಡಿಯೂರಪ್ಪ ಸಲ್ಲಿಸಿರುವ ರಿಟ್ ಅರ್ಜಿಯ ಮುದ್ದತು, 'ಶಾಸಕರು, ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ'ಯ ವಿಶೇಷ ನ್ಯಾಯಪೀಠದಲ್ಲಿದ್ದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಮುಂದೆ ಗುರುವಾರಕ್ಕೆ (ಆ.22) ನಿಗದಿಯಾಗಿತ್ತು.

ಆದರೆ, ದಿನದ ಕಾಸ್ ಲಿಸ್ಟ್‌ನಲ್ಲಿ ಪ್ರಕರಣದ ಸಂಖ್ಯೆ ನಮೂದಾಗಿರದ ಕಾರಣ ವಿಶೇಷ ಪ್ರಾಸಿಕ್ಯೂಟರ್ ಅಶೋಕ್ ಎನ್. ನಾಯಕ್ ಅವರು ಪ್ರಕರಣದ ವಿಚಾರಣೆ ಕೈಗೆತ್ತಿಕೊಳ್ಳುವಂತೆ ಕೋರಿ ಬೆಳಿಗ್ಗೆ ತುರ್ತು ಮೆಮೊ ಸಲ್ಲಿಸಿದರು.

ನ್ಯಾಯಪೀಠವು, ಈ ಮೆಮೊ ಅನ್ನು ದಿನದ ಕಲಾಪದ ಕೊನೆಗೆ ಕೈಗೆತ್ತಿಕೊಂಡಿತಾದರೂ, 'ಈಗ ಸಂಜೆ 5 ಗಂಟೆಯಾಗಿರುವ ಕಾರಣ ವಾದ ಆಲಿಸಲು ಸಮಯಾವಕಾಶದ ಕೊರತೆ ಇದೆ' ಎಂಬ ಹಿನ್ನೆಲೆಯಲ್ಲಿ ವಿಚಾರಣೆಯನ್ನು ಇದೇ 30ಕ್ಕೆ ಮುಂದೂಡಿತು. ಬಿ.ಎಸ್.ಯಡಿಯೂರಪ್ಪ ಪರ ವಕೀಲೆ ಸ್ವಾಮಿನಿ ಗಣೇಶ ಮೋಹನಂಬಾಳ್ ಹಾಗೂ ಸಂತ್ರಸ್ತ ಬಾಲಕಿಯ ಪರವಾಗಿ ಎಸ್.ಬಾಲನ್ ಹಾಜರಿದ್ದರು.

ಮಾಧ್ಯಮಗಳು ನೊಂದವರಿಗೆ ನ್ಯಾಯ ಕೊಡಿಸುವಂತಾಗಬೇಕು

ವಿಚಾರ ಸಂಕಿರಣದಲ್ಲಿ ಮಹಾರಾಣಿ ಕಾಲೇಜು ಪ್ರಾಂಶುಪಾಲ ಡಾ.ವಸಂತಕುಮಾರ್ ಆಶಯ

ಮೈಸೂರು, ಆ.22(ಎಂಕೆ)– ಮಾಧ್ಯಮಗಳು ನೊಂದವರ ಪರ ಧ್ವನಿಯಾಗಿ ಅವರಿಗೆ ನ್ಯಾಯ ಕೊಡಿಸುವ ಕಾರ್ಯದಲ್ಲಿ ತೊಡಗಿಕೊಳ್ಳಬೇಕು. ಪತ್ರಿಕೋದ್ಯಮಿಗಳು ನೊಂದವರ ಪರ ಬರೆಯುವ ವ್ಯಕ್ತಿಗಳಾಗಬೇಕು ಎಂದು ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪ್ರಾಂಶುಪಾಲ ಡಾ.ವಸಂತ ಕುಮಾರ್ ಆಶಯ ವ್ಯಕ್ತಪಡಿಸಿದರು.

ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಮೈಸೂರು ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಜಯಲಕ್ಷ್ಮಮ್ಮಣ್ಣಿ ಸಭಾಂಗಣದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗ ಮಾನಸ ಗಂಗೋತ್ರಿ ಸಂಯುಕ್ತಾಶ್ರಯದಲ್ಲಿ ನಡೆದ ಪತ್ರಿಕಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ 'ಪತ್ರಿಕೋದ್ಯಮದಲ್ಲಿ ಕೃತಕ ಬುದ್ಧಿಮತ್ತೆ ಬಳಕೆ ಹಾಗೂ ಅಭಿವೃದ್ಧಿ ಪತ್ರಿಕೋದ್ಯಮ' ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚೆಗೆ ಮಾಧ್ಯಮ ಒಂದು ಉದ್ಯಮ ಆಗಿದೆ. ಒಳ್ಳೆ ಸುದ್ದಿಗಿಂತ ಕೆಟ್ಟ ಸುದ್ದಿ ಬೇಗ ಹರಡುತ್ತಿರುವುದು ಬದಲಾಗಬೇಕು. ಅಭಿವೃದ್ಧಿಯಲ್ಲಿ ಆಂತರಿಕ ಹಾಗೂ ಬಾಹ್ಯ ಅಭಿವೃದ್ಧಿಗಳಿವೆ. ಭಾಷೆಯನ್ನು ಎಲ್ಲಿ ಹೇಗೆ ಬಳಸಬೇಕು ಎಂಬುದರ ಬಗ್ಗೆ ಅರಿವು ಇರಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮೈಸೂರು ಆಕಾಶವಾಣಿಯ ಕಾರ್ಯಕ್ರಮ ನಿರೂಪಕ ಕೇಶವ ಮೂರ್ತಿ ಮಾತನಾಡಿ, ನೀವೆಲ್ಲರೂ ಮುಂದೆ ಪತ್ರಿಕೋದ್ಯಮಿಗಳು ಆಗಬೇಕೆಂದು ಇರುವವರು. ಇವತ್ತಿಗೂ ಅಭಿವೃದ್ಧಿ ಪತ್ರಿಕೋದ್ಯಮ ಮಾಡುತ್ತಿರುವ ಮಾಧ್ಯಮ ಆಕಾಶವಾಣಿ. ಮಾಹಿತಿ ಶಿಕ್ಷಣ ಮನರಂಜನೆ ಈ ಮೂರು ಅಂಶಗಳನ್ನು ಇಟ್ಟುಕೊಂಡು ಪತ್ರಿಕೋದ್ಯಮ ನಡೆಸುತ್ತಿರುವುದು ಆಕಾಶವಾಣಿ. ಆದ್ದರಿಂದ ತಾವೆಲ್ಲರೂ ನಿಯಮಿತವಾಗಿ ಆಕಾಶವಾಣಿ ಕೇಳಿ ಎಂದು ಸಲಹೆ ನೀಡಿದರಲ್ಲದೆ ಕೇವಲ ಮಾಹಿತಿ ನೀಡುವ ಬದಲು ಜ್ಞಾನ ನೀಡುವ ಪತ್ರಕರ್ತರಾಗಿ, ನಾವು ಮನಸ್ಸು ಮಾಡಿದರೆ ಅಭಿವೃದ್ಧಿ ಮಾಹಿತಿಯನ್ನು ನೀಡಬಹುದು ಎಂದರು.

ಪತ್ರಕರ್ತರಾದ ನಾವು ನೀಡುವ ಸುದ್ದಿಯಲ್ಲಿ ನಿಖರತೆ ಮತ್ತು ವೈಚಾರಿಕತೆಯಿಂದ ಕೂಡಿರಬೇಕು. ಮುಖ್ಯವಾಗಿ ಮಾನವೀಯ ಮೌಲ್ಯಗಳನ್ನು ಒಳಗೊಂಡಿರಬೇಕು. ಪತ್ರಿಕೋದ್ಯಮದಲ್ಲಿ ತಾಂತ್ರಿಕತೆ ಹೆಚ್ಚಾಗಿ ಅಳವಡಿಕೆ ಆಗುತ್ತಿವೆ. ಅಭಿವೃದ್ಧಿ ಮಾಹಿತಿಯನ್ನು ಜನರಿಗೆ ನೀಡಬೇಕು. ಅಭಿವೃದ್ಧಿ ಮಾಹಿತಿಗಾಗಿ ಶೇ.80 ರಷ್ಟು ಜನರು ಕಾಯುತ್ತಿರುತ್ತಾರೆ. ಆದರೆ, ಬಡಿದಾಡುವ ಸುದ್ದಿಗಳಿಗೆ ನೀಡುತ್ತಿರುವ ಮಹತ್ವವನ್ನು ಅಭಿವೃದ್ಧಿ ಮಾಹಿತಿಗಳನ್ನು ನೀಡದಿರುವುದು ವಿಪರ್ಯಾಸ. ನೀವೆಲ್ಲರೂ ಕೇವಲ ಮಾಹಿತಿ ನೀಡುವ ಪತ್ರಕರ್ತರಾಗದೆ ಜ್ಞಾನ ನೀಡುವ ಪತ್ರಕರ್ತರಾಗಿ ಎಂದು ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.



ಪತ್ರಿಕಾ ದಿನಾಚರಣೆ ಅಂಗವಾಗಿ ನಡೆದ ವಿಚಾರ ಸಂಕಿರಣವನ್ನು ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪ್ರಾಂಶುಪಾಲ ಡಾ.ವಸಂತ ಕುಮಾರ್ ಉದ್ಘಾಟಿಸಿದರು.

ಕೃತಕ ಬುದ್ಧಿಮತ್ತೆ ಬಳಕೆ ಹೆಚ್ಚುತ್ತಿದೆ: ಮಾನಸ ಗಂಗೋತ್ರಿಯ ಪತ್ರಿಕೋದ್ಯಮ ಹಾಗೂ ಸಮೂಹ ಸಂವಹನ ವಿಭಾಗ ಮುಖ್ಯಸ್ಥೆ ಪ್ರೊ.ಎಂ.ಎಸ್.ಸಪ್ನ ಮಾತನಾಡಿ, ಪತ್ರಿಕೋದ್ಯಮದಲ್ಲಿ ಬರವಣಿಗೆ ಹಾಗೂ ಜ್ಞಾನ ಅತ್ಯಗತ್ಯ. ತಂತ್ರಜ್ಞಾನ ಅಭಿವೃದ್ಧಿ ಅದಂತೆ ನಾವು ಅದಕ್ಕೆ ಹೊಂದಿಕೊಳ್ಳುತ್ತಾ ಹೋಗಬೇಕು. ಕೃತಕ ಬುದ್ಧಿಮತ್ತೆ ಕಳೆದ ಒಂದು ದಶಕದಿಂದ ಈಚೆಗೆ ಹೆಚ್ಚು ಬಳಕೆ ಆಗುತ್ತಿದೆ. ಜನರನ್ನು ಹೇಗೆ ತಮ್ಮ ಕಡೆಗೆ ಸೆಳೆಯಬೇಕು, ಜನರಿಗೆ ಯಾವುದರ ಬಗ್ಗೆ ಆಸಕ್ತಿ ಹೆಚ್ಚಾಗಿದೆ, ಜನರನ್ನು ಹೇಗೆ ಆಕರ್ಷಣೆ ಮಾಡಬೇಕು ಎಂಬುದು ಕೃತಕ ಬುದ್ಧಿಮತ್ತೆಯನ್ನು ಒಳಗೊಂಡಿರುತ್ತದೆ. ಕೃತಕ ಬುದ್ಧಿಮತ್ತೆಯು ಪ್ರತಿಯೊಬ್ಬ ವ್ಯಕ್ತಿಯ ಆಸಕ್ತಿ, ಅವಶ್ಯಕತೆ, ತಂತ್ರಜ್ಞಾನದಲ್ಲಿ ಸರ್ಚ್ ಮಾಡುವ ವಿಷಯಗಳ ಆಧಾರದ ಮೇಲೆ ಅವಲಂಬಿತವಾಗಿರುತ್ತದೆ. ಮಾಧ್ಯಮದಲ್ಲಿ ಮ್ಯೂಸಿಕ್, ಚಲನಚಿತ್ರಗಳು, ಸ್ಕ್ರಿಪ್ಟ್ ರೈಟಿಂಗ್ ಹಾಗೂ ಕಿರುಚಿತ್ರಗಳನ್ನು ಒಳಗೊಂಡಿರುತ್ತದೆ. ನೀವು ಆನ್ಲೈನ್‌ನಲ್ಲಿ ಹೆಚ್ಚಾಗಿ ಯಾವ ವಿಷಯ ಹೆಚ್ಚು ಹುಡುಕುವಿರಿ, ಯಾವ ವಸ್ತುಗಳನ್ನು ಕೊಂಡುಕೊಳ್ಳುತ್ತಿರಿ ಅದೇ ಮಾಹಿತಿಯನ್ನು ಹೆಚ್ಚಾಗಿ ನಿಮಗೆ ಹೆಚ್ಚಾಗಿ ತೋರಿಸುತ್ತದೆ. ಇದನ್ನೇ ನಾವು ಕೃತಕ ಬುದ್ಧಿಮತ್ತೆ ಎಂದು ಕರೆಯಬಹುದು ಎಂದು ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕರಾದ ಆರ್.ಅಶೋಕ್ ಕುಮಾರ್, ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್, ಮಹಾರಾಣಿ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥರಾದ ಅಶ್ವಿನಿ ಮತ್ತಿತರರಿದ್ದರು.

ತಿ.ನರಸೀಪುರ ಬಳಿ ಸ್ಫೋಟಕ ಪತ್ತೆ



ಮೈಸೂರು, ಆ.22– ತಿ.ನರಸೀಪುರ ತಾಲೂಕು ಕೆಂಪಯ್ಯನಹುಂಡಿ ಬಳಿ ಗುರುವಾರ ಸ್ಫೋಟಕ ಪತ್ತೆಯಾಗಿದ್ದು, ಅದನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ರಸ್ತೆ ಬದಿಯಲ್ಲಿ ಬಿದ್ದಿದ್ದ ಪ್ಲಾಸ್ಟಿಕ್ ಕವರ್‌ನಲ್ಲಿ ಏಳೆಂಟು ಜಿಲಿಟಿನ್ ಕಡ್ಡಿಗಳು, ಒಂದು ಕಚ್ಚಾ ಬಾಂಬ್ ಮಾದರಿಯ ವಸ್ತು ಹಾಗೂ ಡಿಟೋನೇಟರ್‌ಗಳು ಪತ್ತೆಯಾಗಿವೆ. ತಿ.ನರಸೀಪುರ ಠಾಣೆ ಪೊಲೀಸರು ಹಾಗೂ ಬಾಂಬ್ ನಿಷ್ಕ್ರಿಯ ದಳದ ಸಿಬ್ಬಂದಿ ಪರಿಶೀಲಿಸಿದ ನಂತರ ಬಿಡಿಯಾಗಿದ್ದ ಈ ಎಲ್ಲಾ ವಸ್ತುಗಳನ್ನು ವಶಕ್ಕೆ ಪಡೆದಿದ್ದಾರೆ. ಅದೃಷ್ಟವಶಾತ್ ಯಾವುದೇ ಅನಾಹುತ ಸಂಭವಿಸಿಲ್ಲ. ಈ ಸ್ಫೋಟಕವನ್ನು ಹಂದಿ ಬೇಟೆಗೆ ಬಳಸುತ್ತಾರೆ. ಅದನ್ನು ಯಾರೋ ಒಬ್ಬ ವ್ಯಕ್ತಿ ಅಲ್ಲಿ ಬಿಟ್ಟು ಹೋಗಿದ್ದಾನೆ. ಆದರೆ ಜಿಲಿಟಿನ್ ಕಡ್ಡಿ ಇನ್ನಿತರ ವಸ್ತುಗಳು ಬಿಡಿ ಬಿಡಿಯಾಗಿದ್ದವು. ಬಾಂಬ್ ನಿಷ್ಕ್ರಿಯ ದಳ ಅದನ್ನು ವಶಕ್ಕೆ ಪಡೆದಿದೆ. ಈ ಸಂಬಂಧ ತಿ.ನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಹೆಂಡತಿ : (ಗಂಡನಿಗೆ) ನೋಡ್ರಿ ಪಕ್ಕದ್ಮನೆ ಪಿಂಕಿ 100ಕ್ಕೆ 99 ಮಾರ್ಕ್ಸ್ ತಗೊಂಡವ್ಳೆ

ಗಂಡ : ಇನ್ನೊಂದು ಮಾರ್ಕ್ಸ್ ಎಲ್ಲಿ ಹೋಯ್ತು?

ಹೆಂಡತಿ : 'ಅದನ್ನ ನಮ್ ಮಗ ತಗೊಂಡು ಬಂದವ್ನೆ'

ಮೈಸೂರು ಮಿತ್ರ

ಶುಕ್ರವಾರ, 23 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಪಾಸಿಟಿವ್ ಥಿಂಕಿಂಗ್ ಅಂದ್ರೆ ಪ್ರತಿ ಸಲವೂ ಒಳ್ಳೆಯದೇ ಆಗುತ್ತದೆಂದು ನಿರೀಕ್ಷಿಸುವುದಲ್ಲ. ಎಲ್ಲವೂ ಒಳ್ಳೆಯದಕ್ಕೇ ಆಗುತ್ತಿದೆ ಎಂದು ತಿಳಿದು ಮುನ್ನಡೆಯುವುದು.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಪೇಚಾಟದಲ್ಲಿ ಬಿದ್ದವನಿಗೆ ಪೀಕಲಾಟವೇ ಗತಿ.

ನಿಮ್ಮ ಪತ್ರಗಳು

ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯಕ್ಕೆ ಕೊನೆಯೇ ಇಲ್ಲವೇ?

ಮಾನ್ಯರೆ,

ಪಶ್ಚಿಮ ಬಂಗಾಳದ ರಾಜಧಾನಿ ಕೊಲ್ಕತ್ತಾದ ಆರ್ ಜಿ ಕರ್ ಆಸ್ಪತ್ರೆಯ ವೈದ್ಯಕೀಯ ವಿದ್ಯಾರ್ಥಿನಿ ಮೇಲೆ ನಡೆದ ಅತ್ಯಾಚಾರ ಹಾಗೂ ಹತ್ಯೆ ಪ್ರಕರಣವನ್ನು ವಿರೋಧಿಸಿ, ದೇಶಾದ್ಯಂತ ವೈದ್ಯಕೀಯ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದಾರೆ. ಪ್ರತಿಭಟನೆಯ ಕಾವು ದಿನದಿಂದ ದಿನಕ್ಕೆ ಏರುತ್ತಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ದೇಶದ ಸರ್ವೋಚ್ಚ ನ್ಯಾಯಾಲಯ ಕೂಡ ಪಶ್ಚಿಮ ಬಂಗಾಳ ಸರ್ಕಾರಕ್ಕೆ ಛೀಮಾರಿ ಹಾಕಿದೆ. ಇತ್ತೀಚಿನ ವರ್ಷಗಳಲ್ಲಿ ಮಹಿಳೆಯರ ಮತ್ತು ಸಣ್ಣ ಪುಟ್ಟ ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ದೌರ್ಜನ್ಯ, ಅತ್ಯಾಚಾರ, ಕೊಲೆ ಮುಂತಾದ ಹೀನಾಯ ಕೃತ್ಯಗಳು ಏರುಗತಿಯಲ್ಲಿ ಸಾಗುತ್ತಿರುವುದು ಕಳವಳಕಾರಿಯಾಗಿದೆ. ಕಳೆದ ತಿಂಗಳು (ಜುಲೈ) ಆಂಧ್ರಪ್ರದೇಶದಲ್ಲಿ 12–13 ವರ್ಷದ ಮೂವರು ಶಾಲಾ ಬಾಲಕರು 3 ವರ್ಷದ ಶಾಲಾ ಬಾಲಕಿಯೋರ್ವಳ ಮೇಲೆ ಅತ್ಯಾಚಾರ ಮಾಡಿ ಕೊಂದ ಪ್ರಕರಣ ಇಡೀ ದೇಶವನ್ನೇ ತಲ್ಲಣಗೊಳಿಸಿತ್ತು. ಮತ್ತೊಂದು ಪ್ರಕರಣದಲ್ಲಿ ಉತ್ತರ ಪ್ರದೇಶದ ಮೊರದಾಬಾದ್‌ನ ಖಾಸಗಿ ಆಸ್ಪತ್ರೆಯೊಂದರ ನರ್ಸ್ ಮೇಲೆ ಅದೇ ಆಸ್ಪತ್ರೆಯ ವೈದ್ಯನೊಬ್ಬ ಅತ್ಯಾಚಾರ ಎಸಗಿರುವ ಪ್ರಕರಣ ವರದಿಯಾಗಿದೆ. ತೀರಾ ಇತ್ತೀಚೆಗೆ ಬೆಂಗಳೂರಿನ ಕೋರಮಂಗಲದಲ್ಲಿ ರಾತ್ರಿ ಪಾರ್ಟಿ ಮುಗಿಸಿ ಮನೆಗೆ ತೆರಳುತ್ತಿದ್ದ ಪದವಿ ವಿದ್ಯಾರ್ಥಿನಿಯೊಬ್ಬಳ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಲಾಗಿದೆ. ಈ ಸಂಬಂಧ ಬೆಂಗಳೂರು ಹೆಚ್‌ಎಸ್‌ಆರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಮ್ಮ ಊಹೆಗೂ ನಿಲುಕದ ರೀತಿಯಲ್ಲಿ ದುಷ್ಕೃತ್ಯಗಳು ನಡೆಯುತ್ತಿವೆ.

ದೇಶದ ವಿವಿಧ ರಾಜ್ಯಗಳಲ್ಲಿ ಇದೇ ಮಾದರಿಯ ಪ್ರಕರಣಗಳು ನಡೆಯುತ್ತಿವೆ. ನಮ್ಮ ರಾಜ್ಯದಲ್ಲಿ ಕೂಡ, ವಿಶೇಷವಾಗಿ ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಇಂತಹ ಘೋರ ಕೃತ್ಯಗಳು ವರದಿಯಾಗುತ್ತಿವೆ. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಗಳ ವಿಚಾರಣೆಗೆ ಒಳಪಡಿಸಿ, ಶಿಕ್ಷೆ ನೀಡುವ ಪೋಕ್ಸೊ ಕಾಯಿದೆ ಅನೇಕ ರಾಜ್ಯಗಳಲ್ಲಿ ಜಾರಿಯಲ್ಲಿದ್ದರೂ ಸಹ, ಮಕ್ಕಳ ಮೇಲಿನ ದೌರ್ಜನ್ಯ ದುಪ್ಪಟ್ಟುಗೊಳ್ಳುತ್ತಿದೆ. ಇಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುವ ಅಶ್ಲೀಲ ಸಿನಿಮಾ, ಸಾಹಿತ್ಯ ಮುಂತಾದವು ಸಮಾಜದ ಸ್ವಾಸ್ಥ್ಯ ಕದಡುವುದರ ಜೊತೆಗೆ ಯುವಕ ಯುವತಿಯರ ಮನಸ್ಸುಗಳನ್ನು ವಿಕೃತಗೊಳಿಸುತ್ತಿದೆ. ಅನೇಕ ಹದಿಹರೆಯದವರು, ಶಾಲಾ ಬಾಲಕ ಬಾಲಕಿಯರು ಇಂದು ಘೋರ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುತ್ತಿರುವುದು ನಮ್ಮ ಯುವ ಜನಾಂಗದ ಭವಿಷ್ಯದ ಮೇಲೆ ಕರಿನೆರಳು ಬೀಳುವಂತೆ ಮಾಡಿದೆ. ಬೆಂಗಳೂರಿನಂತಹ ಮಹಾ ನಗರಗಳಲ್ಲಿ ವಾಸಿಸುವ ಅನೇಕ ಯುವಕ ಯುವತಿಯರು ಆಧುನಿಕ ಜೀವನ ಶೈಲಿಗೆ ಮಾರು ಹೋಗಿ, ಬಾರ್, ಪಬ್ ಸಂಸ್ಕೃತಿಗೆ ದಾಸರಾಗಿದ್ದು, ಸ್ವಯಂ ನಿಯಂತ್ರಣ ಕಳೆದುಕೊಂಡು ಹುಚ್ಚಾಪಟ್ಟೆ ತಿರುಗಾಡುತ್ತಾ, ಆಪತ್ತುಗಳಿಗೆ ಈಡಾಗುತ್ತಿರುವುದು ಸಹ ಇಲ್ಲಿ ಉಲ್ಲೇಖನಾರ್ಹವಾಗಿದೆ. ಅದೇನೇ ಇರಲಿ, ಈಗಲಾದರೂ ಸಂಬಂಧಪಟ್ಟ ರಾಜ್ಯ ಸರ್ಕಾರಗಳು ಎಚ್ಚೆತ್ತುಕೊಳ್ಳದಿದ್ದರೆ, ಪರಿಣಾಮ ಅತ್ಯಂತ ಭೀಕರವಾಗಬಹುದು.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಬಾಲ್ಯವಿವಾಹ ತಡೆಗೆ ಜಾಗೃತಿ ಹೆಚ್ಚಾಗಲಿ

ಮಾನ್ಯರೆ,

2006ರ ಕಾಯ್ದೆಯ ಪ್ರಕಾರ ಬಾಲ್ಯವಿವಾಹ ತಡೆಗೆ, ಕಡ್ಡಾಯವಾಗಿ ಪುರುಷರಿಗೆ 21 ವಯಸ್ಸು, ಮಹಿಳೆಯರಿಗೆ 18 ವರ್ಷ ಪೂರೈಸಿದರೆ ಮಾತ್ರ ಮದುವೆಗೆ ಸರ್ಕಾರ ಅನುಮತಿ ನೀಡಿದೆ. ಆದರೆ 2024ರ ಕೇಂದ್ರ ಸರ್ಕಾರದ ವರದಿಗಳ ಪ್ರಕಾರ ಕರ್ನಾಟಕ ರಾಜ್ಯದಲ್ಲಿ ಬಾಲ್ಯವಿವಾಹ ಪದ್ಧತಿಯಲ್ಲಿ ಎರಡನೇ ಸ್ಥಾನ ಪಡೆದಿರುವ ವರದಿ ನೋಡಿದರೆ ನಿಜಕ್ಕೂ ಬೇಸರವಾಗುತ್ತದೆ. ಏಕೆಂದರೆ ಇಂದು ಬಾಲ್ಯವಿವಾಹದಿಂದ ಮಹಿಳೆಯರು, ಶಿಕ್ಷಣ ವಂಚಿತರಾಗಿ ಸಾಮಾಜಿಕ, ಆರ್ಥಿಕ, ದೈಹಿಕ, ಮಾನಸಿಕ ಒತ್ತಡಗಳಿಗೆ ಒಳಗಾಗಿ ಅನೇಕ ಸಮಸ್ಯೆಗಳನ್ನು ಎದುರಿಸುವಂತಾಗಿದೆ. ಬಾಲ್ಯವಿವಾಹದ ವಿಷಯ ತಿಳಿಸಿದ ಕೇಂದ್ರ ಸರ್ಕಾರದ ವರದಿಗಳ ಪ್ರಕಾರ ಕ್ರಮವಾಗಿ ತಮಿಳುನಾಡು ರಾಜ್ಯ ಪ್ರಥಮ ಸ್ಥಾನ ಪಡೆದು ಎರಡನೇ ಸ್ಥಾನದಲ್ಲಿ ಕರ್ನಾಟಕ ರಾಜ್ಯ, ಮೂರನೇ ಸ್ಥಾನ ಪಶ್ಚಿಮ ಬಂಗಾಳ ಪಡೆದರೆ ನಂತರ ತೆಲಂಗಾಣ, ಆಂಧ್ರಪ್ರದೇಶ ರಾಜ್ಯ ಪಡೆದು, ದಕ್ಷಿಣ ಭಾರತದ ನಾಲ್ಕು ರಾಜ್ಯಗಳಲ್ಲಿ ಹೆಚ್ಚು ಪ್ರಮಾಣದಲ್ಲಿ ಬಾಲ್ಯವಿವಾಹ ನಡೆಯುತ್ತಿರುವ ಪ್ರಕರಣಗಳು ಕಂಡು ಬಂದಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ರಾಜ್ಯ ಸರ್ಕಾರಗಳಿಗೆ ಪತ್ರಿಕಾ ಮತ್ತು ದೂರದರ್ಶನ ಮಾಧ್ಯಮದ ಸಹಾಯ ಪಡೆದು 'ಬಾಲ್ಯವಿವಾಹ' ತಡೆಗೆ ಜಾಗೃತಿ ಜಾಹೀರಾತುಗಳನ್ನು ನೀಡಿ ಗ್ರಾಮೀಣ ಪ್ರದೇಶ ಹಾಗೂ ನಗರ ಪ್ರದೇಶಗಳಿಗೂ ಪ್ರದರ್ಶನ ನೀಡಬೇಕಾಗಿದೆ.

–ನಾಗೇಶ್, ಮಾನಸಗಂಗೋತ್ರಿ

ಪ್ರಸ್ತುತ ದಿನಗಳಲ್ಲಿ ನ್ಯಾಯಾಂಗ ವ್ಯವಸ್ಥೆ ಹೆಚ್ಚು ಪರಿಣಾಮಕಾರಿ

ಮಾನ್ಯರೆ,

ಶಾಸಕಾಂಗ, ಕಾರ್ಯಾಂಗ ವ್ಯವಸ್ಥೆಗಳ ಮೇಲೆ ಜನರ ವಿಶ್ವಾಸ ಕ್ಷೀಣಿಸುತ್ತಿರುವ ಪ್ರಸ್ತುತ ದಿನಗಳಲ್ಲಿ ನ್ಯಾಯಾಂಗ ವ್ಯವಸ್ಥೆ ಹೆಚ್ಚು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿದಿದೆ. ಇದಕ್ಕೆ ನಿದರ್ಶನವೆಂಬಂತೆ ಪಶ್ಚಿಮ ಬಂಗಾಳದಲ್ಲಿ ನಡೆದ ವೈದ್ಯ ವಿದ್ಯಾರ್ಥಿನಿಯ ಮೇಲೆ ನಡೆದ ಅತ್ಯಾಚಾರ ಹಾಗೂ ಕೊಲೆ ಪ್ರಕರಣದಲ್ಲಿ ಮಧ್ಯ ಪ್ರವೇಶಿಸಿರುವ ಸುಪ್ರೀಂ ಕೋರ್ಟ್ ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಸಿ.ಬಿ.ಐ ತನಿಖೆಗೆ ಆದೇಶಿಸುವ ಮೂಲಕ ನ್ಯಾಯಾಂಗ ವ್ಯವಸ್ಥೆ ಬಗ್ಗೆ ಜನತೆ ಇಟ್ಟಿರುವ ನಂಬಿಕೆ–ವಿಶ್ವಾಸಗಳನ್ನು ಇಮ್ಮಡಿಗೊಳಿಸಿದೆ.

ಎಲ್ಲವನ್ನೂ ರಾಜಕೀಯ ಪ್ರೇರಿತವಾಗಿ ಪರಿಗಣಿಸುವ ಪಶ್ಚಿಮ ಬಂಗಾಳ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಸರಿಯಾಗೇ ಛಾಟಿ ಬೀಸಿದ್ದು ಮುಖ್ಯಮಂತ್ರಿ ಎನಿಸಿಕೊಂಡ ಮಮತಾ ಬ್ಯಾನರ್ಜಿ ಅವರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸದೆ ಸ್ವತಃ ತಾವೇ ಪ್ರತಿಭಟನೆಯ ಹಾದಿ ಹಿಡಿದು ಮುಷ್ಕರದಲ್ಲಿ ಭಾಗವಹಿಸುವ ಮೂಲಕ ಜವಾಬ್ದಾರಿಯನ್ನು ಮರೆಮಾಚಿ ತಮ್ಮ ಘನತೆಗೆ ಕಳಂಕ ತಂದುಕೊಂಡಿದ್ದಾರೆ.

ಪ್ರಕರಣದ ಬಗ್ಗೆ ಎಫ್‌ಐಆರ್ ದಾಖಲಿಸಲು ವಿಳಂಬ ಮಾಡಿದ ಪೊಲೀಸ್ ಹಾಗೂ ಸರ್ಕಾರಕ್ಕೆ ಸರಿಯಾಗಿ ಬಿಸಿ ಮುಟ್ಟಿಸಿರುವ ನ್ಯಾಯಾಲಯ ಇದನ್ನು ಆತ್ಮಹತ್ಯೆ ಎಂದು ಬಿಂಬಿಸಲು ಮುಂದಾದ ಕಾಲೇಜಿನ ಪ್ರಾಚಾರ್ಯರನ್ನು ತರಾಟೆಗೆ ತೆಗೆದುಕೊಂಡಿದೆ. ಹಾಗೂ ವೈದ್ಯ ಸಮೂಹದ ಸುರಕ್ಷತೆ ಮತ್ತು ರಕ್ಷಣೆ ಬಗ್ಗೆ ಕಾಳಜಿ ತೋರುವ ಮೂಲಕ ಆತ್ಮವಿಶ್ವಾಸ ತುಂಬಿದೆ. ಇಂತಹ ಹೀನ ಕೃತ್ಯಗಳ ಬಗ್ಗೆ ಜಾಣ ಕುರುಡುತನ ಪ್ರದರ್ಶಿಸುವ ಸರ್ಕಾರಗಳಿಗೆ ನ್ಯಾಯಾಲಯದ ಈ ಕ್ರಮ ಒಂದು ಪಾಠವಾಗಿದೆ.

– ಹೆಚ್. ಆರ್ ಪ್ರಸಾದ್, ವಿವೇಕಾನಂದ ನಗರ, ಮೈಸೂರು .



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಚಿಂತನೆ

ಕೈಗೆಟಕದಿರುವುದು ಯಾವಾಗಲೂ ಕಹಿಯೇ!!

ನಮಗೆ ಸಂತೃಪ್ತಿ ಎಂಬುದು ಎಂದಿಗೂ ಮರೀಚಿಕೆಯಾಗಿಯೇ ಕಾಣಿಸುತ್ತಿದೆ. ಯಾವಾಗಲೂ ಧಾವಂತ. ಮನಸ್ಸಿಗೆ ನೆಮ್ಮದಿಯೇ ಇಲ್ಲ. ಕೈತುಂಬಾ ದುಡ್ಡಿದ್ದರೂ ತೃಪ್ತಿಯಿಲ್ಲ, ಇಲ್ಲದಿದ್ದರೆ ನೆಮ್ಮದಿ ಇಲ್ಲ. ಇನ್ನೂ ಬೇಕು ಬೇಕು ಎಂಬ ಹಪಾಹಪಿತನ. ಆದರೆ ಏನು ಬೇಕಾಗಿದೆ ಎಂಬುದೇ ನಮಗೆ ತಿಳಿಯದು. ನಮಗೆ ಯಾವುದರಿಂದ ಸುಖ, ನೆಮ್ಮದಿ ಸಿಗುವುದೋ ಗೊತ್ತಾಗುತ್ತಿಲ್ಲ. ಈ ಸಮಸ್ಯೆ ಸಾಮಾನ್ಯವಾಗಿ ಕಾಡುವುದು ಮಧ್ಯಮ ವರ್ಗ ಹಾಗೂ ಅದಕ್ಕಿಂತ ಸ್ವಲ್ಪ ಹೆಚ್ಚಿನ ಅಂತರದ (ಮೇಲು ಮಧ್ಯಮ ವರ್ಗ ಎಂದು ಹೇಳಬಹುದು) ಜೀವನ ನಡೆಸುತ್ತಿರುವವರಿಗೆ. ಇತ್ತೀಚೆಗೆ ಅಂಬಾನಿ ಅವರ ಕುಟುಂಬದ ಮದುವೆಯ ಸಂಭ್ರಮ, ಒಂದು ರೀತಿ ಹಣದ ಮೇಲಿನ ಆಕ್ರಮಣದಂತೆ ಕಂಡುಬಂತು. ಯಾರಿಗೂ ಹೀಗೆ ದುಂದುವೆಚ್ಚ ಮಾಡಿದರೆ ಜನ ಏನೆಂದುಕೊಳ್ಳಬಹುದು ಎಂಬ ಅಂಜಿಕೆಯೇ ಇಲ್ಲದೆ ಹಣ ಖರ್ಚು ಮಾಡುತ್ತಾರೆ. ಈ ಹಣದ ದುರುಪಯೋಗ ಮಧ್ಯಮ ವರ್ಗದಲ್ಲೂ ಆಗಾಗ್ಗೆ ಕಂಡುಬರುತ್ತದೆ. ಅದರಲ್ಲೂ ಮುಖ್ಯವಾಗಿ ನಾವು ಮಾಡುವ ಮದುವೆಗಳಲ್ಲಿ ಇದು ಹೆಚ್ಚಾಗಿ ಕಂಡುಬರುತ್ತವೆ. ಸಾಲ ಮಾಡಿಯಾದರೂ ತುಪ್ಪ ತಿನ್ನಬೇಕು ಎಂಬ ಮಾತನ್ನು ತಪ್ಪಾಗಿ ಅರ್ಥೈಸಿಕೊಂಡು, ಸಾಲ ಮಾಡಿಯಾದರೂ ಮದುವೆ ಮಾಡುವುದು ಎಂದರೆ ಅದು ನಮ್ಮ ಶಕ್ತಿ ಮೀರಿ ಮಾಡುವ ಕಾರ್ಯಕ್ರಮವಾಗುತ್ತಿದೆ. ಅದರಲ್ಲೂ ಇಂತಹ ಮದುವೆಗಳಲ್ಲಿ ಊಟೋಪಚಾರಕ್ಕೆ ಮಾಡುವ ವೆಚ್ಚ ಗಾಬರಿ ಹುಟ್ಟಿಸುತ್ತದೆ. ಇಂದು ಬಹುತೇಕರು ಸಕ್ಕರೆ ಖಾಯಿಲೆಯಿಂದ ನರಳುತ್ತಿದ್ದಾರೆ. ಅವರಿಗೆ ಒಂದು ಸಿಹಿಯ ಅರ್ಧ ಭಾಗ ತಿನ್ನುವುದೂ ಆರೋಗ್ಯದ ದೃಷ್ಟಿಯಿಂದ ಕಷ್ಟವಾಗುತ್ತಿದೆ. ಆದರೆ ನಾವು ಯಾರಿಗೇನು ಕಡಿಮೆ ಎಂದು ನಾಲ್ಕಾರು ಸಿಹಿಯನ್ನು ತಯಾರಿಸಿ ಬಡಿಸಲಾಗುತ್ತದೆ. ಕೆಲವೊಮ್ಮೆ ಬೇಡ ಎಂದರೂ ಒತ್ತಾಯಪೂರ್ವಕವಾಗಿ ಬಡಿಸಲಾಗುತ್ತದೆ. ಹೀಗೆ ಒತ್ತಾಯ ಮಾಡಿದರು ಎಂದು ಅವೆಲ್ಲವನ್ನೂ ತಿನ್ನಲಾಗುವುದಿಲ್ಲ. ಹಾಗಾಗಿ ಬಡಿಸಿದ್ದು ಎಲೆಯಲ್ಲಿಯೇ ಉಳಿದು, ಕಸವಾಗುತ್ತದೆ. ಹಾಗೆಯೇ ಹತ್ತಾರು ಬಗೆಯ ಆಹಾರ ತಯಾರಿಸುವುದು ಇವೆಲ್ಲಾ ದುಡ್ಡಿನ ದರ್ಪದಂತೆ ಕಂಡುಬರುತ್ತದೆ. ಇಷ್ಟಲ್ಲದೆ ಮದುವೆಗೆ ಎಷ್ಟು ಜನರು ಬರಬಹುದು ಎಂಬ ಅಂದಾಜಿನಲ್ಲೂ ಸೋತು, ಹೆಚ್ಚು ಜನರಿಗೆಂದು ಅಡುಗೆ ತಯಾರಿಸಲಾಗುತ್ತದೆ. ಅಲ್ಲದೆ ಇವರ ಮದುವೆ ಮನೆಯಲ್ಲಿ ಏನೆಲ್ಲಾ ಬಗೆಬಗೆ ಅಡುಗೆ ಮಾಡಿದ್ದರು ಎಂದು ಯಾರು ನೆನಪಿಸಿಕೊಳ್ಳುತ್ತಾರೆ? ಆದರೂ ಅದನ್ನು ಪ್ರತಿಷ್ಠೆಯಾಗಿ ತೆಗೆದುಕೊಳ್ಳಲಾಗುತ್ತದೆ.



ಕೊರೊನಾ ಸಮಯದಲ್ಲಿ ನಿಜಕ್ಕೂ ಇದಕ್ಕೆ ಸೂಕ್ತ ಕಡಿವಾಣ ಬಿದ್ದಿತ್ತು. ಮದುವೆಗೆ ಗರಿಷ್ಠ ನೂರು ಜನ ಸಾಕು ಎಂದು ಹೇಳಲಾಗಿತ್ತು. ಅದರಂತೆಯೇ ಮದುವೆಗಳು ನಡೆದವು. ಆಗ ಮದುವೆಯಾದವರು ಆರಾಮವಾಗಿ ಸಾಂಸಾರಿಕ ಜೀವನ ನಡೆಸುತ್ತಿಲ್ಲವೇ? ಇದೆಲ್ಲಾ ನಮ್ಮ ಅಹಂಗಳ ಪ್ರದರ್ಶನವಾಗುತ್ತಿದೆ. ಇಷ್ಟರ ನಡುವೆಯೂ ಸಾಮೂಹಿಕ ವಿವಾಹಗಳು ನಮಗೆ ಸ್ವಲ್ಪ ನೆಮ್ಮದಿ ತಂದುಕೊಡುತ್ತಿವೆ. ಅಲ್ಲಿ ಖರ್ಚು ಕಡಿಮೆ, ಆಹಾರ ಪದಾರ್ಥಗಳ ದುರುಪಯೋಗವೂ ಕಡಿಮೆ. ಅಲ್ಲಿ ಮದುವೆಯಾದವರೂ ನೆಮ್ಮದಿಯ ಜೀವನ ನಡೆಸುತ್ತಾರೆ. ಅಂದರೆ ಇಲ್ಲೆಲ್ಲಾ ನಮ್ಮ ಮನೋಭಾವ ಏನೆಂದು ಅರಿವಾಗುತ್ತದೆ.

ಹಾಗೆ ನೋಡಿದರೆ ಹಣವಿರುವುದು ವಿತರಣೆಗೆ, ಚಲಾವಣೆಗೆ. ಅದನ್ನು ಗುಪ್ತವಾಗಿ ಇಟ್ಟುಕೊಳ್ಳಬಾರದು, ಹಾಗೆಯೇ ಅದನ್ನು ಅನವಶ್ಯಕವಾಗಿ ಖರ್ಚೂ ಮಾಡಬಾರದು. ಅದರ ಅಧಿಕಾರವೂ ನಮಗಿಲ್ಲ. ನಮ್ಮ ಎಲ್ಲಾ ಸಂಕಟಗಳಿಗೆ ಒಂದು ರೀತಿ ಹಣವೇ ಕಾರಣವಾಗುತ್ತಿದೆ. ಹಣವಿದ್ದರೂ ಚಿಂತೆ, ಇಲ್ಲದಿದ್ದರೂ ಚಿಂತೆ ಎಂಬಂತಾಗಿದೆ. ಹಾಗಾಗಿ ನೆಮ್ಮದಿ ಕಾಣದಿರುವ ವರ್ಗ ಈ ಮಧ್ಯಮ ಹಾಗೂ ಮೇಲ್ವರ್ಗವೇ ಆಗಿದೆ. ಈ ವರ್ಗದ ಜನರು ತಮಗಿಂತ, ತಮ್ಮನ್ನು ನೋಡಿ ಯಾರು ಏನೆಂದುಕೊಳ್ಳುತ್ತಾರೋ ಎಂದೇ ಜೀವನ ಮಾಡುತ್ತಾರೆ. ಆದರೆ ಅವರು ತೊಂದರೆಗೆ, ಸಮಸ್ಯೆಗಳಿಗೆ ಸಿಲುಕಿದಾಗ ಈ ಅಂದುಕೊಳ್ಳುವ ಜನರು ಯಾರೂ ಸಹಾಯಕ್ಕೆ ಬರುವುದಿಲ್ಲ. ಆದ್ದರಿಂದ ನಮಗೆ ಹೇಗೆ ಬೇಕೋ ಹಾಗೆ ಜೀವನ ಮಾಡುವುದು ಬುದ್ಧಿವಂತಿಕೆ ಎನಿಸುತ್ತದೆ.

“ ಹಣವಿರುವುದು ವಿತರಣೆಗೆ, ಚಲಾವಣೆಗೆ. ಅದನ್ನು ಗುಪ್ತವಾಗಿ ಇಟ್ಟುಕೊಳ್ಳಬಾರದು, ಹಾಗೆಯೇ ಅದನ್ನು ಅನವಶ್ಯಕವಾಗಿ ಖರ್ಚೂ ಮಾಡಬಾರದು. ಅದರ ಅಧಿಕಾರವೂ ನಮಗಿಲ್ಲ. ನಮ್ಮ ಎಲ್ಲಾ ಸಂಕಟಗಳಿಗೆ ಒಂದು ರೀತಿ ಹಣವೇ ಕಾರಣವಾಗುತ್ತಿದೆ. ಹಣವಿದ್ದರೂ ಚಿಂತೆ, ಇಲ್ಲದಿದ್ದರೂ ಚಿಂತೆ ಎಂಬಂತಾಗಿದೆ. ಹಾಗಾಗಿ ನೆಮ್ಮದಿ ಕಾಣದಿರುವ ವರ್ಗ ಈ ಮಧ್ಯಮ ಹಾಗೂ ಮೇಲ್ವರ್ಗವೇ ಆಗಿದೆ. ಈ ವರ್ಗದ ಜನರು ತಮಗಿಂತ, ತಮ್ಮನ್ನು ನೋಡಿ ಯಾರು ಏನೆಂದುಕೊಳ್ಳುತ್ತಾರೋ ಎಂದೇ ಜೀವನ ಮಾಡುತ್ತಾರೆ. ಆದರೆ ಅವರು ತೊಂದರೆಗೆ, ಸಮಸ್ಯೆಗಳಿಗೆ ಸಿಲುಕಿದಾಗ ಈ ಅಂದುಕೊಳ್ಳುವ ಜನರು ಯಾರೂ ಸಹಾಯಕ್ಕೆ ಬರುವುದಿಲ್ಲ.

ನಮಗೆ ಏಕೆ ನೆಮ್ಮದಿ ಸಿಗುತ್ತಿಲ್ಲ ಎಂಬುದನ್ನು ನಾವೇ ಕಂಡುಕೊಳ್ಳಬೇಕು. ನಮಗೆ ಅಗತ್ಯಕ್ಕಿಂತ ಹೆಚ್ಚಾಗಿರುವುದೆಲ್ಲವೂ ನಮ್ಮ ನೆಮ್ಮದಿಯನ್ನು ಕಿತ್ತುಕೊಳ್ಳುತ್ತವೆ ಎಂಬ ಸತ್ಯವನ್ನು ಅರಿತುಕೊಳ್ಳಬೇಕು. ಅದಕ್ಕೆ ಹೆಚ್ಚಾದರೆ ಅಮೃತವೂ ವಿಷವಾಗುತ್ತದೆ ಎಂದು ಹೇಳಲಾಗುತ್ತದೆ. ಇದಕ್ಕೆ ಪೂರಕವಾದ ಒಂದು ಕಥೆ ಇದೆ. ಒಬ್ಬ ಪ್ರಖ್ಯಾತರಾದ ಸ್ವಾಮಿಗಳಿದ್ದರು. ಅವರ ಬೋಧನೆಗಳಿಂದ ಬಹಳ ಜನಪ್ರಿಯವಾಗಿದ್ದವರು. ಮುಖ್ಯವಾಗಿ ನಮ್ಮ ಜೀವನ ಹೇಗಿರಬೇಕು ಎಂಬುದನ್ನು ಅವರು ಮನವರಿಕೆ ಮಾಡಿಕೊಡುತ್ತಿದ್ದರು. ಒಮ್ಮೆ ಅವರು ರೈಲಿನಲ್ಲಿ ಪ್ರಯಾಣ ಮಾಡುತ್ತಿದ್ದರು. ಎಂದಿನಂತೆ ಒಬ್ಬ ಟಿಕೆಟ್ ಪರಿಶೀಲಕ ಟಿಕೆಟ್ ತಪಾಸಣೆಗೆ ಬಂದ. ಅವನು ಸ್ವಾಮಿಗಳನ್ನು ನೋಡಿದ, ಅವರ ಉಪನ್ಯಾಸಗಳಿಂದ ಈ ಹಿಂದೆಯೇ ಅವನು ಪ್ರಭಾವಿತನಾಗಿದ್ದ. ಹಾಗಾಗಿ ಸ್ವಾಮಿಗಳನ್ನು ಕಂಡು ಗೌರವದಿಂದ ನಮಸ್ಕರಿಸಿ ಅವರ ಟಿಕೆಟ್ ತಪಾಸಣೆ ಮಾಡದೆ ಮುಂದೆ ಸಾಗಿದ. ಸ್ವಾಮಿಗಳು ಆತನನ್ನು ಹಿಂದಕ್ಕೆ ಕರೆದು ತಮ್ಮ ಟಿಕೆಟ್ ತೋರಿಸಿದರು. ಅವನು ಮತ್ತೆ ನಮಸ್ಕರಿಸಿ ಮುಂದೆ ಸಾಗಿದ. ಕೆಲ ಸಮಯದ ನಂತರ ಆತ ಇವರ ಬಳಿ ಮತ್ತೆ ಬಂದ. ಬಂದು ಮತ್ತೆ ನಮಸ್ಕರಿಸಿ 'ಸ್ವಾಮಿಗಳೇ ಇಂದು ನಾನು ಸೇವೆಯಿಂದ ನಿವೃತ್ತನಾಗುತ್ತಿದ್ದೇನೆ. ನನಗೆ ಆಶೀರ್ವಾದ ಮಾಡಿ ಎಂದ. ಹಾಗೆಯೇ ಇಂದಿನ ನನ್ನ ಕೆಲಸ ಮುಗಿದಿದೆ. ನನಗೆ ಒಂದು ಸಮಸ್ಯೆ ಕಾಡುತ್ತಿದೆ. ಏನೆಂದರೆ ನಾನು ಸುಮಾರು ಮೂರು ದಶಕಗಳಿಂದಲೂ ಈ ಟಿಕೆಟ್ ತಪಾಸಣೆ ಕೆಲಸ ಮಾಡುತ್ತಿದ್ದೇನೆ. ರೈಲಿನ ಎಲ್ಲ ಬೋಗಿಗಳಿಗೂ ಹೋಗಿ ತಪಾಸಣೆ ಮಾಡುತ್ತೇನೆ. ಅದು ನನ್ನ ಕೆಲಸ. ಆದರೆ ನಾನು ಗಮನಿಸಿದಂತೆ ಮೊದಲ ದರ್ಜೆ ಹಾಗೂ ಏರ್ ಕಂಡೀಶನ್ ಬೋಗಿಗಳಲ್ಲಿ ಸಂಚರಿಸುವವರು ಸಾಮಾನ್ಯವಾಗಿ ನೆಮ್ಮದಿಯಾಗಿ ನಿದ್ರೆ ಮಾಡುವುದಿಲ್ಲ. ಅವರಿಗೆ ಹೊದಿಕೆ, ದಿಂಬು ಎಲ್ಲ ನೀಡಲಾಗಿರುತ್ತದೆ. ಆದರೆ ಅವರಲ್ಲಿ ನಿದ್ರೆ ಮಾಡುವವರು ಕಡಿಮೆ. ಅವರು ಏನೋ ಚಡಪಡಿಸುತ್ತಿರುತ್ತಾರೆ. ಆದರೆ ಅದೇ ಎರಡನೇ ದರ್ಜೆಯಲ್ಲಿ ಪ್ರಯಾಣ ಮಾಡುವವರು ಆರಾಮವಾಗಿ ಹರಟೆ ಹೊಡೆಯುವುದು, ಬೇಕೆನಿಸಿದ್ದನ್ನು ತಿನ್ನುವುದು, ನಿದ್ರೆ ಬಂದಾಗ ನೆಮ್ಮದಿಯಾಗಿ ಮಲಗುವುದನ್ನು ಕಂಡಿದ್ದೇನೆ. ಇದಕ್ಕೆ ನನಗೆ ಕಾರಣ ಗೊತ್ತಾಗುತ್ತಿಲ್ಲ' ಎನ್ನುತ್ತಾನೆ. ಇದಕ್ಕೆ ಸ್ವಾಮೀಜಿಗಳು ಮುಗುಳುನಕ್ಕು 'ನಿಮ್ಮ ಪ್ರಶ್ನೆಯಲ್ಲಿಯೇ ಉತ್ತರವಿದೆ. ಮೊದಲ ದರ್ಜೆ ಹಾಗೂ ಏರ್ ಕಂಡೀಶನ್‌ಗಳಲ್ಲಿ ಪ್ರಯಾಣ ಮಾಡುವವರು ಸಾಮಾನ್ಯವಾಗಿ ಶ್ರೀಮಂತರು. ಅವರು ನಾವು ವಿಮಾನದಲ್ಲಿ, ಹೆಲಿಕಾಪ್ಟರ್‌ನಲ್ಲಿ ಹೋಗಬೇಕಾಗಿತ್ತು ಎಂದೇ ಪರಿಭಾವಿಸಿ ಪರಿತಪಿಸುತ್ತಾರೆ. ಅವರಲ್ಲಿ ಹಣದ ಶಕ್ತಿ ಇದೆ. ಹಾಗಾಗಿ ಅವರ ಯೋಚನಾ ವಿಧಾನವೂ ಹಾಗಿರುತ್ತದೆ. ಆದರೆ ಎರಡನೇ ದರ್ಜೆಯಲ್ಲಿ ಪ್ರಯಾಣ ಮಾಡುವವರಿಗೆ ತಮ್ಮ ಆರ್ಥಿಕ ಶಕ್ತಿ ಏನೆಂದು ತಿಳಿದಿರುತ್ತದೆ. ಹಾಗಾಗಿ ಅವರು ವೈಭವದ ಬದುಕಿನ ಬಗ್ಗೆ ಚಿಂತಿಸುವುದಿಲ್ಲ. ಅವರಿಗಿರುವುದರಲ್ಲೇ ಅವರು ಸಂತೃಪ್ತಿ ಕಂಡುಕೊಂಡಿರುತ್ತಾರೆ. ಆದ್ದರಿಂದ ಅವರು ಆರಾಮವಾಗಿ ನಿದ್ರಿಸುತ್ತಾರೆ' ಎಂದು ಹೇಳುತ್ತಾರೆ.

ಇದು ನಮ್ಮ ಜೀವನಕ್ಕೆ ಹಿಡಿದ ಕೈಗನ್ನಡಿ ಎಂಬಂತೆ ಕಂಡು ಬರುತ್ತದೆ. ಯಾರ ಬಳಿ ಹೆಚ್ಚು ಹಣ, ಆಸ್ತಿ ಹಾಗೂ ಇತರೆ ಸವಲತ್ತುಗಳು ಇರುತ್ತವೆಯೋ ಅವರಿಗೆ ನೆಮ್ಮದಿ ಸ್ವಲ್ಪ ಮರೀಚಿಕೆಯೇ. ಗಟ್ಟಿ ಹಾಸಿಗೆಯ ಮೇಲೆ ಮಲಗಿ ನಿದ್ರಿಸುವವನಿಗೆ ಸುಪ್ಪತ್ತಿಗೆಯ ಮೇಲೆ ನಿದ್ರೆ ಬರುವುದಿಲ್ಲ. ಹಾಗೆ ಯಾರ ಬಳಿ ಹೆಚ್ಚಿನದಿಲ್ಲವೋ ಅವರಿಗೆ ಇರುವುದರಲ್ಲಿ ತಮ್ಮ ಜೀವನ ಹೇಗೆ ನಡೆಸಬೇಕು ಎಂಬುದು ತಿಳಿದಿರುತ್ತದೆಯಾದ್ದರಿಂದ ಅವರು ಅದಕ್ಕೆ ತಕ್ಕ ಹಾಗೆ ತಮ್ಮ ಜೀವನವನ್ನು ರೂಪಿಸಿಕೊಂಡಿರುತ್ತಾರೆ. ಅವರಿಗೆ ಆಸೆಗಳು ಕಡಿಮೆ ಇರುವುದರಿಂದ ಬೇಡಿಕೆಗಳ ಒತ್ತಡ ಇರುವುದಿಲ್ಲ. ಸ್ವಲ್ಪ ಹೆಚ್ಚು ಹಣ ದೊರಕಿದರೆ ಅಂದೇ ಅವರಿಗೆ ಹಬ್ಬ. ನಾವು ನಮ್ಮ ನಡುವೆ ಅನೇಕ ಸನ್ಯಾಸಿಗಳನ್ನು ನೋಡುತ್ತೇವೆ. ಅವರ ಬಳಿ ಒಂದೆರಡು ಬಟ್ಟೆಗಳ ಒಂದು ಗಂಟು, ಕುಡಿಯುವ ನೀರಿನ ಒಂದು ಸಾಧನ ಅಷ್ಟೇ ಇರುತ್ತದೆ. ಜೊತೆಗೆ ಅವರು ನಿತ್ಯ ಸಂಚಾರಿಗಳು. ಇಡೀ ದೇಶವನ್ನು ಸುತ್ತುತ್ತಾರೆ. ಅವರ ಬೇಡಿಕೆಗಳು ಕಡಿಮೆ. ಸಿಕ್ಕಿದಷ್ಟನ್ನು ತಿನ್ನುವುದು, ಎಲ್ಲಿಯಾದರೂ ಮಲಗುವುದು ಅಷ್ಟೇ ಅವರ ಜೀವನ. ಅವರಿಗೆ ಯಾರ ಹಂಗೂ, ಯಾವುದರ ಹಂಗೂ ಇರುವುದಿಲ್ಲ. ನಾವೂ ಹಾಗೇ ಜೀವನ ಮಾಡಬೇಕು ಎಂಬುದು ಇದರ ಅರ್ಥವಲ್ಲ. ಆದರೆ ಆಸೆಗಳಿಲ್ಲದ ಜೀವನ ಒಂದು ರೀತಿ ನೆಮ್ಮದಿ ನೀಡುತ್ತದೆ ಎಂಬುದಕ್ಕೆ ಇದನ್ನು ಉದಾಹರಣೆಯಾಗಿ ಪರಿಗಣಿಸಬಹುದು.

ನಾವು ಮೊದಲು ಜೀವನದ ವಿಧಾನದ ಬಗ್ಗೆ ಅರಿತುಕೊಳ್ಳಬೇಕು. ಕೂಡಿಡುವುದನ್ನು ಪಶು ಪಕ್ಷಿಗಳು ಮಾಡುವುದಿಲ್ಲ. ಅಲ್ಲದೆ ನಾವು ಇಡೀ ಜೀವನ ಮಕ್ಕಳಿಗೆಂದೇ ದುಡಿಯುತ್ತೇವೆ. ಪ್ರಾಣಿ ಪಕ್ಷಿಗಳು ಹುಟ್ಟಿದ ಮರಿಗಳನ್ನು ಕೆಲವೇ ದಿನಗಳಲ್ಲಿ ದೂರ ಮಾಡಿಕೊಂಡುಬಿಡುತ್ತವೆ. ಬೇರೆಯಾದ ಮರಿಗಳು ತಮ್ಮದೇ ಆದ ಜೀವನ ಕಂಡುಕೊಳ್ಳುತ್ತವೆ. ಆದರೆ ಮನುಷ್ಯ ಮಾತ್ರ ಇಡೀ ಜೀವನ ಮಕ್ಕಳಿಗಾಗಿ ಎಂದೇ ಕಳೆಯುತ್ತಾನೆ. ಇದರಿಂದಾಗಿ ಮಕ್ಕಳು ಒಂದು ರೀತಿ ಪರಾವಲಂಬಿಗಳಾಗೇ ಬದುಕುತ್ತಾರೆ. ಅವರಿಗೆ ಕಷ್ಟದ ಅರಿವೇ ಇಲ್ಲದಂತೆ ಬೆಳೆಸಿದರೆ, ನಾವಿಲ್ಲದಾಗ ಬರುವ ಕಷ್ಟಗಳನ್ನು ಅವರು ಎದುರಿಸಲು ಪರದಾಡುತ್ತಾರೆ. ಆದರೆ ಬಡತನದ ಜೀವನ ನಡೆಸುವವರು, ಬೀದಿಬದಿಗಳಲ್ಲಿ ಜೀವನ ಸಾಗಿಸುವವರ ಮಕ್ಕಳು ಜೀವನವನ್ನು ನಿರ್ಭೀತಿಯಿಂದ ಎದುರಿಸುತ್ತಾರೆ. ನಾವು ಹಾಗೇ ಮಾಡಬೇಕು ಎಂದಲ್ಲ, ಆದರೆ ಮಕ್ಕಳಿಗೆ ಕಷ್ಟದ ಹಾಗೂ ತೊಂದರೆ ಎದುರಿಸುವಂತಹ ಜೀವನ ಹೇಳಿಕೊಡಬೇಕು. ಇದ್ದೂ ಇಲ್ಲದ ಸ್ಥಿತಿ ಏನೆಂದು ಅರ್ಥ ಮಾಡಿಸಬೇಕು.

ಈ ಹಿಂದೆ ನಾವು ನಮ್ಮ ಪಠ್ಯದಲ್ಲಿ ನರಿಯ ಕಥೆ ಓದಿದ್ದೆವು. ಅದು ದ್ರಾಕ್ಷಿ ತಿನ್ನಲು ಒಂದು ತೋಟಕ್ಕೆ ಹೋಯಿತು. ಅಲ್ಲಿ ದ್ರಾಕ್ಷಿ ಹಣ್ಣುಗಳು ಎತ್ತರದಲ್ಲಿದ್ದವು. ಅದನ್ನು ತಿನ್ನಬೇಕೆಂದು ನರಿ ಬಹಳ ಸಲ ಹಾರಿತು. ಆದರೆ ಏನು ಮಾಡಿದರೂ ಹಣ್ಣು ಇರುವ ಎತ್ತರಕ್ಕೆ ಹಾರಲಾಗಲಿಲ್ಲ. ಅದು ತನಗೆ ದೊರಕದು ಎಂದಾದಾಗ ಅದು 'ದ್ರಾಕ್ಷಿ ಹಣ್ಣು ಹುಳಿ, ಹಾಗಾಗಿ ತಾನು ತಿನ್ನಲಿಲ್ಲ' ಎಂದು ಹೇಳಿ ಸಮಾಧಾನ ಪಟ್ಟುಕೊಂಡಿತು ಎಂಬುದು ಆ ಕಥೆಯ ಸಾರಾಂಶ. ನಮ್ಮ ಮನೋಭಾವವೂ ಹೀಗೆಯೇ ಆಗಬೇಕು. ಸಿಗದಿರುವುದಕ್ಕಾಗಿ ಪರಿತಪಿಸುವ ಬದಲು, ಅದು ನನಗೆ ಬೇಡ. ಇದ್ದರಲ್ಲಿಯೇ ನಾನು ಸಮಾಧಾನದ ಜೀವನ ನಡೆಸುತ್ತೇನೆ ಎಂಬ ಭಾವನೆ ಬಂದರೆ ಬದುಕು ನಿರಾಳವಾಗುತ್ತದೆ.

ರಾಜ್ಯಪಾಲರ ವಿಚಾರದಲ್ಲಿ ಬಿಜೆಪಿ ದಲಿತ ಗುರಾಣಿ ಬಳಸುತ್ತಿರುವುದು ದಲಿತರಿಗೆ ಮಾಡಿದ ಅವಮಾನ

ಮುಖ್ಯಮಂತ್ರಿ ಸಿದ್ದರಾಮಯ್ಯ ಕಿಡಿ



ಬೆಂಗಳೂರು, ಆ.22(ಕೆಎಂಶಿ)–ರಾಜ್ಯದ ಘನತೆವೆತ್ತ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ತಪ್ಪು ನಡೆಯ ಕುರಿತ ಕಾಂಗ್ರೆಸ್ ಪ್ರಶ್ನೆಗಳಿಗೆ ಉತ್ತರ ನೀಡಲಾಗದ ಬಿಜೆಪಿ ನಾಯಕರು ದಲಿತ ಗುರಾಣಿ ಬಳಸುತ್ತಿರುವುದು ಸಮಸ್ತ ಸ್ವಾಭಿಮಾನಿ ದಲಿತ ಸಮುದಾಯಕ್ಕೆ ಮಾಡಿರುವ ಅವಮಾನ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟೀಕಿಸಿದ್ದಾರೆ.

ಹಿಂದೂಗಳಲ್ಲಿ ಜಾತಿಯೇ ಇಲ್ಲ, ಧರ್ಮವೇ ಎಲ್ಲ ಎಂದು ಉಪದೇಶ ಮಾಡುತ್ತಿದ್ದ ಬಿಜೆಪಿ ನಾಯಕರ ಬುಡಕ್ಕೆ ನೀರು ಬಂದಾಗ ಜಾತಿ ನೆನಪಾಗುತ್ತದೆ. ದಲಿತ ಸಮುದಾಯಕ್ಕೆ ಸೇರಿರುವ ಥಾವರ್‌ಚಂದ್ ಗೆಹ್ಲೋಟ್ ಅವರ ಬಗ್ಗೆ ನಿಮ್ಮಲ್ಲಿ ಗೌರವ ಮತ್ತು ಅಭಿಮಾನವಿದ್ದರೆ ಕೇಂದ್ರ ಸಚಿವ ಸಂಪುಟದಲ್ಲಿ ಇರಬೇಕಾಗಿದ್ದ ಅವರನ್ನು ಇಲ್ಲಿಗೆ ತಂದು ಪಂಜರದ ಗಿಣಿಯನ್ನಾಗಿ ಏಕೆ ಮಾಡಿದ್ದೀರಿ.

ಮಾರ್ಗದರ್ಶಕ ಮಂಡಳಿ ಎಂಬ ವನವಾಸಾಶ್ರಮ ಸೇರುವಷ್ಟು ವಯಸ್ಸಾಗದೆ ಇದ್ದರೂ ಅವರ ಸಕ್ರಿಯ ರಾಜಕೀಯ ಜೀವನವನ್ನು ಏಕೆ ಮೊಟಕುಗೊಳಿಸಿದಿರಿ. ಕೇಂದ್ರ ಸಚಿವ ಸ್ಥಾನದಿಂದ ವಂಚಿತರನ್ನಾಗಿ ಮಾಡಿ, ತಮ್ಮ ರಾಜಕೀಯ ವಿರೋಧಿಗಳ ವಿರುದ್ಧದ ದ್ವೇಷದ ರಾಜಕಾರಣಕ್ಕೆ ದಲಿತ ಸಮುದಾಯದ ನಾಯಕನನ್ನು ದುರ್ಬಳಕೆ ಮಾಡಿಕೊಳ್ಳುವುದು ಆ ಸಮುದಾಯಕ್ಕೆ ಮಾಡುವ ಅನ್ಯಾಯ–ಅವಮಾನ ಅಲ್ಲವೇ. ಬಿಜೆಪಿ ನಾಯಕರೇ, ದಲಿತ ನಾಯಕರೊಬ್ಬರನ್ನು ತಮ್ಮ ರಾಜಕೀಯ ಸ್ವಾರ್ಥಕ್ಕಾಗಿ ಬಳಸುವಾಗ ಕನಿಷ್ಠ ನಿಮ್ಮ ಆತ್ಮಸಾಕ್ಷಿಯೂ ಚುಚ್ಚಲಿಲ್ಲವೇ ಎಂದು ಮುಖ್ಯಮಂತ್ರಿ ಪ್ರಶ್ನಿಸಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ದಲಿತರನ್ನು ಬಳಸಿ ಬಿಸಾಡುವ ಬಿಜೆಪಿ ಮತ್ತು ಸಂಘ ಪರಿವಾರದ ಪಿತೂರಿ ರಾಜಕಾರಣ ಅರ್ಥ ಮಾಡಿಕೊಳ್ಳುವಷ್ಟು ದಲಿತ ಸಮುದಾಯ ಜಾಗೃತವಾಗಿದೆ, ನೀವು ದಲಿತರ ಹೆಸರಲ್ಲಿ ಸುರಿಸುತ್ತಿರುವ ಮೊಸಳೆ ಕಣ್ಣೀರಿನ ಹಿಂದಿನ ಪ್ರಾಮಾಣಿಕತೆ ತಿಳಿಯದಷ್ಟು ದಡ್ಡರಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ದಲಿತ ಸಮುದಾಯಕ್ಕೆ ಸೇರಿದ ಬಂಗಾರು ಲಕ್ಷ್ಮಣ್ ಅವರನ್ನು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ನೇಮಕ ಮಾಡಿದ್ದರು, ಆದರೆ ಬಿಜೆಪಿಯೊಳಗಿನ ಸಂಘಿ ಮನಸ್ಸು ಅದನ್ನು ಸಹಿಸಿಕೊಳ್ಳದೆ ಅವರ ಮೇಲೆ ಭ್ರಷ್ಟಾಚಾರದ ಆರೋಪ ಹೊರಿಸಿತು, ಕೊನೆಗೆ ಅದೇ ಕೊರಗಿನಲ್ಲಿ ಅವರು ಸಾವಿಗೀಡಾದರು. ದಲಿತ ಸಮುದಾಯಕ್ಕೆ ಸೇರಿದ ಕಾಂಗ್ರೆಸ್‌ನ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಪಕ್ಷದ ಹಿರಿಯ ನಾಯಕರು ಎಷ್ಟು ಗೌರವ ಮತ್ತು ಘನತೆಯಿಂದ ನಡೆಸಿಕೊಳ್ಳುತ್ತಿದ್ದಾರೆ ಎನ್ನುವುದನ್ನು ನೋಡಿ ಕಲಿಯಿರಿ. ಸಂವಿಧಾನವನ್ನೇ ಬದಲಾಯಿಸಲು ಹೊರಟಿರುವ, ಮೀಸಲಾತಿ ವಿರೋಧಿಸುತ್ತಿರುವ, ಅಂತರಂಗದಲ್ಲಿ ಜಾತಿ ತಾರತಮ್ಯ ಒಪ್ಪಿಕೊಂಡು ಬಹಿರಂಗದಲ್ಲಿ ಜಾತ್ಯತೀತತೆ ಸೋಗು ಹಾಕಿರುವ ನಿಮಗೆ ದಲಿತರ ಬಗ್ಗೆ ಮಾತನಾಡುವ ಯಾವ ನೈತಿಕತೆಯೂ ಇಲ್ಲ.

ನಿಮಗೆ ದಲಿತ ಸಮುದಾಯದ ಬಗ್ಗೆ ನಿಜವಾಗಿಯೂ ಗೌರವ ಇದ್ದರೆ, ಕೆಟ್ಟ ಕೆಲಸ ಮಾಡುವಂತೆ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರ ಮೇಲೆ ರಾಜಕೀಯ ಒತ್ತಡ ಹೇರದೆ, ಅವರು ಸಂವಿಧಾನ ದತ್ತ ಕರ್ತವ್ಯ ನಿರ್ವಹಣೆಗೆ ಅವಕಾಶ ಮಾಡಿಕೊಡಿ, ಪ್ರತಿಭಟನೆ, ಪ್ರತಿರೋಧದ ನಾಟಕಗಳನ್ನು ನಿಲ್ಲಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೂದಲಿಸಿದ್ದಾರೆ.

ಕಳಂಕಿತ ಸಿಎಂ ಸಿದ್ದರಾಮಯ್ಯ ಅಗ್ನಿಪರೀಕ್ಷೆಗೆ ಒಡ್ಡಿಕೊಳ್ಳಲಿ

ಮಾಜಿ ಮೇಯರ್ ಸಂದೇಶ್‌ಸ್ವಾಮಿ ಒತ್ತಾಯ



ಮೈಸೂರು, ಆ. 22– ಮುಡಾ ಹಗರಣದಿಂದ ಕಳಂಕಿತರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಗ್ನಿಪರೀಕ್ಷೆಗೆ ಒಳಪಡ ಬೇಕಿದೆ ಎಂದು ಬಿಜೆಪಿ ಮುಖಂಡ ಹಾಗೂ ಮಾಜಿ ಮೇಯರ್ ಸಂದೇಶ್ ಸ್ವಾಮಿ ಒತ್ತಾಯಿಸಿದ್ದಾರೆ.

ಬಿಜೆಪಿ ನಗರ ಘಟಕವು ಗಾಂಧಿಚೌಕದಲ್ಲಿ ಗುರುವಾರ ಏರ್ಪಡಿಸಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿದ ನಂತರ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು. ಸಿಎಂ ಸಿದ್ದರಾಮಯ್ಯ ಅವರು ಸಮಾಜವಾದಿಗಳಾಗಿದ್ದು, ಇದೀಗ ಸಮಾಜದ ಎದುರಿನಲ್ಲಿ ಅಪವಿತ್ರರಾಗಿ ಕಾಣುವಂತಾಗಿದೆ. ತಮ್ಮ ಚಾರಿತ್ರ್ಯ ಉಳಿಸಿಕೊಳ್ಳಬೇಕಾದರೆ, ಅಂದು ರಾಮಾಯಣದಲ್ಲಿ ರಾವಣನಿಂದ ಅಪಹರಣಕ್ಕೆ ಒಳಗಾಗಿದ್ದ ಸೀತೆ ಮೇಲೆ ಜನರು ಕಳಂಕ ಹೊರಿಸಿದಾಗ, ಶ್ರೀರಾಮನು ಅಗ್ನಿಪರೀಕ್ಷೆಗೆ ಸೀತೆಯನ್ನು ಒಡ್ಡಿದಂತೆ, ತಮಗೆ ಅಂಟಿರುವ ಕಳಂಕವನ್ನು ತೊಲಗಿಸಲು ರಾಜ್ಯಪಾಲರ ಪ್ರಾಸಿಕ್ಯೂಷನ್ ಎಂಬ ಅಗ್ನಿಪರೀಕ್ಷೆಗೆ ಸಿಎಂ ಒಡ್ಡಿಕೊಳ್ಳಬೇಕಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ 35–40 ವರ್ಷಗಳ ರಾಜಕೀಯ ಜೀವನದಲ್ಲಿ ಒಂದೇ ಒಂದು ಕಪ್ಪು ಚುಕ್ಕೆ ಇಲ್ಲ. ಯಾವುದೇ ಕಳಂಕ ಇಲ್ಲದೆ, ಹಗರಣ, ಭ್ರಷ್ಟಾಚಾರ ಇಲ್ಲದೆ ರಾಜಕಾರಣ ಮಾಡಿದ್ದೇನೆ ಎನ್ನುತ್ತಾರೆ. ಆದರೆ ಇಂದು ತಮ್ಮ ರಾಜಕೀಯದ ಅಂತಿಮ ಘಟ್ಟದಲ್ಲಿ ಇಡೀ ದೇಶವೇ ಚರ್ಚಿಸುವಂತಹ ಮುಡಾ ಹಗರಣದಲ್ಲಿ ಸಿಲುಕಿ ಭಾರಿ ಚರ್ಚೆಗೆ ಒಳಗಾಗಿದ್ದಾರೆ. ತಾವು ತಪ್ಪು ಮಾಡಿಲ್ಲ ಎನ್ನುವುದಾದರೆ ಯಾವುದೇ ತನಿಖೆ ಎದುರಿಸುವ ಮನಸ್ಥಿತಿ ತೋರಿಸಬೇಕಿತ್ತು ಎಂದರು.

ಸಿದ್ದರಾಮಯ್ಯ ಅವರ ಪತ್ನಿಯ ವಿವಾದಿತ ಜಮೀನು ವಿಚಾರದಲ್ಲಿ 2010ರ ನಂತರದ ದಾಖಲೆಯನ್ನು ಮಾತ್ರ ಅವರ ಹಿಂಬಾಲಕರು ಮುಂದಿಡುತ್ತಿದ್ದಾರೆ. ಆದರೆ 2010ಕ್ಕೂ ಮುನ್ನ ಆ ಜಮೀನಿನ ಸ್ಥಿತಿಗತಿ ಏನಾಗಿತ್ತು ಎಂಬುದನ್ನು ತಿಳಿಸದೆ ಮರೆಮಾಚಿರುವ ಸಿದ್ದರಾಮಯ್ಯ ಅವರ ಹಿಂಬಾಲಕರು ದಾರಿ ತಪ್ಪಿಸಿದ್ದಾರೆ. ಇಂದಿನ ಸರ್ಕಾರದ ಹಲವು ಘಟನೆಗಳನ್ನು ನೋಡಿದರೆ ಕೆಲವು ಮಂತ್ರಿಗಳು ಮುಖ್ಯಮಂತ್ರಿ ಅವರ ವ್ಯಕ್ತಿತ್ವಕ್ಕೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ. ವಾಲ್ಮೀಕಿ ನಿಗಮದ ಹಗರಣವನ್ನು ಎಸ್‌ಐಟಿಗೆ ವಹಿಸಿದಂತೆ, ಮುಡಾ ಹಗರಣವನ್ನು ಸಹ ಎಸ್‌ಐಟಿಗೆ ವಹಿಸಬೇಕಿದೆ ಎಂದು ಸಂದೇಶ್ ಸ್ವಾಮಿ ಒತ್ತಾಯಿಸಿದರು.

ಕಾನೂನು ಹೋರಾಟದಲ್ಲಿ ನಿಮಗೆ ನ್ಯಾಯ ಸಿಗಬಹುದು ಅಥವಾ ಸಿಗದೆ ಇರಬಹುದು. ಕಾನೂನಾತ್ಮಕವಾಗಿ ಸತ್ಯಾಸತ್ಯತೆ ಹೊರಬರಬೇಕಾದರೆ ಹತ್ತಾರು ವರ್ಷಗಳೆ ಬೇಕಾಗಬಹುದು. ಅಲ್ಲಿಯವರೆಗೆ ನಿಮ್ಮ ಮೇಲಿನ ಆಪಾದನೆ ಜನಮಾನಸದಲ್ಲಿ ಮಾಸದಿರದು. ಆದ್ದರಿಂದ ಮೊದಲು ಪ್ರಜಾಸತ್ತಾತ್ಮಕವಾಗಿ ನೀವು ಅರೋಪದಿಂದ ಮುಕ್ತರಾಗಬೇಕಿದೆ. ನಿಮ್ಮ ವ್ಯಕ್ತಿತ್ವ ಹಾಗೂ ವರ್ಚಸ್ಸು ಕಾಪಾಡಿಕೊಳ್ಳಲು ಸತ್ಯವನ್ನು ಜನರ ಮುಂದಿಡಬೇಕಿದೆ. ನಿಮ್ಮ ಹೆಸರು ಬಳಸಿಕೊಂಡು 14 ನಿವೇಶನವನ್ನು ಕಾನೂನುಬಾಹಿರವಾಗಿ ಮಂಜೂರು ಮಾಡಿರುವ ಅಧಿಕಾರಿಗಳು, ನಿಯಮಬಾಹಿರವಾಗಿ ಅನರ್ಹರಿಗೆ ಸಾವಿರಾರು ನಿವೇಶನಗಳನ್ನು 50:50 ಅನುಪಾತದಡಿ ಮಂಜೂರು ಮಾಡಿ ಅವ್ಯವಹಾರದಲ್ಲಿ ಬಹುಮುಖ್ಯ ಪಾತ್ರ ವಹಿಸಿದ್ದಾರೆ. ಹಗರಣದಲ್ಲಿ ಭಾಗಿಯಾಗಿರುವ ಮುಡಾ ಆಯುಕ್ತರು ಸೇರಿದಂತೆ ಎಲ್ಲಾ ಅಧಿಕಾರಿಗಳನ್ನು ಅಮಾನತ್ತುಗೊಳಿಸಿ ತನಿಖೆಗೆ ಒಳಪಡಿಸಬೇಕು ಎಂದು ಸಂದೇಶ್ ಸ್ವಾಮಿ ಮನವಿ ಮಾಡಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಒಂದನೇ ಪುಟದಿಂದ

ರಾಜಕೀಯ ಭವಿಷ್ಯ ನಿರ್ಧಾರ

ವರಿಷ್ಠರ ಗಮನಕ್ಕೆ ತರುವ ಉದ್ದೇಶದಿಂದಲೇ ಇಂದು ಎರಡೂ ಸಭೆಗಳನ್ನು ನಡೆಸಿದರು. ಮಹರ್ಷಿ ವಾಲ್ಮೀಕಿ ನಿಗಮ ಹಾಗೂ ಮುಡಾ ನಿವೇಶನಗಳ ಹಂಚಿಕೆ ಹಗರಣಗಳಲ್ಲಿ ತಮ್ಮ ಪಾತ್ರ ಇಲ್ಲ ಎಂಬುದನ್ನು ವರಿಷ್ಠರಿಗೆ ಈಗಾಗಲೇ ಹಲವು ಬಾರಿ ಮುಖ್ಯಮಂತ್ರಿ ಮನದಟ್ಟು ಮಾಡಿದ್ದಾರೆ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜಭವನ ನೋಟಿಸ್ ನೀಡಿದ ಸಂದರ್ಭದಲ್ಲಿ ಎಐಸಿಸಿಯೇ ಸಿದ್ದರಾಮಯ್ಯ ಬೆಂಬಲಕ್ಕೆ ನಿಂತಿದ್ದಲ್ಲದೆ, ಸುಪ್ರೀಂಕೋರ್ಟ್‌ನ ಹಿರಿಯ ವಕೀಲರನ್ನು ನ್ಯಾಯಾಲಯದಲ್ಲಿ ವಕಾಲತ್ತು ವಹಿಸಲು ನೇಮಿಸಿತ್ತು. ಆದರೆ, ಪಶ್ಚಿಮ ಬಂಗಾಳದಲ್ಲಿ ವೈದ್ಯೆಯ ಹತ್ಯೆ ಘಟನೆ ನಂತರ ನಡೆದ ಅಲ್ಲಿನ ರಾಜಕೀಯ ಬೆಳವಣಿಗೆಗಳು ಕರ್ನಾಟಕದಲ್ಲಿನ ಕಾಂಗ್ರೆಸ್ ಸರ್ಕಾರದ ಮೇಲೆ ಪ್ರಭಾವ ಬೀರುತ್ತಿವೆ.

ರಾಹುಲ್ ಗಾಂಧಿ, ವೈದ್ಯೆಯ ಹತ್ಯೆ ಬಗ್ಗೆ ಕಿಡಿಕಾರಿದ ಸಂದರ್ಭದಲ್ಲಿ ಅಲ್ಲಿನ ಆಡಳಿತಾರೂಢ ತೃಣಮೂಲ ಕಾಂಗ್ರೆಸ್ (ಟಿಎಂಸಿ), ನಮ್ಮ ಆಡಳಿತದ ಬಗ್ಗೆ ಟೀಕಿಸುವ ಮೊದಲು ಕರ್ನಾಟಕದಲ್ಲಿ ನಿಮ್ಮ ಪಕ್ಷದ ಸರ್ಕಾರದ ಸಿಎಂ ಮೇಲಿನ ಭ್ರಷ್ಟಾಚಾರ ಆರೋಪದ ಬಗ್ಗೆ ಉತ್ತರಿಸಿ ನಂತರ ನಮ್ಮ ವಿಷಯಕ್ಕೆ ಬನ್ನಿ ಎಂದು ಮೂದಲಿಸಿತ್ತು. ತೃಣಮೂಲ ಕಾಂಗ್ರೆಸ್‌ನ ವಕ್ತಾರ ಹಾಗೂ ಮಾಜಿ ಸಂಸದ ಕುನಾಲ್ ಘೋಷ್, ಕರ್ನಾಟಕದ ಆಡಳಿತವನ್ನು ಮುಂದಿಟ್ಟುಕೊಂಡು ರಾಹುಲ್ ಗಾಂಧಿ ಅವರನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದರು.

ಈ ಬೆಳವಣಿಗೆ ನಂತರ ರಾಷ್ಟ್ರಮಟ್ಟದ ಮಾಧ್ಯಮಗಳಲ್ಲಿ ಪಶ್ಚಿಮ ಬಂಗಾಳ ಹಾಗೂ ಕರ್ನಾಟಕದ ವಿಷಯವೇ ಪ್ರಮುಖವಾಗಿ ಪ್ರಸ್ತಾಪವಾಗುತ್ತಿರುವುದು ಎಐಸಿಸಿಯನ್ನು ಭಾರಿ ಇಕ್ಕಟ್ಟಿಗೆ ಸಿಲುಕಿಸಿದೆ.

ಇದರಿಂದ ಮೊದಲ ಬಾರಿಗೆ ಸ್ವಲ್ಪ ವಿಚಲಿತಗೊಂಡ ರಾಹುಲ್ ಗಾಂಧಿ, ಕರ್ನಾಟಕ ಸರ್ಕಾರದ ವಿದ್ಯಮಾನ ಮತ್ತು ಪ್ರತಿಪಕ್ಷಗಳು ನಡೆಸುತ್ತಿರುವ ಹೋರಾಟದ ಬಗ್ಗೆ ಖರ್ಗೆ ಮತ್ತು ವೇಣುಗೋಪಾಲ್ ಅವರೊಂದಿಗೆ ಸಮಾಲೋಚಿಸಿ ನಂತರ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಿಗೆ ಬುಲಾವ್ ನೀಡಿದ್ದಾರೆ.

ಕಾಂಗ್ರೆಸ್ ಶಾಸಕರ ಒಕ್ಕೊರಲ ಬೆಂಬಲ

ರಾಜಕೀಯ ಬೆಳವಣಿಗೆ ಬಗ್ಗೆ ಚರ್ಚೆ ಮಾಡಲಾಗಿದೆ ಎಂದರು. ಇಡೀ ಶಾಸಕರು ಸರ್ವಾನುಮತದಿಂದ ಸಿದ್ದರಾಮಯ್ಯ ಬೆನ್ನಿಗೆ ನಿಲ್ಲಲು ಹಾಗೂ ಬೆಂಬಲ ಸೂಚಿಸಲಾಗಿದೆ. ಹಿರಿಯ ಶಾಸಕ ಆರ್.ವಿ. ದೇಶಪಾಂಡೆ ನಿರ್ಣಯ ಮಂಡಿಸಿದ್ದಾರೆ, ತನ್ವೀರ್ ಸೇಠ್ ಅದಕ್ಕೆ ಅನುಮೋದನೆ ನೀಡಿದ್ದಾರೆ ಎಂದರು. ರಾಜ್ಯಪಾಲರು ಯಾವ ತನಿಖೆ ಇಲ್ಲದೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದನ್ನು ಸರ್ವಾನುಮತದಿಂದ ಸಭೆಯಲ್ಲಿ ಖಂಡಿಸಿದ್ದೇವೆ. ಸರ್ಕಾರವನ್ನು ಅಭದ್ರಗೊಳಿಸುವ ಪ್ರಯತ್ನ ನಡೆಯುತ್ತಿದೆ. ಆದರೆ ಅದು ಅಸಾಧ್ಯ. ಶಾಸಕರು, ಕಾರ್ಯಕರ್ತರು ಸಿಎಂ ಮತ್ತು ಸರ್ಕಾರದ ಜೊತೆಗೆ ಇದೆ ಎಂದರು. ದೆಹಲಿಗೆ ನಾವು ನಾಳೆ ಹೋಗುತ್ತಿದ್ದೇವೆ. ಹೈಕಮಾಂಡ್ ನಾಯಕರ ಜೊತೆ ಅನೇಕ ವಿಚಾರವಾಗಿ ಚರ್ಚೆ ಮಾಡುತ್ತೇವೆ. ನ್ಯಾಯಾಲಯದ ಮೇಲೆ ನಂಬಿಕೆ ಇದೆ. ಸಿಎಂ ಹಾಗೂ ಸರ್ಕಾರದ ವಿರುದ್ಧ ಸಂಚು ನಡೆಯುತ್ತಿದೆ. ಜನರ ಬೆಂಬಲ ನಮಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಾನೂನು ಚೌಕಟ್ಟಿನ ಹೋರಾಟ ಮಾಡುತ್ತಿದ್ದೇವೆ. ರಾಜ್ಯಪಾಲರು ತನ್ನ ಪ್ರಾಸಿಕ್ಯೂಷನ್ ಆದೇಶವನ್ನು ವಾಪಸ್ ಪಡೆದುಕೊಳ್ಳಬೇಕು. ಹೀಗಾದಲ್ಲಿ ಅವರು ಸಂವಿಧಾನಕ್ಕೆ ರಕ್ಷಣೆ ಕೊಟ್ಟಂತಾಗುತ್ತದೆ ಎಂದರು.

ಕರ್ನಾಟಕದ ಜನತೆ 136 ಸ್ಥಾನಗಳನ್ನು ನೀಡಿ ನಮ್ಮ ಸರ್ಕಾರವನ್ನು ಅಧಿಕಾರಕ್ಕೆ ತಂದಿದ್ದಾರೆ. ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಜನರ ಆಶೀರ್ವಾದದಿಂದ ರಚಿಸಲಾಗಿರುವ ಈ ಕಾಂಗ್ರೆಸ್ ಸರ್ಕಾರವನ್ನು ಅಭದ್ರಗೊಳಿಸಲು ಪ್ರಯತ್ನಿಸುತ್ತಿವೆ. ಅವರು ಏನೇ ಪ್ರಯತ್ನಿಸಿದರು ಸರ್ಕಾರವನ್ನು ಜಗ್ಗಿಸಲು ಅವರಿಂದ ಸಾಧ್ಯವಿಲ್ಲ. ಇಡೀ ಕಾಂಗ್ರೆಸ್ ಶಾಸಕಾಂಗ ಪಕ್ಷ ಸಿದ್ದರಾಮಯ್ಯ ಅವರ ಪರವಾಗಿ ಇದೆ ಎಂದರು. ಶುಕ್ರವಾರ ಹೈಕಮಾಂಡ್ ನಾಯಕರ ಭೇಟಿಗೆ ಸಮಯ ಪಡೆದಿದ್ದು, ನಾನು ಹಾಗೂ ಮುಖ್ಯಮಂತ್ರಿಗಳು ರಾಜ್ಯದ ವಿದ್ಯಮಾನಗಳ ಬೆಳವಣಿಗೆ ಕುರಿತು ಚರ್ಚೆ ಮಾಡಲಿದ್ದೇವೆ. ರಾಜ್ಯಪಾಲರ ನಡವಳಿಕೆ ವಿರುದ್ಧ ನ್ಯಾಯಾಲಯದಲ್ಲೂ ಮೇಲ್ಮನವಿ ಸಲ್ಲಿಸಿದ್ದೇವೆ. ನಮಗೆ ನ್ಯಾಯಾಲಯದಲ್ಲಿ ನಂಬಿಕೆ ಇದೆ. ಕಾನೂನು ಹಾಗೂ ಸಂವಿಧಾನ ವಿರುದ್ಧವಾಗಿ ನೀಡಿರುವ ಆದೇಶದಿಂದ ನಮಗೆ ರಕ್ಷಣೆ ಸಿಗುವ ನಿರೀಕ್ಷೆಯಿದೆ. ಒಂದು ಭಾಷಣದ ನೆಪ ಇಟ್ಟುಕೊಂಡು ನಮ್ಮ ನಾಯಕರಾದ ರಾಹುಲ್ ಗಾಂಧಿ ಅವರನ್ನು ಸಂಸತ್ ಸದಸ್ಯ ಸ್ಥಾನದಿಂದ ಅನರ್ಹಗೊಳಿಸಿ ಅವರು 6 ವರ್ಷ ಚುನಾವಣೆಗೆ ಸ್ಪರ್ಧಿಸದಂತೆ ತಡೆಯುವ ಷಡ್ಯಂತ್ರ ರೂಪಿಸಲಾಗಿತ್ತು. ಈಗ ಅದೇ ರೀತಿ ನಮ್ಮ ಮುಖ್ಯಮಂತ್ರಿಗಳ ವಿರುದ್ಧವೂ ಸಂಚು ರೂಪಿಸಲಾಗುತ್ತಿದೆ ಎಂದು ಡಿಕೆಶಿ ತಿಳಿಸಿದರು.

ಮುಡಾ ಅಧಿಕಾರಿಗಳು

ಕೆಲ ಸದಸ್ಯರ ಆಕ್ಷೇಪ: ವಿಷಯ ಸಂಖ್ಯೆ 5ರಂತೆ ಕಮಿಷ್ನರ್ ಡಿ.ಬಿ.ನಟೇಶ್ ಶೇ.50 ಅನುಪಾತದ ಬಗ್ಗೆ ಪ್ರಸ್ತಾಪಿಸಿದಾಗ, ಆಕ್ಷೇಪಿಸಿದ್ದ ಸದಸ್ಯ ಮರಿತಿಬ್ಬೇಗೌಡರು, ಭೂ ಸ್ವಾಧೀನಪಡಿಸದೇ ಉಪಯೋಗಿಸಿಕೊಂಡಿರುವ ಭೂಮಿಗೆ ಶೇ.50:50ರ ಅನುಪಾತದಲ್ಲಿ ಪರಿಹಾರ ಪಡೆದುಕೊಳ್ಳಲು ಬರುವುದಿಲ್ಲ ಎಂದಿದ್ದರು.

ಅಧ್ಯಕ್ಷ ಹೆಚ್.ವಿ.ರಾಜೀವ್ ಮಾತನಾಡಿ, ಶೇ.50:50ರ ಅನುಪಾತದಲ್ಲಿ ಪರಿಹಾರ ಪಡೆದುಕೊಳ್ಳಲು ಭೂ ಮಾಲೀಕರು ಮುಂದೆ ಬಂದಲ್ಲಿ ಅಂತಹ ಪ್ರಕರಣಗಳಲ್ಲಿ ಸಭೆಗೆ ಮಂಡಿಸಬೇಕೆಂದು ನಿರ್ಣಯವಾಗಿದೆ. ಒಪ್ಪದೇ ಇರುವ ಭೂ ಮಾಲೀಕರು ನ್ಯಾಯಾಲಯ ಸಂಪರ್ಕಿಸಿ ಕೊಳ್ಳಲು ಹಿಂಬರಹ ನೀಡುವುದು ಸೂಕ್ತ ಎಂದಿದ್ದರು. ಅದಕ್ಕೆ ಒಪ್ಪದ ಸದಸ್ಯ ಎಸ್.ಎ.ರಾಮದಾಸ್, ಭೂ ಮಾಲೀಕರಿಗೆ ಕೋರ್ಟ್‌ಗೆ ಹೋಗಿ ಎನ್ನುವುದು ಸರಿಯಲ್ಲ. ಈ ಬಗ್ಗೆ ನಿರ್ಣಯ ಕೈಗೊಳ್ಳಲು ಮಾಹಿತಿ ಅಗತ್ಯವಿದೆ. ಈ ಹಿಂದೆ ಪರಿಹಾರ ಪಾವತಿಸಿ ಈಗ ಬಿಟ್ಟು ಹೋಗಿರುವ ವಿಸ್ತೀರ್ಣಕ್ಕೆ ಪರಿಹಾರ ಕೋರಿದಲ್ಲಿ, ಅದಕ್ಕೆ ಅನುಮೋದನೆ ನೀಡಲು ಪ್ರಾಧಿಕಾರ ಸಿದ್ಧವಿಲ್ಲವಾದ್ದರಿಂದ ಸಮಗ್ರ ಮಾಹಿತಿಯನ್ನು ಸಭೆ ಮುಂದೆ ಮಂಡಿಸುವಂತೆ ಸೂಚಿಸಿದ್ದರು.

ಸದಸ್ಯ ತನ್ವೀರ್ ಸೇಠ್ ಮಾತನಾಡಿ, ಭೂ ಸ್ವಾಧೀನಪಡಿಸಿಕೊಂಡು ಮುಡಾದಿಂದ ಪರಿಹಾರ ಪಾವತಿಸಿದ್ದರೂ, ಸದರಿ ಭೂಮಿಯನ್ನು ಭೂ ಮಾಲೀಕರು ಇತರರಿಗೆ ಮಾರಾಟ ಮಾಡಿದ್ದು, ಸ್ವಾಧೀನಪಡಿಸಿಕೊಂಡ ಪ್ರದೇಶದಲ್ಲಿ ಕ್ರಯದಾರನು ಸ್ವಾಧೀನದಲ್ಲಿರುವ ಬಹಳಷ್ಟು ಉದಾಹರಣೆಗಳಿವೆ. ಪ್ರಾಧಿಕಾರಕ್ಕೆ ತನ್ನ ಆಸ್ತಿ ರಕ್ಷಿಸುವ ಜವಾಬ್ದಾರಿ ಇದೆ ಎಂದು ತಿಳಿಸಿದ್ದರು. ವಿಸ್ತೃತ ಚರ್ಚೆ ನಡೆದ ಬಳಿಕ ಅಂತಿಮವಾಗಿ ಒಪ್ಪುವ ಪ್ರಕರಣಗಳಲ್ಲಿ ಶೇ.50 ವಿಸ್ತೀರ್ಣದ ಜಾಗವನ್ನು ಅಭಿವೃದ್ಧಿಪಡಿಸಿದ ಪ್ರದೇಶದಲ್ಲಿ ನೀಡಲು ಸಭೆ ತೀರ್ಮಾನಿಸಿತ್ತು.


ಅದೇ ರೀತಿ 2020ರ ಸೆಪ್ಟೆಂಬರ್ 14ರಂದು ವಿಷಯ ಸಂಖ್ಯೆ 18ರಲ್ಲಿ ಮುಡಾ ಸಾಮಾನ್ಯ ಸಭೆಯು ಶೇ.50ರ ಅನುಪಾತದಲ್ಲಿ ಭೂ ಮಾಲೀಕರಿಗೆ ಪರಿಹಾರವಾಗಿ ನಿವೇಶನ ನೀಡುವಂತೆ ತೀರ್ಮಾನ ಕೈಗೊಂಡಿತ್ತು.

ನಿರ್ಣಯವನ್ನೇ ರದ್ದುಪಡಿಸಿದ ಸರ್ಕಾರ: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವು ಶೇ.50ರ ಅನುಪಾತದಡಿ ನಿವೇಶನ ನೀಡಬೇಕೆಂದು ಕೈಗೊಂಡಿದ್ದ ನಿರ್ಣಯಗಳು ಕಾನೂನು ಬಾಹಿರ ಎಂದು ಸರ್ಕಾರ 2023ರ ಅಕ್ಟೋಬರ್ 27ರಂದು ಆದೇಶ ಹೊರಡಿಸಿತ್ತು. 'ವಸತಿ ಬಡಾವಣೆಗಳಿಗೆ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸದೇ, ಪರಿಹಾರ ನೀಡದೇ ಜಮೀನುಗಳನ್ನು ಬಳಸಿಕೊಂಡಿದ್ದ ಪ್ರಕರಣಗಳಲ್ಲಿ ಶೇ.50:50 ಅನುಪಾತದಲ್ಲಿ ನಿವೇಶನ ನೀಡುವ ಕುರಿತು ಕೈಗೊಂಡಿರುವ ನಿಯಮಬಾಹಿರ ನಿರ್ಣಯವನ್ನು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಕಲಂ 67ರಡಿ ರದ್ದುಪಡಿಸಿ ಆದೇಶಿಸಿದೆ ಎಂದು ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಕೆ.ಲತಾ ಅವರು ಆದೇಶದಲ್ಲಿ ತಿಳಿಸಿದ್ದರು.

ಆರ್ಥಿಕ ನಷ್ಟಕ್ಕೆ ಮುಡಾ ಜವಾಬ್ದಾರಿ: ಕಾನೂನು ಬಾಹಿರವಾಗಿ ಶೇ.50:50ರ ಅನುಪಾತದಡಿ, ಪ್ರೋತ್ಸಾಹದಾಯಕವಾಗಿ, ಬದಲಿ ನಿವೇಶನ ಹಾಗೂ ತುಂಡು ಜಾಗವನ್ನು, ಪರಿಹಾರದ ರೂಪದಲ್ಲಿ ಭೂ ಮಾಲೀಕರಿಗೆ ಅಥವಾ ಜಿಪಿಎ ಪ್ರತಿನಿಧಿಗಳಿಗೆ ಹಂಚಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಕಾಯ್ದೆ, ನಿಯಮಗಳನ್ನು ಗಾಳಿಗೆ ತೂರಿ ಪ್ರಾಧಿಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿದರೆ ಮುಡಾ ಅಧಿಕಾರಿಗಳೇ ಜವಾಬ್ದಾರರಾಗುತ್ತಾರೆ ಎಂದು ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಸತೀಶ್ ಕಬಾಡಿ ಅವರು 2023ರ ಮಾರ್ಚ್ 14ರಂದು ಮುಡಾ ಆಯುಕ್ತರಿಗೆ ಎಚ್ಚರಿಕೆ ನೀಡಿ ಆದೇಶಿಸಿದ್ದನ್ನು ಇಲ್ಲಿ ಸ್ಮರಿಸಬಹುದು.


ಸರ್ಕಾರದ ಆದೇಶಕ್ಕೂ ಕಿಮ್ಮತ್ತಿಲ್ಲ: ಸರ್ಕಾರ ಆಗಿಂದಾಗ್ಗೆ ಎಚ್ಚರಿಕೆ ನೀಡಿ ಆದೇಶ ಹೊರಡಿಸಿದ್ದರೂ ಸಹ ಅದನ್ನು ಲೆಕ್ಕಿಸದೇ ಮುಡಾ ನಿರ್ಣಯವನ್ನು ರದ್ದುಪಡಿಸದೆ, ಬೇರೆ ಪ್ರಕರಣಗಳಲ್ಲಿ ಕೋರ್ಟ್‌ಗಳು ನೀಡಿದ ತೀರ್ಪನ್ನು ಉಲ್ಲೇಖಿಸಿ ಮುಡಾ ಕಮಿಷ್ನರ್‌ಗಳು ಮನಸೋಇಚ್ಛೆ ಸಾವಿರಾರು ನಿವೇಶನಗಳನ್ನು ನಿಯಮಬಾಹಿರವಾಗಿ ಭೂ ಮಾಲೀಕರಲ್ಲದ, ಜಿಪಿಎ ಪ್ರತಿನಿಧಿಗಳಿಗೂ ಹಂಚಿಕೆ ಮಾಡಿ ಸಾವಿರಾರು ಕೋಟಿ ರೂ. ಅವ್ಯವಹಾರ ನಡೆಸಿರುವುದು ಮುಡಾ ಹಗರಣದ ಪ್ರಮುಖ ಗೋಲ್‌ಮಾಲ್ ಆಗಿದೆ.

ಜೆ.ಮಹದೇವ ನಿಧನ



ಮೈಸೂರು, ಆ.22– ಶಿವಾನಂದ ಸ್ಟೋರ್ಸ್ ಮಾಲೀಕ ಜೆ.ಮಹಾದೇವ ಅವರು ಗುರುವಾರ ನಿಧನರಾದರು. ಇವರು ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಗೋಕುಲಂ 3ನೇ ಹಂತದ ರುದ್ರಭೂಮಿಯಲ್ಲಿ ಶುಕ್ರವಾರ ಮಧ್ಯಾಹ್ನ ಅಂತ್ಯ ಸಂಸ್ಕಾರ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹೆಚ್.ಆರ್.ಚಲುವೇಗೌಡ



ಮೈಸೂರು: ತಂಬಾಕು ಮಂಡಳಿ ನಿವೃತ್ತ ಕ್ಷೇತ್ರ ಸಹಾಯಕ ಹೆಚ್.ಆರ್.ಚಲುವೇಗೌಡ(66) ಗುರುವಾರ ಹೃದಯಾಘಾತದಿಂದ ನಿಧನರಾದರು.

ಇವರು ಮೈಸೂರು ವಕೀಲರ ಸಂಘದ ಕಾರ್ಯದರ್ಶಿ ಎಸ್.ಎ.ಸುಧೀರ್ ಅವರ ಮಾವ. ಮೃತರು ಪತ್ನಿ ಸುನಂದ, ಇಬ್ಬರು ಪುತ್ರಿಯರು, ಪುತ್ರ, ಮೊಮ್ಮಕ್ಕಳನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಶುಕ್ರವಾರ ಹುಟ್ಟೂರಾದ ಸಾಲಿಗ್ರಾಮ ತಾಲೂಕು ಹಳೇಯೂರಿನಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಜ್ಯ ಸರ್ಕಾರ, ಶಾಸಕಾಂಗವನ್ನು ಅಮಾನತ್ತಿನಲ್ಲಿಡಬೇಕು

ರಾಜ್ಯಪಾಲರಿಗೆ ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಆಗ್ರಹ

ಮೈಸೂರು, ಆ.22(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಸರ್ಕಾರ ಹಾಗೂ ಶಾಸಕಾಂಗವನ್ನು ಅಮಾನತಿನಲ್ಲಿಡಬೇಕು ಎಂದು ವಿಧಾನಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಆಗ್ರಹಿಸಿದ್ದಾರೆ.



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಗುರುವಾರ ವಿಧಾನ ಪರಿಷತ್ ಸದಸ್ಯ ಹೆಚ್.ವಿಶ್ವನಾಥ್ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ನಗರದ ಜಲದರ್ಶಿನಿ ಅತಿಥಿ ಗೃಹದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ವೀರೇಂದ್ರ ಪಾಟೀಲ್ ಸರ್ಕಾರದ ಅವಧಿಯಲ್ಲಿ ಆದಂತೆ ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಕೂಡ ಶಾಸಕಾಂಗ ಹಾಗೂ ಸರ್ಕಾರವನ್ನು ರಾಜ್ಯಪಾಲರು ಅಮಾನತ್ತಿನಲ್ಲಿಡಬೇಕು. ತರುವಾಯ ಮುಂದಿನ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಜ್ಯದ ರಾಜಕಾರಣ ಹಾಳಾಗಿದೆ. ರಾಜರ ಕಾಲದ ಮಲ್ಲಿಗೆಯ ಸುವಾಸನೆ ದೂರವಾಗಿ ಈಗ ದುರ್ವಾಸನೆ ಬೀರುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯಪಾಲರನ್ನು ಕೆಟ್ಟ ಪದಗಳಿಂದ ನಿಂದಿಸುತ್ತಿರುವುದು ನಾಡಿಗೆ ಗೌರವ ತರುವಂತದ್ದಲ್ಲ. ಇದರಿಂದ ರಾಷ್ಟ್ರಮಟ್ಟದಲ್ಲಿ ಕರ್ನಾಟಕದ ಮಾನ, ಮರ್ಯಾದೆ ಹರಾಜಾಗುತ್ತಿದೆ. ಸಿದ್ದರಾಮಯ್ಯ ಹಾಗೂ ಹೆಚ್.ಡಿ.ಕುಮಾರಸ್ವಾಮಿ ಏಟಿಗೆ, ಎದಿರೇಟಿನ ಹೇಳಿಕೆಗಳಿಂದ ಇಬ್ಬರು ಗೇಲಿಗೊಳಗಾಗುತ್ತಿದ್ದಾರೆ ಎಂದು ಎಚ್ಚರಿಸಿದರು.

ಬಾಂಗ್ಲಾದಂತೆ ರಾಜ್ಯಭವನಕ್ಕೆ ನುಗ್ಗಬೇಕು ಎಂದು ಶಾಸಕ ಐವಾನ್ ಡಿಸೋಜಾ ಹೇಳುತ್ತಾರೆ. ಇದೇನು ಪ್ರಜಾಪ್ರಭುತ್ವವೆ, ಗೂಂಡಾ ರಾಜ್ಯವೆ ಎಂದು ಪ್ರಶ್ನಿಸಿದ ವಿಶ್ವನಾಥ್, ಇದನ್ನೆಲ್ಲಾ ನೋಡಿಕೊಂಡು ಸಿದ್ದರಾಮಯ್ಯ ಮೌನ ವಹಿಸಿದ್ದಾರೆ. ತಾನು ಮುಖ್ಯಮಂತ್ರಿ ಎಂಬುದನ್ನೆ ಮರೆತಿದ್ದಾರೆ ಎಂದು ಟೀಕಿಸಿದರು.

ಸಿದ್ದರಾಮಯ್ಯ ಹಟ್ಟಿಯಲ್ಲಿರುವವರೆ ಅವರನ್ನು ಮುಗಿಸುತ್ತಿದ್ದಾರೆ: ಬಿಜೆಪಿ ಹಾಗೂ ಜೆಡಿಎಸ್‌ನವರು ನನ್ನ ಟಾರ್ಗೆಟ್ ಮಾಡಿದ್ದಾರೆ ಎಂದು ಸಿದ್ದರಾಮಯ್ಯ ಹೇಳುತ್ತಿದ್ದಾರೆ. ಆದರೆ ಸಿದ್ದರಾಮಯ್ಯ ಅವರನ್ನು ವಿಪಕ್ಷಗಳು ಮುಗಿಸುತ್ತಿಲ್ಲ, ಸಿದ್ದರಾಮಯ್ಯ ಅವರ ಹಟ್ಟಿಯಲ್ಲಿರುವವರೆ ಅವರನ್ನು ಮುಗಿಸುತ್ತಿದ್ದಾರೆ ಎಂದು ವಿಶ್ವನಾಥ್ ಎಚ್ಚರಿಸಿದರು.

ಸಿದ್ದರಾಮಯ್ಯ ಅವರಿಗೆ ಬೇರೆ ಯಾರೂ ಮಸಿ ಬಳಿಯುತ್ತಿಲ್ಲ, ಅವರ ಕಡೆಯವರೆ ಮಸಿ ಬಳಿಯುತ್ತಿದ್ದಾರೆ ಎಂದರು.

ಸಿದ್ದರಾಮಯ್ಯ ಊರಿನಲ್ಲಿ (ಮೈಸೂರು) ಕಾನೂನು ಇಲ್ಲ, ಅವರ ಕಡೆಯವರು ತಿಂದು ತೇಗುತ್ತಿದ್ದಾರೆ. ಇದೆಲ್ಲವೂ ಸಿದ್ದರಾಮಯ್ಯ ಮೂಗಿನ ನೇರಕ್ಕೆ ನಡೆಯುತ್ತಿದೆ. ಆದರೂ ತನಗೇನು ಗೊತ್ತಿಲ್ಲ ಎಂಬಂತೆ ಮೌನ ವಹಿಸಿದ್ದಾರೆ ಎಂದು ಆರೋಪಿಸಿದರು. ಮುಡಾದಲ್ಲಿ ಇಷ್ಟೆಲ್ಲಾ ಹಗರಣ ನಡೆದಿದ್ದರೂ ಲೋಕಾಯುಕ್ತರು ಸ್ವಯಂಪ್ರೇರಣೆಯಿಂದ ಪ್ರಕರಣ ದಾಖಲಿಸಿಕೊಂಡಿಲ್ಲ. ತಾನು ಸಿಕ್ಕಿ ಬೀಳುತ್ತೇವೆ ಎಂದು ಸಿದ್ದರಾಮಯ್ಯ ಕೂಡ ಪ್ರಕರಣ ದಾಖಲಿಸುವಂತೆ ಹೇಳಿಲ್ಲ ಎಂದರು.

ಗಣಿ ಹಗರಣದಲ್ಲಿ ಹೆಚ್.ಡಿ. ಕುಮಾರಸ್ವಾಮಿ ವಿರುದ್ಧ ಕೂಡ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕು. ಕಾನೂನಿನಲ್ಲಿ ನಾನು ಒಂದೇ, ಕುಮಾರಸ್ವಾಮಿನೂ ಒಂದೇ, ಸಿದ್ದರಾಮಯ್ಯನೂ ಒಂದೇ ಎಂದು ವಿಶ್ವನಾಥ್ ಹೇಳಿದರು.

ಇನ್ನು ಕೂಡ ದಾಖಲೆ ತಿದ್ದುತ್ತಿದ್ದಾರೆ, ಅಕ್ರಮವಾಗಿ ಸೈಟ್ ಕೊಡುತ್ತಿದ್ದಾರೆ

ಮುಡಾದಲ್ಲಿ ಸಾವಿರಾರು ಕೋಟಿ ಹಗರಣ ಬಯಲಾದ ನಂತರವೂ ಕೂಡ ದಾಖಲೆಗಳನ್ನು ತಿದ್ದುವ, ಅಕ್ರಮವಾಗಿ ನಿವೇಶನಗಳನ್ನು ಮಂಜೂರು ಮಾಡುವ ಕೆಲಸಗಳು ನಿರಂತರವಾಗಿ ನಡೆಯುತ್ತಿವೆ ಎಂದು ವಿಶ್ವನಾಥ್ ಆಕ್ರೋಶ ವ್ಯಕ್ತಪಡಿಸಿದರು.

ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಸಭೆ ನಡೆಸುವ ನೆಪದಲ್ಲಿ ಮೈಸೂರಿಗೆ ಬಂದು ಹೆಲಿಕಾಪ್ಟರ್‌ನಲ್ಲಿ ದಾಖಲೆಗಳನ್ನು ಕದ್ದೊಯ್ದರು. ಈಗ ಆ ದಾಖಲೆಗಳಿಗೆ ವೈಟ್ನರ್ ಹಾಕಿ ತಿದ್ದಿದ್ದಾರೆ. ಇಷ್ಟೆಲ್ಲಾ ಆದರೂ ಕಡತ ಕಳುವು ಮಾಡಿರುವ ಬಗ್ಗೆ ಈ ತನಕ ಅವರ ವಿರುದ್ಧ ಒಂದು ಪ್ರಕರಣ ಕೂಡ ದಾಖಲಾಗಿಲ್ಲ ಎಂದು ಕಿಡಿಕಾರಿದರು. ತಮ್ಮ ಪರವಾಗಿದ್ದಾರೆ ಎಂಬ ಕಾರಣಕ್ಕೆ ಮುಡಾ ಆಯುಕ್ತರಾಗಿದ್ದ ದಿನೇಶ್‌ಕುಮಾರ್ ವಿರುದ್ಧ ಈ ತನಕ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಪಾದಿಸಿದರು. ರಾಜ್ಯಪಾಲರು ನೋಟಿಸ್ ಕೊಟ್ಟಾಗ ಸರ್ಕಾರ ಉತ್ತರ ಕೊಡುವುದಲ್ಲ, ಸ್ವತಃ ಸಿದ್ದರಾಮಯ್ಯ ಅವರೆ ಉತ್ತರ ನೀಡಬೇಕಿತ್ತು. ಆದರೆ ಕೊಟ್ಟ ಅವಕಾಶ ಬಳಸಿಕೊಂಡು ಉತ್ತರ ಕೊಟ್ಟಿದ್ದರೆ ಪ್ರಾಯಶಃ ಇಷ್ಟು ಬೆಳವಣಿಗೆ ಆಗುತ್ತಿರಲಿಲ್ಲ. ಆದರೆ ಈಗ ಮಹಾಭಾರತದ ದುರ್ಯೋಧನನಂತೆ ಸಿದ್ದರಾಮಯ್ಯ ಹಾಳಾಗುತ್ತಿದ್ದಾರೆ ಎಂದು ಎಂಎಲ್‌ಸಿ ಹೆಚ್.ವಿಶ್ವನಾಥ್ ಹೇಳಿದರು.

ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಕಂಪ್ಯೂಟರ್ ಮಹತ್ವದ ಪಾತ್ರ ವಹಿಸುತ್ತದೆ

ವಿದ್ಯಾರ್ಥಿನಿಯರಿಗೆ ವೆಲ್ಕಮ್ ಕಿಟ್ ವಿತರಿಸಿದ ವಕೀಲ ರಾಜೇಂದ್ರ ಅಭಿಮತ



ಸಮರ್ಥನಂ ಅಂಗವಿಕಲರ ಸಂಸ್ಥೆಯ ಜೀವನೋಪಾಯ ಸಂಪನ್ಮೂಲ ಕೇಂದ್ರದಲ್ಲಿ ಆಯೋಜಿಸಿದ್ದ ಉಚಿತ ಕಂಪ್ಯೂಟರ್ ತರಬೇತಿಯ ವಿದ್ಯಾರ್ಥಿನಿಯರಿಗೆ ವೆಲ್ಕಮ್ ಕಿಟ್ ವಿತರಣಾ ಕಾರ್ಯಕ್ರಮವನ್ನು ವಕೀಲ ರಾಜೇಂದ್ರ ಉದ್ಘಾಟಿಸಿದರು.

ಮೈಸೂರು,ಆ.22–ಮೈಸೂರು ಚಾಮರಾಜ ಜೋಡಿ ರಸ್ತೆಯಲ್ಲಿ ಪೇಜ್ ಇಂಡಸ್ಟ್ರೀಸ್ ಲಿಮಿಟೆಡ್ ಸಹಾಯದೊಂದಿಗೆ ಸಮರ್ಥನಂ ಅಂಗವಿಕಲರ ಸಂಸ್ಥೆಯ ಜೀವನೋಪಾಯ ಸಂಪನ್ಮೂಲ ಕೇಂದ್ರದಲ್ಲಿ ಉಚಿತ ಕಂಪ್ಯೂಟರ್ ತರಬೇತಿಯ ವಿದ್ಯಾರ್ಥಿನಿಯರಿಗೆ ವೆಲ್ಕಮ್ ಕಿಟ್ ವಿತರಣಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ವಕೀಲ ರಾಜೇಂದ್ರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ಕಂಪ್ಯೂಟರ್ ಮಹತ್ವದ ಪಾತ್ರವನ್ನು ವಹಿಸುತ್ತದೆ. ಕಂಪ್ಯೂಟರ್ ತಂತ್ರಜ್ಞಾನದಲ್ಲಿನ ಆವಿಷ್ಕಾರವು ಶಿಕ್ಷಣದ ಮೇಲೆ ಆಳವಾದ ಪ್ರಭಾವ ಬೀರುತ್ತದೆ. ಇಂದು ಪ್ರತಿಯೊಬ್ಬ ವ್ಯಕ್ತಿಯ ಅತ್ಯಗತ್ಯ ಭಾಗವಾಗಿರುವುದರಿಂದ ಶಾಲಾ ಪಠ್ಯಕ್ರಮದ ಒಂದು ಭಾಗವಾಗಿದೆ. ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣವು ಚಿಕ್ಕ ಮಕ್ಕಳ ವೃತ್ತಿಜೀವನದ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ ಎಂದರು.

ಯುವ ಮುಖಂಡ ಕೆ.ಜಿ.ಮಹಾಲಿಂಗಪ್ಪ ಮಾತನಾಡಿ, ಪ್ರಸ್ತುತ ಹಲವಾರು ವಿದ್ಯಾರ್ಥಿಗಳು ಬಡತನದ ಕೊರತೆಯಿಂದ ಶಿಕ್ಷಣ ಸೌಲಭ್ಯದಿಂದ ವಂಚಿತರಾಗಿದ್ದಾರೆ. ಆದರೆ ಈ ಸಮರ್ಥನಂ ಸಂಸ್ಥೆಯು ಉತ್ತಮ ಶಿಕ್ಷಣವನ್ನು ನೀಡುವುದರ ಜೊತೆ ಶಿಕ್ಷಣಕ್ಕಾಗಿ ಬೇಕಾಗುವ ಮೂಲಸೌಕರ್ಯಗಳನ್ನು ಒದಗಿಸುತ್ತಿದೆ ಇದನ್ನು ಉತ್ತಮ ರೀತಿಯಲ್ಲಿ ಬಳಸಿಕೊಳ್ಳುವಂತೆ ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು.

ಸಮರ್ಥನಂ ಅಂಗವಿಕಲರ ಸಂಸ್ಥೆಯ ಮೈಸೂರು ವಿಭಾಗೀಯ ಮುಖ್ಯಸ್ಥ ಶಿವರಾಜು ಮಾತನಾಡಿ, ಕಂಪ್ಯೂಟರ್ ಶಿಕ್ಷಣವು ಉತ್ತಮ ಉದ್ಯೋಗಗಳನ್ನು ಪಡೆಯಲು ಸಹಾಯ ಮಾಡುತ್ತದೆ. ಇಂದು ಕಂಪ್ಯೂಟರ್ ಉದ್ಯಮವು ಅತ್ಯಂತ ವೇಗವಾಗಿ ಬೆಳೆಯುತ್ತಿದೆ. ಕಂಪ್ಯೂಟರ್‌ಗಳು ಎಲ್ಲೆಡೆ ಬೇಕು. ಇಂದು ಪ್ರತಿಯೊಂದು ಕೆಲಸವೂ ಕಂಪ್ಯೂಟರ್ ಮೇಲೆ ಅವಲಂಬಿತವಾಗಿದೆ. ಆದ್ದರಿಂದ ಸಂಸ್ಥೆಯಲ್ಲಿ ನೀಡುವ ತರಬೇತಿಯ ಸೌಲಭ್ಯ ವನ್ನು ಸದುಪಯೋಗಪಡಿಸಿಕೊಂಡು, ಮೊಬೈಲ್ ಬಿಟ್ಟು ಓದುವ ಹವ್ಯಾಸ ಬೆಳೆಸಿ ಕೊಂಡು ಹೆಚ್ಚು ಜ್ಞಾನ ಸಂಪಾದಿಸಿಕೊಂಡು ತಮ್ಮ ಕಾಲು ಮೇಲೆ ನಿಂತು ಉತ್ತಮವಾದ ಜೀವನವನ್ನು ನಡೆಸಬೇಕು ಎಂದರು.

ಸಮರ್ಥನಂ ಜೀವನೋಪಾಯ ಸಂಪನ್ಮೂಲ ಕೇಂದ್ರದ ತರಬೇತಿದಾರ ಸ್ಪರ್ಶ, ಮಂಗಳೂರು ವಿಶ್ವವಿದ್ಯಾನಿಲಯದ ಸಮಾಜ ಕಾರ್ಯ ವಿಭಾಗದ ಪಿ.ಸುಮಿತ್ರ, ನಿಶಾಮಣಿ ಉಪಸ್ಥಿತರಿದ್ದರು.

ಕೆ.ಮರಿಗೌಡರ ವಿರುದ್ಧ ಮಾವಿನಹಳ್ಳಿ ಸಿದ್ದೇಗೌಡರ ಹೇಳಿಕೆ ಖಂಡನೀಯ

ಮೈಸೂರು,ಆ.22(ಜಿಎ)–ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜಕೀಯ ಜೀವನದಲ್ಲಿ ಕಪ್ಪು ಚುಕ್ಕಿ ಬೀಳಲು ಮುಡಾ ಅಧ್ಯಕ್ಷ ಮರಿಗೌಡ ಕಾರಣ ಎಂಬ ಮೈಮುಲ್ ಮಾಜಿ ಅಧ್ಯಕ್ಷ ಮಾವಿನಹಳ್ಳಿ ಸಿದ್ದೇಗೌಡ ಹೇಳಿಕೆ ಖಂಡನೀಯ ಎಂದು ಕಾಂಗ್ರೆಸ್ ವಕ್ತಾರ ಎಸ್.ರಾಜೇಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಡಾ ಅಧ್ಯಕ್ಷ ಮರಿಗೌಡರು 2013, 2018 ಹಾಗೂ 2023ರಲ್ಲಿ ಪಕ್ಷದ ಅಭ್ಯರ್ಥಿ ಗೆಲುವಿಗಾಗಿ ಪ್ರಾಮಾಣಿಕವಾಗಿ ಶ್ರಮಿಸಿದ್ದಾರೆ. 2023ರ ವಿಧಾನಸಭಾ ಚುನಾವಣೆಯಲ್ಲಿ ಸಿದ್ದರಾಮಯ್ಯ ಅವರ ಆದೇಶದ ಮೇರೆಗೆ ಮರಿಗೌಡರು ತಾವು ಸ್ಪರ್ಧಿಸಬೇಕಿದ್ದ ಕ್ಷೇತ್ರವನ್ನು ತಮಗೆ ಬಿಟ್ಟುಕೊಟ್ಟಿದ್ದಾರೆ. ಅದನ್ನು ನೀವು ಮರೆತಂತಿದೆ ಎಂದರು.

2024ರ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಪರವಾಗಿ ಚಾಮುಂಡೇಶ್ವರಿ ಕ್ಷೇತ್ರದ ಜವಾಬ್ದಾರಿ ಹೊತ್ತು ಪ್ರಚಾರ ಕೈಗೊಂಡು ಅಭ್ಯರ್ಥಿ ಗೆಲುವಿಗೆ ಶ್ರಮಿಸುವಂತೆ ತಿಳಿಸಿದರೂ ತಾವು ತಟಸ್ಥವಾಗಿ ಉಳಿಯುವ ಮೂಲಕ ಚುನಾವಣಾ ಪ್ರಚಾರದಿಂದ ಕಣ್ಮರೆಯಾಗಿ ಪಕ್ಷಕ್ಕೆ ದ್ರೋಹ ಎಸಗಿದ್ದೀರಿ ಎಂದು ಕಿಡಿಕಾರಿದರು. ಸುದ್ದಿಗೋಷ್ಠಿಯಲ್ಲಿ ಶ್ರೀನಿವಾಸ್, ಪ್ರವೀಣ್, ರವಿ ಮತ್ತಿತರರು ಉಪಸ್ಥಿತರಿದ್ದರು.

ರಂಗಾಯಣ ನಿರ್ದೇಶಕರಿಗೆ ಅಭಿನಂದನೆ



ಹವ್ಯಾಸಿ ರಂಗಭೂಮಿ ಕಲಾವಿದರ ವೇದಿಕೆ ವತಿಯಿಂದ ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು ಅವರನ್ನು ಅಭಿನಂದಿಸಲಾಯಿತು. ವೇದಿಕೆ ಅಧ್ಯಕ್ಷ ಸುರೇಶ ಬಾಬು, ಗೌರವ ಸಲಹೆಗಾರ ರಾಜಶೇಖರ ಕದಂಬ, ಕಾರ್ಯದರ್ಶಿ ಕುಮಾರಸ್ವಾಮಿ, ಖಜಾಂಚಿ ಸುಬ್ಬನರಸಿಂಹ, ನಿರ್ದೇಶಕರಾದ ಬಿ.ರಾಜೇಶ್, ಗೀತಾಂಜಲಿ ಇದ್ದಾರೆ

ತಾಲೂಕು ಮಟ್ಟದ ಪದವಿ ಪೂರ್ವ ಬಾಲಕರ ಖೋ–ಖೋ ಪಂದ್ಯಾವಳಿ



ಮೈಸೂರು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ಹರಿ ವಿದ್ಯಾಲಯ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ತಾಲೂಕು ಮಟ್ಟದ ಪದವಿ ಪೂರ್ವ ಬಾಲಕರ ಖೋ–ಖೋ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನವನ್ನು ವಿವೇಕಾನಂದ ಪಿಯು ಕಾಲೇಜು ಹಾಗೂ ದ್ವಿತೀಯ ಸ್ಥಾನವನ್ನು ಆತಿಥೇಯ ತಂಡ ಹರಿ ವಿದ್ಯಾಲಯ ಸಂಯುಕ್ತ ಪಿಯು ಕಾಲೇಜು ಪಡೆದುಕೊಂಡವು. ಈ ವೇಳೆ ಸಂಸ್ಥೆ ಕಾರ್ಯದರ್ಶಿ ಹೆಚ್.ಆರ್.ಭಗವಾನ್, ಕಾಲೇಜಿನ ಡೀನ್ ಪ್ರೊ. ಬ್ರಿಜೇಶ್ ಪಟೇಲ್, ಕಾಲೇಜಿನ ವಿಜ್ಞಾನ ವಿಭಾಗದ ಶೈಕ್ಷಣಿಕ ಸಂಯೋಜಕ ಡಾ.ಭಾರ್ಗವರಾಮ, ವಿವೇಕಾನಂದ ಕಾಲೇಜಿನ ಪ್ರಾಂಶುಪಾಲ ವೆಂಕಟೇಶ್, ಕ್ರೀಡಾ ಕಾರ್ಯಕಾರಿ ಸಮಿತಿಯ ಸದಸ್ಯರು, ಹಲವು ಕಾಲೇಜಿನ ದೈಹಿಕ ಶಿಕ್ಷಣ ಉಪನ್ಯಾಸಕರು ಮತ್ತು ಸಂಸ್ಥೆ ಸಿಬ್ಬಂದಿ ಹಾಜರಿದ್ದರು.

'ಸಹಜರಂಗ' ರಂಗ ತರಬೇತಿ ಶಿಬಿರಕ್ಕೆ ಅರ್ಜಿ


ಮೈಸೂರು, ಆ.22– ಸಾಮಾಜಿಕ ನೆಲೆಗಟ್ಟಿಗಾಗಿ, ಸಮಾಜದ ಪ್ರಗತಿಗಾಗಿ, ಶಿಕ್ಷಣದ ಉನ್ನತಿಗಾಗಿ ಶ್ರಮಿಸುತ್ತಿರುವ ನಿರಂತರ ಫೌಂಡೇಶನ್, ವಿದ್ಯಾರ್ಥಿಗಳನ್ನು ಕೇಂದ್ರವಾಗಿಟ್ಟುಕೊಂಡು ಕಳೆದ 28 ವರ್ಷಗಳಿಂದ ರಂಗಭೂಮಿಯನ್ನು ಮಾಧ್ಯಮವನ್ನಾಗಿಟ್ಟುಕೊಂಡು ಕೆಲಸ ಮಾಡುತ್ತಿದೆ. ಹೀಗೆ ಯುವ ಮನಸ್ಸುಗಳನ್ನು ಕಟ್ಟುವ ಪ್ರಕ್ರಿಯೆಯಲ್ಲಿ ತೊಡಗಿರುವ ನಿರಂತರ ಫೌಂಡೇಶನ್ ಕಾಲೇಜು ವಿದ್ಯಾರ್ಥಿಗಳಿಗಾಗಿ 'ಸಹಜರಂಗ 2024–25' ರಂಗ ತರಬೇತಿ ಶಿಬಿರವನ್ನು ಆಯೋಜಿಸಿದ್ದು, ಮಾನಸಗಂಗೋತ್ರಿಯ ಗಾಂಧಿ ಭವನದಲ್ಲಿ ಆ.30ರಿಂದ ಸೆ.29ರವರೆಗೆ ನಡೆಯಲಿದೆ. ಶಿಬಿರವು ಪ್ರತಿದಿನ ಸಂಜೆ 4.45ರಿಂದ 8.15 ಗಂಟೆಯವರೆಗೆ ನಡೆಯಲಿದ್ದು, 30 ಶಿಬಿರಾರ್ಥಿಗಳಿಗೆ ಮಾತ್ರ ಅವಕಾಶವಿದ್ದು, ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಆ.30 ಕೊನೆ ದಿನವಾಗಿದೆ.

ಶಿಬಿರದಲ್ಲಿ ಕಲೆ, ರಂಗಭೂಮಿ, ಜಾನಪದ, ಸಹಜ ಕೃಷಿ, ನೆಲ, ಜಲಗಳಂತಹ ವಿಷಯಗಳ ಚರ್ಚೆ, ಸಂವಾದ, ತರಬೇತಿಗಳು ಇರುತ್ತವೆ. ಶಿಬಿರದ ಕೊನೆಯಲ್ಲಿ ಶಿಬಿರಾರ್ಥಿಗಳೇ ಪ್ರಯೋಗಿಸುವ ಹೊಸ ನಾಟಕವೂ ಪ್ರದರ್ಶನಗೊಳ್ಳಲಿದೆ. ನಾಡಿನ ಹೆಸರಾಂತ ರಂಗತಜ್ಞರು, ವಿಷಯ ಪರಿಣತರು, ಶಿಬಿರದಲ್ಲಿ ಭಾಗವಹಿಸಲಿದ್ದಾರೆ. ಮಾಹಿತಿಗಾಗಿ ಮೊ: 9980273167, 9611074424, 8951755267

ಜನರಿಗೆ ಎಷ್ಟೇ ಅನುಕೂಲ ಮಾಡಿದರೂ ಉಪಕಾರ ಸ್ಮರಣೆಯೇ ಇಲ್ಲ...

● ಯಾರು ಎಷ್ಟೇ ನಿಂದಿಸಲಿ ನೀರಿನ ದರ ಹೆಚ್ಚಳ ಮಾಡಿಯೇ ತೀರುತ್ತೇನೆ ● ಡಿಸಿಎಂ ಡಿ.ಕೆ.ಶಿವಕುಮಾರ್ ಘೋಷಣೆ

ಬೆಂಗಳೂರು, ಆ.22(ಕೆಎಂಶಿ)– ನಾಗರಿಕರಿಗೆ ಎಷ್ಟೇ ಅನುಕೂಲ ಮಾಡಿಕೊಟ್ಟರೂ ಉಪಕಾರ ಸ್ಮರಣೆಯೇ ಇಲ್ಲ ಎಂದಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕುಡಿಯುವ ನೀರಿದ ದರ ಹೆಚ್ಚಳ ಮಾಡಿಯೇ ಮಾಡುತ್ತೇನೆ ಎಂದು ತಿಳಿಸಿದ್ದಾರೆ.



> “ಕೆಆರ್‌ಎಸ್‌ನಿಂದಲೇ ನೇರವಾಗಿ ನಗರಕ್ಕೆ ನಿಗದಿಯಾದ ನೀರು ತರಬಹುದು ಎಂಬುದಾಗಿ ಕೆಲವರು ವರದಿ ಕೊಟ್ಟಿದ್ದಾರೆ, ಶರಾವತಿಯಿಂದ ನೀರು ತರಬೇಕು ಎನ್ನುವ ಆಲೋಚನೆಯಿದೆ, ಅಲ್ಲಿನ ಸ್ಥಳೀಯರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ರಾಜಕಾರಣದಿಂದಾಗಿ ಎತ್ತಿನಹೊಳೆ ಯೋಜನೆ ಬೇರೆ, ಬೇರೆ ಕಡೆ ತಿರುವು ಪಡೆದುಕೊಂಡಿದೆ, ಇದನ್ನೂ ಒಂದು ಹಂತಕ್ಕೆ ತಲುಪಿಸಿದ್ದೇನೆ, ಕಾವೇರಿ 5ನೇ ಹಂತದ ಕಾಮಗಾರಿಗೆ ಮತ್ತೆ ಚಾಲನೆ ನೀಡಲಾಗುವುದು. **–ಡಿ.ಕೆ.ಶಿವಕುಮಾರ್**

ಜನ, ರಾಜಕಾರಣಿಗಳು, ಮಾಧ್ಯಮ, ಎಷ್ಟೇ ನಿಂದಿಸಲಿ, ನಾನು ನೀರಿನ ದರ ಏರಿಸಿಯೇ ಏರಿಸುತ್ತೇನೆ. ನಾನು ಯಾರಿಗೂ ಕೇರ್ ಮಾಡುವುದಿಲ್ಲ, ನೀರಿನ ದುಡ್ಡು ಕಟ್ಟುವವರು ಕಟ್ಟುತ್ತಾರೆ, ಇನ್ನು ಕೆಲವರು ಉಚಿತವಾಗಿ ಬಳಕೆ ಮಾಡುತ್ತಾರೆ ಎಂದರು.

ಬೆಂಗಳೂರು ನಗರ ಮತ್ತು ಜಲಸಂಪನ್ಮೂಲ ಇಲಾಖೆ ಹೊಣೆ ಹೊತ್ತಿರುವ ಶಿವಕುಮಾರ್, ಲೋಕಸಭಾ ಚುನಾವಣೆ ಫಲಿತಾಂಶವನ್ನು ದೃಷ್ಟಿಯಲ್ಲಿಟ್ಟುಕೊಂಡು ಸಾರ್ವಜನಿಕರ ಮೇಲೆ ಕಿಡಿಕಾರಿದ್ದಾರೆ.

ಪೆಟ್ರೋಲ್, ಡೀಸೆಲ್, ಹಾಲು ದರ ಹೆಚ್ಚಳ ಮಾಡಿದ ಬೆನ್ನಲ್ಲೇ ರಾಜ್ಯ ಸರ್ಕಾರ ನೀರಿನ ದರ ಏರಿಕೆಗೆ ಮುಂದಾಗಿದೆ. ವಿಧಾನಸೌಧದ ಮೆಟ್ಟಿಲುಗಳ ಮೇಲೆ ನಡೆದ ಸಮಾರಂಭದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ 12–13 ವರ್ಷಗಳಿಂದ ನೀರಿನ ದರ ಹೆಚ್ಚಳ ಮಾಡಿಯೇ ಇಲ್ಲ, ಆದರೂ ಬಿಡ್ಲ್ಯೂಎಸ್ ಎಸ್‌ಬಿ ಕಷ್ಟಪಟ್ಟು ನಿರ್ವಹಣೆ ಮಾಡುತ್ತಿದೆ. ಯಾರು ಎಷ್ಟೇ ಆಕ್ಷೇಪ ವ್ಯಕ್ತಪಡಿಸಿದರೂ ನಾನು, ನನ್ನ ನಿರ್ಧಾರದಿಂದ ಹಿಂದೆ ಸರಿಯುವುದಿಲ್ಲ. ರಾಜಧಾನಿಯ 1.40 ಕೋಟಿ ಜನಸಂಖ್ಯೆಗೆ ನೀರು ಒದಗಿಸಲೇಬೇಕು, ಇದಕ್ಕಾಗಿ ಸಾಲ ಮಾಡಿ, ಸಂಪರ್ಕಜಾಲ ಹೆಚ್ಚಿಸದೆ ಎಲ್ಲರಿಗೂ ನೀರು ಕೊಡಲು ಕಷ್ಟವಾಗುತ್ತದೆ, ದರ ಹೆಚ್ಚಳ ಮಾಡದಿದ್ದರೇ ನೀರು ಸರಬರಾಜು ಕಂಪನಿ ಉಳಿಯುವುದಿಲ್ಲ, ನೌಕರರು ಬದುಕಲು ಆಗುವುದಿಲ್ಲ. ಸಂಸ್ಥೆಗೆ ವಿದ್ಯುತ್ ಬಿಲ್ ಕಟ್ಟಲು ಆಗುತ್ತಿಲ್ಲ, ನೌಕರರಿಗೆ ಸಂಬಳ ನೀಡಲು ಆಗುತ್ತಿಲ್ಲ, ಎಲ್ಲರಿಗೂ ನೀರಿನ ದರ ಹೆಚ್ಚಳ ಮಾಡುವುದಿಲ್ಲ, ಎಷ್ಟು ಏರಿಕೆ ಮಾಡಬೇಕು ಎಂಬುದನ್ನು ಇನ್ನೂ ನಿರ್ಧರಿಸಿಲ್ಲ, ಚರ್ಚೆ ಮಾಡಲಿ, ಧರಣಿ ಮಾಡಲಿ, ನಾನು ದರ ಹೆಚ್ಚಳಕ್ಕೆ ಬದ್ಧವಾಗಿದ್ದೇನೆ ಎಂದರು.

ಕಳೆದ 14 ವರ್ಷಗಳಲ್ಲಿ ಸಾಕಷ್ಟು ಬಾರಿ ವಿದ್ಯುತ್ ದರ ಹೆಚ್ಚಳವಾಗಿದೆ, ಇಲಾಖೆಯದ್ದೇ ಪ್ರತ್ಯೇಕ ಕಂಪನಿ ಸ್ಥಾಪಿಸಿ ಸೋಲಾರ್ ಸೇರಿದಂತೆ ಇತರೇ ಮೂಲಗಳಿಂದ ವಿದ್ಯುತ್ ತಯಾರಿಸಿದರೆ ಹಣ ಉಳಿತಾಯವಾಗುತ್ತದೆ. ಪಾವಗಡದಲ್ಲಿ ಸೋಲಾರ್ ಪಾರ್ಕ್ ಮಾಡಿದ್ದಕ್ಕೆ ಮೂರೂವರೆ ರೂ.ಗೆ ವಿದ್ಯುತ್ ಸಿಗುತ್ತಿದೆ, ಆಗ ಹಲವರು ತಲೆಕೆಟ್ಟಿದೆಯಾ ಎಂದು ಆಡಿಕೊಂಡರು, ಇದರಿಂದ ಸರಬರಾಜು ಮಾಡುವ ಖರ್ಚು ಉಳಿತಾಯವಾಗಿದೆ. ಜಲ ಹಾಗೂ ಇಂಧನ ಇವೆರಡೂ ಬಹಳ ಮುಖ್ಯವಾದವು, ಈ ಹಿಂದೆ ನಾನು ಇಂಧನ ಸಚಿವನಾಗಿದ್ದೆ, ಈಗ ನೀರಾವರಿ ಸಚಿವನಾಗಿದ್ದೇನೆ, ಜೆ.ಹೆಚ್.ಪಟೇಲ್ ಕಾಲದಲ್ಲಿ ನೀರು ಸರಬರಾಜನ್ನು ಖಾಸಗಿಯವರಿಗೆ ನೀಡಬೇಕು ಎಂಬ ಪ್ರಸ್ತಾವನೆ ಬಂದಿತ್ತು ನಂತರ ಎಸ್.ಎಂ.ಕೃಷ್ಣ ಸರ್ಕಾರದಲ್ಲಿ ನಾನು ನಗರಾಭಿವೃದ್ಧಿ ಸಚಿವನಾಗಿದ್ದಾಗಲೂ ಈ ಬಗ್ಗೆ ದೊಡ್ಡ ಚರ್ಚೆಯಾಯಿತು. ಎಸ್.ಎಂ.ಕೃಷ್ಣ ಅವರು ನನ್ನನ್ನು ಹೊರದೇಶಕ್ಕೆ ಕಳುಹಿಸಿ ನೀರು ಸರಬರಾಜು ಖಾಸಗೀಕರಣದ ಬಗ್ಗೆ ಅಧ್ಯಯನ ಮಾಡುವಂತೆ ತಿಳಿಸಿದ್ದರು, ನಾನು ಫ್ರಾನ್ಸ್ ಹಾಗೂ ಇತರ ದೇಶಗಳಿಗೆ ಹೋಗಿದ್ದೆ, ಅಲ್ಲಿ ಒಂದು ರೀತಿಯ ಪದ್ಧತಿ ಇದೆ, ನಮ್ಮಲ್ಲಿರುವ ಬಿಡಬ್ಲ್ಯೂಎಸ್‌ಎಸ್‌ಬಿ ಎಂಜಿನಿಯರ್‌ಗಳು ಹೊರದೇಶದಲ್ಲಿರುವ ಎಂಜಿನಿಯರ್‌ಗಳಿಗಿಂತ ಉತ್ತಮವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ವರದಿ ನೀಡಿದ್ದೆ.

ನೀರಿನ ಪೈಪ್‌ಲೈನ್ ಬದಲಾಯಿಸಿ ಹೊಸ ವ್ಯವಸ್ಥೆ ಮಾಡುತ್ತೇವೆ ಎಂದು ಹೇಳಿ ಶೇ.30ರಷ್ಟು ಹೆಚ್ಚು ವೆಚ್ಚ ಕೇಳುತ್ತಾರೆ, ಆ ವ್ಯವಸ್ಥೆ ನಮ್ಮ ರಾಜ್ಯಕ್ಕೆ ಅನುಕೂಲಕರವಾಗಿಲ್ಲ, ದೆಹಲಿ, ಮುಂಬೈಗೆ ಸೂಕ್ತವಾಗಿದೆ ಎಂದು ವರದಿ ನೀಡಿದೆ, ಖಾಸಗೀಕರಣದ ಬಗ್ಗೆ ವ್ಯಾಪಕ ಖಂಡನೆ ವ್ಯಕ್ತವಾದ ಕಾರಣ ಪ್ರಸ್ತಾವನೆ ಕೈ ಬಿಡಲಾಯಿತು.

ನಾನು ಅಧಿಕಾರವಹಿಸಿಕೊಂಡ ತಕ್ಷಣ 6 ಎಂಎಲ್‌ಡಿ ನೀರು ಸರಬರಾಜು ಹೆಚ್ಚಳ ಮಾಡಲಾಗಿದೆ, ತಮಿಳುನಾಡಿಗೆ ನಿಗದಿತ ನೀರಿಗಿಂತ 100 ಟಿಎಂಸಿ ಹೆಚ್ಚುವರಿ ಕಾವೇರಿ ನೀರನ್ನು ಹರಿಸಲಾಗಿದೆ, ನಮ್ಮಲ್ಲಿ ಹೆಚ್ಚುವರಿ ನೀರನ್ನು ಹಿಡಿದಿಟ್ಟುಕೊಳ್ಳಲು ಆಗುವುದಿಲ್ಲ, ನಮ್ಮಲ್ಲಿ ಮತ್ತೊಂದು ಅಣೆಕಟ್ಟು ಇದ್ದಿದ್ದರೆ ಅವರಿಗೆ ಹೆಚ್ಚು ಅನುಕೂಲವಾಗುತ್ತಿತ್ತು, ಮೇಕೆದಾಟು ಯೋಜನೆ ಬಗ್ಗೆ ನ್ಯಾಯಾಲಯದಲ್ಲಿ ನಮಗೆ ನ್ಯಾಯ ಸಿಗುತ್ತದೆ ಎಂದು ನಂಬಿದ್ದೇನೆ ಎಂದರು.

ಕಾಲುವೆಗಳ ನೀರನ್ನು ಕೊನೆಯ ಹಂತದವರೆಗೆ ತಲುಪಿಸುವ ಉದ್ದೇಶದಿಂದ ಕಾಲುವೆಗಳ ಅಕ್ಕಪಕ್ಕ ಅರ್ಧ ಕಿ.ಮೀ. ವ್ಯಾಪ್ತಿಯಲ್ಲಿ ಯಾವುದೇ ಕೊಳವೆಬಾವಿ ಕೊರೆಯುವಂತಿಲ್ಲ ಹಾಗೂ ಪಂಪ್ ಮೂಲಕ ನೀರನ್ನು ಎತ್ತುವಂತಿಲ್ಲ ಎನ್ನುವ ಕಾನೂನು ತರಲಾಗಿದೆ. ನಾನು, ಹಿರಿಯ ಅಧಿಕಾರಿಗಳು ಇಲಾಖೆಗೆ ಬರುತ್ತೇವೆ, ಹೋಗುತ್ತೇವೆ, ಆದರೆ ಇಲಾಖೆ ಎಂಜಿನಿಯರ್‌ಗಳು, ನೌಕರರು ಯಾವ ರೀತಿ ಶಾಶ್ವತ ಪರಿಹಾರ ಬೇಕು ಎನ್ನುವ ಬಗ್ಗೆ ವರದಿ ತಯಾರಿಸಿ ನೀಡಲಿ, ನೀವು ಇಲ್ಲದಿದ್ದರೆ ಬೆಂಗಳೂರಿಗೆ ಹೊಸ ರೂಪ ಬರಲು ಸಾಧ್ಯವಿಲ್ಲ, ಇಲಾಖೆಯವರು ಹಗಲು–ರಾತ್ರಿ ಒತ್ತಡದಲ್ಲಿ ಕೆಲಸ ಮಾಡಬೇಕಾದ ಪರಿಸ್ಥಿತಿಯಿದೆ. ಅಂತರ್ಜಲ ಹೆಚ್ಚಳ ಮಾಡಲು ಕೆರೆ ಅಭಿವೃದ್ಧಿ ಸಮಿತಿ ಜೊತೆ ಕೆಲಸ ಮಾಡಬೇಕಿದೆ, ಕಳೆದ ವರ್ಷದ ಬರಗಾಲ ಸಮಯದಲ್ಲಿ ಬೆಂಗಳೂರಿನಲ್ಲಿ 7 ಸಾವಿರ ಕೊಳವೆಬಾವಿಗಳು ಬತ್ತಿ ಹೋಗಿದ್ದರೂ ಹೆಚ್ಚು ಶ್ರಮ ಹಾಕಿ ಕೆಲಸ ಮಾಡಿ ಸರ್ಕಾರಕ್ಕೆ ಕೆಟ್ಟ ಹೆಸರು ಬರದಂತೆ ನೋಡಿಕೊಂಡ ನೌಕರರಿಗೆ ಆಭಾರಿಯಾಗಿದ್ದೇನೆ, ನೀರುಗಂಟಿಯಿಂದ ಹಿಡಿದು ಪ್ರತಿಯೊಬ್ಬ ನೌಕರನಿಗೂ ಮನಃಪೂರ್ವಕ ಅಭಿನಂದನೆಗಳು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ಮುಡಾ ಹಗರಣದಿಂದ ಬಚಾವಾಗಲು ಸಿದ್ದರಾಮಯ್ಯರಿಂದ ಜಾತಿ ಅಸ್ತ್ರ

ಕಾಂಗ್ರೆಸ್ ವಿರುದ್ಧದ ಪ್ರತಿಭಟನೆಯಲ್ಲಿ ವಿಪಕ್ಷ ನಾಯಕ ಆರ್.ಅಶೋಕ್ ಕಿಡಿ

ಮಂಡ್ಯ,ಆ.22(ಮೋಹನ್‌ರಾಜ್)– ಮೈಸೂರು ಮುಡಾ ಹಗರಣದಿಂದ ತಪ್ಪಿಸಿಕೊಳ್ಳುವ ಸಲುವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜಾತಿ ಅಸ್ತ್ರ ಹೂಡಿದ್ದು, ಜಾತಿಯ ಹೆಸರಲ್ಲಿ ರಾಜಕಾರಣ ಮಾಡುವುದು ಬೇಡ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಕಿಡಿಕಾರಿದರು.

ಗುರುವಾರ ನಗರದ ಸರ್.ಎಂ.ವಿಶ್ವೇಶ್ವರಯ್ಯ ಪ್ರತಿಮೆ ಎದುರು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಿರುದ್ಧ ಏಕವಚನ ಪದ ಬಳಕೆ ಹಾಗೂ ವಿಧಾನಪರಿಷತ್ ಸದಸ್ಯ ಐವಾನ್ ಡಿಸೋಜಾ ಬಾಂಗ್ಲಾ ಮಾದರಿಯಲ್ಲಿ ರಾಜಭವನಕ್ಕೆ ನುಗ್ಗುತ್ತೇವೆಂಬ ಹೇಳಿಕೆ ಖಂಡಿಸಿ ಜಿಲ್ಲಾ ಬಿಜೆಪಿ ಕರೆ ನೀಡಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ದಲಿತ ಹಾಗೂ ಸಣ್ಣ ಸಮುದಾಯಕ್ಕೆ ಸೇರಿದ ರಾಜ್ಯಪಾಲರನ್ನು ಏಕವಚನದಲ್ಲಿ ಮನಬಂದಂತೆ ಕಾಂಗ್ರೆಸ್ಸಿಗರು ನಿಂದಿಸಿದ್ದಾರೆ. ಇದನ್ನು ಪ್ರಶ್ನಿಸಿದರೆ ಸಾಂವಿಧಾನಿಕ ಹುದ್ದೆಯಲ್ಲಿರುವ ರಾಜ್ಯಪಾಲರನ್ನು ಒಂದು ಜಾತಿಗೆ ಸೀಮಿತಗೊಳಿಸಬಾರದೆಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳುತ್ತಾರೆ. ಹಾಗಾದರೆ ಅದೇ ಜಾತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ತಾವು ಬಚಾವಾಗಲು ಏಕೆ ಬಳಸುತ್ತಾರೆ. ಸಿದ್ದರಾಮಯ್ಯಗೊಂದು ನ್ಯಾಯ, ರಾಜ್ಯಪಾಲರಿಗೊಂದು ನ್ಯಾಯವೇ ಎಂದು ಪ್ರಶ್ನಿಸಿದರು.

ಪದೇ ಪದೆ ಜಾತಿಯ ಹೆಸರೇಳಿಕೊಂಡು ರಾಜಕಾರಣ ಮಾಡುತ್ತಿರುವ ಸಿದ್ದರಾಮಯ್ಯ ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಲ್ಲೂ ಇಂತಹ ಜಾತಿಯವರ ಮೇಲೆ ಮಾತ್ರ ದೂರು ದಾಖಲಿಸಿ, ಇನ್ನೊಂದಷ್ಟು ಜಾತಿಗಳ ಮೇಲೆ ದೂರು ದಾಖಲಿಸಿಕೊಳ್ಳಬೇಡಿ ಎಂದು ಆದೇಶಿಸಲಿ. ತಪ್ಪು ಮಾಡಿ ನಾನು ಕುರುಬ ಸಮುದಾಯದವನು ಎಂದು ಬೊಬ್ಬೆ ಹೊಡೆಯುವ ಸಿದ್ದರಾಮಯ್ಯ, ತಪ್ಪಿತಸ್ಥರಾಗದಿದ್ದರೆ ನಾನು ಜಾತಿವಾದಿ ಅಲ್ಲ ಎನ್ನುತ್ತಿದ್ದರು. ಈ ದ್ವಂದ್ವ ನಿಲುವನ್ನು ಬಿಡಬೇಕೆಂದು ಅಸಮಾಧಾನ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ಮೈಸೂರಿನಲ್ಲಿ ಬದಲಿ ನಿವೇಶನ ಪಡೆದಿದ್ದೇನೆ ಎಂಬ ನೆಪದಲ್ಲಿ 14 ಸೈಟುಗಳನ್ನು ನುಂಗಿದ್ದಾರೆ. ಬಳಿಕ ತನ್ನ ಸಾವಿರಾರು ಬೆಂಬಲಿಗರು ಸೈಟು ಪಡೆಯಲು ಇದೇ ಸಿದ್ದರಾಮಯ್ಯ ಅನುವು ಮಾಡಿಕೊಟ್ಟಿದ್ದಾರೆ. ಇದರ ರೂವಾರಿ ಮುಖ್ಯಮಂತ್ರಿಗಳ ಬಂಟ ಮೈಸೂರು ಮುಡಾ ಅಧ್ಯಕ್ಷ ಮರಿಗೌಡ. ಸಿಎಂ ಪತ್ನಿ ನಿವೇಶನಕ್ಕೆ ಪತ್ರ ಬರೆದಿರುವುದು ಇದೀಗ ವೈರಲ್ ಆಗಿದೆ. ಆದರೆ ಅದನ್ನು ವೈಟ್ನರ್‌ನಲ್ಲಿ ಅಳಿಸಿದ್ದಾರೆ. ಮುಖ್ಯಮಂತ್ರಿಗಳ ಪತ್ನಿ ಮೈಸೂರಿನ ವಿಜಯನಗರದಲ್ಲೇ ನನಗೆ ಸೈಟು ಬೇಕೆಂದು ಬರೆದಿರುವ ಅಂಶ ಅದಾಗಿದ್ದು, ಆದರೆ ಅದನ್ನು ವೈಟ್ನರ್‌ನಲ್ಲಿ ಅಳಿಸಿ ಹಾಕಿದ್ದಾರೆ. ಇದರ ಬಗ್ಗೆ ನಿಜಾಂಶ ಹೊರಬರಬೇಕೆಂದರೆ ಸಿಬಿಐ ತನಿಖೆ ಆಗಲೇಬೇಕೆಂದು ಆಗ್ರಹಿಸಿದರು.

ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಿರುವ ರಾಜ್ಯಪಾಲರನ್ನು ಮುಖ್ಯಮಂತ್ರಿಗಳನ್ನು ಬಂಧಿಸಿ ಎಂದು ಆದೇಶಿಸಿಲ್ಲ. ಬದಲಾಗಿ ಮುಡಾ ಸೈಟಿನ ಬಗ್ಗೆ ತನಿಖೆ ನಡೆಸಲಿ ಎಂದು ಆದೇಶಿಸಿದ್ದಾರೆ. ಅಷ್ಟಕ್ಕೆ ಸಿದ್ದರಾಮಯ್ಯ ಏಕೆ ಭಯ ಪಡಬೇಕು. ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ತಮ್ಮ ಬಣ್ಣ ಬಯಲಾಗಲಿದೆ ಎಂಬ ಆತಂಕದಲ್ಲಿದ್ದಾರೆ. ತಪ್ಪು ಮಾಡಿಲ್ಲವೆಂದರೆ ರಾಜಾರೋಷವಾಗಿ ತನಿಖೆ ಎದುರಿಸಲಿ ಎಂದರು.

ಬಿಜೆಪಿ ವಿರುದ್ಧ 40 ಪರ್ಸೆಂಟ್ ಭ್ರಷ್ಟಾಚಾರದ ಆರೋಪ ಮಾಡಿ, ನಮ್ಮ ಸರ್ಕಾರ ಬಂದ ಕೂಡಲೇ ತನಿಖೆ ಮಾಡಿಸುತ್ತೇವೆ ಎಂದು ಸಿಎಂ ಮತ್ತು ಡಿಸಿಎಂ ಬೊಬ್ಬೆ ಹಾಕಿದ್ದರು. ಅಧಿಕಾರಕ್ಕೇರಿ ಒಂದೂವರೆ ವರ್ಷವಾದರೂ ನಮ್ಮ ಮೇಲೆ ತನಿಖೆಯನ್ನೇ ಮಾಡಿಸಿಲ್ಲ. ಅವರ ಹೇಳಿಕೆ ವಿರುದ್ಧ ನಾವೇ ನ್ಯಾಯಾಲಯದ ಮೆಟ್ಟಿಲೇರಿದ್ದೆವು. ಈ ಹಿನ್ನೆಲೆಯಲ್ಲಿ ನ್ಯಾಯಾಲಯ, ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಮಾತ್ರವಲ್ಲದೇ ರಾಹುಲ್‌ಗಾಂಧಿಯನ್ನು ನ್ಯಾಯಾಲಯಕ್ಕೆ ಕರೆಸಿಕೊಂಡು ವಿಚಾರಣೆ ಮಾಡಿದೆ. ಇದೀಗ 40 ಪರ್ಸೆಂಟ್ ಎಂದು ನಮ್ಮ ಮೇಲೆ ಸುಳ್ಳು ಆರೋಪ ಮಾಡಿದ್ದ ಈ ಮೂವರು ಬೇಲ್ ಮೇಲೆ ಇದ್ದಾರೆ ಎಂದು ದೂರಿದರು.

ದಲಿತರ ಹೆಸರಿನಲ್ಲಿದ್ದ ಜಮೀನನ್ನು ನುಂಗಿ ಇದೀಗ ನನಗೆ ಅನ್ಯಾಯವಾಗಿದ್ದು, ಸೈಟು ವಾಪಸ್ ಕೊಡುವೆ 62 ಕೋಟಿ ಹಣ ಕೊಡಿ ಎಂದು ಕೇಳುವ ಮುಖ್ಯಮಂತ್ರಿಗಳಿಗೆ ನಾಚಿಕೆಯಾಗಬೇಕು. ಅವರಿಗೆ ಏನು ಕಡಿಮೆ ಆಗಿದೆ ಎಂದು ಸರ್ಕಾರದಿಂದ ಹಣ ಪಡೆಯಬೇಕು ಎಂದು ಕಿಡಿಕಾರಿದ ಅವರು, ಯಾವುದೋ ಮೂಲೆಯಲ್ಲಿದ್ದ ಜಮೀನಿಗೆ ಪರಿಹಾರ ರೂಪದಲ್ಲಿ ಪ್ರತಿಷ್ಠಿತ ಬಡಾವಣೆಯಾದ ಮೈಸೂರಿನ ವಿಜಯನಗರದಲ್ಲಿ ನಿವೇಶನ ಪಡೆದಿದ್ದಾರೆ. ಹಾಗಾದರೆ ಮಂಡ್ಯ ತಾಲೂಕಿನ ಬಸರಾಳಿನಲ್ಲಿ ಜಮೀನು ಹೊಂದಿರುವವನು ಮಂಡ್ಯ ನಗರದ ವಿಶ್ವೇಶ್ವರಯ್ಯ ಪ್ರತಿಮೆ ಬಳಿ ಬದಲಿ ಜಾಗವನ್ನು ಪಡೆಯಬಹುದೇ? ಆ ರೀತಿ ಕಾನೂನಿನಲ್ಲಿದೆಯೇ ಎಂದು ಪ್ರಶ್ನಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್, ರಾಜ್ಯ ರೈತಮೋರ್ಚಾ ಉಪಾಧ್ಯಕ್ಷ ಕೆ.ಎಸ್.ನಂಜುಂಡೇಗೌಡ, ಮುಖಂಡರಾದ ಅಶೋಕ್ ಜಯರಾಂ, ಎಸ್.ಪಿ.ಸ್ವಾಮಿ, ಸಿ.ಟಿ.ಮಂಜುನಾಥ್, ನಾಗಾನಂದ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಸಂಬಳ, ಸ್ಕಾಲರ್‌ಶಿಪ್ ಕೊಡಲು ಸರ್ಕಾರದ ಬಳಿ ಹಣವಿಲ್ಲ

ಮಂಡ್ಯ: ಕಾಂಗ್ರೆಸ್ ಸರ್ಕಾರ ಪಾಪರ್ ಆಗೋಗಿದ್ದು, ನೌಕರರಿಗೆ ಸಂಬಳ, ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್ ಕೊಡೋಕು ಸರ್ಕಾರದ ಬಳಿ ದುಡ್ಡಿಲ್ಲ. ಸರ್ಕಾರ ಪಾಪರ್ ಆಗಿ ಬರ್ಬಾದ್ ಆಗೋಗಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಆರೋಪಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ಯಾರಂಟಿ ಕೊಡೋಕು ಅವರ ಬಳಿ ದುಡ್ಡಿಲ್ಲ. ಪಾಪರ್‌ನಿಂದ ಎಸ್ಕೇಪ್ ಆಗಲು ದಾರಿಯೇ ಇಲ್ಲ. ದೆಹಲಿ ಹೈಕಮಾಂಡ್ ಗ್ಯಾರಂಟಿ ನಿಲ್ಲಿಸಿದರೆ ದೇಶದಲ್ಲೆ ಪಕ್ಷಕ್ಕೆ ತೊಂದರೆಯಾಗುತ್ತೆ ಅಂದಿದ್ದಾರೆ. ಅದಕ್ಕಾಗಿ ರಾಜ್ಯದಲ್ಲಿ ಪೆಟ್ರೋಲ್, ಹಾಲು ದರ ಏರಿಕೆ ಮಾಡಲಾಗಿದ್ದು, ಇದೀಗ ಬೆಂಗಳೂರಿನಲ್ಲಿ ನೀರಿನ ಬೆಲೆ ಏರಿಕೆ ಮಾಡಿದ್ದಾರೆ. ನೀರಿನ ದರ ಏರಿಕೆ ಮಾಡಿರೋದು ದೊಡ್ಡ ಅಪರಾಧವಾಗಿದ್ದು, ಅದರ ವಿರುದ್ಧ ಬಿಜೆಪಿ ದೊಡ್ಡ ಹೋರಾಟ ಮಾಡುತ್ತೇವೆ ಎಂದರು.

ಡಿ.ಕೆ.ಶಿವಕುಮಾರ್ ಯಾರೇ ಬೈದರೂ ನೀರಿನ ದರ ಏರಿಕೆ ಮಾಡದೆ ಇರಲ್ಲ ಅಂತಾರೆ. ಅವರಿಗೆ ತಮ್ಮ ಸರ್ಕಾರ ಇರಲ್ಲ ಅನ್ನೋದು ಗ್ಯಾರಂಟಿಯಾಗಿದೆ. ಆದ್ದರಿಂದ ತೊಘಲಕ್ ಆಡಳಿತ ಮಾಡುತ್ತಿದಾರೆ. ನೀರು ದರ ಏರಿಕೆ ಮಾಡಿದರೆ ಬೆಂಗಳೂರು ಬಿಜೆಪಿ ಶಾಸಕರು, ಬಿಜೆಪಿ ಹೋರಾಟ ಮಾಡುತ್ತೇವೆ ಎಂದು ಹೇಳಿದರು.

ರಾಜ್ಯ ಸರ್ಕಾರದಿಂದ ಕೆಪಿಎಸ್‌ಸಿ ಎಕ್ಸಾಂ ಮುಂದೂಡಿಕೆ ವಿಚಾರದ ಬಗ್ಗೆ ಮಾತನಾಡಿ, ಅಧಿಕಾರದಲ್ಲಿ ಮುಂದುವರೆಯುವ ನಂಬಿಕೆ ಕಾಂಗ್ರೆಸ್‌ಗೆ ಇಲ್ಲ. ಎಷ್ಟು ದಿನ ಇರ್ತಿವೋ ಅಷ್ಟುದಿನ ಲೂಟಿ ಮಾಡೋಕೆ ನಿಂತಿದ್ದಾರೆ. ಅದಕ್ಕೆ ಯಾವುದು ಸಿಗುತ್ತೋ ಅದರಲ್ಲಿ ಲೂಟಿ ಹೊಡೆಯುತ್ತಿದ್ದಾರೆ. ಮೊನ್ನೆ ಪಿಎಸ್‌ಐ ಬಳಿ 30 ಲಕ್ಷ ಪಡೆದಿದ್ದಾರೆ. ಅದು ಕೂಡ ಕೇಸ್ ನಡೆಯುತ್ತಿದೆ ಎಂದರು.



ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಮಂಡ್ಯದಲ್ಲಿ ಬಿಜೆಪಿ ಮುಖಂಡರು ಬೃಹತ್ ಪ್ರತಿಭಟನೆ ನಡೆಸಿದರು.

ಆಸ್ತಿಗಾಗಿ ಲಾಂಗ್‌ನಿಂದ ವ್ಯಕ್ತಿ ಮೇಲೆ ಹಲ್ಲೆ

ತಮ್ಮನ ಮಕ್ಕಳಿಂದಲೇ ಕೃತ್ಯ, ಆಸ್ಪತ್ರೆಗೆ ದಾಖಲು

ಪಾಂಡವಪುರ: ಆಸ್ತಿ ವಿಚಾರವಾಗಿ ವ್ಯಕ್ತಿಯೋರ್ವನ ಮೇಲೆ ಆತನ ತಮ್ಮನ ಮಕ್ಕಳೇ ಲಾಂಗ್‌ನಿಂದ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ಪಟ್ಟಣದಲ್ಲಿ ಗುರುವಾರ ಸಂಜೆ ಸಂಭವಿಸಿದೆ.

ಪಟ್ಟಣದ ಶಾಂತಿನಗರ ನಿವಾಸಿ ಮೂಲ ಹಿರೇಮರಳಿ ಗ್ರಾಮದ ಪರಶಿವಮೂರ್ತಿ (63) ಹಲ್ಲೆಗೊಳಗಾಗಿರುವ ವ್ಯಕ್ತಿ. ಆತನ ತಮ್ಮನ ಮಕ್ಕಳಾದ ಶಶಾಂಕ್ ಹಾಗೂ ಲಿಖಿತ್ ಆರೋಪಿಗಳು.

ಹಿರೇಮರಳಿ ಗ್ರಾಮದಿಂದ ಬಂದು ಪಟ್ಟಣದ ಶಾಂತಿನಗರದ ಅರಳೀಕಟ್ಟೆ ಸಮೀಪ ಜೆರಾಕ್ಸ್ ಮತ್ತು ಸ್ಟೇಷನರಿ ಅಂಗಡಿ ಇಟ್ಟುಕೊಂಡಿದ್ದ ಪರಶಿವಮೂರ್ತಿ ಮತ್ತು ಆತನ ತಮ್ಮ ಕುಮಾರ್ ನಡುವೆ ಆಸ್ತಿ ವಿಚಾರವಾಗಿ ವೈಮನಸ್ಸು ಉಂಟಾಗಿ ಪದೇ ಪದೇ ಜಗಳವಾಗುತ್ತಿತ್ತು ಎನ್ನಲಾಗಿದೆ. ಆಸ್ತಿ ವಿಭಾಗದ ವಿಚಾರವಾಗಿ ನ್ಯಾಯಾಲಯದಲ್ಲಿ ಪ್ರಕರಣ ಕೂಡ ದಾಖಲಾಗಿದ್ದು, ಈ ಸಂಬಂಧ ಸೋಮವಾರ ಆರೋಪಿಗಳು ನ್ಯಾಯಾಲಯಕ್ಕೂ ಹಾಜರಾಗಿದ್ದರು ಎಂದು ತಿಳಿದು ಬಂದಿದೆ.

ಇದೇ ವಿಚಾರವಾಗಿ ಸೋಮವಾರ ಲಾಂಗ್‌ನೊಂದಿಗೆ ಆಗಮಿಸಿದ ಆರೋಪಿಗಳು ಅಂಗಡಿಯಲ್ಲಿದ್ದ ದೊಡ್ಡಪ್ಪ ಪರಶಿವಮೂರ್ತಿ ಮೇಲೆ ಮಾರಣಾಂತಿಕ ದಾಳಿ ನಡೆಸಿ ಪರಾರಿಯಾಗಿದ್ದಾರೆ.

ಹಲ್ಲೆಗೊಳಗಾಗಿರುವ ವ್ಯಕ್ತಿ ಪಟ್ಟಣದ ಉಪ ವಿಭಾಗೀಯ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಪಡೆದು ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಸಂಬಂಧ ಪಾಂಡವಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹಿರೇಮರಳಿ ಗ್ರಾಪಂಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

ಪಾಂಡವಪುರ,ಆ.22–ತಾಲೂಕಿನ ಹಿರೇಮರಳಿ ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷರಾಗಿ ಬೇವಿನಕುಪ್ಪೆ ಮಂಜುಳ ಚಂದ್ರಚಾರಿ, ಉಪಾಧ್ಯಕ್ಷರಾಗಿ ಬನಘಟ್ಟ ಕುಮಾರಸ್ವಾಮಿ ಅವಿರೋಧವಾಗಿ ಆಯ್ಕೆಯಾದರು.

ಪಂಚಾಯಿತಿಯ ಹಿಂದಿನ ಅಧ್ಯಕ್ಷೆ ಎಸ್.ಚೇತನಾ, ಉಪಾಧ್ಯಕ್ಷ ಯಶ್ವಂತ್ ಗೌಡ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯ ನಾಮಪತ್ರ ಸಲ್ಲಿಕೆ ಪ್ರಕ್ರಿಯೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಮಂಜುಳ ಚಂದ್ರಚಾರಿ, ಉಪಾಧ್ಯಕ್ಷ ಸ್ಥಾನಕ್ಕೆ ಕುಮಾರಸ್ವಾಮಿ ನಾಮಪತ್ರ ಸಲ್ಲಿಸಿದರು. ಇವರನ್ನು ಹೊರತುಪಡಿಸಿ ಉಳಿದ ಯಾವೊಬ್ಬ ಸದಸ್ಯರು ನಾಮಪತ್ರವನ್ನು ಸಲ್ಲಿಸದ ಹಿನ್ನೆಲೆಯಲ್ಲಿ ಅಧ್ಯಕ್ಷರಾಗಿ ಮಂಜುಳ ಚಂದ್ರಚಾರಿ, ಉಪಾಧ್ಯಕ್ಷರಾಗಿ ಕುಮಾರಸ್ವಾಮಿ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಎಇಇ ಜಯರಾಮು ಘೋಷಿಸಿದರು.

ಈ ಸಂದರ್ಭದಲ್ಲಿ ಗ್ರಾಪಂ ಸದಸ್ಯರಾದ ಯಶ್ವಂತ್‌ಗೌಡ, ರತ್ನಮ್ಮ, ಶ್ವೇತಾ, ಟಿ.ಎಂ.ಸವಿತ, ಎಚ್.ಎಚ್.ನವೀನ, ರಮೇಶ್ ಶೆಟ್ಟಿ, ಬಿ.ಜೆ.ವಿಜಯಕುಮಾರ್, ಮಂಜಳ, ಕುಮಾರಸ್ವಾಮಿ, ಬಿ.ಸಿ.ಸುನೀಲ್, ಕೃಷ್ಣೇಗೌಡ, ಚೇತನ, ಭಾಗ್ಯ, ಮುಖಂಡರಾದ ಎಪಿಎಂಸಿ ಮಾಜಿ ಅಧ್ಯಕ್ಷ ಎಚ್.ಎಸ್.ವಿ.ಸ್ವಾಮಿಗೌಡ, ಗ್ರಾಪಂ ಮಾಜಿ ಅಧ್ಯಕ್ಷ ಸುನೀಲ್‌ಕುಮಾರ್, ಶ್ರೀನಿವಾಸ್. ಹರೀಶ್, ರಾಜೇಶ್, ಯ.ನವೀನ್, ಪಿಡಿಓ ನಿರಂಜನ್, ಕಾರ್ಯದರ್ಶಿ ಸತೀಶ್, ಮರೀಗೌಡ, ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.



ಹಿರೇಮರಳಿ ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷರಾಗಿ ಬೇವಿನಕುಪ್ಪೆ ಮಂಜುಳ ಚಂದ್ರಚಾರಿ, ಉಪಾಧ್ಯಕ್ಷರಾಗಿ ಬನಘಟ್ಟ ಕುಮಾರಸ್ವಾಮಿ ಅವಿರೋಧವಾಗಿ ಆಯ್ಕೆಯಾದರು.


ಪತ್ನಿ ಕೊಚ್ಚಿ ಕೊಂದು ಠಾಣೆಗೆ ಬಂದು ಶರಣಾದ ಪತಿ

ನಾಗಮಂಗಲ: ಪತಿಯೊಬ್ಬ ಪತ್ನಿಯನ್ನೆ ಕೊಡಲಿಯಿಂದ ಕೊಚ್ಚಿ ಕೊಲೆಗೈದು ತಾನೇ ಬಂದು ಪೊಲೀಸರಿಗೆ ಶರಣಾಗಿರುವ ಘಟನೆ ತಾಲೂಕಿನ ಬೆಳ್ಳೂರು ಹೋಬಳಿಯ ಮಂತನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ವಾಸಿ ತೇಜಸ್ವಿನಿ ಎಂಬಾಕೆಯೇ ಗಂಡನಿಂದ ಕೊಲೆಯಾದ ದುರ್ದೈವಿ. ಜಯರಾಮೇಗೌಡ ಎಂಬಾತನೇ ಕೊಲೆ ಆರೋಪಿ. ಜಯರಾಮೇಗೌಡ ತೇಜಸ್ವಿನಿಯನ್ನು ಮದುವೆಯಾಗಿದ್ದು, ಪ್ರಾರಂಭದಿಂದಲೂ ಇಬ್ಬರ ನಡುವೆ ಆಗಾಗ್ಗೆ ಜಗಳವಾಗುತ್ತಿತ್ತು. ಹಲವಾರು ಬಾರಿ ಗ್ರಾಮಸ್ಥರೇ ರಾಜಿ ಸಂಧಾನ ಮಾಡಿಸಿದ್ದರು. ಕೆಲವು ದಿನಗಳಿಂದ ಆತ ಬೆಂಗಳೂರಿನಲ್ಲಿದ್ದು ತೇಜಸ್ವಿನಿ ತನ್ನ ಮಕ್ಕಳೊಂದಿಗೆ ಮಂತನಹಳ್ಳಿಯಲ್ಲಿ ನೆಲೆಸಿದ್ದಳು.

ಜಯಾರಾಮೇಗೌಡ ಒಂದು ವಾರದ ಹಿಂದೆ ಗ್ರಾಮಕ್ಕೆ ಬಂದಿದ್ದು, ಬುಧವಾರ ಮತ್ತೆ ಜಗಳವಾಗಿ ಜಯರಾಮೇಗೌಡ ಮನೆಯಲ್ಲಿದ್ದ ಕೊಡಲಿಯಿಂದ ತೇಜಸ್ವಿನಿಯನ್ನು ಕೊಚ್ಚಿ ಕೊಲೆ ಮಾಡಿದ್ದಾನೆ. ಆಕೆ ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾಳೆ. ನಂತರ ಆತ ಪೊಲೀಸರಿಗೆ ಶರಣಾಗಿದ್ದಾನೆ. ಆತನನ್ನು ಬಂಧಿಸಿದ್ದು ಬೆಳ್ಳೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಿ.ಜೆ.ಶಿವರಾಮೇಗೌಡ ನಿಧನ



ಕೆ.ಆರ್.ಪೇಟೆ: ಪಟ್ಟಣದ ಯಶಸ್ವಿನಿ ಕಲ್ಯಾಣ ಮಂಟಪದ ಮಾಲೀಕರು, ಹಿರೀಕಳಲೆ ಗ್ರಾಪಂ ಸದಸ್ಯರಾದ ಚಿಕ್ಕೋನಹಳ್ಳಿ ನಿವಾಸಿ ಮುಂಬೈ ಸಿ.ಜೆ.ಶಿವರಾಮೇಗೌಡ(54) ಗುರುವಾರ ಬೆಳಿಗ್ಗೆ ನಿಧನರಾಗಿದ್ದಾರೆ.

ಮೃತರು ಪತ್ನಿ ಶಾಂತ, ಪುತ್ರಿ ಸೋನುಗೌಡ, ತಂದೆ ಜಾಣೇಗೌಡ, ತಾಯಿ ನಿಂಗಮ್ಮ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಹುಟ್ಟೂರು ಚಿಕ್ಕೋನಹಳ್ಳಿ ಗ್ರಾಮದಲ್ಲಿ ಸಂಜೆ ನಡೆಯಿತು.

ಗ್ರಂಥಾಲಯ ನಾಗರಿಕರ ಜ್ಞಾನ ಹೆಚ್ಚಿಸುವ ದೇಗುಲ

ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಬಿ.ಕೆ.ಶೋಭ



ನಂಜನಗೂಡಿನ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಗ್ರಂಥಪಾಲಕರ ದಿನ ಆಚರಿಸಲಾಯಿತು.

ಮೈಸೂರು, ಆ.22– ಗ್ರಂಥಾಲಯಗಳು ನಾಗರಿಕರ ಜ್ಞಾನ ಹೆಚ್ಚಿಸುವ ದೇಗುಲುಗಳು. ಇಲ್ಲಿ ಲಭ್ಯವಾಗುವ ಪತ್ರಿಕೆ, ನಾನಾ ಪುಸ್ತಕಗಳಿಂದ ಸಾಮಾನ್ಯ ಜ್ಞಾನ ವೃದ್ಧಿಯಾಗುತ್ತದೆ ಎಂದು ಬಿ.ಕೆ.ಶೋಭ ನಂಜನಗೂಡಿನ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ವಿದ್ಯಾರ್ಥಿಗಳಿಗೆ ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲ ಸಿ.ಆರ್. ದಿನೇಶ್ ಗ್ರಂಥಾಲಯಗಳು ನಮ್ಮ ಬೌದ್ಧಿಕ ಮಟ್ಟವನ್ನು ಎತ್ತರಿಸುತ್ತವೆ. ಇಲ್ಲಿ ಸಿಗುವ ಹಲವಾರು ಪತ್ರಿಕೆ ಮತ್ತು ಮಾಸ ಪತ್ರಿಕೆಗಳು ಅವಶ್ಯವಾದ ಮಾಹಿತಿಯನ್ನು ಒದಗಿಸುತ್ತವೆ. ಒಬ್ಬ ವ್ಯಕ್ತಿ ಎಲ್ಲಾ ಪತ್ರಿಕೆಗಳನ್ನು ಕೊಂಡು ಓದುವುದು ಕಷ್ಟ, ಆದರೆ ಗ್ರಂಥಾಲಯ ಎಲ್ಲಾ ತರಹದ ಪತ್ರಿಕೆಗಳ ಮೂಲಕ ಮಾಹಿತಿ ದೊರಕುತ್ತದೆ. ಮಹಾನ್ ಲೇಖಕರು ತಮ್ಮ ತಮ್ಮ ಬರಹಗಳನ್ನು ತಪಸ್ಸಿನಂತೆ ಬರೆದಿರುವರು. ಹಾಗಾಗಿ ಅವರು ಬರೆದ ಮಹಾನ್ ಗ್ರಂಥಗಳನ್ನು ಅಧ್ಯಯನ ಮಾಡಿದರೆ ಖಂಡಿತವಾಗಿಯೂ ಒಳ್ಳೆಯ ಅಭಿರುಚಿಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಸಾಧ್ಯ ಎಂದು ತಿಳಿಸಿದರು.

ಡಾ.ಎಸ್.ಆರ್. ರಂಗನಾಥನ್ ಗ್ರಂಥಾಲಯದ ಉಪಯೋಗದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿದ ಪ್ರಯುಕ್ತ ಅವರನ್ನು ಗ್ರಂಥಾಲಯದ ಪಿತಾಮಹ ಎಂದು ಕರೆಯಲಾಗುತ್ತದೆ. ಗ್ರಂಥಾಲಯಗಳು ಮಾನವನ ಬೌದ್ಧಿಕ ವಿಕಾಸಕ್ಕೆ ಯಾವ ರೀತಿ ಸಹಕಾರಿ ಎನ್ನುವುದನ್ನು ತಿಳಿಸುವಲ್ಲಿ ಮತ್ತು ಗ್ರಂಥಾಲಯಗಳ ಪಾತ್ರ ಹಾಗೂ ಸೇವೆಯ ಬಗ್ಗೆ ಅವರು ನೀಡಿದ ಕೊಡುಗೆಯನ್ನು ವಿದ್ಯಾರ್ಥಿಗಳಿಗೆ ಕಾಲೇಜಿನ ಗ್ರಂಥಪಾಲಕರಾದ ಸುಲಕ್ಷಣಾ ವಿವರಿಸಿದರು.

ಕಲಿಕೆಯಲ್ಲಿ ಹಿಂದೆ ಬಿದ್ದ ವಿದ್ಯಾರ್ಥಿಗಳಿಗೆ ನಿಘಂಟುಗಳನ್ನು ಕೊಡುವ ಮೂಲಕ ಅಂಥ ವಿದ್ಯಾರ್ಥಿಗಳು ಸಹ ಓದಿನಲ್ಲಿ ಮುಂದೆ ಬರುವ ಉದ್ದೇಶದಿಂದ ಇಂತಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಹಿರಿಯ ಉಪನ್ಯಾಸಕರಾದ ಅಶ್ವತ್ಥನಾರಾಯಣ್ ಗೌಡ, ಲಿಂಗಣ್ಣಸ್ವಾಮಿ , ರಂಗಸ್ವಾಮಿ, ಡಾ. ಟಿ.ಕೆ. ರವಿ, ಡಾ ಕೆ ಮಾಲತಿ, ಹೆಚ್.ಕೆ. ಪ್ರಕಾಶ್ ಇತರು ಉಪಸ್ಥಿತರಿದ್ದರು.

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ

ಮೈಸೂರು,ಆ.22(ಪಿಎಂ)– ಜ್ಞಾನಬುತ್ತಿ ಸಂಸ್ಥೆ ವತಿಯಿಂದ ಬ್ಯಾಂಕಿಂಗ್ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ಶಿಬಿರ ಆಯೋಜಿಸಲಾಗಿದೆ.

ಕೇಂದ್ರ ಸಿಬ್ಬಂದಿ ನೇಮಕಾತಿ ಆಯೋಗ (ಎಸ್‌ಎಸ್‌ಸಿ) ನಡೆಸುವ ವಿವಿಧ ಹಂತದ ಪರೀಕ್ಷೆಗಳಿಗೆ ಹಾಗೂ ಐಬಿಪಿಎಸ್ ನಡೆಸುವ ಬ್ಯಾಂಕ್ ಅಧಿಕಾರಿಗಳು ಮತ್ತು ಗುಮಾಸ್ತರ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 45 ದಿನಗಳ ಶಿಬಿರದಲ್ಲಿ ತರಬೇತಿ ದೊರೆಯಲಿದೆ. ಆಸಕ್ತರು ಆ.24ರೊಳಗೆ ಸಂಜೆ 5.30ರಿಂದ ರಾತ್ರಿ 7.30ರೊಳಗೆ ಮೈಸೂರಿನ ಲಕ್ಷ್ಮೀಪುರಂ ಸರ್ಕಾರಿ ಪ್ರೌಢಶಾಲೆ ಮತ್ತು ಪಿಯು ಕಾಲೇಜಿನ ಆವರಣದಲ್ಲಿರುವ ಜ್ಞಾನಬುತ್ತಿ ಸಂಸ್ಥೆಯಲ್ಲಿ ನೋಂದಣಿ ಮಾಡಿಕೊಳ್ಳಬಹುದು ಎಂದು ಸಂಸ್ಥೆಯ ಕಾರ್ಯದರ್ಶಿ ಹೆಚ್.ಬಾಲಕೃಷ್ಣ (94481 17455) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಾಜನ ಕಾಲೇಜಲ್ಲಿ ಕಣ್ಣಿನ ಉಚಿತ ತಪಾಸಣಾ ಶಿಬಿರ



ಮೈಸೂರು, ಆ.22– ಎಸ್‌ಬಿಆರ್‌ಆರ್ ಮಹಾಜನ ಪ್ರಥಮದರ್ಜೆ ಕಾಲೇಜಿನ (ಸ್ವಾಯತ್ತ) ರಾಷ್ಟ್ರೀಯ ಸೇವಾ ಯೋಜನಾ ಘಟಕದ ವತಿಯಿಂದ ವಾಸನ್ ಕಣ್ಣಿನ ಆಸ್ಪತ್ರೆ ಮೈಸೂರು ಇವರ ಸಹಯೋಗ ದೊಂದಿಗೆ 'ಕಣ್ಣಿನ ಉಚಿತ ತಪಾಸಣೆ ಮತ್ತು ಕಣ್ಣಿನ ಸಂರಕ್ಷಣೆ ಕುರಿತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಬಿ.ಆರ್.ಜಯಕುಮಾರಿ ಮಾತನಾಡುತ್ತಾ, ಪ್ರಪಂಚದ ಸೌಂದರ್ಯವನ್ನು ಕಾಣಲು ಪ್ರತಿಯೊಂದು ಜೀವಿಗಳಿಗೂ ಕಣ್ಣುಗಳು ಅತ್ಯಾವಶ್ಯಕ. ದೇಹದ ಅಂಗಗಳು ತಮ್ಮದೇ ಆದ ಪ್ರಾಮುಖ್ಯತೆಯನ್ನು ಒಳಗೊಂಡಿದೆ. ಮನುಷ್ಯ ಎಷ್ಟೇ ಐಶ್ವರ್ಯ, ಆಸ್ತಿ ಸಂಪಾದಿಸಿದರೂ ಆರೋಗ್ಯ ಇಲ್ಲದಿದ್ದರೆ ಆತ ಬಡವ. ನಮ್ಮ ಕಣ್ಣಿನ ಆರೋಗ್ಯದ ಮೇಲೆ ಗಮನ ವಹಿಸಬೇಕು. ಕಣ್ಣುಗಳು ಆರೋಗ್ಯವಾಗಿದ್ದಲ್ಲಿ ನೇತ್ರದಾನ ಮಾಡುವ ಮೂಲಕ ಮತ್ತೊಂದು ಜೀವವು ಪ್ರಪಂಚದ ಸೌಂದರ್ಯವನ್ನು ಕಾಣಲು ನಾವು ಕಾರಣರಾಗುತ್ತೇವೆ. ಸದಾ ಆರೋಗ್ಯ ಚಿಂತನೆಗಳಿಂದ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಕಾಯ್ದಿರಿಸಿ ಉತ್ತಮ ಸಮಾಜ ನಿರ್ಮಾಣಕ್ಕೆ ಕಾರಣಕರ್ತರಾಗಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಾಸನ್ ಕಣ್ಣಿನ ಆಸ್ಪತ್ರೆಯ ಮಾರ್ಕೆಟಿಂಗ್ ಮುಖ್ಯಸ್ಥರಾದ ರಕ್ಷಿತ್, ಮಾರ್ಕೆಟಿಂಗ್ ಎಕ್ಸಿಕ್ಯೂಟರ್ ಪ್ರವೀಣ್, ಆಪ್ಟೊಮೆ ಟ್ರಿಸ್ಟ್‌ಗಳಾದ ಪರಿಮಳ ಮತ್ತು ಶ್ರೀಲಕ್ಷ್ಮೀ ತಪಾಸಣಾ ಶಿಬಿರವನ್ನು ನಡೆಸಿಕೊಟ್ಟರು. ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿಗಳಾದ ಡಾ. ದೊಡ್ಡರಸಯ್ಯ ಜಿ, ಡಾ. ಸಿದ್ದರಾಜು ಸಿ.ಎಸ್. ಹಾಜರಿದ್ದರು. ಕಾರ್ಯಕ್ರಮದಲ್ಲಿ ಅಧ್ಯಾಪಕರು, ಅಧ್ಯಾಪಕೇತರರು, ಎನ್‌ಎಸ್‌ಎಸ್ ಸ್ವಯಂ ಸೇವಕ, ಸೇವಕಿಯರು ಹಾಗೂ ವಿದ್ಯಾರ್ಥಿಗಳನ್ನು ಒಳಗೊಂಡಂತೆ 200ಕ್ಕೂ ಹೆಚ್ಚು ಮಂದಿ ಶಿಬಿರದ ಪ್ರಯೋಜನವನ್ನು ಪಡೆದುಕೊಂಡರು.



ಫ್ಲೈಬಸ್

ಕೆಎಸ್‌ಆರ್‌ಟಿಸಿ ಅವಾಂತರ



ಐರಾವತ ಬಸ್

ಐಷಾರಾಮಿ ಫ್ಲೈಬಸ್ ಟಿಕೆಟ್ ಬುಕ್ ಮಾಡಿದವರಿಗೆ ಒದಗಿಸಿದ್ದು ಐರಾವತ!

- ಬಸ್ ಮುಂಭಾಗ ಫ್ಲೈಬಸ್ ಎಂದು ಚಾಕ್‌ಪೀಸ್‌ನಲ್ಲಿ ಬರೆದಿದ್ದ ಅಧಿಕಾರಿಗಳು
- ಕೆಎಸ್‌ಆರ್‌ಟಿಸಿಗೆ ಹಿಡಿಶಾಪ ಹಾಕಿಕೊಂಡೇ ಐರಾವತದಲ್ಲಿ ಬೆಂಗಳೂರು ಏರ್‌ಪೋರ್ಟ್‌ಗೆ ಪ್ರಯಾಣಿಸಿದ ಪ್ರಯಾಣಿಕರು
- ಫ್ಲೈಬಸ್ ಪ್ರಯಾಣ ದರ ರೂ.865, ಐರಾವತದಲ್ಲಿ ಸುಮಾರು 400 ರೂ.

ಮೈಸೂರು, ಆ.22– ಮೈಸೂರಿನಿಂದ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಂಚರಿಸುವ ಐಷಾರಾಮಿ ಫ್ಲೈಬಸ್ ಬುಕ್ ಮಾಡಿದವರಿಗೆ ಐರಾವತ್ ಬಸ್ ಅನ್ನು ವ್ಯವಸ್ಥೆ ಮಾಡುವ ಮೂಲಕ ಕೆಎಸ್‌ಆರ್‌ಟಿಸಿ ಅವಾಂತರ ಸೃಷ್ಟಿಸಿದೆ.


ಮೈಸೂರಿನಿಂದ ವಿದೇಶಕ್ಕೆ ತೆರಳುವವರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕೆಎಸ್‌ಆರ್‌ಟಿಸಿಯಿಂದ ಐಷಾರಾಮಿ ಫ್ಲೈಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಅನೇಕವಾಗಿ ವಿದೇಶಕ್ಕೆ ತೆರಳುವವರು ಆನ್‌ಲೈನ್ ಅಥವಾ ಕೌಂಟರ್ ಮೂಲಕ ಟಿಕೆಟ್ ಬುಕ್ ಮಾಡಿ, ತಮ್ಮ ಸೀಟುಗಳನ್ನು ಕಾಯ್ದಿರಿಸಿಕೊಳ್ಳುತ್ತಾರೆ. ಅದೇ ರೀತಿ ಇಂದು(ಗುರುವಾರ) ಮೈಸೂರಿನ ಸಬರ್ಬನ್ ಬಸ್ ನಿಲ್ದಾಣದಿಂದ ಬೆಳಗ್ಗೆ 4.31ಕ್ಕೆ ಹೊರಡುವ ಫ್ಲೈಬಸ್‌ನಲ್ಲಿ ಸೀಟ್ ಬುಕ್ ಮಾಡಿದ್ದ ಪ್ರಯಾಣಿಕರು ನಿಗದಿತ ಸಮಯಕ್ಕೆ ಸ್ವಲ್ಪ ಮುಂಚಿತವಾಗಿ ಬಂದರಾದರೂ ನಿಲ್ದಾಣದಲ್ಲಿ ಫ್ಲೈಬಸ್ ಇರಲಿಲ್ಲ. ಸ್ವಲ್ಪ ತಡವಾಗಿ ಬರಬಹುದೇನೋ ಎಂದು ಕೆಲವರು ಅಂದುಕೊಂಡರೆ, ಮತ್ತೆ ಕೆಲವರು ಫ್ಲೈಬಸ್ ಬರುವುದು ವಿಳಂಬವಾಗಿ ಸರಿಯಾದ ಸಮಯಕ್ಕೆ ವಿಮಾನ ನಿಲ್ದಾಣಕ್ಕೆ ತಲುಪದಿದ್ದರೆ ಏನು ಗತಿ ಎಂದು ಚಡಪಡಿಸುತ್ತಿದ್ದರು. ಅದೇ ವೇಳೆ ಲಗೇಜ್ ಸಮೇತ ನಿಂತಿದ್ದ ಪ್ರಯಾಣಿಕರನ್ನು ಕೆಎಸ್‌ಆರ್‌ಟಿಸಿ ನಿರ್ವಾಹಕನೋರ್ವ ವಿಚಾರಿಸಿದಾಗ ಅವರು ಫ್ಲೈಬಸ್ ಇನ್ನೂ ಬಂದಿಲ್ಲ ಎಂದು ಹೇಳಿದ್ದಾರೆ.

ಆದರೆ ನಿರ್ವಾಹಕ ಬಸ್ ಇಲ್ಲೇ ನಿಂತಿದೆ ನೋಡಿ ಎಂದು ಐರಾವತ ಬಸ್ ಅನ್ನು ತೋರಿಸಿ, ಅದರಲ್ಲಿ ಹತ್ತುವಂತೆ ತಿಳಿಸಿದ್ದಾನೆ. ಇದು ಫ್ಲೈಬಸ್ ಅಲ್ಲವಲ್ಲ ಎಂದು ಪ್ರಯಾಣಿಕರು ಪ್ರಶ್ನಿಸಿದಾಗ ಬಸ್ ಮುಂಭಾಗ ಚಾಕ್‌ಪೀಸ್‌ನಲ್ಲಿ 'ಇಂಟರ್ ನ್ಯಾಷನಲ್ ಏರ್‌ಪೋರ್ಟ್ ಫ್ಲೈಬಸ್' ಎಂದು ಇಂಗ್ಲಿಷ್‌ನಲ್ಲಿ ಬರೆದಿರುವುದನ್ನು ತೋರಿಸಿದ್ದಾರೆ. ವಿಮಾನದಲ್ಲಿ ವಿದೇಶಕ್ಕೆ ಹೋಗುವ ತರಾತುರಿಯಲ್ಲಿದ್ದ ಪ್ರಯಾಣಿಕರು ಕೆಎಸ್‌ಆರ್‌ಟಿಸಿಗೆ ಹಿಡಿಶಾಪ ಹಾಕಿಕೊಂಡು ಆ ಬಸ್‌ನಲ್ಲಿ ಪ್ರಯಾಣಿಸಿದ್ದಾರೆ. ಕೆಎಸ್‌ಆರ್‌ಟಿಸಿ ಅಧಿಕಾರಿಗಳ ಈ ನಿರ್ಲಕ್ಷ ಧೋರಣೆ ಬಗ್ಗೆ ಮೈಸೂರಿನ ರಾಜೀವ್‌ನಗರ ನಿವಾಸಿ ನದೀಂ ಅಹಮದ್ ಪ್ರತಿಕ್ರಿಯಿಸಿ, ಸೌದಿಗೆ ತೆರಳಿದ 76 ವರ್ಷದ ನಮ್ಮ ಅತ್ತೆಯವರನ್ನು ವಿಮಾನ ನಿಲ್ದಾಣಕ್ಕೆ ಬಿಟ್ಟುಬರಲೆಂದು ಬುಧವಾರ ರಾತ್ರಿ 10 ಗಂಟೆಯಲ್ಲಿ ನಾನೇ ಫ್ಲೈಬಸ್ ಟಿಕೆಟ್ ಬುಕ್ ಮಾಡಿದ್ದೆ. ಇಂದು ಬೆಳಗ್ಗೆ ಹೋದರೆ ಅಲ್ಲಿ ಫ್ಲೈಬಸ್ ಇರಲಿಲ್ಲ. ಆ ಬಗ್ಗೆ ಅಲ್ಲಿದ್ದ ಕೆಎಸ್‌ಆರ್‌ಟಿಸಿ ಸಿಬ್ಬಂದಿ ವಿಚಾರಿಸಿ ದಾಗ ಅಲ್ಲಿ ನಿಂತಿದ್ದ ಐರಾವತ್ ಬಸ್ ತೋರಿಸಿ ಇದೇ ಬಸ್ ಏರ್‌ಪೋರ್ಟ್‌ಗೆ ಹೋಗುವುದು ಎಂದರು. ಆ ಬಸ್ ಚಾಲಕರನ್ನೇ ಕೇಳಿದಾಗ ನಾವೇನು ಮಾಡೋದು ಇದೇ ಬಸ್ ಕೊಟ್ಟಿರುವುದು ಎಂದರು. ಆ ಬಸ್ ಮುಂಭಾಗ ಚಾಕ್‌ಪೀಸ್‌ನಲ್ಲಿ ಫ್ಲೈಬಸ್ ಎಂದು ಬರೆದಿದ್ದರು ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ವಯಸ್ಸಾದವರಿಗೆ ಪ್ರಯಾಣದಿಂದ ಆಯಾಸವಾಗ ಬಾರದು ಎಂಬ ಕಾರಣಕ್ಕೆ ಫ್ಲೈ ಬಸ್ ಬುಕ್ ಮಾಡುತ್ತೇವೆ. ಆದರೆ ಹೀಗೆ ಇದ್ದಕ್ಕಿದ್ದಂತೆ ಬಸ್ ಬದಲಾವಣೆ ಮಾಡಿದರೆ ಆ ಕ್ಷಣಕ್ಕೆ ಏನು ಮಾಡಲು ಸಾಧ್ಯ. ಫ್ಲೈಬಸ್ ದರ 865 ರೂ., ಐರಾವತ ಬಸ್‌ಗೆ 415 ರಿಂದ 461 ರೂ. ಪ್ರಯಾಣ ದರವಿದೆ. ಟಿಕೆಟ್ ದರದಲ್ಲೂ ಇಷ್ಟೊಂದು ವ್ಯತ್ಯಾಸವಿದೆ. ಪ್ರಯಾಣಿಕರಿಗೆ ನಿಗದಿತ ಸೇವೆ ಕಲ್ಪಿಸದೆ ನಿರ್ಲಕ್ಷ ಧೋರಣೆ ತೋರಿದ್ದು ಎಷ್ಟು ಸರಿ. ಈ ಬಗ್ಗೆ ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಸ್ಪಷ್ಟನೆ ನೀಡಬೇಕು. ಫ್ಲೈಬಸ್ ಬದಲಿಗೆ ಐರಾವತ ಬಸ್ ಒದಗಿಸಿದ್ದರಿಂದ ವ್ಯತ್ಯಾಸದ ಟಿಕೆಟ್ ಮೊತ್ತವನ್ನು ಪ್ರಯಾಣಿಕರಿಗೆ ವಾಪಸ್ ನೀಡುವುದರ ಜೊತೆಗೆ ಕೆಎಸ್‌ಆರ್‌ಟಿಸಿ ಪ್ರಯಾಣಿಕರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿರುವ ಅವರು, ಕೆಎಸ್‌ಆರ್‌ಟಿಸಿಯ ವಿರುದ್ಧ ಗ್ರಾಹಕರ ವ್ಯಾಜ್ಯ ಪರಿಹಾರ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸುವುದಾಗಿ ತಿಳಿಸಿದರು.



ಮೈಸೂರು–ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಫ್ಲೈಬಸ್ ಬದಲಿಗೆ ಸಂಚರಿಸಿದ ಐರಾವತ್ ಬಸ್. ಇದರ ಮುಂಭಾಗ ಫ್ಲೈಬಸ್ ಎಂದು ಚಾಕ್‌ಪೀಸ್‌ನಲ್ಲಿ ಬರೆದಿರುವುದುದನ್ನು ಗಮನಿಸಬಹುದು.


ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
Karnataka State Road Transport Corporation
Punch Used Tickets
Ticket No.: 52698887
RESERVATION TICKET
PNR No KS2485029
Date of Journey 22-Aug-2024
Trip Code 0431MYSBIAL
Class FLYBUS
Start Place MYSURU
Boarding Point MYSURU BUS STAND
Departure Time 04:31
Platform No. 1
End Place KEMPEGOWDA INTL AIRPORT
Alighting Point KEMPEGOWDA INTL AIRPORT TERMINAL-1
Name NOOR JOHAN Age 76 Gender F
Conversion Type GENERAL PUBLIC
Ticket Booked Details: MDR,MYSURU BUS STAND, 21 Aug 2024 21:51

ಅರುಣೋದಯ ವಿಶೇಷ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಣೆ



ಅರುಣೋದಯ ವಿಶೇಷ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಿಸಲಾಯಿತು.

ಮೈಸೂರು,ಆ.22–ಮೈಸೂರಿನ ಚಾಮುಂಡಿ ಪುರಂನಲ್ಲಿರುವ ಅರುಣೋದಯ ವಿಶೇಷ ಶಾಲಾ ಮಕ್ಕಳಿಗೆ ಮಹರ್ಷಿ ಶಾಲೆಯ ವ್ಯವಸ್ಥಾಪಕ ಅಧ್ಯಕ್ಷ ಭವಾನಿ ಶಂಕರ್ ಸಮವಸ್ತ್ರ ಹಾಗೂ ಊಟ ವಿತರಿಸಿದರು.

ಬಳಿಕ ಮಾತನಾಡಿದ ಭವಾನಿ ಶಂಕರ್, ವಿಕಲಚೇತನರಿಗೆ ಅನುಕಂಪಕ್ಕಿಂತ ಅವಕಾಶಗಳನ್ನು ಕಲ್ಪಿಸಬೇಕು. ವಿಕಲಚೇತನ ಮಕ್ಕಳ ಪೋಷಣೆ, ಶಿಕ್ಷಣ, ಅಭಿವೃದ್ಧಿಯಲ್ಲಿ ಪೋಷಕರ ಪಾತ್ರವು ಮಹತ್ವದ್ದು, ಅನೇಕ ವಿಕಲಚೇತನರು ಹಲವಾರು ಕ್ಷೇತ್ರಗಳಲ್ಲಿ ಸಾಕಷ್ಟು ಸಾಧನೆ ಮಾಡಿದ್ದಾರೆ. ಅಂತಹ ಸಾಧಕರ ಜೀವನವು ಮಾದರಿಯಾಗಿ ಅನುಸರಿಸಿ, ಕೀಳರಿಮೆ ಹೊಂದದೇ ಉತ್ತಮವಾದುದುನ್ನು ಸಾಧಿಸಲು ಶ್ರಮಿಸಬೇಕು. ಸರ್ಕಾರದ ಸವಲತ್ತುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ನಗರಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮ್‌ಪ್ರಸಾದ್ ಮಾತನಾಡಿ, ಈ ಶಾಲೆಯಲ್ಲಿ ಬುದ್ಧಿಮಾಂದ್ಯ ಹಾಗೂ ವಿಕಲಚೇತನ ಮಕ್ಕಳಿಗೆ ಪ್ರತ್ಯೇಕವಾಗಿ ಆರೈಕೆ ಮಾಡಲಾಗುತ್ತಿದ್ದು, ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಅವರಿಗೆ ವಿಶೇಷ ತರಬೇತಿಯನ್ನೂ ನೀಡಲಾಗುತ್ತಿದೆ. ಇಲ್ಲಿರುವ ಮಕ್ಕಳಲ್ಲಿ ಶೇ.50ರಷ್ಟು ಮಕ್ಕಳು ಕಂಪ್ಯೂಟರ್ ಕಲಿತಿದ್ದಾರೆ. ಅವರಲ್ಲಿರುವ ಪ್ರತಿಭೆಯನ್ನು ಹೊರತರುವುದು ನಮ್ಮ ಉದ್ದೇಶವಾಗಿದೆ ಎಂದರು. ಇದೇ ವೇಳೆ ಭವಾನಿ ಶಂಕರ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಂ ಅಯ್ಯಂಗಾರ್, ಪ್ರಿಯಾಂಕ, ಅಂಕಿತ ಅರುಣೋದಯ ಶಾಲೆಯ ಶಿಕ್ಷಕಿಯರು ಹಾಜರಿದ್ದರು.

ಶ್ರೀ ಗುರುರಾಘವೇಂದ್ರ ಸ್ವಾಮಿ ಆರಾಧನೆ...



ಮೈಸೂರಿನ ಶ್ರೀ ಗುರು ರಾಘವೇಂದ್ರ ಅರಳೀಕಟ್ಟೆ ಸೇವಾ ಸಮಿತಿ, ಮಯೂರ ಸರ್ಕಲ್, ಹೆಬ್ಬಾಳ್ ವತಿಯಿಂದ 353ನೇ ಶ್ರೀ ಗುರು ರಾಘವೇಂದ್ರ ಸ್ವಾಮಿಯ ಆರಾಧನೆ ನಡೆಯಿತು. ಈ ವೇಳೆ ಟ್ರಸ್ಟ್‌ನ ಸದಸ್ಯರಾದ ರಮೇಶ್ ಹೆಬ್ಬಾಳ್, ಅಭಿಷೇಕ್ ರಮೇಶ್, ಮಹೇಶ್ ಮಹಿಂಯುಪ್ಪ, ಚಂದ್ರು, ಯಾದವ್, ನಕುಲ್, ಚನ್ನೇಗೌಡ, ಪ್ರಕಾಶ್, ಲಕ್ಷ್ಮೀಪತಿ, ಜೈರಾಮ್, ವೇಣು ಮತ್ತಿತರರು ಉಪಸ್ಥಿತರಿದ್ದರು.

ನಾಳೆ ಉತ್ತರಾದಿ ಮಠದಲ್ಲಿ ಪವಮಾನ, ನವಗ್ರಹ ಹೋಮ

ಮೈಸೂರು, ಆ.22–ನಗರದ ಕೆಆರ್‌ಎಸ್ ರಸ್ತೆ, ಯಾದವಗಿರಿ, ರೈಲ್ವೆ ಕ್ರೀಡಾಂಗಣದ ಎದುರು ಸಿಎಫ್‌ಟಿಆರ್‌ಐ ಪಕ್ಕದಲ್ಲಿರುವ ಶ್ರೀ ಉತ್ತರಾದಿ ಮಠದ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಶ್ರಾವಣ ಮಾಸದ ಪ್ರಯುಕ್ತ ಆ.24ರಂದು ಸಕಲ ಅನಿಷ್ಟ ನಿವೃತ್ತಿಗಾಗಿ ವಿದ್ವಾನ್ ಶ್ರೀ ಬಾಗೇವಾಡಿ ಆಚಾರ್ಯರವರ ನೇತೃತ್ವದಲ್ಲಿ ಬೆಳಿಗ್ಗೆ 9ರಿಂದ 11ರವರೆಗೆ ಪವಮಾನ ಹಾಗೂ ನವಗ್ರಹ ಹೋಮ, ಪ್ರಾಣ ದೇವರಿಗೆ ಮಧು ಅಭಿಷೇಕ, ರೇಷ್ಮೆ ವಸ್ತ್ರ ಸೇವೆಯನ್ನು ಏರ್ಪಡಿಸಲಾಗಿದೆ ಎಂದು ಮಠದ ವ್ಯವಸ್ಥಾಪಕ ಶ್ರೀ ಅನಿರುದ್ಧಾಚಾರ್ಯ ಪಾಂಡುರಂಗಿ ತಿಳಿಸಿದ್ದಾರೆ. ಕಾರ್ಯಕ್ರಮಕ್ಕೆ ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ.ರಾಜೀವ್ ಪಾಲ್ಗೊಳ್ಳಲಿದ್ದಾರೆ. ವಿವರಗಳಿಗೆ ಮೊ.9686978861

ಸಹಜ ಸ್ಥಿತಿಗೆ ಬಾರದ ಬಾಂಗ್ಲಾದೇಶ; ಪತ್ರಕರ್ತರ ಬಂಧನ, ಹಿಂದೂ ಶಿಕ್ಷಕರ ರಾಜೀನಾಮೆಗೆ ಒತ್ತಡ



ಅಜೀಂಪುರ ಸರ್ಕಾರಿ ಬಾಲಕಿಯರ ಕಾಲೇಜಿನ ಪ್ರಾಂಶುಪಾಲೆ ಗೀತಾಂಜಲಿ ಬರುವಾ ಅವರನ್ನು ಮರಕ್ಕೆ ಕಟ್ಟಿ ಹಾಕಿರುವುದು.

ನವದೆಹಲಿ: ಸುಮಾರು ಎರಡು ವಾರಗಳ ಹಿಂದೆ ಬಾಂಗ್ಲಾದೇಶದಲ್ಲಿ ಮಧ್ಯಂತರ ಸರ್ಕಾರ ರಚನೆಯಾಗಿದ್ದರೂ, ಪರಿಸ್ಥಿತಿ ಇನ್ನೂ ಸಹಜ ಸ್ಥಿತಿಗೆ ಮರಳಿಲ್ಲ. ಪತ್ರಕರ್ತರನ್ನು ಬಂಧಿಸಲಾಗುತ್ತಿದೆ ಮತ್ತು ಹಿಂದೂ ಶಿಕ್ಷಕರು ಕೆಲಸ ಕಳೆದುಕೊಳ್ಳುತ್ತಿದ್ದಾರೆ. ವಿದ್ಯಾರ್ಥಿಗಳು ಜಾಗೃತ ಗುಂಪುಗಳನ್ನು ರಚಿಸಿಕೊಂಡಿದ್ದು, ತಮ್ಮನ್ನು ಹೇಗೆ ನಡೆಸಿಕೊಳ್ಳಬೇಕೆಂದು ನಾಗರಿಕರಿಗೆ ಉಪದೇಶ ನೀಡುತ್ತಿದ್ದಾರೆ. ಮಾಜಿ ಪ್ರಧಾನಿ ಶೇಕ್ ಹಸೀನಾ ನೇತೃತ್ವದ ಆಡಳಿತಕ್ಕೆ ನಿಕಟವಾಗಿದ್ದ ಪತ್ರಕರ್ತರನ್ನು ಅಪರಾಧಿಗಳೆಂದು ಪರಿಗಣಿಸಲಾಗುತ್ತಿದೆ. ಖಾಸಗಿ ಚಾನೆಲ್‌ನ ಮಾಜಿ ಸಂಪಾದಕ ಶಕೀಲ್ ಅಹ್ಮದ್ ಮತ್ತು ಅವರ ಪತ್ನಿ ಫರ್ಜಾನಾ ರೂಪಾ ಹಾಗೂ ಮತ್ತೊಬ್ಬ ಪತ್ರಕರ್ತರನ್ನು ಬುಧವಾರ ಫ್ರಾನ್ಸ್‌ಗೆ ತೆರಳಲು ಪ್ರಯತ್ನಿಸುತ್ತಿದ್ದಾಗ ಅವರನ್ನು ಢಾಕಾ ವಿಮಾನ ನಿಲ್ದಾಣದಲ್ಲಿ ಬಂಧಿಸಲಾಗಿದೆ.

ವಿವಿಧ ಶಾಲಾ–ಕಾಲೇಜುಗಳ ಸುಮಾರು 70 ಹಿಂದೂ ಶಿಕ್ಷಕರಿಗೆ ರಾಜೀನಾಮೆ ನೀಡುವಂತೆ ಒತ್ತಾಯಿಸಲಾಗಿದೆ. ಇವರಲ್ಲಿ ಅಜೀಂಪುರ ಸರ್ಕಾರಿ ಬಾಲಕಿಯರ ಶಾಲೆ ಮತ್ತು ಕಾಲೇಜಿನ ಪ್ರಾಂಶುಪಾಲೆ ಗೀತಾಂಜಲಿ ಬರುವಾ ಅವರಿಗೆ ರಾಜೀನಾಮೆ ನೀಡುವಂತೆ ಒತ್ತಾಯಿಸಿ ವಿದ್ಯಾರ್ಥಿನಿಯರು ಮರಕ್ಕೆ ಕಟ್ಟಿ ಹಾಕಿದ್ದರು. ಸೇನೆ ಮಧ್ಯಪ್ರವೇಶಿಸಿ ಅವರನ್ನು ರಕ್ಷಿಸಿದೆ.

ರಾಜ್ಯಪಾಲರ ವಿರುದ್ಧ ಕಾಂಗ್ರೆಸ್ ನಾಯಕರ ಅವಹೇಳನಕಾರಿ ಹೇಳಿಕೆಗೆ ಬಿಜೆಪಿ ಕಿಡಿ

ಮೈಸೂರಿನ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟನೆ



ರಾಜ್ಯಪಾಲರ ವಿರುದ್ಧ ಕಾಂಗ್ರೆಸ್ ನಾಯಕರ ಅವಹೇಳನಕಾರಿ ಹೇಳಿಕೆ ಖಂಡಿಸಿ ಬಿಜೆಪಿ ಕಾರ್ಯಕರ್ತರು ಮೈಸೂರಿನ ಗಾಂಧಿ ವೃತ್ತದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ಮೈಸೂರು, ಆ.22(ಬಿಎಲ್‌ಯು)– ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಿರುದ್ಧ ಕಾಂಗ್ರೆಸ್ ನಾಯಕರು ನೀಡುತ್ತಿರುವ ಅವಹೇಳನಕಾರಿ ಹೇಳಿಕೆ ಖಂಡಿಸಿ ಬಿಜೆಪಿ ಕಾರ್ಯಕರ್ತರು ಮೈಸೂರಿನಲ್ಲಿ ಇಂದು ಪ್ರತಿಭಟನೆ ನಡೆಸಿದರು.

ನಗರದ ಗಾಂಧಿ ವೃತ್ತದ ಮಹಾತ್ಮ ಗಾಂಧಿ ಪ್ರತಿಮೆ ಮುಂದೆ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು, ಕಾಂಗ್ರೆಸ್ ನಾಯಕರ ದಲಿತ ವಿರೋಧಿ ನೀತಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಹುಲ್ ಗಾಂಧಿ, ಡಿ.ಕೆ.ಶಿವಕುಮಾರ್, ಕೃಷ್ಣಭೈರೇಗೌಡ, ಜಮೀರ್ ಅಹಮ್ಮದ್, ಐವಾನ್ ಡಿಸೋಜಾ ಭಾವಚಿತ್ರಗಳಲ್ಲಿ ಅವಹೇಳನಕಾರಿ ಹೇಳಿಕೆ ನೀಡದಂತೆ ಎಚ್ಚರಿಸುವ ಬ್ಯಾನರ್ ಹಾಕಲಾಗಿತ್ತು.

ಸಂವಿಧಾನಾತ್ಮಕ ಹುದ್ದೆಯಲ್ಲಿರುವ ರಾಜ್ಯಪಾಲರ ವಿರುದ್ಧ ಕಾಂಗ್ರೆಸ್ ನಾಯಕರು ಅಗೌರವದಿಂದ ಮಾತ ನಾಡುತ್ತಿದ್ದು, ಇದು ಅವರ ಸಂಸ್ಕೃತಿ ಬಿಂಬಿಸುತ್ತದೆ ಎಂದು ಪ್ರತಿಭಟನಾ ಕಾರರು ಕಿಡಿಕಾರಿದರು.

ಖಾಸಗಿ ದೂರಿನ ಹಿನ್ನೆಲೆಯಲ್ಲಿ ರಾಜ್ಯಪಾಲರು ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಕಾನೂನು ಪ್ರಕಾರ ರಾಜ್ಯಪಾಲರು ಕ್ರಮ ಕೈಗೊಂಡಿದ್ದಾರೆ. ಆದರೆ ರಾಜ್ಯಪಾಲರು ಕೈಗೊಂಡಿರುವ ಕ್ರಮ ತಪ್ಪೆಂದು ಕಾಂಗ್ರೆಸ್ ನಾಯಕರು ವಿರೋಧಿಸುತ್ತಿರುವುದು ಸರಿಯಲ್ಲ ಎಂದು ಬಿಜೆಪಿ ನಗರಾಧ್ಯಕ್ಷ ನಾಗೇಂದ್ರ ಹೇಳಿದರು.

'ಮುಡಾದಲ್ಲಿ ನುಂಗಿದರಣ್ಣ, ನುಂಗಿದರಣ್ಣ, ಸಿದ್ದರಾಮಣ್ಣ, ನುಂಗಿದರಣ್ಣ' ಎಂಬ ಘೋಷಣೆಗಳನ್ನು ಕೂಗಿ ಕಾಂಗ್ರೆಸ್ ವಿರುದ್ಧ ಆಕ್ರೋಶ ಹೊರ ಹಾಕಿದರು.

ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಸಂಸದ ಪ್ರತಾಪ್ ಸಿಂಹ, ಮಾಜಿ ಮೇಯರ್ ಸಂದೇಶ್ ಸ್ವಾಮಿ, ಬಿಜೆಪಿ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ಆರ್.ರಘು, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಮುಖಂಡರಾದ ಎನ್.ವಿ.ಫಣೀಶ್, ಶಿವಕುಮಾರ್, ಮಿರ್ಲೆ ಶ್ರೀನಿವಾಸ್, ಎಂ.ಯು.ಸುಬ್ಬಯ್ಯ, ಪ್ರಮೀಳಾ ಭರತ್, ಲೋಲಪ್ಪ ನಾರಾಯಣ್ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿದ್ದರು.

ನನ್ನ ಮಾತು ಕೇಳಿದ್ದರೆ ಇವತ್ತು ಸಿದ್ದರಾಮಯ್ಯ ಕುತ್ತಿಗೆಗೆ ಬರುತ್ತಿರಲಿಲ್ಲ

ಮುಖ್ಯಮಂತ್ರಿ ಸಿದ್ದರಾಮಯ್ಯ ನನ್ನ ಮಾತು ಕೇಳಿ ಅಂದು ಮುಡಾ ನಿವೇಶನಗಳನ್ನು ವಾಪಸು ನೀಡಿದ್ದರೆ ಇವತ್ತು ಈ ಹಗರಣ ಅವರ ಕುತ್ತಿಗೆಗೆ ಬರುತ್ತಿರಲಿಲ್ಲ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಹೇಳಿದರು.

14 ನಿವೇಶನ ವಾಪಸು ನೀಡಿ, ಈ ಮೂಲಕ ಮುಡಾ ದಲ್ಲಿ ನಡೆಯುತ್ತಿರುವ ಹಗರಣದ ವಿರುದ್ಧ ಕ್ರಮ ಕೈಗೊಳ್ಳಲು ನೀವೇ ಮುಂದಾಗಿ ಎಂದು ಸಿದ್ದರಾಮಯ್ಯಗೆ ಗಿಣಿಗೆ ಹೇಳಿದಂತೆ ಹೇಳಿದೆ. ಆದರೆ ನನ್ನ ಮಾತು ಕೇಳಲಿಲ್ಲ. ಅಂದು ನನ್ನ ಮಾತು ಕೇಳಿ ನಿವೇಶನ ವಾಪಸು ನೀಡಿದ್ದರೆ ಇವತ್ತು ಅವರ ಕುತ್ತಿಗೆಗೆ ಬರುತ್ತಿರಲಿಲ್ಲ ಎಂದರು.

ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನದಲ್ಲಿ ಕೂರಲು ಯೋಗ್ಯರಲ್ಲ. ಅರವಿಂದ ಕೇಜ್ರಿವಾಲ್‌ರಂತೆ ಮೊಂಡುತನ ಬಿಟ್ಟು, ಈಗಾ ಲಾದರೂ ರಾಜೀನಾಮೆ ನೀಡಲಿ ಎಂದು ಆಗ್ರಹಿಸಿದರು.

ರಾಜ್ಯಪಾಲರು ತಮ್ಮ ಕರ್ತವ್ಯ ನಿರ್ವಹಿಸಿದ್ದಾರೆ. ಆದರೆ ಕಾಂಗ್ರೆಸ್‌ನವರು ರಾಜ್ಯಪಾಲರ ಬಗ್ಗೆ ಅಗೌರವದಿಂದ ಮಾತ ನಾಡುತ್ತಿದ್ದಾರೆ. ದಲಿತ ಸಮುದಾಯದಿಂದ ಬಂದ ಥಾವರ್ ಚಂದ್ ಗೆಹ್ಲೋಟ್ ಬಗ್ಗೆ ಕಾಂಗ್ರೆಸ್ ತಾತ್ಸಾರ ಮನೋಭಾವ ತಾಳಿದ್ದು, ದಲಿತರ ಬಗ್ಗೆ ಕಾಂಗ್ರೆಸ್ ಗೆ ಇರುವ ಕಾಳಜಿ ಯಾವ ರೀತಿ ಇದೆ ಎಂಬುದನ್ನು ತೋರಿಸುತ್ತದೆ ಎಂದು ಆರೋಪಿಸಿದರು.

ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ವೇಳೆ ಅಂದಿನ ರಾಜ್ಯಪಾಲರು ಪುಡಾರಿಯಂತೆ ಹೇಳಿಕೆ ನೀಡುತ್ತಿದ್ದರು. ರಾಜಭವನ ಕಾಂಗ್ರೆಸ್ ಕಚೇರಿಯಾಗಿತ್ತು. ಆದರೆ ನಮ್ಮ ರಾಜ್ಯಪಾಲರು ಆ ರೀತಿ ನಡೆದುಕೊಳ್ಳುತ್ತಿಲ್ಲ. ವಾಲ್ಮೀಕಿ ಹಗರಣ ಬಹಿರಂಗವಾದಾಗ ಕೂಡ ಸರ್ಕಾರವನ್ನು ಟೀಕಿಸಿಲ್ಲ, ಜೊತೆಗೆ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಕೂಡ ಆಗ್ರಹಿಸಿಲ್ಲ ಎಂದರು.

ಖಾಸಗಿ ದೂರು ಬಂದಾಗ ಸಹಜವಾಗಿಯೇ ರಾಜ್ಯಪಾಲರು ನೋಟಿಸ್ ಜಾರಿ ಮಾಡಿ ವಿವರಣೆ ಪಡೆದಿದ್ದಾರೆ. ಅದು ಸಮರ್ಥ ವಾಗಿಲ್ಲದ ಕಾರಣ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಿದ್ದಾರೆ. ಆದರೆ ಇದು ತಪ್ಪೆಂದು ಕಾಂಗ್ರೆಸ್ ಆರೋಪಿಸುತ್ತಿರುವುದು ಸರಿಯಲ್ಲ ಎಂದರು. ಬಾಂಗ್ಲಾದಂತೆ ರಾಜಭವನದ ಮೇಲೆ ದಾಳಿ ಮಾಡಬೇಕು ಎಂಬ ವಿಧಾನಪರಿಷತ್ ಸದಸ್ಯ ಐವಾನ್ ಡಿಸೋಜಾ ಹೇಳಿಕೆಗೆ ಪ್ರತಾಪ್ ಸಿಂಹ ಕಿಡಿಕಾರಿದರು.

ಸಿ.ಎಚ್.ವಿಜಯಶಂಕರ್ ಅವರಿಗೆ ಅಭಿನಂದನೆ...



ಮೇಘಾಲಯ ರಾಜ್ಯಪಾಲರಾದ ಸಿ.ಎಚ್.ವಿಜಯ ಶಂಕರ್ ಅವರನ್ನು ಮೈಸೂರು ಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು ಅಭಿನಂದಿಸಿದರು. ಈ ವೇಳೆ ಒಂಟಿಕೊಪ್ಪಲ್ ರಾಜು ಇದ್ದರು.

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಪ್ರಯುಕ್ತ ಸನ್ಮಾನ



ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ನಡೆದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಹಿರಿಯ ಕಲಾವಿದೆ ಡಾ. ರಾಮೇಶ್ವರಿ ವರ್ಮ ಅವರನ್ನು ಸನ್ಮಾನಿಸಲಾಯಿತು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಉಪಾಧ್ಯಕ್ಷ ಎನ್. ಅನಂತ, ಕಾರ್ಯದರ್ಶಿ ಲತಾ ಮೋಹನ್, ಮೋಹನ್, ವ್ಯಂಗ್ಯ ಚಿತ್ರಕಾರ ಎಂ ವಿ ನಾಗೇಂದ್ರ ಬಾಬು ಹಾಗೂ ಹರ್ಷವರ್ಧನ ಉಪಸ್ಥಿತರಿದ್ದರು.

ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಗೆ ಸಮಗ್ರ ಕ್ರೀಡಾ ಪ್ರಶಸ್ತಿ



ಸುತ್ತೂರಿನಲ್ಲಿ ಆಯೋಜಿಸಿದ್ದ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ಸುತ್ತೂರು ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ ಕ್ರೀಡಾಪಟುಗಳು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ 149 ಅಂಕ ಗಳಿಸುವುದರೊಂದಿಗೆ ಸಮಗ್ರ ಪ್ರಶಸ್ತಿ ಪಡೆದಿದ್ದಾರೆ.

ಸುತ್ತೂರು, ಆ. 22– ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ನಂಜನಗೂಡು ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾರೋಪುರ ಇವರ ಸಹಯೋಗದಲ್ಲಿ ಸುತ್ತೂರಿನಲ್ಲಿ ಆಯೋಜಿಸಿದ್ದ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ಸುತ್ತೂರು ಜೆಎಸ್‌ಎಸ್ ಹಿರಿಯ ಪ್ರಾಥಮಿಕ ಶಾಲೆಯ ಕ್ರೀಡಾಪಟುಗಳು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ 149 ಅಂಕಗಳಿಸುವುದರೊಂದಿಗೆ ಸಮಗ್ರ ಪ್ರಶಸ್ತಿ ಪಡೆದಿರುತ್ತಾರೆ.

ಬಾಲಕರ ವಿಭಾಗದ ಖೋಖೋ, ಕಬಡ್ಡಿ, ವಾಲಿಬಾಲ್, ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಗಳಲ್ಲಿ ಪ್ರಥಮ ಸ್ಥಾನ ಮತ್ತು ಥ್ರೋಬಾಲ್ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಬಾಲಕಿಯರ ವಿಭಾಗದ ಥ್ರೋಬಾಲ್, ಕಬಡ್ಡಿ ಮತ್ತು ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಗಳಲ್ಲಿ ಪ್ರಥಮ ಸ್ಥಾನ ಹಾಗೂ ಖೋಖೋ, ವಾಲಿಬಾಲ್ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ.

ಬಾಲಕರ ಅಥ್ಲೆಟಿಕ್ಸ್ ವಿಭಾಗದಲ್ಲಿ ಬೀಟಾರಾಜ್–ಎತ್ತರ ಜಿಗಿತ, 100 ಮೀ ಓಟ, ಉದ್ದಜಿಗಿತದಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ವೈಯಕ್ತಿಕ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾನೆ. ಮೋಹಿತ್‌ಕುಮಾರ್ ಮೆಹತೊ –200 ಮೀ. ಓಟ, ಗುಂಡು ಎಸೆತ, ತಟ್ಟೆ ಎಸೆತದಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ವೈಯಕ್ತಿಕ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾನೆ.

ಬಾಲಕರ ವಿಭಾಗದಲ್ಲಿ ಮಹಂತೇಶ್ ನಾಯಕ್ – 400 ಮೀಟರ್ ಓಟದಲ್ಲಿ ಪ್ರಥಮ, ಗುರುಪ್ರಸಾದ್–600 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ.

ಬಾಲಕಿಯರ ವಿಭಾಗದಲ್ಲಿ ಸೊಹಕಾ–ಗುಂಡು ಎಸೆತ ಪ್ರಥಮ, ತಟ್ಟೆ ಎಸೆತ ದ್ವಿತೀಯ, ಲೈಸರಾಮ್ ಜೀನಲಕ್ಷ್ಮಿ ದೇವಿ –ಎತ್ತರ ಜಿಗಿತ ಪ್ರಥಮ, ಉದ್ದಜಿಗಿತ ದ್ವಿತೀಯ, ಅಂಜು–400 ಮೀಟರ್ ಓಟದಲ್ಲಿ ದ್ವಿತೀಯ, ಸಾರಾ–600 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ.

ದಸರಾದಲ್ಲಿ ಅತಿಥಿಗಳಿಗೆ ಸಮರ್ಪಕ ಸೇವೆ ಒದಗಿಸಿ

ಹೋಟೆಲ್ ಪ್ರತಿನಿಧಿಗಳಿಗೆ ಎಡಿಸಿ ಡಾ.ಶಿವರಾಜ್ ಸೂಚನೆ



ಎಡಿಸಿ ಡಾ.ಶಿವರಾಜ್, ಹೋಟೆಲ್ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದರು.

ಮೈಸೂರು, ಆ.22(ಬಿಎಲ್‌ಯು)– ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದ ಸಂದರ್ಭದಲ್ಲಿ ಹೋಟೆಲ್‌ಗಳಲ್ಲಿ ಅತಿಥಿಗಳಿಗೆ ಸಮರ್ಪಕ ಸೇವೆ ಒದಗಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್ ಹೋಟೆಲ್ ಪ್ರತಿನಿಧಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಇಂದು ದಸರಾ ಹಿನ್ನೆಲೆ ಹೋಟೆಲ್ ಪ್ರತಿನಿಧಿಗಳ ಜೊತೆ ನಡೆಸಿದ ಸಭೆಯಲ್ಲಿ ಮಾತನಾಡಿದ ಅವರು, ಯಾವುದೇ ಲೋಪವಾಗದಂತೆ ಉತ್ತಮ ರೀತಿಯಲ್ಲಿ ಅತಿಥಿ ಸತ್ಕಾರ ಮಾಡಬೇಕು ಎಂದು ಸಲಹೆ ನೀಡಿದರು. ದಸರಾ ನಮ್ಮ ಸಾಂಸ್ಕೃತಿಕ ಹೆಮ್ಮೆಯ ಪ್ರತೀಕವಾಗಿದ್ದು, ದೇಶ ವಿದೇಶದಿಂದ ಲಕ್ಷಾಂತರ ಜನರು ಆಗಮಿಸುತ್ತಾರೆ. ಜೊತೆಗೆ ಪ್ರತಿಷ್ಠಿತ ವ್ಯಕ್ತಿಗಳು ಕೂಡ ದಸರಾದಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ಹಿನ್ನೆಲೆ ಯಾವುದೇ ಲೋಪವಾಗದಂತೆ ಉತ್ತಮ ರೀತಿಯಲ್ಲಿ ಅತಿಥಿ ಸತ್ಕಾರ ಮಾಡಬೇಕು ಎಂದು ಹೇಳಿದರು.

ಕೊಠಡಿಗಳ ನಿರ್ವಹಣೆಯನ್ನು ಕೂಡ ನಡೆಸಿ ಯಶಸ್ವಿಯಾಗಿ ದಸರಾ ನಡೆಸಲು ಸಹಕರಿಸಬೇಕು ಎಂದು ಕೋರಿದರು.

ಉಪವಿಭಾಗಾಧಿಕಾರಿ ರಕ್ಷಿತ್, ತಹಶೀಲ್ದಾರ್ ಮಹೇಶ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಇನ್ನಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

ಹೆಲ್ಪಿಂಗ್ ಹ್ಯಾಂಡ್ಸ್‌ನಿಂದ ಸ್ವೆಟರ್ ವಿತರಣೆ



ಮೈಸೂರಿನ ಹೆಲ್ಪಿಂಗ್ ಹ್ಯಾಂಡ್ಸ್ ತನ್ನ ಶಿಕ್ಷಾ ಯೋಜನೆಯಡಿ ಬಡ ವಿದ್ಯಾರ್ಥಿಗಳಿಗೆ ದಿವಂಗತ ಬವಾರಿದೇವಿ ಬವರಲಾಲ್ ಬಂದ್ ಮುತಾ ಅವರ ಸ್ಮರಣಾರ್ಥ ಉಚಿತವಾಗಿ ಸ್ವೆಟರ್‌ಗಳನ್ನು ವಿತರಿಸಿತು. ಹೆಲ್ಪಿಂಗ್ ಹ್ಯಾಂಡ್ಸ್ ಅಧ್ಯಕ್ಷ ಮಹಾವೀರ ಖಾಬಿಯಾ, ಕಾರ್ಯದರ್ಶಿ ಆನಂದ್ ಪಟ್ವಾ, ಖಜಾಂಚಿ ರಾಜನ್ ಬಾಗ್‌ಮಾರ್, ಸದಸ್ಯರಾದ ಮನೋಹರ್ ಸಂಕಲ, ಪ್ರಕಾಶ್ ಗಾಂಧಿ, ಗೌತಮ್ ಗಾಂಧಿ, ಶಾಂತಿ ಮುತಾ, ಪ್ರಾಯೋಜಕರಾದ ಬವರಿದೇವಿ ಬಂದ್ ಮುತ್ತಾ ಕುಟುಂಬಸ್ಥರಾದ ಮಹಾವೀರ್, ವಿಕ್ರಮ್, ವಕೀಲ ಹರೀಶ್ ಮತ್ತಿತರರು ಉಪಸ್ಥಿತರಿದ್ದರು.

ದೇಶ - ವಿದೇಶ

ಡೆಮಾಕ್ರಟಿಕ್ ನ್ಯಾಷನಲ್ ಸಭೆಯಲ್ಲಿ ಮೊಳಗಿದ ಹಿಂದೂ ಶಾಂತಿ ಮಂತ್ರ

ಚಿಕಾಗೋ: ಅಮೆರಿಕದ ಚಿಕಾಗೋದಲ್ಲಿ ಡೆಮಾಕ್ರಟಿಕ್ ನ್ಯಾಶನಲ್ ಕನ್ವೆನ್ಷನ್‌ನ ಮೂರನೇ ದಿನದ ಸಮಾವೇಶದಲ್ಲಿ ಹಿಂದೂ ಪ್ರಾರ್ಥನೆಗಳು ಓಂ ಶಾಂತಿ ಓಂ ಮೊಳಗಿದ್ದು ವಿಶೇಷವಾಗಿತ್ತು.



ಅಮೆರಿಕಾದ ಮಾಜಿ ಅಧ್ಯಕ್ಷ ಬಿಲ್ ಕ್ಲಿಂಟನ್, ಮಾಜಿ ಯುಎಸ್ ಹೌಸ್ ಸ್ಪೀಕರ್ ನ್ಯಾನ್ಸಿ ಪೆಲೋಸಿ, ಅಮೇರಿಕನ್ ಹೋಸ್ಟ್ ಮತ್ತು ಟೆಲಿವಿಷನ್ ನಿರ್ಮಾಪಕ ಓಪ್ರಾ ವಿನ್ಫ್ರೇ ಮತ್ತು ಕಮಲಾ ಹ್ಯಾರಿಸ್ ಅವರ ಸಹವರ್ತಿ ಟಿಮ್ ವಾಲ್ಜ್ ಚಿಕಾಗೋದಲ್ಲಿ ನಡೆದ ಡೆಮಾಕ್ರಟಿಕ್ ಕನ್ವೆನ್ಷನ್‌ನ ಮೂರನೇ ದಿನದ ಪ್ರಮುಖ ಭಾಷಣಕಾರರಾಗಿದ್ದರು. ಯುಎಸ್ ಮಾಜಿ ಅಧ್ಯಕ್ಷ ಬಿಲ್ ಕ್ಲಿಂಟನ್ ಮುಂಬರುವ ಯುಎಸ್ ಅಧ್ಯಕ್ಷೀಯ ಚುನಾವಣೆಗೆ ಡೆಮಾಕ್ರಟಿಕ್ ಅಭ್ಯರ್ಥಿ ಕಮಲಾ ಹ್ಯಾರಿಸ್‌ಗೆ ತಮ್ಮ ಬೆಂಬಲಿಸುವಂತೆ ಅಮೆರಿಕನ್ನರನ್ನು ಒತ್ತಾಯಿಸಿದರು. ನಮ್ಮಲ್ಲಿ ಭಿನ್ನಾಭಿಪ್ರಾಯಗಳಿದ್ದರೂ, ರಾಷ್ಟ್ರದ ವಿಷಯಕ್ಕೆ ಬಂದಾಗ, ನಾವು ಒಗ್ಗಟ್ಟಾಗಿರಬೇಕು ಮತ್ತು ಅದು ಎಲ್ಲರಿಗೂ ನ್ಯಾಯದ ಕಡೆಗೆ ನಮ್ಮನ್ನು ಕರೆದುಕೊಂಡು ಹೋಗುತ್ತದೆ ಎಂದು ಭಾರತೀಯ–ಅಮೆರಿಕನ್ ಅರ್ಚಕ ರಾಕೇಶ್ ಭಟ್ ಹೇಳಿದರು.

ಒಂದು ಜೀವ ಹೋಗಿದೆ ನಗಬೇಡಿ, ಕಪಿಲ್ ಸಿಬಲ್‌ಗೆ ಸಾಲಿಸಿಟರ್ ತುಷಾರ್ ಮೆಹ್ತಾ ತರಾಟೆ

ನವದೆಹಲಿ: ಪಶ್ಚಿಮ ಬಂಗಾಳದ ಕೋಲ್ಕತ್ತಾದಲ್ಲಿ ಟ್ರೈನಿ ವೈದ್ಯೆಯ ಮೇಲೆ ನಡೆದ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ಪೊಲೀಸರ ವರ್ತನೆಗೆ ಸುಪ್ರೀಂಕೋರ್ಟ್ ಛೀಮಾರಿ ಹಾಕಿದೆ. ಈ ಬಗ್ಗೆ ವಿಚಾರಣೆ ವೇಳೆ ಅಭಿಪ್ರಾಯ ವ್ಯಕ್ತಪಡಿಸಿದ ನ್ಯಾಯಮೂರ್ತಿ ಪರ್ದಿವಾಲಾ ಅವರು ಈ ಪ್ರಕರಣ ಅತ್ಯಂತ ಆಘಾತಕಾರಿಯಾಗಿದೆ. ಕಳೆದ 30 ವರ್ಷಗಳಲ್ಲಿ ಇಂತಹ ಪ್ರಕರಣವನ್ನು ನಾವು ನೋಡಿಲ್ಲ ಎಂದು ಹೇಳಿದ್ದಾರೆ. ಇದೇ ವಿಚಾರಣೆ ವೇಳೆ ಪಶ್ಚಿಮ ಬಂಗಾಳದ ಸರ್ಕಾರ ಪರ ವಕೀಲ ಕಪಿಲ್ ಸಿಬಲ್ ನಕ್ಕಿದ್ದಾರೆ. ಇದನ್ನು ಗಮನಿಸಿದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಒಂದು ಜೀವ ಹೋಗಿದೆ, ಯಾರೋ ಪ್ರಾಣ ಕಳೆದುಕೊಂಡಿದ್ದಾರೆ, ನಗಬೇಡಿ ಎಂದು ಸುಪ್ರೀಂಕೋರ್ಟ್‌ನಲ್ಲಿ ಬಂಗಾಳ ಸರ್ಕಾರದ ವಕೀಲ ಕಪಿಲ್ ಸಿಬಲ್ ಅವರನ್ನು ತರಾಟೆಗೆ ತೆಗೆದುಕೊಂಡರು. ಇದೇ ವೇಳೆ ಅಲ್ಲಿ ನ್ಯಾಯಾಧೀಶರು ಸೇರಿದಂತೆ ಸಾಕಷ್ಟು ವಕೀಲರು ಕೂಡ ನೆರೆದಿದ್ದರು.



ಹುಲಿ ಆವರಣಕ್ಕೆ ನುಗ್ಗಿದ ಮಹಿಳೆ

ನ್ಯೂಜೆರ್ಸಿ: ಬೃಹತ್ ಗಾತ್ರದ ಬೆಂಗಾಲ್ ಟೈಗರ್ ಇದ್ದ ಬೋನಿನೊಳಗೆ ಮಹಿಳೆಯೊಬ್ಬರು ಅಕ್ರಮ ಪ್ರವೇಶ ಮಾಡಿ ಪ್ರಾಣಕ್ಕೆ ಸಂಚಕಾರ ತಂದುಕೊಂಡಿದ್ದ ಆಘಾತಕಾರಿ ಘಟನೆ ಅಮೆರಿಕದಲ್ಲಿ ನಡೆದಿದೆ.



ಅಮೆರಿಕದ ನ್ಯೂಜೆರ್ಸಿಯ ಕೊಹನ್‌ಜಿಕ್ ಮೃಗಾಲಯಕ್ಕೆ ಭೇಟಿ ನೀಡಿದ್ದ ಮಹಿಳೆ ನೋಡ ನೋಡುತ್ತಲೇ ಬೇಲಿ ಹಾರಿ ಬಂಗಾಳ ಹುಲಿ ಆವರಣದೊಳಗೆ ಹೋಗಿದ್ದಾರೆ. ಈ ವೇಳೆ ಮಹಿಳೆ ಬೃಹತ್ ಗಾತ್ರದ ಹುಲಿಯನ್ನು ಮುಟ್ಟಲು ಪ್ರಯತ್ನಿಸಿದ್ದು, ಹುಲಿ ಆಕೆಯನ್ನು ಇನ್ನೇನು ಹಿಡಿದೇ ಬಿಟ್ಟಿತು ಎನ್ನುವಷ್ಟರಲ್ಲಿ ಅಲ್ಲಿನ ಸಿಬ್ಬಂದಿ ಜೋರಾಗಿ ಕೂಗಿದ್ದಾರೆ. ಈ ವೇಳೆ ಎಚ್ಚೆತ್ತ ಮಹಿಳೆ ಮತ್ತೆ ಹಿಂದಕ್ಕೆ ಹೋಗಿ ಹುಲಿ ಇದ್ದ ತಂತಿ ಬೇಲಿಯಿಂದ ಹೊರಗೆ ಬಂದಿದ್ದಾಳೆ. ಈ ಪ್ರಕರಣದ ಬೆನ್ನಲ್ಲೇ ಸ್ಥಳೀಯ ರಕ್ಷಣಾ ಸಿಬ್ಬಂದಿ ಮೃಗಾಲಯದಲ್ಲಿ ಯಾವುದೇ ಕಾರಣಕ್ಕೂ ಫೆನ್ಸಿಂಗ್ ದಾಟಿ ಮುಂದೆ ಹೋಗದಂತೆ ಎಚ್ಚರಿಕೆ ನೀಡಿದ್ದಾರೆ. ಒಂದು ವೇಳೆ ನಿಯಮ ದಾಟಿ ಹೋದರೆ ಅಂತಹವರನ್ನು ಕಾನೂನಾತ್ಮಕವಾಗಿ ಶಿಕ್ಷಿಸಲಾಗುತ್ತದೆ ಮತ್ತು ಮೃಗಾಲಯ ಪ್ರವೇಶಿಸದಂತೆ ನಿಷೇಧಿಸಲಾಗುತ್ತದೆ ಎಂದೂ ಎಚ್ಚರಿಕೆ ನೀಡಿದ್ದಾರೆ.

ತಮಿಳಗ ವೆಟ್ರಿ ಕಳಗಂ ಪಕ್ಷದ ಧ್ವಜ, ಚಿಹ್ನೆ ರಿವೀಲ್ ಮಾಡಿದ ವಿಜಯ್

ಚೆನ್ನೈ: 2026ರಲ್ಲಿ ತಮಿಳುನಾಡಿನಲ್ಲಿ ನಡೆಯಲಿರುವ ವಿಧಾನಸಭೆ ಚುನಾವಣೆಗೂ ಮುನ್ನ ಅಲ್ಲಿನ ರಾಜಕೀಯ ರಂಗದಲ್ಲಿ ಮಹತ್ವದ ಬೆಳವಣಿಗೆಯಾಗಿದೆ. ಈ ಹಿಂದೆ ರಾಜಕೀಯಕ್ಕೆ ಎಂಟ್ರಿ ಕೊಡೋದಾಗಿ ಹೇಳಿದ್ದ ದಳಪತಿ ವಿಜಯ್, ಇದೀಗ ಅಧಿಕೃತವಾಗಿ ಪಾಲಿಟಿಕ್ಸ್‌ಗೆ ಎಂಟ್ರಿ ಕೊಟ್ಟಿದ್ದಾರೆ.



ನಟ ವಿಜಯ್, ತಮಿಳಗ ವೇಟ್ರಿ ಕಳಗಂ ಪಕ್ಷವನ್ನು ಸ್ಥಾಪಿಸಿದ್ದು, ಈ ನೂತನ ಪಕ್ಷದ ಚಿಹ್ನೆ ಮತ್ತು ಧ್ವಜವನ್ನು ಇಂದು ತಮ್ಮ ಪಕ್ಷದ ಮುಖ್ಯ ಕಚೇರಿಯಲ್ಲಿ ಪರಿಚಯಿಸಿದರು. ಕಡುಗೆಂಪು ಮತ್ತು ಹಳದಿ ಬಣ್ಣದ ಧ್ವಜವು ಎರಡು ಆನೆಗಳ ನಡುವೆ ವಾಗೈಲ್ ಅನ್ನು ಒಳಗೊಂಡಿದೆ. ಪಕ್ಷದ ಚಿಹ್ನೆ ಮತ್ತು ಧ್ವಜವನ್ನು ಅನಾವರಣಗೊಳಿಸಿದ ಬಳಿಕ ಪಣಯೂರಿನ ಸ್ವಪಕ್ಷದ ಕಚೇರಿಯಲ್ಲಿ ಪಕ್ಷದ ಮುಖ್ಯಸ್ಥ ವಿಜಯ್ ಪಕ್ಷದ ಧ್ವಜಾರೋಹಣ ಮಾಡಿದರು. ಈ ವರ್ಷದ ಫೆಬ್ರವರಿಯಲ್ಲಿ ನಟ ದಳಪತಿ ವಿಜಯ್ ರಾಜಕೀಯ ಪಕ್ಷವನ್ನು ಪ್ರಾರಂಭಿಸುವುದಾಗಿ ಘೋಷಿಸಿದ್ದರು. ಇದೀಗ ಅಧಿಕೃತವಾಗಿ ರಾಜಕೀಯಕ್ಕೆ ಎಂಟ್ರಿ ಕೊಡುವ ಮೂಲಕ 2026ರಲ್ಲಿ ನಡೆಯಲಿರುವ ತಮಿಳುನಾಡು ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸುವುದಾಗಿ ಹೇಳಿದ್ದಾರೆ.

ಅಯೋಧ್ಯೆಯಲ್ಲಿ ಗ್ಯಾಂಗ್ ರೇಪ್ ಆರೋಪಿ ಶಾಪಿಂಗ್ ಕಾಂಪ್ಲೆಕ್ಸ್‌ಗೆ ನುಗ್ಗಿದ ಬುಲ್ಡೋಜರ್

ಅಯೋಧ್ಯೆ: ಸಮಾಜವಾದಿ ಪಕ್ಷದ ಸಂಸದ ಅವಧೇಶ್ ಪ್ರಸಾದ್ ಅವರ ನಿಕಟವರ್ತಿ ಎಂದು ಪರಿಗಣಿಸಲಾದ ಸಾಮೂಹಿಕ ಅತ್ಯಾಚಾರದ ಆರೋಪಿ ಮೊಯೀದ್ ಖಾನ್ ಎಂಬುವನ ಶಾಪಿಂಗ್ ಕಾಂಪ್ಲೆಕ್ಸ್ ಅನ್ನು ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ಜಿಲ್ಲಾಡಳಿತ ನೆಲಸಮಗೊಳಿಸಿದೆ.



ಆರೋಪಿ ಮೊಯೀದ್ ಖಾನ್ ಒಡೆತನದ ಅಕ್ರಮ ಶಾಪಿಂಗ್ ಕಾಂಪ್ಲೆಕ್ಸ್ ಅನ್ನು ಕೆಡವಲು ಸ್ಥಳೀಯ ಆಡಳಿತ ಬುಲ್ಡೋಜರ್‌ಗಳನ್ನು ನಿಯೋಜಿಸಿತ್ತು. ಇದಲ್ಲದೇ ಮೊಯೀದ್ ಖಾನ್ ಮಾಡಿರುವ ಸ್ಮಶಾನದ ಅಕ್ರಮ ಒತ್ತುವರಿಯನ್ನು ಕೂಡ ಆಡಳಿತ ತೆಗೆದುಹಾಕಲಿದೆ. ಇದೆಲ್ಲದರ ನಡುವೆ ಮೊಹಮ್ಮದ್ ಮೊಯೀದ್ ಖಾನ್ ಕುಟುಂಬ ಹೈಕೋರ್ಟ್ ಮೆಟ್ಟಿಲೇರಿದೆ. ಶಾಪಿಂಗ್ ಕಾಂಪ್ಲೆಕ್ಸ್ ಧ್ವಂಸಕ್ಕೆ ತಡೆ ಕೋರಿ ಕುಟುಂಬ ಹೈಕೋರ್ಟ್ ಮೆಟ್ಟಿಲೇರಿತ್ತು. ನಾಳೆ ಹೈಕೋರ್ಟ್‌ನಲ್ಲಿ ವಿಚಾರಣೆ ನಡೆಯಲಿದೆ.



ಮಡಿಕೇರಿಯಲ್ಲಿ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ

ಬಿಜೆಪಿ ಕಾರ್ಯಕರ್ತರ ಬೃಹತ್ ಪ್ರತಿಭಟನೆ

ಮಡಿಕೇರಿ, ಆ.22–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ(ಮುಡಾ) ನಿವೇಶನ ಮತ್ತು ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಗಳಲ್ಲಿ ಭಾಗಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಕೊಡಗು ಜಿಲ್ಲಾ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಗುರುವಾರ ಬೃಹತ್ ಪ್ರತಿಭಟನೆ ನಡೆಸಿದರು.

ಮಾಜಿ ಸಚಿವ ಎಂ.ಪಿ.ಅಪ್ಪಚ್ಚು ರಂಜನ್, ಎಂಎಲ್‌ಸಿ ಸುಜಾ ಕುಶಾಲಪ್ಪ, ಮಾಜಿ ಎಂಎಲ್‌ಸಿ ಎಸ್.ಜಿ.ಮೇದಪ್ಪ ಹಾಗೂ ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಪಂಡ ರವಿ ಕಾಳಪ್ಪ ನೇತೃತ್ವದಲ್ಲಿ ಜನರಲ್ ಕೆ.ಎಸ್. ತಿಮ್ಮಯ್ಯ ವೃತ್ತದಲ್ಲಿ ಸಮಾವೇಶಗೊಂಡ ಕಾರ್ಯಕರ್ತರು, ಮಾನವ ಸರಪಳಿ ರಚಿಸಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಹಗರಣಗಳನ್ನು ಸಮರ್ಥಿಸಿಕೊಳ್ಳುತ್ತಿದೆ. ಸಿದ್ದರಾಮಯ್ಯ ಪರ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಜಮೀರ್ ಅಹಮದ್, ದಿನೇಶ್ ಗುಂಡೂರಾವ್, ಕೃಷ್ಣ ಭೈರೇಗೌಡ, ಕಾಂಗ್ರೆಸ್ ವಕ್ತಾರ ಐವಾನ್ ಡಿಸೋಜಾ ಹೇಳಿಕೆ ನೀಡುತ್ತಿದ್ದಾರೆ. ಇದು ನಾಚಿಗೇಡಿನ ಸಂಗತಿ. ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕೆಂದು ಒತ್ತಾಯಿಸಿದರು.

ನಾಪಂಡ ರವಿ ಕಾಳಪ್ಪ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದ ಸರಮಾಲೆಯಲ್ಲೆ ಸಿಲುಕಿಕೊಂಡಿದೆ. ಮುಡಾದಿಂದ ಸಿದ್ದರಾಮಯ್ಯ ತಮ್ಮ ಪತ್ನಿ ಹೆಸರಿನಲ್ಲಿ ನಿವೇಶನಗಳನ್ನು ಪಡೆದುಕೊಳ್ಳುವ ಮೂಲಕ ಭ್ರಷ್ಟಾಚಾರವೆಸಗಿದ್ದಾರೆ. ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ.ಗಳನ್ನು ಅಕ್ರಮವಾಗಿ ವರ್ಗಾವಣೆ ಮಾಡಿಕೊಂಡು ಶೋಷಿತ ಸಮುದಾಯಕ್ಕೆ ಅನ್ಯಾಯವೆಸಗಿದ್ದಾರೆ ಎಂದು ಆರೋಪಿಸಿದರು.

ಕೊಡಗು ಜಿಲ್ಲೆಯಲ್ಲಿ ಹತ್ತಾರು ವರ್ಷಗಳಿಂದ ಸಿ ಮತ್ತು ಡಿ ದರ್ಜೆ ಭೂಮಿಯಲ್ಲಿ ಅಲ್ಪಸ್ವಲ್ಪ ಕೃಷಿ ಚಟುವಟಿಕೆ ನಡೆಸಿಕೊಂಡು ನೂರಾರು ಕುಟುಂಬಗಳು ಬದುಕು ಕಟ್ಟಿಕೊಂಡಿವೆ. ಇದೀಗ ಸಿ ಮತ್ತು ಡಿ ಭೂಮಿಯನ್ನು ಅರಣ್ಯವೆಂದು ಘೋಷಿಸುವ ಪ್ರಯತ್ನಕ್ಕೆ ಕಾಂಗ್ರೆಸ್ ಮುಂದಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬಳಿಕ ಕಾರ್ಯಕರ್ತರು ಮೆರವಣಿಗೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಪಕ್ಷದ ಪ್ರಮುಖರಾದ ರಾಬಿನ್ ದೇವಯ್ಯ, ಸುವಿನ್ ಗಣಪತಿ, ಅನಿತಾ ಪೂವಯ್ಯ, ಯಮುನಾ ಚಂಗಪ್ಪ, ಸವಿತಾ ರಾಕೇಶ್, ಕನ್ನಿಕೆ, ಉಮಾಪ್ರಭು, ತಳೂರು ಕಿಶೋರ್ ಕುಮಾರ್, ಕನ್ನಂಡ ಸಂಪತ್, ಕವನ್ ಕಾರ್ಯಪ್ಪ, ನೆಲ್ಲೀರ ಚಲನ್, ಕೋಡಿ ಪೊನ್ನಪ್ಪ, ಮಹೇಶ್ ಜೈನಿ, ಮನು ಮಂಜುನಾಥ್, ನಾಗೇಶ್ ಕುಂದಲ್ಪಾಡಿ, ಕಾಂಗೀರ ಸತೀಶ್, ಉಮೇಶ್ ಸುಬ್ರಮಣಿ, ಬಿ.ಕೆ. ಅರುಣ್, ಬಿ.ಕೆ.ಜಗದೀಶ್, ಮನು ಮುತ್ತಪ್ಪ, ಸವಿತಾ ರಾಕೇಶ್ ಪಾಲ್ಗೊಂಡಿದ್ದರು.

ಅಕ್ರಮವಾಗಿ ಪಡೆದ ಮುಡಾ ನಿವೇಶನ

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಪತ್ನಿ ಹೆಸರಿನಲ್ಲಿ ಬೆಲೆ ಬಾಳುವ ನಿವೇಶನಗಳನ್ನು ಮುಡಾದಿಂದ ಅಕ್ರಮವಾಗಿ ಪಡೆದುಕೊಂಡಿದ್ದಾರೆ. ಈ ಭ್ರಷ್ಟಾಚಾರ ಹಿನ್ನೆಲೆಯಲ್ಲಿ ರಾಜ್ಯಪಾಲರು ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅವಕಾಶ ನೀಡಿದ್ದಾರೆ ಎಂದು ಮಾಜಿ ಸಚಿವ ಅಪ್ಪಚ್ಚು ರಂಜನ್ ಹೇಳಿದರು.

ರಾಜ್ಯಪಾಲರ ನ್ಯಾಯಯುತವಾದ ನಿರ್ಧಾರಗಳನ್ನು ಕಾಂಗ್ರೆಸ್ ಪ್ರಮುಖರು ವಿರೋಧಿಸಿ ಗೌರ್ನರ್ ವಿರುದ್ಧ ಅವಾಚ್ಯವಾಗಿ ಮಾತನಾಡುತ್ತಿರುವುದು ಸಮಂಜಸವಲ್ಲ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅಕ್ರಮ ವರ್ಗಾವಣೆ, ಪರಿಶಿಷ್ಟರಿಗೆ ಮೀಸಲಿಟ್ಟ 25 ಕೋಟಿ ರೂ.ಗಳನ್ನು ಇತರೆ ಯೋಜನೆಗಳಿಗೆ ಬಳಸುವ ಮೂಲಕ ಆ ಸಮುದಾಯಗಳಿಗೆ ಅನ್ಯಾಯವೆಸಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕು. ಹಿಂದೆ ಯಡಿಯೂರಪ್ಪ ಅವರ ವಿರುದ್ಧ ಲೋಕಾಯುಕ್ತ ತನಿಖೆ ಸಂದರ್ಭ ಅವರ ರಾಜೀನಾಮೆ ಕೇಳಿದ್ದ ಸಿದ್ದರಾಮಯ್ಯ, ಈಗ ತಮ್ಮ ಸಿಎಂ ರಾಜೀನಾಮೆ ನೀಡಿ ತನಿಖೆ ಎದುರಿಸಿ ನಿರ್ದೋಷಿಯಾಗಿ ಹೊರ ಬರಲಿ ಎಂದರು.

ವಿದ್ಯಾರ್ಥಿಗಳು ಪರಿಸರ ಮಹತ್ವ ಅರಿತುಕೊಳ್ಳಿ



ಗಾಳೀಬೀಡು ಗ್ರಾಪಂನ ಚಪ್ಪಂಡ ಕೆರೆ ಅಮೃತ ಸರೋವರದಲ್ಲಿ ನಡೆದ ವೃಕ್ಷ ಅಭಿಯಾನಕ್ಕೆ ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ ಚಾಲನೆ ನೀಡಿದರು.

ಮಡಿಕೇರಿ, ಆ.22–ವಿದ್ಯಾರ್ಥಿ ದಿನಗಳಲ್ಲೇ ಪರಿಸರದ ಮಹತ್ವ ಮತ್ತು ಅದರ ಸಂರಕ್ಷಣೆ ಕುರಿತು ಅರಿತುಕೊಳ್ಳಬೇಕು ಎಂದು ಜಿಪಂ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಆನಂದ್ ಪ್ರಕಾಶ್ ಮೀನಾ ತಿಳಿಸಿದರು.

ತಾಲೂಕಿನ ಗಾಳೀಬೀಡು ಗ್ರಾಪಂನ ಚಪ್ಪಂಡ ಕೆರೆ ಅಮೃತ ಸರೋವರದಲ್ಲಿ ನಡೆದ ವೃಕ್ಷ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರತಿಯೊಬ್ಬರಿಗೂ ಇಬ್ಬರು ತಾಯಂದಿರು ಇರುತ್ತಾರೆ. ಒಬ್ಬರು ಜನ್ಮ ನೀಡಿದ ತಾಯಿ, ಮತ್ತೊಬ್ಬರು ಪ್ರಕೃತಿ ಮಾತೆ. ಈ ನಿಟ್ಟಿನಲ್ಲಿ ಗಿಡ ನೆಟ್ಟು ಅದನ್ನು ರಕ್ಷಿಸುವ ಮೂಲಕ ಉತ್ತಮ ಪರಿಸರ ನಿರ್ಮಿಸಬೇಕು ಎಂದರು.

ವಿಶ್ವ ಪರಿಸರ ದಿನದ ಅಂಗವಾಗಿ ತಾಯಿ ಹೆಸರಲ್ಲಿ ಒಂದು ವೃಕ್ಷ (ಏಕ್ ಪೇಡ್ ಮಾ ಕೇ ನಾಮ್) ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಈ ನಿಟ್ಟಿನಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಜಿಲ್ಲೆಯ 103 ಗ್ರಾಪಂಗಳಲ್ಲೂ ಗಿಡ ನೆಡಲಾಗುತ್ತಿದೆ ಎಂದು ಹೇಳಿದರು.

ಗ್ರಾಪಂ ಅಧ್ಯಕ್ಷೆ ಬಿ.ಜಿ.ಉಷಾ, ಉಪಾಧ್ಯಕ್ಷ ಕನ್ನಿಕಂಡ ಪೆಮ್ಮಯ್ಯ, ಸದಸ್ಯರಾದ ಪ್ರದೀಪ್, ಸರೋಜ, ಪುಷ್ಪಾವತಿ, ಜಾನಕಿ, ಜಿಪಂ ಉಪ ಕಾರ್ಯದರ್ಶಿ ಜಿ.ಧನರಾಜು, ಗ್ರಾಪಂ ಅಭಿವೃದ್ಧಿ ಅಧಿಕಾರಿ ಶಶಿಕಿರಣ್, ಎಡಿಪಿಸಿ ಮಹೇಂದ್ರ ಜಿಲ್ಲಾ ಎಂಐಎಸ್ ಸಂಯೋಜಕ ಗಣೇಶ್ ಕಾಮತ್, ಗ್ರಾಪಂ ಸಿಬ್ಬಂದಿ ಇತರರಿದ್ದರು.

ಕರಿಮೆಣಸು, ಏಲಕ್ಕಿಗೆ ಜಿಎಸ್‌ಟಿ ವಿನಾಯಿತಿ ನೀಡುವಂತೆ ಸಂಸದರಿಗೆ ಮನವಿ ಸಲ್ಲಿಕೆ



ಕರಿಮೆಣಸು, ಏಲಕ್ಕಿ ಬೆಳೆಗೆ ಜಿಎಸ್‌ಟಿ ವಿನಾಯಿತಿ ನೀಡುವಂತೆ ಕೊಡಗು ಪ್ಲಾಂಟರ್ಸ್ ಅಸೋಷಿಯೇಷನ್ ಪದಾಧಿಕಾರಿಗಳು ಸಂಸದ ಯದುವೀರ್ ಅವರಿಗೆ ಮನವಿ ಸಲ್ಲಿಸಿದರು.

ಮಡಿಕೇರಿ, ಆ.22–ಕರಿಮೆಣಸು ಮತ್ತು ಏಲಕ್ಕಿ ಬೆಳೆಗೆ ಜಿಎಸ್‌ಟಿಯಿಂದ ವಿನಾಯಿತಿ ನೀಡಬೇಕು ಎಂದು ಕೊಡಗು ಪ್ಲಾಂಟರ್ಸ್ ಅಸೋಷಿಯೇಷನ್ ಪದಾಧಿಕಾರಿಗಳು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಮನವಿ ಸಲ್ಲಿಸಿದರು.

ಮೈಸೂರಿನ ಕಲ್ಲಹಳ್ಳಿಯಲ್ಲಿ ಸಂಸದರನ್ನು ಭೇಟಿಯಾದ ಕೊಡಗು ಪ್ಲಾಂಟರ್ಸ್ ಅಸೋಷಿಯೇಷನ್ ಅಧ್ಯಕ್ಷ ನಂದಾ ಬೆಳ್ಯಪ್ಪ ಉಪಾಧ್ಯಕ್ಷ ಎ.ಎ.ಚಂಗಪ್ಪ, ಪದಾಧಿಕಾರಿಗಳಾದ ಕೆ.ಕೆ.ವಿಶ್ವನಾಥ್, ಕೆ.ಕೆ.ಬೆಳ್ಯಪ್ಪ, ಮುತ್ತು ಕಾರ್ಯಪ್ಪ, ಕಾರ್ಯದರ್ಶಿ ಸಿ.ಕೆ.ಬೆಳ್ಯಪ್ಪ ಅವರು ಮೈಸೂರಿನ ಜಿಎಸ್‌ಟಿ ಕಚೇರಿ ಕಾಫಿ ಬೆಳೆಗಾರರಿಗೆ ಜಿಎಸ್‌ಟಿ ಅಡಿ ನೋಂದಣಿ ಮಾಡಿಕೊಳ್ಳುವಂತೆ ನೋಟಿಸ್ ನೀಡುತ್ತಿದೆ. ಆದ್ದರಿಂದ ಜಿಎಸ್‌ಟಿಯಿಂದ ವಿನಾಯಿತಿ ಕೊಡಿಸಬೇಕು ಎಂದು ಮನವಿ ಮಾಡಿದರು.

ಕರಿ ಮೆಣಸು ಕೂಡ ಜಿಎಸ್‌ಟಿ ವ್ಯಾಪ್ತಿಗೆ ಒಳಪಡುತ್ತದೆ ಎಂದು ನೋಟಿಸ್‌ನಲ್ಲಿ ಉಲ್ಲೇಖಿಸಲಾಗಿದೆ. ಹಸಿ ಕರಿಮೆಣಸು ಒಣಗಿದ ಬಳಿಕ ಸಾಗಿಸುವಾಗ ಜಿಎಸ್‌ಟಿಗೆ ಒಳಪಡಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಭತ್ತ ಮತ್ತು ಕೆಂಪು ಮೆಣಸು ಬೆಳೆಗೆ ಜಿಎಸ್‌ಟಿಯಿಂದ ವಿನಾಯಿತಿ ನೀಡಿದ ಮಾದರಿಯಲ್ಲೇ ಕರಿ ಮೆಣಸು ಮತ್ತು ಏಲಕ್ಕಿ ಬೆಳೆಗೂ ವಿನಾಯಿತಿ ನೀಡಬೇಕು. ಕರಿ ಮೆಣಸು ಮತ್ತು ಏಲಕ್ಕಿಯನ್ನು ಕೃಷಿ ಬೆಳೆ ಎಂದು ಪರಿಗಣಿಸಬೇಕು. ಜಿಎಸ್‌ಟಿ ಕಾಯ್ದೆ 2017ರಲ್ಲಿ ಭತ್ತ ಮತ್ತು ಕೆಂಪು ಮೆಣಸಿಗೆ ನೀಡಿದ ವಿನಾಯಿತಿಯನ್ನು ಕರಿಮೆಣಸು ಮತ್ತು ಏಲಕ್ಕಿ ಬೆಳೆಗೂ ಅನ್ವಯಿಸಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಂಸದ ಯದುವೀರ್, ಈ ಕುರಿತು ಕೇಂದ್ರ ಹಣಕಾಸು ಸಚಿವಾಲಯ ಮತ್ತು ಹಣಕಾಸು ಸಚಿವರ ಬಳಿ ಚರ್ಚಿಸಿ, ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಕಾರು ಪಲ್ಟಿ: ಚಾಲಕ ಸಾವು

ಮಡಿಕೇರಿ, ಆ.22–ನಿಯಂತ್ರಣ ತಪ್ಪಿ ಕಾರು ಪಲ್ಟಿಯಾಗಿ ಚಾಲಕ ಮೃತಪಟ್ಟಿರುವ ಘಟನೆ ಸಂಪಾಜೆ ಗ್ರಾಮದ ದೊಡ್ಡಡ್ಕ ಬಳಿ ಗುರುವಾರ ಸಂಭವಿಸಿದೆ.



ಗಣೇಶ್

ವಿರಾಜಪೇಟೆ ಪೆರುಂಬಾಡಿ ನಿವಾಸಿ ಗಣೇಶ್(64) ಮೃತಪಟ್ಟಿದ್ದು, ಗಣೇಶ್ ಅವರ ಪುತ್ರಿ, ಅಳಿಯ ಹಾಗೂ ಮತ್ತೋರ್ವ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಗಣೇಶ್ ತಮ್ಮ ಪುತ್ರನನ್ನು ಮಂಗಳೂರಿನ ವಿಮಾನ ನಿಲ್ದಾಣಕ್ಕೆ ಬಿಟ್ಟು ಹಿಂತಿರುಗಿ ಬರುತ್ತಿದ್ದ ವೇಳೆ ಸಂಪಾಜೆ ದೊಡ್ಡಡ್ಕ ಬಳಿ ನಿಯಂತ್ರಣ ತಪ್ಪಿ ಪಲ್ಟಿಯಾಗಿದೆ. ಪರಿಣಾಮ ಗಣೇಶ್‌ಗೆ ಎದೆ ಭಾಗಕ್ಕೆ ಗಂಭೀರವಾಗಿ ಗಾಯವಾಗಿದೆ. ತಕ್ಷಣ ಸುಳ್ಯದ ಕೆವಿಜಿ ಆಸ್ಪತ್ರೆಗೆ ದಾಖಲಿಸಲಾಗಿತ್ತು ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಅದೃಷ್ಟವಶಾತ್ ಗಣೇಶ್ ಅವರ ಪುತ್ರಿ, ಅಳಿಯ ಹಾಗೂ ಮತ್ತೋರ್ವ ಸಣ್ಣಪುಟ್ಟ ಗಾಯಗಳಿಂದ ಪಾರಾಗಿದ್ದಾರೆ. ಗಣೇಶ್ ವಿರಾಜಪೇಟೆ ಕರ್ನಾಟಕ ಸಂಘದ ಸದಸ್ಯರು ಹಾಗೂ ಕೊಡಗು ಖಾಸಗಿ ಬಸ್ ಕಾರ್ಮಿಕರ ಸಂಘದ ಗೌರವಾಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದರು.

ಮಡಿಕೇರಿ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಎಮ್ಮೆಮಾಡು ಗ್ರಾಮದಲ್ಲಿ ಆಟೋ ಪಲ್ಟಿ: ನಾಲ್ವರಿಗೆ ಗಂಭೀರ ಗಾಯ

ನಾಪೋಕ್ಲು, ಆ.22– ನಿಯಂತ್ರಣ ತಪ್ಪಿ ಆಟೋ ಪಲ್ಟಿಯಾಗಿ ಚಾಲಕ ಸೇರಿ ನಾಲ್ವರು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಸಮೀಪದ ಎಮ್ಮೆಮಾಡು ಗ್ರಾಮದಲ್ಲಿ ಗುರುವಾರ ನಡೆದಿದೆ.

ಚಾಲಕ ಎಮ್ಮೆಮಾಡು ಕೂರುಳಿ ಗ್ರಾಮದ ಇಬ್ರಾಹಿಂ ಸೇರಿದಂತೆ ಆಟೋದಲ್ಲಿದ್ದ ಪ್ರಯಾಣಿಕರಿಗೆ ಗಂಭೀರ ಗಾಯಗಳಾಗಿವೆ. ಬೆಳಗ್ಗೆ ಕೂರುಳಿ ಪರಂಬು ಗ್ರಾಮದಿಂದ ಎಮ್ಮೆಮಾಡು ಕಡೆಗೆ ತೆರಳುತ್ತಿದ್ದ ಆಟೋ ಎಮ್ಮೆಮಾಡು ಕೂರುಳಿ ಸಂಪರ್ಕ ರಸ್ತೆಯ ಇಳಿಜಾರಿನಲ್ಲಿ ಚಾಲಕನ ನಿಯಂತ್ರಣ ತಪ್ಪಿ ಮಗುಚಿ ಬಿದ್ದಿದೆ. ಪರಿಣಾಮ ಆಟೋ ಸಂಪೂರ್ಣ ಜಖಂಗೊಂಡು, ನಾಲ್ವರಿಗೂ ಗಾಯಗಳಾಗಿವೆ.

ಗಾಯಾಳುಗಳಿಗೆ ನಾಪೋಕ್ಲು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪ್ರಥಮ ಚಿಕಿತ್ಸೆ ನೀಡಿದ ಬಳಿಕ ಮಡಿಕೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ನಾಪೋಕ್ಲು ಠಾಣಾಧಿಕಾರಿ ಮಂಜುನಾಥ್ ಹಾಗೂ ಸಿಬ್ಬಂದಿ ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.



ಚಾ.ನಗರದಲ್ಲಿ ಕಾಂಗ್ರೆಸ್ ವಿರುದ್ಧ ಬಿಜೆಪಿ ಪ್ರತಿಭಟನೆ

- ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹ
- ರಾಜ್ಯಪಾಲರ ಬಗ್ಗೆ ಅವಹೇಳನಕಾರಿ ಹೇಳಿಕೆಗೆ ಖಂಡನೆ



ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವಂತೆ ಬಿಜೆಪಿ ಕಾರ್ಯಕರ್ತರು ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಆ.22–ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಹಾಗೂ ರಾಜ್ಯಪಾಲರ ಕುರಿತು ಅವಹೇಳನಕಾರಿ ಹೇಳಿಕೆ ಖಂಡಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ಚಾಮರಾಜೇಶ್ವರ ದೇವಸ್ಥಾನದ ಎದುರು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆ ಹೊರಟು ಚಾಮರಾಜೇಶ್ವರ ಉದ್ಯಾನ ಎದುರು ಧರಣಿ ನಡೆಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ನಂತರ ಭುವನೇಶ್ವರಿ ವೃತ್ತಕ್ಕೆ ತೆರಳಿ ಮಾನವ ಸರಪಳಿ ರಚಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿದರು.

ಸಿ.ಎಸ್.ನಿರಂಜನ್ ಕುಮಾರ್ ಮಾತನಾಡಿ, ಕಾಂಗ್ರೆಸ್ ಸಂವಿಧಾನ, ದಲಿತರು, ಮಹಿಳೆಯರು ಹಾಗೂ ರೈತ ವಿರೋಧಿಯಾಗಿದೆ. ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಎಲ್ಲಾ ವರ್ಗದವರಿಗೆ ಅನ್ಯಾಯ ಮಾಡಿ, ಯಾವುದೇ ಅಭಿವೃದ್ಧಿ ನಡೆಸುತ್ತಿಲ್ಲ. ಸರ್ಕಾರ ಅನೇಕ ಹಗರಣ ಮಾಡಿ ರಾಜ್ಯದ ಜನತೆಗೆ ಮೋಸ ಮಾಡಿದೆ ಎಂದು ಆರೋಪಿಸಿದರು.

ರಾಜ್ಯ ಸರ್ಕಾರ ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ. ನುಂಗಿ ಆ ಸಮುದಾಯಕ್ಕೆ ಅನ್ಯಾಯ ಮಾಡಿದೆ. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಚಿವ ನಾಗೇಂದ್ರ ರಾಜೀನಾಮೆ ಕೊಟ್ಟರೆ ಸಾಲದು, ವಾಲ್ಮೀಕಿ ಅಭಿವೃದ್ಧಿ ನಿಗಮ ಹಾಗೂ ಮುಡಾ ಹಗರಣ ಎದುರಿಸುತ್ತಿರುವ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಾಜಿ ಶಾಸಕ ಎಸ್.ಬಾಲರಾಜು, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಮಂಗಲ ಶಿವಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಪಿ.ವೃಷಭೇಂದ್ರಪ್ಪ, ಮೂಡ್ನಾಕೂಡು ಪ್ರಕಾಶ್, ಹೊನ್ನೂರು ಮಹದೇವಸ್ವಾಮಿ, ಮಾಜಿ ಅಧ್ಯಕ್ಷ ಆರ್.ಸುಂದರ್, ನಿಜಧ್ವನಿ ವೆಂಕಟೇಶ್, ಸರಸ್ವತಮ್ಮ, ಸುದರ್ಶನ್‌ಗೌಡ, ನಟರಾಜೇಗೌಡ, ಕೂಡ್ಲೂರು ಶ್ರೀಧರಮೂರ್ತಿ, ಮಲ್ಲೇಶ್ ನಾಯಕ, ಎಸ್‌ಸಿ ಮೋರ್ಚಾ ಅಧ್ಯಕ್ಷ ಮೂಡಹಳ್ಳಿ ಮೂರ್ತಿ, ಎಸ್‌ಟಿ ಮೋರ್ಚಾ ಜಿಲ್ಲಾಧ್ಯಕ್ಷ ಚಂದ್ರಶೇಖರ, ಮಹಿಳಾ ಮೋರ್ಚಾ ಅಧ್ಯಕ್ಷೆ ಕಮಲಮ್ಮ, ಎಸ್‌ಟಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಜಯಸುಂದರ, ಜಿಲ್ಲಾ ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ವೈ.ಸಿ.ನಾಗೇಂದ್ರ, ನಗರ ಮಂಡಲಾಧ್ಯಕ್ಷ ಶಿವರಾಜು, ಗ್ರಾಮಾಂತರ ಮಂಡಲಾಧ್ಯಕ್ಷ ಮಹೇಶ್, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬಸವಣ್ಣ, ನಟರಾಜು, ಸೂರ್ಯ, ಬಂಗಾರನಾಯಕ, ವಿರೇಂದ್ರ, ಮಂಜುನಾಥ, ಮುತ್ತಿಗೆ ಮೂರ್ತಿ, ಆನಂದ ಭಗೀರಥ, ಮಹದೇವಪ್ರಸಾದ್ ಭಾಗವಹಿಸಿದ್ದರು.

ಸಿದ್ದರಾಮಯ್ಯ ದೇವ್ರೆ, ತನಿಖೆ ಎದುರಿಸಲಿ

ಮುಡಾ ಹಗರಣ ಸಂಬಂಧ ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಅನುಮತಿ ಕೊಟ್ಟಿದ್ದಾರೆ. ಸಿದ್ದರಾಮಯ್ಯ ಏನು ದೇವ್ರೆ? ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ, ತನಿಖೆ ಎದುರಿಸಬೇಕು ಎಂದು ಮಾಜಿ ಸಚಿವ ಎನ್.ಮಹೇಶ್ ಒತ್ತಾಯಿಸಿದರು.

ಮುಡಾದಲ್ಲಿ 3 ಎಕರೆ 16 ಗುಂಟೆ ಜಮೀನು ಆದಿಕರ್ನಾಟಕ ಸಮುದಾಯಕ್ಕೆ ಸೇರಿದ್ದು, ಕಾನೂನು ದುರುಪಯೋಗ ಪಡಿಸಿಕೊಂಡು ನಿವೇಶನ ಪಡೆದಿದ್ದೀರಿ. ನಾನು ದಲಿತ ಪರ ಎನ್ನುವ ಸಿದ್ದರಾಮಯ್ಯನವರಿಗೆ ಮಾನಮರ್ಯಾದೆ ಇದ್ದರೆ, ದಲಿತರಿಗೆ ಜಮೀನು ವಾಪಸ್ ಕೊಡಲಿ ಎಂದು ಆಗ್ರಹಿಸಿದರು.

ಕಾಂಗ್ರೆಸ್ ಎಂಎಲ್‌ಸಿ ಐವನ್ ಡಿಸೋಜಾ ರಾಜಭವನಕ್ಕೆ ನುಗ್ಗಿ ರಾಜ್ಯಪಾಲರನ್ನು ಓಡಿಸಿ ಬಿಡುತ್ತೇವೆ ಎಂದು ಕ್ರಾಂತಿಕಾರಿ ಹೇಳಿಕೆಯನ್ನು ಗೃಹ ಸಚಿವ ಜಿ.ಪರಮೇಶ್ವರ ಅವರೇ ತಪ್ಪು ಎಂದು ಒಪ್ಪಿಕೊಂಡಿದ್ದಾರೆ. ಗೃಹ ಸಚಿವರ ಖಾಕಿಪಡೆಗಳು ಸುಮೋಟೊ ಕೇಸ್ ದಾಖಲಿಸಿ ಡಿಸೋಜಾನನ್ನು ಬಂಧಿಸಬೇಕಿತ್ತು. ಜಿ.ಪರಮೇಶ್ವರ ಗೃಹ ಸಚಿವರೇ ಆಗಿದ್ದರೆ ಐವನ್ ಡಿಸೋಜಾನನ್ನು ಬಂಧಿಸಲಿ. ಹಾಗೆಯೇ ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ ರಕ್ತಕ್ರಾಂತಿ ಆಗುತ್ತದೆ ಎಂದು ಹೇಳಿಕೆ ನೀಡಿದ್ದಾರೆ. ಅವರ ವಿರುದ್ಧ ಸುಮೋಟೋ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ಉದ್ಯೋಗ ಖಾತರಿ ಯೋಜನೆ ಕಾಮಗಾರಿ ಪರಿಶೀಲನೆ



ಕೋಳಿಪಾಳ್ಯ ಗ್ರಾಮದಲ್ಲಿ ಉದ್ಯೋಗ ಖಾತರಿ ಯೋಜನೆಯಡಿಯ ಕಾಮಗಾರಿಯನ್ನು ಗ್ರಾಪಂ ಅಧ್ಯಕ್ಷೆ ಶಿವಿಬಾಯಿ ಗಣೇಶ್ ನಾಯ್ಕ ಪರಿಶೀಲಿಸಿದರು.

ಚಾಮರಾಜನಗರ, ಆ.22–ತಾಲೂಕಿನ ಪುಣಜನೂರು ಗ್ರಾಮ ಪಂಚಾಯಿತಿ ವ್ಯಾಪ್ತಿ ಕೋಳಿಪಾಳ್ಯ ಗ್ರಾಮದಲ್ಲಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ರಸ್ತೆ ಅಭಿವೃದ್ಧಿ, ನೀರುಗಾಲುವೆ ಕಾಮಗಾರಿಯನ್ನು ಗ್ರಾಪಂ ಅಧ್ಯಕ್ಷೆ ಶಿವಿಬಾಯಿ ಗಣೇಶ್ ನಾಯ್ಕ ಪರಿಶೀಲಿಸಿದರು.

ಇದೇ ವೇಳೆ ಮಾತನಾಡಿದ ಅವರು, ಗ್ರಾಮಸ್ಥರ ಬೇಡಿಕೆಯಂತೆ ಕೋಳಿಪಾಳ್ಯದಲ್ಲಿ ಸುಮಾರು 300 ಎಕರೆ ಜಮೀನಿಗೆ ಹೋಗಲು ಅನುಕೂಲವಾಗುವಂತೆ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ 5 ಲಕ್ಷ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ ಗ್ರಾಮದಲ್ಲಿ ಉದ್ಯೋಗ ಖಾತರಿ ಯೋಜನೆಯಡಿ 100 ರಿಂದ 120 ಕಾರ್ಮಿಕರಿಗೆ ಕೆಲಸ ನೀಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ನರೇಗಾ ಯೋಜನೆಯ ಓಂಬುಡ್ಸ್‌ಮನ್ ಎ.ಬಿ.ಶಂಕು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನಾಗನಾಯಕ, ಸದಸ್ಯರಾದ ಮಹೇಶ್ ನಾಯ್ಕ, ಲಲಿತಾಬಾಯಿ, ಗ್ರಾಮದ ಯಜಮಾನರಾದ ರಾಜೇಂದ್ರ ನಾಯಕ್, ಸುರೇಶ್ ನಾಯಕ್, ರವೀಂದ್ರ ನಾಯಕ್, ಮುಖಂಡರಾದ ಗುಂಗೋಬಾಲು ನಾಯಕ್, ಪುಟ್ಟಸ್ವಾಮಿಗೌಡ, ಗುರುನಾಯಕ್, ಪ್ರವೀಣ್ ನಾಯಕ್, ಭಗವಾನ್ ಹಾಜರಿದ್ದರು.

ಸೆ.4, ಗುಂಡ್ಲುಪೇಟೆ ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ

ಗುಂಡ್ಲುಪೇಟೆ, ಆ.22– ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆ ಸೆ.4ರಂದು ನಡೆಸಲಿದೆ.

ಪುರಸಭಾ ಕಚೇರಿ ಸಭಾಭವನದಲ್ಲಿ ಚುನಾವಣೆ ನಡೆಯಲಿದ್ದು, ಅಧ್ಯಕ್ಷ ಸ್ಥಾನ ಹಿಂದುಳಿದ ವರ್ಗ ಬಿ ಹಾಗೂ ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿದೆ. ಮತ ಎಣಿಕೆಯಲ್ಲಿ ಅಭ್ಯರ್ಥಿಗಳ ಮತಗಳು ಸಮಾನ ಬಂದರೆ ಚೀಟಿ ಮೂಲಕ ಫಲಿತಾಂಶ ಪ್ರಕಟಿಸಲಾಗುವುದು ಎಂದು ಚುನಾವಣಾಧಿಕಾರಿ ತಹಸೀಲ್ದಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಜೃಂಭಣೆಯ ದಸರಾ ಆಚರಣೆಗೆ ನಿರ್ಧಾರ

ಜಿಲ್ಲಾಧಿಕಾರಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ



ಚಾಮರಾಜನಗರದ ನಡೆದ ದಸರಾ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ಮಾತನಾಡಿದರು.

ಚಾಮರಾಜನಗರ, ಆ.22–ನಾಡಹಬ್ಬ ಮೈಸೂರು ದಸರಾ ಭಾಗವಾಗಿ ಜಿಲ್ಲೆಯಲ್ಲೂ ದಸರಾ ಮಹೋತ್ಸವವನ್ನು ಅ.7ರಿಂದ ಒಟ್ಟು ಮೂರು ದಿನ ಅರ್ಥಪೂರ್ಣ ಹಾಗೂ ವಿಜೃಂಭಣೆಯಿಂದ ಆಚರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಧಿಕಾರಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ನಡೆದ ವಿವಿಧ ಸಂಘ–ಸಂಸ್ಥೆಗಳ ಮುಖಂಡರು, ಕಲಾವಿದರು, ಅಧಿಕಾರಿಗಳನ್ನೊಳಗೊಂಡ ದಸರಾ ಪೂರ್ವಭಾವಿ ಸಭೆಯಲ್ಲಿ ಹಿಂದಿನಂತೆ ಚಾಮರಾಜನಗರ ದಸರಾ ಮಹೋತ್ಸವವನ್ನು ಅ.7, 8 ಮತ್ತು 9 ರಂದು ಹೆಚ್ಚು ಆಕರ್ಷಕ ಹಾಗೂ ವಿಭಿನ್ನ ಕಾರ್ಯಕ್ರಮಗಳ ಮೂಲಕ ಅರ್ಥಪೂರ್ಣ ಹಾಗೂ ವಿಜೃಂಭಣೆಯಿಂದ ನಡೆಸಲು ತೀರ್ಮಾನಿಸಲಾಯಿತು.

ದಸರಾ ವೇಳೆ ನಗರ ಪ್ರವೇಶಿಸುವ ಮುಖ್ಯ ದ್ವಾರದಲ್ಲಿ ವಿಶೇಷವಾಗಿ ಹಾಗೂ ನಗರದಲ್ಲಿ ವ್ಯಾಪಕವಾಗಿ ವಿದ್ಯುತ್ ದೀಪಾಲಂಕಾರ ಮಾಡಬೇಕು. ಸ್ಥಳೀಯ ಕಲಾವಿದರಿಗೆ ಆದ್ಯತೆ ನೀಡಬೇಕು. ರಾಜ್ಯ ಮಟ್ಟದಲ್ಲಿ ಹೆಸರು ಮಾಡಿರುವ ಜಿಲ್ಲೆಯ ಕಲಾವಿದರು ಹಾಗೂ ಇನ್ನಿತರ ಕಲಾವಿದರನ್ನು ಆಹ್ವಾನಿಸಿ ಕಾರ್ಯಕ್ರಮ ಆಯೋಜಿಸಬೇಕು. ಯುವಕರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ಸಂಘ–ಸಂಸ್ಥೆಗಳ ಮುಖಂಡರು ಹಾಗೂ ಕಲಾವಿದರು ಸಲಹೆ ನೀಡಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳಿಗೆ ಅವಕಾಶ, ಜಿಲ್ಲೆಯ ಕ್ರೀಡಾ ಸಾಧಕರನ್ನು ಸನ್ಮಾನಿಸಬೇಕು. ಬೊಂಬೆ ಕೂರಿಸುವುದು, ಜನಪದ, ರಂಗಗೀತೆ ಸೇರಿದಂತೆ ವೈವಿಧ್ಯಮಯ ಕಾರ್ಯಕ್ರಮಗಳು ನಡೆಯಬೇಕು ಎಂದು ಸಭೆಯಲ್ಲಿ ಮನವಿ ಮಾಡಿದರು.

ನಂತರ ಜಿಲ್ಲಾಧಿಕಾರಿ ಶಿಲ್ಪನಾಗ್ ಮಾತನಾಡಿ, ದಸರಾ ಮಹೋತ್ಸವವನ್ನು ಸಾಂಪ್ರದಾಯಿಕ ಹಾಗೂ ಹೊಸ ಕಾರ್ಯಕ್ರಮಗಳ ರೂಪುರೇಷೆಯೊಂದಿಗೆ ನಡೆಸಲು ಎಲ್ಲರ ಸಲಹೆ, ಅಭಿಪ್ರಾಯ ಪಡೆಯಲಾಗಿದೆ. ಈ ಬಾರಿ ಇನ್ನಷ್ಟು ಆಕರ್ಷಕ ಅರ್ಥಪೂರ್ಣ ಕಾರ್ಯಕ್ರಮ ಏರ್ಪಡಿಸಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆ ಹಾಗೂ ಸಾಂಪ್ರದಾಯಿಕವಾದ ಗಜ ಪೂಜೆ ಮೆರವಣಿಗೆಗೆ ಚಿಂತನೆ ನಡೆಸಲಾಗಿದ್ದು, ಅರಣ್ಯ ಹಾಗೂ ಇನ್ನಿತರ ಇಲಾಖೆಗಳೊಂದಿಗೆ ಚರ್ಚಿಸಲಾಗುತ್ತಿದೆ. ಮೆರವಣಿಗೆಯಲ್ಲಿ ಸ್ತಬ್ಧ ಚಿತ್ರ, ಕಲಾತಂಡಗಳಿಗೂ ಅವಕಾಶ ನೀಡಲಾಗುವುದು. ವಿದ್ಯುತ್ ದೀಪಾಲಂಕಾರಕ್ಕೆ ಸೆಸ್ಕ್ ಅಧಿಕಾರಿಗಳು ಸ್ಥಳ ಪರಿಶೀಲಿಸಿ, ಅಂದಾಜು ಪಟ್ಟಿ ಸಲ್ಲಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಪಂ ಸಿಇಓ ಮೋನಾ ರೋತ್, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಉದಯ್ ಕುಮಾರ್, ವಿವಿಧ ಸಂಘಟನೆಗಳ ಮುಖಂಡರು, ಕಲಾವಿದರು, ಇನ್ನಿತರ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಸೋಮಶೇಖರ್ ನಿಧನ

ಯಳಂದೂರು, ಆ.22–ಪಟ್ಟಣದ ನಿವಾಸಿ ಸೋಮಶೇಖರ್ (ಮೀರಾ) (42) ಗುರುವಾರ ನಿಧನರಾದರು.



ಮೃತರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಶುಕ್ರವಾರ ಪಟ್ಟಣದ ಹೊರವಲಯದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗುಂಡ್ಲುಪೇಟೆಯಲ್ಲಿ ಗುರುರಾಯರ ಆರಾಧನೆ



ಗುಂಡ್ಲುಪೇಟೆ ರಾಯರ ಮಠದಲ್ಲಿ ರಾಘವೇಂದ್ರ ಸ್ವಾಮಿ ಆರಾಧನಾ ಮಹೋತ್ಸವ ನಡೆಯಿತು.

ಗುಂಡ್ಲುಪೇಟೆ: ಪಟ್ಟಣದ ರಾಮದೇವರ ಗುಡ್ಡ ಪಕ್ಕದ ಶ್ರೀರಾಘವೇಂದ್ರಸ್ವಾಮಿ ಮೃತ್ತಿಕಾ ಬೃಂದಾವನದಲ್ಲಿ ಗುರುರಾಯರ ಆರಾಧನಾ ಮಹೋತ್ಸವ ವಿಜೃಂಭಣೆಯಿಂದ ನೆರವೇರಿತು.

ಆರಾಧನಾ ಮಹೋತ್ಸವ ಅಂಗವಾಗಿ ಕಳೆದ ಮೂರು ದಿನಗಳಿಂದ ಬೆಂಗಳೂರಿನ ವೇಣುಗೋಪಾಲಾಚಾರ್ ನೇತೃತ್ವದಲ್ಲಿ ಶ್ರೀಮಠದಲ್ಲಿ ವಿವಿಧ ಪೂಜಾ ಕೈಂಕರ್ಯ ನೆರವೇರಿಸಲಾಯಿತು. ವಿದೂಷಿ ಇಂದ್ರಾಣಿ ಇವರಿಂದ ದೇವರನಾಮ ಸ್ಮರಣೆ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ವಿದೂಷಿ ರಮ್ಯ ಅವರಿಂದ ಭರತನಾಟ್ಯ ಕಾರ್ಯಕ್ರಮ ನಡೆಯಿತು. ಗುರುವಾರ ಬೆಳಗ್ಗೆ ಶ್ರೀರಾಮತಾರಕ, ರಾಘವೇಂದ್ರ ಅಷ್ಟಾಕ್ಷರ ಹೋಮ, ಮಹಾಮಂಗಳಾರತಿ ನೆರವೇರಿಸಲಾಯಿತು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೈಸೂರಿನ ಮಾತೃಶ್ರೀ ಭಜನಾ ಮಂಡಳಿ ತಂಡದವರಿಂದ ಅಲಂಕೃತ ಸಾರೋಟಿನಲ್ಲಿ ರಾಘವೇಂದ್ರರ ಉತ್ಸವ ಮೂರ್ತಿಯನ್ನು ಮೆರವಣಿಗೆ ನಡೆಸಲಾಯಿತು. ಪುರಸಭೆ ಮಾಜಿ ಅಧ್ಯಕ್ಷ ಪಿ.ಗಿರೀಶ್, ಟ್ರಸ್ಟ್‌ನ ಅಧ್ಯಕ್ಷೆ ರಾಜೇಶ್ವರಿ, ಉಪಾಧ್ಯಕ್ಷ ಇಂದುಶೇಖರ್, ಕಾರ್ಯದರ್ಶಿ ಚಂದ್ರಶೇಖರ್, ಖಜಾಂಚಿ ಕೆ.ಸುರೇಶ್ ಇದ್ದರು.

■ ಸತ್ಯಮೂರ್ತಿ ತೋಳಹುಣಸೆ



'ದೂರತೀರ ಯಾನ' ಚಿತ್ರದಲ್ಲಿ ಪ್ರಿಯಾಂಕ

ದೂರತೀರ ಯಾನ ಜರ್ನಿ ಲವ್‌ಸ್ಟೋರಿ

ಉದ್ಘರ್ಷ, ಆ್ಯಕ್ಟ್ 1978, ಸ್ಕ್ಯಾಮ್ 1770 ಹೀಗೆ ಥ್ರಿಲ್ಲರ್ ಜಾನರ್ ಚಿತ್ರಗಳನ್ನೇ ನಿರ್ಮಿಸಿದ ದೇವರಾಜ್ ಆರ್ ಅವರೀಗ ಅಪ್ಪಟ ಪ್ರೇಮಕಥೆಯೊಂದನ್ನು ನಿರ್ಮಿಸುತ್ತಿದ್ದಾರೆ. ನಿರ್ದೇಶಕ ಮಂಸೋರೆ ಕೂಡ ತಮ್ಮ ಜಾನರ್ ಬಿಟ್ಟು ಲವ್‌ಸ್ಟೋರಿಗೆ ಕೈ ಹಾಕಿದ್ದಾರೆ. ಇವರಿಬ್ಬರ ಕಾಂಬಿನೇಶನ್ ಚಿತ್ರದ ಹೆಸರು ದೂರತೀರ ಯಾನ. ಹಿಂದೆ ಎರಡು ಹಿಟ್ ಚಿತ್ರಗಳನ್ನು ನೀಡಿದ ಈ ಜೋಡಿಯ ಮೂರನೇ ಚಿತ್ರವೂ ಹೌದು, ವಿಜಯ್ ಕೃಷ್ಣ ಹಾಗೂ ಪ್ರಿಯಾಂಕ ಕುಮಾರ್ ನಾಯಕ-ನಾಯಕಿಯಾಗಿ ಅಭಿನಯಿಸುತ್ತಿರುವ ಈ ಚಿತ್ರದ ಟೈಟಲ್ ಟೀಸರ್ ಇತ್ತೀಚೆಗೆ ಬಿಡುಗಡೆಯಾಯಿತು.

ಈ ಸಂದರ್ಭದಲ್ಲಿ ನಿರ್ದೇಶಕ ಮಂಸೋರೆ ಮಾತನಾಡುತ್ತ ಈಗ ಪ್ರೇಕ್ಷಕರ ಅಭಿರುಚಿ ಬದಲಾಗಿದೆ. ಅವರ ನಿರೀಕ್ಷೆಗೆ, ಬದಲಾದ ಪರಿಸ್ಥಿತಿಗೆ ನಾವು ಹೊಂದುಕೊಂಡು, ಅವರಿಗೆ ಬೇಕಾದ ರೀತಿಯ ಸಿನಿಮಾ ಮಾಡಬೇಕು. ಆ ನಿಟ್ಟಿನಲ್ಲಿ ನಾನು ಮಾಡ ಹೊರಟಿರುವ ಸಿನಿಮಾ ದೂರತೀರ ಯಾನ. ಇದೊಂದು ದಾರಿಯಲ್ಲಿ ಸಾಗುತ್ತಾ ನಡೆಯುವ ಪ್ರೇಮಕಥೆ. ಚಿತ್ರದ ಮೊದಲ ಹತ್ತು ನಿಮಿಷ ಮಾತ್ರ ಬೆಂಗಳೂರಿನಲ್ಲಿ ನಡೆದರೆ, ಉಳಿದೆಲ್ಲಾ ಕಥೆ ದಾರಿಯಲ್ಲೇ ಸಾಗುತ್ತದೆ. ಬೆಂಗಳೂರಿನಿಂದ ಗೋವಾಕ್ಕೆ ಹೊರಟ ಹುಡುಗ-ಹುಡುಗಿ ಹೊಸ ರೀತಿಯ ಪ್ರೀತಿಯನ್ನು ಕಂಡು ಕೊಳ್ಳುವ ಕಥೆಯೂ ಹೌದು. ಆಕ್ಟ್ 1978 ಚಿತ್ರದಲ್ಲಿ ಸಣ್ಣ ಪಾತ್ರ ಮಾಡಿದ್ದ ವಿಜಯ್‌ಕೃಷ್ಣ ಇಲ್ಲಿ ನಾಯಕನಾಗಿದ್ದರೆ, ರುದ್ರಗರುಡ ಪುರಾಣ ಚಿತ್ರದ ಪ್ರಿಯಾಂಕ ಕುಮಾರ್ ನಾಯಕಿಯಾಗಿ ನಟಿಸುತ್ತಿದ್ದಾರೆ. ಚಿತ್ರದಲ್ಲಿ ಬಕ್ಕೇಶ್ ಹಾಗೂ ಕಾರ್ತಿಕ್ ಸಂಗೀತ ಸಂಯೋಜಿಸುತ್ತಿರುವ ಆರು ಹಾಡುಗಳಿದ್ದು, ಶೇಖರ್‌ಚಂದ್ರ ಅವರ ಛಾಯಾಗ್ರಹಣ, ಚೇತನ ತೀರ್ಥಹಳ್ಳಿ ಅವರ ಸಂಭಾಷಣೆಯಿದೆ, ಮುಂದಿನ ತಿಂಗಳಿಂದ ಚಿತ್ರೀಕರಣ ಆರಂಭವಾಗಲಿದೆ ಎಂದು ಹೇಳಿದರು. ನಿರ್ಮಾಪಕ ದೇವರಾಜ್ ಮಾತನಾಡಿ, ಕನ್ನಡಿಗರಿಗೆ ಒಂದೊಳ್ಳೆ ಪ್ರೇಮಕಥೆ ನೀಡಬೇಕೆಂದು ಈ ಸಿನಿಮಾ ನಿರ್ಮಿಸುತ್ತಿದ್ದೇನೆ ಎಂದು ಹೇಳಿದರು.

ಸಂಗೀತ ನಿರ್ದೇಶಕರಾದ ಬಕ್ಕೇಶ್ - ಕಾರ್ತಿಕ್, ಛಾಯಾಗ್ರಾಹಕ ಶೇಖರ್ ಚಂದ್ರ, ಸತ್ಯ ಹೆಗಡೆ ಹಾಜರಿದ್ದರು.

'ಲಂಗೋಟಿಮ್ಯಾನ್' ಇಲ್ಲಿ ಲಂಗೋಟಿನೇ ನಾಯಕ

ನಿಜ ಜೀವನದಲ್ಲಿ ಯಾವುದು ಸಾಧ್ಯವಿಲ್ಲವೋ ಅದೆಲ್ಲವನ್ನೂ ಸಿನಿಮಾದಲ್ಲಿ ಸಾಧ್ಯವಾಗಿಸಬಹುದು ಎನ್ನುವುದಕ್ಕೆ ಇಲ್ಲೊಂದು ಚಿತ್ರ ಉದಾಹರಣೆ. ಒಂದು ಲಂಗೋಟಿ ಇಟ್ಟುಕೊಂಡು ಕಥೆ ಮಾಡುವುದನ್ನು ಎಲ್ಲಾದರೂ ನೀವು ಕೇಳಿದ್ದೀರಾ, ಇಂಥ ಪ್ರಯತ್ನವೊಂದು ನಡೆದಿದೆ. ಲಂಗೋಟಿಮ್ಯಾನ್ ಎಂಬ ಚಿತ್ರದಲ್ಲಿ ಲಂಗೋಟಿಯೇ ಹೀರೋ. ಇದರ ಸುತ್ತ ನಡೆಯುವ ಘಟನೆಗಳೇ ಚಿತ್ರದ ಕಥಾವಸ್ತು. ಬಿಡುಗಡೆಗೆ ಸಿದ್ಧವಾಗಿರುವ "ಲಂಗೋಟಿ ಮ್ಯಾನ್" ಚಿತ್ರದ ಟೀಸರ್‌ನ್ನು ಇತ್ತೀಚೆಗೆ ನಟ ಶರಣ್ ಬಿಡುಗಡೆಗೊಳಿಸಿ, ಚಿತ್ರತಂಡಕ್ಕೆ ಶುಭ ಹಾರೈಸಿದರು. ವಿಭಿನ್ನ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಮಹಿಳಾ ನಿರ್ದೇಶಕಿ ಸಂಜೋತ ಭಂಡಾರಿ ಅವರು ಆಕ್ಷನ್‌ಕಟ್ ಹೇಳಿದ್ದಾರೆ.

ಈ ಹಿಂದೆ ಮಿರ್ಚಿಮಂಡಕ್ಕಿ ಖಡಕ್ ಚಾಯ್ ಎಂಬ ಚಿತ್ರ ನಿರ್ದೇಶಿಸಿದ್ದ ಸಂಜೋತ ಅವರ ಎರಡನೇ ಚಿತ್ರವಿದು. ಸಿನಿಮಾ ಕುರಿತಂತೆ ಮಾತನಾಡಿದ ಅವರು, ನಾನು ಬೇರೊಂದು ಚಿತ್ರದ ಕಥೆ ಮಾಡುತ್ತಿದ್ದಾಗ, ಈ ಕಾನ್ಸೆಪ್ಟ್ ಬಂತು. ಆ ಕಥೆ ಮಾಡುವಾಗಲೂ ಇದೇ ಎಳೆ ತಲೆಗೆ ಬರುತ್ತಿತ್ತು. ಕೊನೆಗೆ "ಲಂಗೋಟಿ ಮ್ಯಾನ್" ಸಿನಿಮಾ ಸ್ವರೂಪ ಪಡೆದುಕೊಂಡಿತು. ಈ ಚಿತ್ರದಲ್ಲಿ ನಿಜವಾದ ಹೀರೋ ಅಂದರೆ "ಲಂಗೋಟಿ". ಆಕಾಶ್ ರಾಂಬೊ, ಧೀರೇಂದ್ರ, ಮಹಾಲಕ್ಷ್ಮಿ, ಹುಲಿ ಕಾರ್ತಿಕ್, ಸಂಹಿತಾ ವಿನ್ಯಾ, ಪವನ್, ಆಟೋ ನಾಗರಾಜ್ ಇತರರು ಪ್ರಮುಖ ತಾರಾಗಣದಲ್ಲಿದ್ದಾರೆ. ಇಡೀ ಕಥೆ ಕಾಮಿಡಿಯಾಗಿ ಸಾಗಲಿದ್ದು, ವೀಕ್ಷಕರಿಗೆ ಮನರಂಜನೆಯ ರಸದೌತಣ ನೀಡಲಿದೆ ಎಂದರು.

ನಟ ಶರಣ್ ಮಾತನಾಡುತ್ತ, ನಿರ್ದೇಶಕರ ಮಾತು ಕೇಳಿದ ಮೇಲೆ ಅವರಿಗೆ ಚಿತ್ರದ ಮೇಲಿರುವ ಭರವಸೆ ಅಲ್ಲದೆ ತಾವೊಬ್ಬರೇ ಕ್ರೆಡಿಟ್ ತೆಗೆದುಕೊಳ್ಳದೆ, ತಂಡದ ಪ್ರತಿಯೊಬ್ಬರನ್ನು ಪರಿಚಯಿಸಿದ ರೀತಿ ಕಂಡು ಸಂತೋಷವಾಯಿತು. ಈಗಂತೂ ಕಂಟೆಂಟ್ ಚಿತ್ರಗಳನ್ನೇ ಜನ ಹೆಚ್ಚು ಇಷ್ಟಪಡುತ್ತಿದ್ದಾರೆ. ಆ ಸಾಲಿಗೆ ಲಂಗೋಟಿ ಮ್ಯಾನ್ ಕೂಡ ಸೇರಲಿ ಎಂದು ಶುಭ ಹಾರೈಸಿದರು. ಟೀಸರ್ ನೋಡಿದಾಗ ಇದೊಂದು ಮನರಂಜನಾತ್ಮಕ ಚಿತ್ರ ಎನಿಸಿದರೂ, ಸಿನಿಮಾದೊಳಗೆ ಬೇರೇನೋ ವಿಷಯ ಹೇಳಲು ಪ್ರಯತ್ನಿಸಲಾಗಿದೆ.




'ಲಂಗೋಟಿಮ್ಯಾನ್' ಚಿತ್ರದಲ್ಲಿ ಮಹಾಲಕ್ಷ್ಮಿ

ಸಿನಿಪದಬಂಧ-539



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______________________

ವಿಳಾಸ ______________________

____

ದೂರವಾಣಿ ಸಂಖ್ಯೆ ______________________

ಎಡದಿಂದ ಬಲಕ್ಕೆ

1.ಪಕ್ಕದ ರಾಜ್ಯದ ಸಂಗೀತ ನಿರ್ದೇಶಕ ನಮ್ಮ "ಧರೆ"ಯಲ್ಲೂ "ಅರಸ"ನಾಗಿ ಮೆರೆದಿದ್ದಾರೆ 5
3.ಕೋಡ್ಲು ರಾಮಕೃಷ್ಣ ಅವರ ದೀರ್ಘಕತೆ 4
6.ರವಿಚಂದ್ರನ್ ನುಡಿದ ಹುಸಿ 5
7.ನವರಸ ನಾಯಕ ಆಗರ್ಭ ಶ್ರೀಮಂತ 3
8.ಶ್ರೀಮುರಳಿ ಕೊಬ್ಬಿದ ಆನೆ 4
10.ಅಂಬರೀಷ್ ಅಭಿನಯದ ಸಮಯದ ಬಂಡಿ 4
11.ಸವ್ಯಸಾಚಿ ಚಿತ್ರದ ನಾಯಕಿ 2
12.ಡಾ.ರಾಜ್ ಕುಮಾರ್ ಜಯಮಾಲಾಳಿಗೆ ನೀಡಿದ ಉಡುಗೊರೆ 6
14.ಬಾಲರಾಜ್ - ಪ್ರಿಯದರ್ಶಿನಿ ಅಭಿನಯಕ್ಕೆ ಎಸ್. ಉಮೇಶ್ ನಿರ್ದೇಶಕ 9
18.ಕನ್ನಡ ನಾಡಿನ ರಸಿಕರ ಮನವ ಸೂರೆಗೊಂಡವಳು 5
19.ಶಿವನ ಭಯಂಕರ ನೃತ್ಯ 5

ಮೇಲಿನಿಂದ ಕೆಳಕ್ಕೆ

1. ದಿನೇಶ್ ಬಾಬು ಎರಡೇ ದಿನದಲ್ಲಿ ಚಿತ್ರ ತಯಾರಿಸಿ ಪಾಸಿಬಲ್ ಎಂಬುದನ್ನು ಸಾಬೀತು ಪಡಿಸಿದ್ದಾರೆ. 4
2.ಕನ್ನಡಕ ಧರಿಸಿರುವ ಹಿರಿಯ ನಟಿ ಈಗ ನಮ್ಮೊಂದಿಗಿಲ್ಲ 6
3._ _ ಇದ್ದೋನೇ ಬಾಸು 2
4.ಜೀವನ ಒಂದು ರೀತಿ ಕುದುರೆ ಗಾಡಿ ಇದ್ದಂತೆ ! 8
5.ಬಿ. ಸಿ. ಪಾಟೀಲ್ ಕುರು ಕುಲದ ವಂಶಿಕ 3
9.ಆದಿತ್ಯ ಮನ್ಮಥನಾಗಿ ಇಲ್ಲಿ ಅಸ್ತವ್ಯಸ್ತಗೊಂಡಿದ್ದಾನೆ 3
10.ರಾಜ್ ಕುಮಾರ್ ಕಂಡ ಏಳು ಬಣ್ಣಗಳ ಇಂದ್ರಧನುಷ್ 5
13.ಜ್ಞಾನವಂತರು ಎಂದಿಗೂ ತುಳುಕಾಡುವುದಿಲ್ಲ ಎಂಬುದಕ್ಕೆ ಈ ಚಿತ್ರವೇ ಸಾಕ್ಷಿ! 5
15.ರಾಜ್ ಕುಮಾರ್ - ಭಾರತಿ "ಮುಕ್ತಿ" ಹೊಂದಿದ ಚಿತ್ರ 4
16.ಎನ್. ಎಸ್. ರಾವ್ ಅವರ ಮಾಸದ ನಗು 4
17.ವಿಷ್ಣುವರ್ಧನ್ - ಖುಷ್ಬು ಅಭಿನಯದ ಚಿತ್ರ 2

ಸಿನಿ ಪದಬಂಧ 538ರ ಉತ್ತರ

ಜಾ	ರಿ	ಬಿ	ದ್ದ	ಜಾ	ಣ					
ಗ್ವಾ				ಣ		ರಾ		ಹೀ	ರೋ	
ರ್		ಉ	ತ್ತ	ರ	ಧ್ರು	ವ	ದಿಂ		ಲ್	
		ದ		ಜಾ		ಣ			ಕಾ	
ತಾ	ಯಿ	ಯ	ಖ	ಣ			ಪೆ	ರೋ	ಲ್	
ಯಿ		ಕು			ರಾ		ದ್ದ			ವಿ
ಯ		ಮಾ	ವ	ನ	ಮ	ನೆ	ಗೆ		ರಾ	ಜ
ಮ		ರ್			ಶ್ಯಾ		ದ್ದ			ಯ
ಡಿ			ಕೇ		ಮ	ರ್ಮ		ಮಾ	ರ್ಜ	ಲ
ಲ	ವ	ಕು	ಶ		ಭಾ			ರು		ಕ್ಷ್ಮಿ
ಲ್ಲಿ			ವ		ಮ	ನ	ಶಾಂ	ತಿ		

ವಿಜೇತರು: ವರ್ಷಿಕಾ ರಘು, ಕುವೆಂಪುನಗರ, ಮೈಸೂರು.

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

'ಮೈ ಹೀರೋ' ಟ್ರೇಲರ್ ಬಿಡುಗಡೆ



ಹಿಂದಿನ ಕಾಲದಿಂದ ಹಿಂದುಳಿದವರ ಮೇಲೆ ನಡೆಯುತ್ತಲೇ ಬಂದಿರುವ ಶೋಷಣೆ ಕುರಿತಾದ ಕಥೆ ಇಟ್ಟುಕೊಂಡು ಮಾಡಿರುವ ಚಿತ್ರ ಮೈ ಹೀರೋ. ಅವಿನಾಶ್ ವಿಜಯಕುಮಾರ್ ಅವರ ನಿರ್ಮಾಣ, ನಿರ್ದೇಶನವಿರುವ ಈ ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಯಿತು.

ಈ ಸಂದರ್ಭದಲ್ಲಿ ನಿರ್ದೇಶಕ ಅವಿನಾಶ್ ವಿಜಯಕುಮಾರ್, ಇತ್ತೀಚೆಗೆ ಉತ್ತರ ಕರ್ನಾಟಕದಲ್ಲಿ ಒಂದು ಘಟನೆ ನಡೆದಿತ್ತು. ಅದನ್ನು ಇಟ್ಟುಕೊಂಡು ಈ ಚಿತ್ರಕಥೆ ರಚಿಸಿದ್ದೇನೆ. ಕನ್ನಡ, ಇಂಗ್ಲೀಷ್ ಹಾಗೂ ಹಿಂದಿ ಭಾಷೆಗಳಲ್ಲಿ ಸಂಭಾಷಣೆ ಇರುತ್ತದೆ. ಹಳ್ಳಿಗಳಲ್ಲಿ ಈಗಲೂ ಜಾತಿ ಪದ್ಧತಿ ರೂಢಿಯಲ್ಲಿದೆ. ಬೇರೆ ಬೇರೆ ದೇಶಗಳಲ್ಲೂ ಸಹ ಇದೆ, ಇದನ್ನೇ ಕಮರ್ಷಿಯಲ್ ಆಗಿ ಚಿತ್ರದಲ್ಲಿ ಹೇಳಿದ್ದೇನೆ. ಚಿತ್ರದ ಅರ್ಧಭಾಗ ಮಧ್ಯಪ್ರದೇಶದಲ್ಲಿ, ಉಳಿದಂತೆ ಚಿಕ್ಕಮಗಳೂರು ಹಾಗೂ ಯುಎಸ್‌ನಲ್ಲಿ ಚಿತ್ರೀಕರಿಸಿದ್ದೇವೆ, ಅಲ್ಲದೆ ಚಿತ್ರದಲ್ಲಿ ಕನ್ನಡ ಹಾಗೂ ಇಂಗ್ಲೀಷ್ ಭಾಷೆಯನ್ನು ಬಳಸಿದ್ದೇವೆ, ಇಂಗ್ಲೀಷ್ ಸಾಂಗನ್ನು ಲಾಸ್ ಏಂಜಲೀಸ್‌ನ ಹಾಲಿವುಡ್ ಸ್ಟುಡಿಯೋದಲ್ಲಿ ಚಿತ್ರೀಕರಿಸಿದ್ದೇವೆ ಎಂದು ಹೇಳಿದರು.

ಹಾಲಿವುಡ್ ಕಲಾವಿದರಾದ ಜಿಲಾಲಿ ರಜ್ ಕಲ್ಲಹ್, ಎರಿಕ್ ರಾಬರ್ಟ್ ಹಾಗೂ ಬಾಲನಟ ವೇದಿಕ್ ಕೌಶಿಕ್ ಮೈ ಹೀರೋ ಚಿತ್ರದ ಪ್ರಮುಖ ಪಾತ್ರಗಳಲ್ಲಿದ್ದಾರೆ. ಪ್ರಕಾಶ್ ಬೆಳವಾಡಿ ಜಿಲ್ಲಾಧಿಕಾರಿಯಾಗಿ, ಹಿರಿಯ ನಟ ದತ್ತಣ್ಣ ಪುರೋಹಿತರ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ನಟಿ ಅಂಕಿತ ಅಮರ್ ಮಧ್ಯಪ್ರದೇಶದ ಯುವತಿಯಾಗಿ ನಟಿಸಿದ್ದಾರೆ, ಚಿತ್ರದ 3 ಹಾಡುಗಳಿಗೆ ಗಗನ್ ಬಡೇರಿಯಾ ಸಂಗೀತ ಸಂಯೋಜನೆ ಮಾಡಿದ್ದಾರೆ.

ನಾಯಕಿ ಅಂಕಿತ ಅಮರ್ ಮಾತನಾಡುತ್ತ ಚಿತ್ರದಲ್ಲಿ ನಾನು ಮಧ್ಯಪ್ರದೇಶದ ಮಹಿಳೆಯಾಗಿ ಕಾಣಿಸಿಕೊಂಡಿದ್ದೇನೆ. ಎನ್‌ಜಿಓ ಪಾತ್ರ ನನ್ನದು. ಮಧ್ಯಪ್ರದೇಶದ ಮಹೇಶ್ವರ ಎಂಬ ಸ್ಥಳದಲ್ಲಿ ವಾರಣಾಸಿಯಲ್ಲಿರುವಂತೆ ಅನೇಕ ಘಾಟ್‌ಗಳಿವೆ. ಅಹಿಲ್ಯಬಾಯಿ ಎಂಬ ಮಹಾರಾಣಿ ಈ ಘಾಟ್‌ಗಳನ್ನು ನಿರ್ಮಿಸಿದ್ದರು. ಅಲ್ಲಿ ಅವರ ಪ್ರತಿಮೆ ಕೂಡ ಇದೆ. ಈ ಚಿತ್ರದಲ್ಲಿ ನಟಿಸುವುದಕ್ಕೆ ಮುಂಚೆ ನಾನು ಆಕೆಯ ಬಗ್ಗೆ ಓದಿ ತಿಳಿದುಕೊಂಡೆ ಎಂದು ಹೇಳಿದರು.

ಕ್ರೀಡೆಯಿಂದ ದೈಹಿಕ, ಮಾನಸಿಕ ಆರೋಗ್ಯ: ಶಾಸಕ ದರ್ಶನ್



ಕ್ರೀಡಾಕೂಟಕ್ಕೆ ಶಾಸಕ ದರ್ಶನ್ ಚಾಲನೆ ನೀಡಿದರು.

ಮಲ್ಕುಂಡಿ, ಆ.22– ಕ್ರೀಡೆಯಲ್ಲಿ ಭಾಗವಹಿಸುವುದರಿಂದ ದೈಹಿಕ, ಮಾನಸಿಕವಾಗಿ ಸಧೃಡರಾಗಬಹುದು ಎಂದು ಶಾಸಕ ದರ್ಶನ್ ತಿಳಿಸಿದರು.

ಸಮೀಪದ ಹುರ ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಯಲ್ಲಿ ಆಯೋಜಿಸಿದ್ದ ಹೋಬಳಿ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಯಾವುದೇ ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಸ್ನೇಹ, ಪ್ರೀತಿ ಬೆಳೆಯುತ್ತದೆ. ಪ್ರಸ್ತುತ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಯೂ ಮುಖ್ಯ. ಯಾವುದೇ ತಂಡ ಸೋತರೂ ಅದನ್ನು ಸಮಾನವಾಗಿ ಸ್ವೀಕರಿಸಬೇಕು. ಗ್ರಾಮೀಣ ಭಾಗದಲ್ಲಿ ಇಂತಹ ಕ್ರೀಡಾಕೂಟವನ್ನು ಮತ್ತಷ್ಟು ಆಯೋಜಿಸುವುದರಿಂದ ಪ್ರತಿಯೊಬ್ಬರಿಗೂ ಕ್ರೀಡೆಯ ಮಹತ್ವ ತಿಳಿಯುತ್ತದೆ ಎಂದರು. ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಗ್ರಾಪಂ ಅಧ್ಯಕ್ಷೆ ತಾಯಮ್ಮ, ಹಾಡ್ಯ ಗ್ರಾಪಂ ಅಧ್ಯಕ್ಷ ಹರೀಶ್ ಕುಮಾರ್, ಉಪಾಧ್ಯಕ್ಷ ಮಹದೇವಸ್ವಾಮಿ, ಬಿಇಓ ಮಹೇಶ್, ಪ್ರಾಂಶುಪಾಲ ಮಂಜುನಾಥ್ ಸೇರಿದಂತೆ ಇತರರಿದ್ದರು.

ತಾಯಿ ಹೆಸರಿನಲ್ಲಿ ಒಂದು ವೃಕ್ಷ ಕಾರ್ಯಕ್ರಮ



ಮೂಗೂರಿನ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ನರೇಗಾ ಯೋಜನೆಯಡಿ ತಾಯಿ ಹೆಸರಿನಲ್ಲಿ ಒಂದು ವೃಕ್ಷ ಕಾರ್ಯಕ್ರಮಕ್ಕೆ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಶಾಂತಿ ಗಿಡ ನೆಟ್ಟು ನೀರೆರೆಯುವ ಮೂಲಕ ಚಾಲನೆ ನೀಡಿದರು. ಈ ವೇಳೆ ಉಪ ಪ್ರಾಂಶುಪಾಲ ಸಿ.ಪುಟ್ಟಸ್ವಾಮಿ, ಪಿಡಿಓ ಪ್ರಕಾಶ್, ಜವರೇಗೌಡ, ಎಂ.ಎನ್.ರಾಜು, ದೈಹಿಕ ಶಿಕ್ಷಕ ಮಲ್ಲೇಶ್, ನಿರ್ಮಲ ಹಾಗೂ ಗ್ರಾಪಂ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಜರಿದ್ದರು.

ಇಂದು ಶ್ರೀನಿವಾಸ ಕಲ್ಯಾಣೋತ್ಸವ

ನಂಜನಗೂಡು, ಆ.22– ನಗರದ ಚಾಮುಂಡಿ ಟೌನ್ ಶಿಪ್‌ನಲ್ಲಿರುವ ಶ್ರೀನಿವಾಸ ಪೆರುಮಾಳ್ ದೇವಸ್ಥಾನದಲ್ಲಿ ಆ.23ರಂದು ಬೆಳಗ್ಗೆ ಶ್ರೀನಿವಾಸ ಕಲ್ಯಾಣೋತ್ಸವ ನಡೆಯಲಿದೆ. ಪ್ರೊ.ಡಾ.ಭಾಷ್ಯಂ ಸ್ವಾಮೀಜಿ ನೇತೃತ್ವದಲ್ಲಿ ಬೆಳಗ್ಗೆ 8 ಗಂಟೆಗೆ ಕಲ್ಯಾಣೋತ್ಸವ ನಡೆಯಲಿದ್ದು, ಮಧ್ಯಾಹ್ನ 12.30ಕ್ಕೆ ಪ್ರಸಾದ ವಿನಿಯೋಗ ನಡೆಯಲಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗಬೇಕೆಂದು ದೇವಾಲಯದ ಎನ್.ಶ್ರೀನಿವಾಸ್ ತಿಳಿಸಿದ್ದಾರೆ.

ಬಸವನಗುಡ್ಡ ಬಡಾವಣೆ ಆಶ್ರಯ ಯೋಜನೆ ನಿವೇಶನ ಅತಿಕ್ರಮಣ

ತಲಕಾಡಿನಲ್ಲಿ 25 ಅಕ್ರಮ ಮನೆಗಳು ನೆಲಸಮ

● ಹೈಕೋರ್ಟ್ ಆದೇಶ: ಮಿಂಚಿನ ಕಾರ್ಯಾಚರಣೆ ನಡೆಸಿದ ತಾಲೂಕು ಆಡಳಿತ ● ಘರ್ಜಿಸಿದ ಜೆಸಿಬಿಗಳು





ತಲಕಾಡು ಗ್ರಾಮದ ಬಸವನಗುಡ್ಡ ಬಡಾವಣೆಯಲ್ಲಿ ಅಕ್ರಮವಾಗಿ ನಿರ್ಮಿಸಿದ್ದ ಮನೆಗಳನ್ನು ಗುರುವಾರ ತೆರವುಗೊಳಿಸಲಾಯಿತು.

ತಲಕಾಡು, ಆ.22– ತಲಕಾಡಿನಲ್ಲಿ ಗುರುವಾರ ಮಿಂಚಿನ ಕಾರ್ಯಾಚರಣೆ ನಡೆಸಿದ ತಾಲೂಕು ಆಡಳಿತ ಬಸವನ ಗುಡ್ಡ ಬಡಾವಣೆ ಆಶ್ರಯ ಯೋಜನೆ ನಿವೇಶನ ಅತಿಕ್ರಮಿಸಿಗೊಂಡು ನಿರ್ಮಿಸಿದ್ದ 25 ಮನೆಗಳನ್ನು ಅಧಿಕಾರಿಗಳು ನೆಲಸಮಗೊಳಿಸಿದರು.

ತಲಕಾಡು ಗ್ರಾಪಂ ವ್ಯಾಪ್ತಿಯ ವಡೆಯಾಂಡಹಳ್ಳಿ ಸರ್ವೆ ನಂ.94/1 ಮತ್ತು 94/2ರಲ್ಲಿ ಒತ್ತುವರಿಯಾಗಿದ್ದ 3ಎಕರೆ 1 ಗುಂಟೆ ಸರ್ಕಾರಿ ಜಮೀನನ್ನು ತೆರವುಗೊಳಿಸುವಂತೆ ಹೈಕೋರ್ಟ್ ಆದೇಶಿಸಿದ್ದ ಹಿನ್ನೆಲೆಯಲ್ಲಿ ಬಸವನಗುಡ್ಡ ಬಡಾವಣೆಯಲ್ಲಿ ಗುರುವಾರ ಬೆಳಗ್ಗೆಯಿಂದ ಸಂಜೆವರೆಗೂ ಜೆಸಿಬಿಗಳು ಘರ್ಜಿಸಿದ್ದು, ಅಕ್ರಮವಾಗಿ ನಿರ್ಮಿಸಿದ್ದ ಮನೆಗಳನ್ನು ಧ್ವಂಸಗೊಳಿಸಿದವು.

1993–94ರಲ್ಲಿ ಆಶ್ರಯ ಯೋಜನೆಯಡಿ ತಲಕಾಡಿನಲ್ಲಿ ನಿವೇಶನ ಹಂಚಿಕೆ ಮಾಡಲು ಕಂದಾಯ ಇಲಾಖೆ ಸರ್ವೆ ನಂ.94/1 ಮತ್ತು 94/2ರಲ್ಲಿ 3ಎಕರೆ 1ಗುಂಟೆ ಜಮೀನನ್ನು ಕಾಯ್ದಿರಿಸಿತ್ತು. ನಿವೇಶನ ಹಂಚಿಕೆಯಾಗುವ ಮೊದಲೇ 40ಕ್ಕೂ ಹೆಚ್ಚು ಮನೆಗಳು ಅಕ್ರಮವಾಗಿ ತಲೆ ಎತ್ತಿದ್ದು, 25 ಕುಟುಂಬಗಳು ಅತಿಕ್ರಮಿಸಿಕೊಂಡಿದ್ದ ನಿವೇಶನದಲ್ಲಿ ಮನೆ ನಿರ್ಮಿಸಿಕೊಂಡು ವಾಸವಾಗಿದ್ದರು. ಅಲ್ಲದೇ ಆ ಮನೆಗಳಿಗೆ ವಿದ್ಯುತ್ ಸಂಪರ್ಕ, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲ ಸೌಕರ್ಯ ಕಲ್ಪಿಸುವ ಸಂಬಂಧ ನಿವಾಸಿಗಳು ಹಾಗೂ ಗ್ರಾಪಂ ನಡುವೆ ಆಗಾಗ ಸಂಘರ್ಷ ನಡೆಯುತ್ತಿತ್ತು. ಇದೇ ವಿಚಾರ ಹೈಕೋರ್ಟ್‌ಗೆ ಮೆಟ್ಟಿಲೇರಿದ್ದರಿಂದ ವಿಚಾರಣೆ ನಡೆಸಿದ ನ್ಯಾಯಾಲಯ ಒತ್ತುವರಿ ತೆರವುಗೊಳಿಸಿ, ಸದರಿ ನಿವೇಶನವನ್ನು ಗ್ರಾಪಂ ಸ್ವಾಧೀನಕ್ಕೆ ನೀಡುವಂತೆ ಮುಖ್ಯ ಕಾರ್ಯದರ್ಶಿ ಸೇರಿದಂತೆ ಜಿಲ್ಲಾಡಳಿತ ಮತ್ತು ತಾಲೂಕು ಆಡಳಿತಕ್ಕೆ ಸೂಚಿಸಿತು.

ಅದರಂತೆ ತಹಸೀಲ್ದಾರ್ ಟಿ.ಜಿ.ಸುರೇಶಾಚಾರ್ ಹಾಗೂ ನಂಜನಗೂಡು ಉಪ ವಿಭಾಗದ ಡಿವೈಎಸ್ಪಿ ಜಿ.ಎಸ್.ರಘು ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಒಂದು ಖಾಸಗಿ ದೇವಾಲಯ ಸೇರಿದಂತೆ ಎಲ್ಲಾ ಅಕ್ರಮ ಮನೆಗಳನ್ನು ತೆರವುಗೊಳಿಸಲಾಯಿತು. ಅಕ್ರಮ ಮನೆಗಳ ಬಳಿ ಬೆಳೆದಿದ್ದ ತೆಂಗು ಇನ್ನಿತರ ಮರಗಳನ್ನು ಕಡಿದು ಉರುಳಿಸಲಾಯಿತು. ತೆರವಾದ ಮನೆಗಳ ಅಳಿದುಳಿದ ಸಾಮಾನುಗಳನ್ನು ನಿವಾಸಿಗಳು ಎತ್ತಿನಗಾಡಿ ಮತ್ತು ಲಘು ವಾಹನಗಳಲ್ಲಿ ತುಂಬಿಕೊಂಡು ಜಾಗ ಖಾಲಿ ಮಾಡಿದರು.

ಕಾರ್ಯಾಚರಣೆಯಲ್ಲಿ ಇನ್ಸ್‌ಪೆಕ್ಟರ್‌ಗಳಾದ ಆನಂದ್ ಕುಮಾರ್, ಧನಂಜಯ, ತಲಕಾಡು ಠಾಣೆ ಎಸ್‌ಐ ತಿರುಮಲ್ಲೇಶ, ಉಪ ತಹಸೀಲ್ದಾರ್ ಇ. ಕುಮಾರ್, ಆರ್‌ಐ ಸತೀಶ್ ಎಂ.ಎನ್., ಗ್ರಾಮ ಆಡಳಿತಾಧಿಕಾರಿ ಸುನೀಲ್, ಜಮೀನಾ ಸೇರಿದಂತೆ ಗ್ರಾಮ ಲೆಕ್ಕಾಧಿಕಾರಿಗಳು, ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ನೂರಾರು ಪೊಲೀಸ್ ಸಿಬ್ಬಂದಿ ಭಾಗವಹಿಸಿದ್ದರು.

"ನ್ಯಾಯಾಲಯದ ಆದೇಶದಂತೆ ಅತಿಕ್ರಮಣಗೊಂಡಿದ್ದ ಆಶ್ರಯ ಯೋಜನೆ ನಿವೇಶನ ತೆರವುಗೊಳಿಸಿ, ತಲಕಾಡು ಗ್ರಾಪಂ ವಶಕ್ಕೆ ನೀಡುತ್ತೇವೆ. ಮತ್ತೆ ನಿವೇಶನ ಒತ್ತುವರಿಯಾಗದಂತೆ ನೋಡಿಕೊಳ್ಳುವ ಹೊಣೆ ಹಾಗೂ ಅರ್ಹರಿಗೆ ಹಂಚಿಕೆ ಮಾಡುವುದು ಗ್ರಾಪಂ ಮುಂದಿನ ಜವಾಬ್ದಾರಿ.

-ಟಿ.ಜಿ.ಸುರೇಶಾಚಾರ್, ತಹಸೀಲ್ದಾರ್

"ಒತ್ತುವರಿ ತೆರವಿನಿಂದ ಗ್ರಾಪಂ ಸುಪರ್ದಿಗೆ ತೆಗೆದುಕೊಳ್ಳುವ ನಿವೇಶನವನ್ನು ಲೇಔಟ್ ಮಾಡಲು ಜಿಪಂ ತಾಂತ್ರಿಕ ಉಪ ವಿಭಾಗದ ಅಧಿಕಾರಿಗಳಿಗೆ ಯೋಜನೆ ರೂಪಿಸಿ ನೀಡುತ್ತೇವೆ. ನಿವೇಶನ ವಿನ್ಯಾಸದ ಬಳಿಕ ಅರ್ಹರಿಗೆ ನಿವೇಶನ ಹಂಚಿಕೆ ಮಾಡಲು ಸಾಮಾನ್ಯ ಸಭೆ ನಡೆಸಿ ಜಿಪಂ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲಾಗುವುದು.

-ಮಹೇಶ್, ತಲಕಾಡು ಗ್ರಾಪಂ ಪಿಡಿಓ.

"ಮೈಸೂರು ಉಪವಿಭಾಗಾಧಿಕಾರಿ ಆನಂದ ಅವರು ನಿವೇಶನದಲ್ಲಿ ವಾಸವಿದ್ದವರಿಗೆ ಹಕ್ಕುಪತ್ರ ಕೊಡಿ ಎಂದು ಶಿಫಾರಸ್ಸು ಮಾಡಿದ್ದರೂ, ಗ್ರಾಪಂ ಸದಸ್ಯರು ಪಕ್ಷಪಾತ ರಾಜಕಾರಣ ಮಾಡಿದರು. ಮುಂದಿನ ನಿವೇಶನ ಹಂಚಿಕೆಯಲ್ಲಾದರೂ ಮನೆಗಳನ್ನು ಕಳೆದುಕೊಂಡಿರುವ 25 ಮಂದಿಗೆ ಮೊದಲ ಆದ್ಯತೆ ನೀಡಲಿ.

- ಎನ್.ಕುಮಾರ್, ಬಸವನಗುಡ್ಡ ಬಡಾವಣೆ ನಿವಾಸಿ.

ದೇವಲಾಪುರದಲ್ಲಿ ಗರ್ಭಿಣಿ ಸಾವು



ಹೆಚ್.ಡಿ.ಕೋಟೆ, ಆ.22– ಗರ್ಭಿಣಿಯೊಬ್ಬರು ಸಾವನ್ನಪ್ಪಿರುವ ಘಟನೆ ತಾಲೂಕಿನ ದೇವಲಾಪುರದಲ್ಲಿ ಗುರುವಾರ ನಡೆದಿದೆ.

ಗ್ರಾಮದ ನಿವಾಸಿ ಪ್ರದೀಪ್ ಅವರ ಪತ್ನಿ ಗೀತಾ(23) ಸಾವನ್ನಪ್ಪಿದವರು. 8 ತಿಂಗಳ ಗರ್ಭಿಣಿಯಾದ ಈಕೆ ಹೆರಿಗೆಗೆ ತಾಯಿ ಮನೆಗೆ ಹೋಗಿದ್ದಳು ಎನ್ನಲಾಗಿದೆ. ಗುರುವಾರ ಮುಂಜಾನೆ ಹೊಟ್ಟೆ ನೋವು ಕಾಣಿಸಿಕೊಂಡಿದ್ದು, ತನ್ನ ಪತಿ ಪ್ರದೀಪ್‌ಗೆ ಕರೆ ಮಾಡಿ ವಿಷಯ ತಿಳಿಸಿದ್ದಾಳೆ. ತಕ್ಷಣ ಪತಿ ಪ್ರದೀಪ್ ಹಾಗೂ ಆಕೆಯ ಪೋಷಕರು ಆಂಬುಲೆನ್ಸ್‌ನಲ್ಲಿ ಗೀತಾಳನ್ನು ಹೆಚ್.ಡಿ.ಕೋಟೆಯಲ್ಲಿರುವ ತಾಯಿ, ಮಕ್ಕಳ ಆಸ್ಪತ್ರೆಗೆ ಚಿಕಿತ್ಸೆಗಾಗಿ ಕರೆದೊಯ್ದಿದ್ದಾರೆ. ಈ ವೇಳೆ ವೈದ್ಯ ಡಾ.ರಾಜಶೇಖರ್, ಅರವಳಿಕೆ ತಜ್ಞ ರಾಹುಲ್ ತಪಾಸಣೆ ನಡೆಸಿದ್ದು, ಗೀತಾ ಹಾಗೂ ಆಕೆಯ ಹೊಟ್ಟೆಯಲ್ಲಿದ್ದ ಮಗು ಸಾವನ್ನಪ್ಪಿರುವುದನ್ನು ದೃಢಪಡಿಸಿದರು. ಬಳಿಕ ಶವವನ್ನು ಮರಣೋತ್ತರ ಪರೀಕ್ಷೆಗೆ ಶವಾಗಾರಕ್ಕೆ ಸಾಗಿಸಲಾಯಿತು.

ಮರಣೋತ್ತರ ಪರೀಕ್ಷೆ ವಿಳಂಬ, ಪ್ರತಿಭಟನೆ: ಶವ ಮರಣೋತ್ತರ ಪರೀಕ್ಷೆ ನಡೆಸಲು ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿ ಮೃತ ಗೀತಾಳ ಸಂಬಂಧಿಕರು ವೈದ್ಯರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಗರ್ಭಿಣಿ ಮುಂಜಾನೆ 5 ಗಂಟೆಗೆ ಮೃತಪಟ್ಟಿದ್ದು, ಮಧ್ಯಾಹ್ನ ಒಂದು ಗಂಟೆಯಾದರೂ ಮರಣೋತ್ತರ ಪರೀಕ್ಷೆ ನಡೆಸಲು ವೈದ್ಯರು ಮುಂದಾಗಿಲ್ಲ ಎಂದು ಶವಾಗಾರದ ಬಳಿ ಪ್ರತಿಭಟನೆಗೆ ಮುಂದಾದರು.

ಈ ವೇಳೆ ಸ್ಥಳಕ್ಕಾಗಮಿಸಿದ ತಜ್ಞ ವೈದ್ಯರಾದ ಡಾ.ಸಹನಾ ಹಾಗೂ ಡಾ.ಪೂರ್ಣಿಮಾ, ಗೀತಾ ಅವರ ಶವವನ್ನು ಮೈಸೂರಿನ ಕೆ.ಆರ್. ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ಮಾಡಿಸಿದರೆ ಸಾವಿನ ನಿಖರ ಸತ್ಯಾಂಶ ತಿಳಿಯುತ್ತದೆ. ಆದ್ದರಿಂದ ಮೈಸೂರಿನಲ್ಲಿ ಮರಣೋತ್ತರ ಪರೀಕ್ಷೆ ಮಾಡಿಸಿ ಎಂದು ಅವರ ಕುಟುಂಬದವರಿಗೆ ತಿಳಿಸಿದರು. ಆದರೆ ಕುಟುಂಬದವರು ನಾವು ಮೈಸೂರಿಗೆ ಕೊಂಡೊಯ್ಯಲು ಸಿದ್ಧರಿಲ್ಲ. ನಮಗೆ ಸಾವಿನ ವಿಚಾರದಲ್ಲಿ ಯಾವುದೇ ಶಂಶಯ ಇಲ್ಲ. ನಮಗೆ ಇಲ್ಲೇ ಮರಣೋತ್ತರ ಪರೀಕ್ಷೆ ಮಾಡಿ ಶವವನ್ನು ನೀಡಿ ಎಂದು ಪಟ್ಟುಹಿಡಿದರು.

ನಂತರ ವೈದ್ಯರು ಕುಟುಂಬದವರ ಒಪ್ಪಿಗೆ ಮೇರೆಗೆ ತಹಸೀಲ್ದಾರ್ ಹಾಗೂ ಪೊಲೀಸರ ಸಮ್ಮುಖದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ, ವಾರಸುದಾರರಿಗೆ ಹಸ್ತಾಂತರಿಸಿದರು.

ರಾಜ್ಯ ವೀರಶೈವ ಲಿಂಗಾಯತ ಮಹಾಸಭಾ ನೂತನ ಅಧ್ಯಕ್ಷ

ನಿವೃತ್ತ ಡಿಜಿಪಿ ಶಂಕರ್ ಬಿದರಿಗೆ ಸನ್ಮಾನ



ರಾಜ್ಯ ವೀರಶೈವ ಲಿಂಗಾಯತ ಮಹಾಸಭಾ ನೂತನ ಅಧ್ಯಕ್ಷ ನಿವೃತ್ತ ಡಿಜಿಪಿ ಶಂಕರ್ ಬಿದರಿ ಅವರನ್ನು ಸನ್ಮಾನಿಸಲಾಯಿತು.

ಬೆಟ್ಟದಪುರ, ಆ.22– ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ಮಹಾಸಭಾ ನೂತನ ಅಧ್ಯಕ್ಷ ನಿವೃತ್ತ ಡಿಜಿಪಿ ಶಂಕರ್ ಬಿದರಿ ಅವರನ್ನು ಪಿರಿಯಾಪಟ್ಟಣ ತಾಲೂಕು ವೀರಶೈವ ಲಿಂಗಾಯತ ಸಮಾಜದಿಂದ ಸನ್ಮಾನಿಸಲಾಯಿತು.

ಈ ವೇಳೆ ಮಾತನಾಡಿದ ಅವರು, ವೀರಶೈವ ಲಿಂಗಾಯತ ಸಮಾಜವನ್ನು ಒಗ್ಗೂಡಿಸಿ ಆರ್ಥಿಕ ಮತ್ತು ಶೈಕ್ಷಣಿಕವಾಗಿ ಮೇಲೆತ್ತುವ ಯೋಜನೆಗಳನ್ನು ರೂಪಿಸಿ ಕಟ್ಟಕಡೆ ವ್ಯಕ್ತಿಯನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಉದ್ದೇಶ ಹೊಂದಿದ್ದು, ಸಿದ್ಧಗಂಗಾ, ಬಸವೇಶ್ವರ ರಂತಹ ಪುಣ್ಯ ಪುರುಷರ ಹೆಸರಿನಲ್ಲಿ ಸೌಹಾರ್ದ ಸಹಕಾರ ಸಂಘಗಳನ್ನು ಸ್ಥಾಪಿಸಿ ಆರ್ಥಿಕವಾಗಿ ಅವರಿಗೆ ಸಹಾಯ ಮಾಡುವ ಕಾರ್ಯಗಳು ರಾಜ್ಯಾದ್ಯಂತ ಸಮಾಜದವರು ಮಾಡಬೇಕೆಂದು ತಿಳಿಸಿದರು. ಈ ವೇಳೆ ಮುಖಂಡರಾದ ತಾಲೂಕು ಶಿವಕುಮಾರ ಸ್ವಾಮಿಗಳ ಬಳಗದ ಅಧ್ಯಕ್ಷ ಕೂರ್ಗಲ್ ಶಿವಕುಮಾರಸ್ವಾಮಿ, ಕೋಗಲವಾಡಿ ಗ್ರಾಮದ ಈರಪ್ಪ ಒಡೆಯರ ಹೊಸಳ್ಳಿ ಗಣೇಶ್ ಹಾಗೂ ಇತರರಿದ್ದರು.

ತಿ.ನರಸೀಪುರ: ಹಳ್ಳಿಗಳಲ್ಲಿ ಮಿತಿಮೀರಿದ ಅಕ್ರಮ ಮದ್ಯ ಮಾರಾಟ

ಅಕ್ರಮ ತಡೆಯುವಂತೆ ಕುಕ್ಕೂರು ರಾಜು ಆಗ್ರಹ



ಸುದ್ದಿಗೋಷ್ಠಿಯಲ್ಲಿ ದಸಂಸ ತಾಲೂಕು ಸಂಚಾಲಕ ಕುಕ್ಕೂರು ರಾಜು ಮಾತನಾಡಿದರು.

ತಿ.ನರಸೀಪುರ, ಆ.22– ಅಬಕಾರಿ ನಿರೀಕ್ಷಕರ ಬೇಜವಾಬ್ದಾರಿ, ಪೊಲೀಸರ ನಿರ್ಲಕ್ಷ್ಯದಿಂದ ತಾಲೂಕಿನ ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ವ್ಯಾಪಕವಾಗಿದ್ದು, ರಾಜಾರೋಷವಾಗಿ ನಡೆಯುವ ಅಕ್ರಮ ಮದ್ಯ ಮಾರಾಟದಿಂದಾಗಿ ದಲಿತ ಯುವಕರು ಮತ್ತು ಮಹಿಳೆಯರು ಹೆಚ್ಚಾಗಿ ಮದ್ಯ ವ್ಯಸನಿಗಳಾಗಿ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ ಎಂದು ದಸಂಸ ತಾಲೂಕು ಸಂಚಾಲಕ ಕುಕ್ಕೂರು ರಾಜು ಗಂಭೀರ ಆರೋಪ ಮಾಡಿದರು.

ಪಟ್ಟಣದ ಕಬಿನಿ ಅತಿಥಿ ಗೃಹದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಬಕಾರಿ ಮತ್ತು ಪೊಲೀಸ್ ಇಲಾಖೆಗಳ ವೈಫಲ್ಯತೆಯಿಂದಾಗಿ ವಾಟಾಳು ಗ್ರಾಮದ ಮನೆ ಮನೆಯಲ್ಲಿ ಹಾಗೂ ಪೆಟ್ಟಿಗೆ ಅಂಗಡಿಗಳಲ್ಲಿ ದಿನದ 24 ಗಂಟೆ ಅಕ್ರಮ ಮದ್ಯ ಮಾರಾಟ ಎಗ್ಗಿಲ್ಲದೆ ನಡೆಯುತ್ತಿದೆ. ಈ ಬಗ್ಗೆ ಉಸ್ತುವಾರಿ ಸಚಿವರು ಸೇರಿದಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಅಬಕಾರಿ ಅಧಿಕಾರಿಗಳಿಗೆ ದೂರು ನೀಡಿದ್ದರೂ ಯಾವುದೇ ಪ್ರಯೋಜನವಾಗಿಲ್ಲವೆಂದು ಆಪಾದಿಸಿದರು.

ಅಕ್ರಮ ಮದ್ಯ ಮಾರಾಟ ತಡೆಗಟ್ಟಬೇಕು. ವಾಟಾಳು ಗ್ರಾಮವನ್ನು ಮದ್ಯ ಮುಕ್ತ ಗ್ರಾಮವನ್ನಾಗಿಸಬೇಕೆಂಬ ಗ್ರಾಮಸ್ಥರು ಹಾಗೂ ಪ್ರಜ್ಞಾವಂತ ನಾಗರಿಕರು ಸ್ಥಳೀಯ ಗ್ರಾಪಂಗೆ ಮನವಿ ಮಾಡಿದ್ದರಿಂದ ಆ.10 ರಂದು ಮೈಕ್ ಹಿಡಿದು ಸಂಚರಿಸಿ, ಅಕ್ರಮ ಮದ್ಯ ಮಾರಾಟಕ್ಕೆ ನಿಷೇಧ ಹೇರಿ ಸಾರ್ವಜನಿಕ ಪ್ರಕಟಣೆ ಹೊರಡಿಸಿದ್ದರೂ, ಮನೆ ಮತ್ತು ಪೆಟ್ಟಿಗೆ ಅಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟ ನಿಂತಿಲ್ಲ. ಅಮಾಯಕ ಯುವಕ ನೋರ್ವ ಹಬ್ಬಕ್ಕೆಂದು ನಾಲ್ಕೈದು ಮದ್ಯದ ಬಾಟಲಿಗಳನ್ನು ಬ್ಯಾಗ್‌ನಲ್ಲಿ ಇಟ್ಟುಕೊಂಡು ಬೈಕ್‌ನಲ್ಲಿ ತೆರಳುತ್ತಿದ್ದಾಗ ಅಡ್ಡಗಟ್ಟಿದ ದಕ್ಷ ಪೊಲೀಸ್ ಇನ್ಸ್‌ಪೆಕ್ಟರ್ ಆತನ ಮೇಲೆ ಕೇಸ್ ಹಾಕಿದ್ದಾರೆ ಎಂದು ದೂರಿದರು.

ಪಟ್ಟಣದ ಕೆಲವು ಮದ್ಯ ಮಾರಾಟ ಅಂಗಡಿ ಮಾಲೀಕರು ಹಳ್ಳಿಗಳಿಗೆ ಮದ್ಯ ಸರಬರಾಜು ಮಾಡುತ್ತಿದ್ದರೂ, ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಅಬಕಾರಿ ಮತ್ತು ಪೊಲೀಸ್ ಇನ್ಸ್‌ಪೆಕ್ಟರ್‌ಗೆ ಸಾಧ್ಯವಾಗುತ್ತಿಲ್ಲ. ಇಂತಹ ಧೋರಣೆಯನ್ನು ಅಧಿಕಾರಿಗಳು ಬಿಡಬೇಕು. ಇನ್ನಾದರೂ ತಾಲೂಕಿನಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕದಿದ್ದರೆ ಗ್ರಾಮಸ್ಥರ ಜೊತೆಗೂಡಿ ಅಬಕಾರಿ ಕಚೇರಿಗೆ ಮುತ್ತಿಗೆ ಹಾಕಿ, ಪೊಲೀಸ್ ಠಾಣೆಗಳ ಮುಂಭಾಗ ಪ್ರತಿಭಟನಾ ಧರಣಿ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಯುವ ಮುಖಂಡ ನಿಂಗರಾಜು, ಯಜಮಾನರಾದ ಮಹದೇವ, ಬಸವರಾಜು, ರಮೇಶ, ನಾಗರಾಜು, ಮಲ್ಲೇಶ, ಯುವ ಮುಖಂಡರಾದ ಎಂ.ಮಂಜುನಾಥ, ಶಶಿಕುಮಾರ, ಎಂ.ನಾಗರಾಜು, ನಿಂಗರಾಜು, ಎಸ್.ಜಿ. ನಾಗರಾಜು, ಸಿ.ಮನು, ಸೂರ್ಯ, ಬಿ.ಮನು, ಜಯರಾಮು ಇದ್ದರು.

ಬನ್ನಿಕುಪ್ಪೆ ಗ್ರಾಮದಲ್ಲಿ ವೃಕ್ಷ ಕಾರ್ಯಕ್ರಮ



ಬನ್ನಿಕುಪ್ಪೆಯಲ್ಲಿ ತಾಯಿ ಹೆಸರಿನಲ್ಲಿ ಒಂದು ವೃಕ್ಷ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಹುಣಸೂರು, ಆ.22– ತಾಲೂಕಿನ ಬನ್ನಿಕುಪ್ಪೆ ಗ್ರಾಪಂ ಆವರಣದಲ್ಲಿ ವಿಶ್ವ ಪರಿಸರ ದಿನದ ಅಂಗವಾಗಿ ಸಾಮಾಜಿಕ ಅರಣ್ಯ ಹಾಗೂ ತೋಟಗಾರಿಕಾ ಇಲಾಖೆ ಸಹಯೋಗದಲ್ಲಿ ತಾಯಿ ಹೆಸರಿನಲ್ಲಿ ಒಂದು ವೃಕ್ಷ ಕಾರ್ಯಕ್ರಮಕ್ಕೆ ಗ್ರಾಪಂ ಅಧ್ಯಕ್ಷ ಗೋವಿಂದನಾಯಕ್ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ನಮಗೆ ಜನ್ಮ ನೀಡಿದ ತಾಯಿಗೆ ಎಷ್ಟು ಗೌರವ ನೀಡುತ್ತೇವೆಯೋ ಅದೇ ರೀತಿ ವೃಕ್ಷಕ್ಕೂ ಮಾತೃ ಸ್ಥಾನ ನೀಡಿ ಗೌರವಿಸಿದರೆ ನಮ್ಮ ಪರಿಸರದಲ್ಲಿ ಹಸಿರು ಉಳಿಯುವುದರ ಜೊತೆಗೆ ಹಸಿರು ವೃದ್ಧಿಯಾಗಲಿದೆ. ಇದರಿಂದ ಪರಿಸರ ಉಳಿಯುವ ಜೊತೆಗೆ ಪ್ರಕೃತಿಯಿಂದ ಉಂಟಾಗುವ ಅನಾಹುತಗಳನ್ನು ತಡೆಯಬಹುದು. ನಮ್ಮ ಉಸಿರಾಟಕ್ಕೆ ಬೇಕಾದ ಆಮ್ಲಜನಕ ಸಹ ಎತ್ತೇಚ್ಛವಾಗಿ ದೊರಕುವುದರೊಂದಿಗೆ ಉತ್ತಮ ಆರೋಗ್ಯ ಸಹ ವೃದ್ಧಿಯಾಗಲಿದೆ ಎಂದರು. ಕಾರ್ಯಕ್ರಮದಲ್ಲಿ ಪಿಡಿಓ ರಾಘವೇಂದ್ರ ಪ್ರಸನ್ನ, ಕಾರ್ಯದರ್ಶಿ ವೇದಮೂರ್ತಿ, ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

ಕಂಪಲಾಪುರ ಪಿಎಸಿಎಸ್‌ನಲ್ಲಿ ಸ್ವಾತಂತ್ರ್ಯ ದಿನಾಚರಣೆ



ಕಂಪಲಾಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ 78ನೇ ಸ್ವಾತಂತ್ರ್ಯ ದಿನಾಚರಣೆ ನಡೆಯಿತು. ಈ ವೇಳೆ ಸಂಘದ ಅಧ್ಯಕ್ಷ ಸಂತೋಷ್, ಉಪಾಧ್ಯಕ್ಷ ತಮ್ಮಯ್ಯ, ನಿರ್ದೇಶಕರಾದ ಕುಮಾರ್, ಲಕ್ಷ್ಮಣ್, ನಾಗೇಗೌಡ, ಮಹದೇವ, ಮಣಿ, ಭಾಗ್ಯ, ಗಿರೀಶ್, ಸಿಇಓ ಹರ್ಷ ಇನ್ನಿತರರಿದ್ದರು.

ಜಮಾಬಂಧಿ ಕಾರ್ಯಕ್ರಮ



ಮೈಸೂರು ತಾಲೂಕು ಡಿಎಂಜಿ ಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ನಡೆದ 2023–24ನೇ ಸಾಲಿನ ಜಮಾಬಂಧಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಗಿಡ ವಿತರಿಸಲಾಯಿತು. ಈ ಸಂದರ್ಭ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಮಿತ್ರ, ಪಿಡಿಓ ರುಕ್ಮಾಂಗದ ಹಾಗೂ ಸದಸ್ಯರು ಇನ್ನಿತರರಿದ್ದರು.

ಹೆಮ್ಮಿಗೆ ಪಿಎಸಿಎಸ್‌ಗೆ 5 ಲಕ್ಷ ರೂ. ನಿವ್ವಳ ಲಾಭ

ಸರ್ವ ಸದಸ್ಯರ ಸಭೆಯಲ್ಲಿ ಅಧ್ಯಕ್ಷ ಶೇಷಾದ್ರಿ ಮಾಹಿತಿ



ಹೆಮ್ಮಿಗೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಮಘದ ಆವರಣದಲ್ಲಿ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ನಡೆಯಿತು.

ತಿ.ನರಸೀಪುರ, ಆ.22– ಆಡಳಿತ ಮಂಡಳಿ ಸರ್ವ ಸದಸ್ಯರ ಸಹಕಾರದಿಂದ ಸಂಘ 2023– 2024ನೇ ಸಾಲಿನಲ್ಲಿ 5,00,182 ಲಕ್ಷ ರೂ. ನಿವ್ವಳ ಲಾಭ ಗಳಿಸಿದೆ ಎಂದು ಹೆಮ್ಮಿಗೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಹೆಚ್.ವಿ.ಶೇಷಾದ್ರಿ ತಿಳಿಸಿದರು.

ಸಂಘದ ಆವರಣದಲ್ಲಿ ನಡೆದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘ ರೈತರಿಗೆ ಎಲ್ಲಾ ಸವಲತ್ತುಗಳನ್ನು ಒದಗಿಸುತ್ತಾ ಬಂದಿದ್ದು, ಕೃಷಿ ಜೊತೆಗೆ ಪಶು ಸಂಗೋಪನೆಗೂ ಒತ್ತು ನೀಡುತ್ತಾ ಬಂದಿದೆ. 2024ರ ಮಾರ್ಚ್ ಅಂತ್ಯಕ್ಕೆ ಸಂಘದಲ್ಲಿ 717 ಸದ್ಯಸರಿದ್ದು, 75,99,809 ರೂ. ಷೇರು ಬಂಡವಾಳ ಹೊಂದಿರುತ್ತದೆ ಎಂದರು.

ಸಂಘಕ್ಕೆ 6,25,10,000 ರೂ. ರೈತರಿಂದ ಬಾಕಿ ಬರಬೇಕಾಗಿದ್ದು, ಪ್ರಸಕ್ತ ಸಾಲಿಗೆ 170 ಮಂದಿಗೆ 1,97,97,000 ರೂ. ಸಾಲ ವಿತರಿಸಲಾಗಿದೆ. ಕೆಸಿಸಿ ಸಾಲದ ಜೊತೆಗೆ 199 ರೈತರಿಗೆ 55,44,000 ಲಕ್ಷ ರೂ. ಪಶುಸಂಗೋಪನಾ ಸಾಲ ವಿತರಿಸಲಾಗಿದೆ. ಅಲ್ಲದೇ ಮಾಧ್ಯಮವಧಿ ಹಾಗೂ ಟ್ರ್ಯಾಕ್ಟರ್ ಸಾಲದ ಬಾಕಿ 4.50,755 ರೂ. ಚಾಲ್ತಿಯಲ್ಲಿರುತ್ತದೆ. ಈ ಸಾಲಿನಲ್ಲಿ 53 ಹೊಸ ಸದಸ್ಯರಿಗೆ 1,01,27,560 ರೂ. ಮಂಜೂರಾಗಿದೆ ಎಂದರು.

ಸಂಘದಲ್ಲಿ ಸಾಲ ಪಡೆದಿರುವ ರೈತರು ಸುಸ್ತಿಯಾಗದಂತೆ ಸಾಲ ಮರುಪಾವತಿಸಿದರೆ ಸಂಘವು ಮತ್ತಷ್ಟು ಅಭಿವೃದ್ಧಿ ಹೊಂದಲು ಸಾಧ್ಯವಾಗಲಿದೆ. ಅಲ್ಲದೆ ಮತ್ತಷ್ಟು ಹೊಸ ರೈತರಿಗೆ ಸಾಲ ನೀಡಲು ಅನುಕೂಲವಾಗುತ್ತದೆ ಎಂದರು.

ಸಂಘವನ್ನು ಲಾಭದತ್ತ ಕೊಂಡೊಯ್ಯುವ ಮೂಲಕ ಈ ಭಾಗದ ರೈತರಿಗೆ ಹೆಚ್ಚು ಸೌಲಭ್ಯಗಳನ್ನು ಕಲ್ಪಿಸಿಕೊಡುವ ಮೂಲಕ ತಾಲೂಕಿನಲ್ಲಿ ಮಾದರಿ ಸಂಘವನ್ನಾಗಿ ಮಾಡಬೇಕೆಂಬ ಆಶ್ರಯ ಹೊಂದಿರುವುದಾಗಿ ತಿಳಿಸಿದರು.

ಸಭೆಯಲ್ಲಿ ಸಹಕಾರ ಸಂಘದ ಉಪಾಧ್ಯಕ್ಷ ರಾಮೇಗೌಡ, ನಿರ್ದೇಶಕರಾದ ಹೆಮ್ಮಯ್ಯ, ಕೆ.ಎಸ್.ಮಹದೇವಸ್ವಾಮಿ, ಪುಟ್ಟಸ್ವಾಮಿ, ಬಸವರಾಜು, ಜಾಕೀರ್ ಖಾನ್, ಮಹದೇವಮ್ಮ, ಮಹದೇವಪ್ಪ, ಸಿ.ಸೋಮಣ್ಣ, ಪ್ರಭಾರ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಚ್.ಎಸ್.ಹೇಮಂತ್, ಗುಮಾಸ್ತ ಚಿಕ್ಕಹೊನ್ನಯ್ಯ ಸೇರಿದಂತೆ ಸದಸ್ಯರು, ರೈತರು ಉಪಸ್ಥಿತರಿದ್ದರು.

ಅಭಿವೃದ್ಧಿ ಹೊಂದಿದ ದಲಿತರ ಮೀಸಲಾತಿ ಸಂಬಂಧ ಸುಪ್ರೀಂ ಸಲಹೆ ಅನೂರ್ಜಿತಗೊಳಿಸಲು

ಕೇಂದ್ರ ಸರ್ಕಾರ ವಿಶೇಷ ಶಾಸನ ರೂಪಿಸಲಿ

ಸಂಸದ ಸುನೀಲ್ ಬೋಸ್ ಆಗ್ರಹ



ಸಂಸದ ಸುನೀಲ್ ಬೋಸ್ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು.

ನಂಜನಗೂಡು, ಆ.22– ದಲಿತ ಸಮುದಾಯದಲ್ಲಿ ಅಭಿವೃದ್ಧಿ ಹೊಂದಿರುವರನ್ನು ಮೀಸಲಾತಿಯಿಂದ ಹೊರಗಿಡುವಂತೆ ಸುಪ್ರೀಂಕೋರ್ಟ್ ನೀಡಿರುವ ಸಲಹೆಯನ್ನು ಅನೂರ್ಜಿತಗೊಳಿಸಲು ಕೇಂದ್ರ ಸರ್ಕಾರ ವಿಶೇಷ ಶಾಸನ ರೂಪಿಸಲು ಮುಂದಾಗಬೇಕು ಎಂದು ಸಂಸದ ಸುನೀಲ್‌ಬೋಸ್ ಆಗ್ರಹಿಸಿದರು.

ನಗರದ ಹೌಸಿಂಗ್ ಬೋರ್ಡ್ ಕಾಲೋನಿಯ ತಮ್ಮ ಗೃಹ ಕಚೇರಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮಾಜದಲ್ಲಿ ಅಸ್ಪೃಶ್ಯತೆ ದೂರವಾಗುವವರಗೂ ಎಸ್ಸಿ, ಎಸ್ಟಿ ಹಾಗೂ ಹಿಂದುಳಿದ ವರ್ಗಗಳಿಗೆ ಮೀಸಲಾತಿ ಸೌಲಭ್ಯ ಮುಂದುವರೆಯಬೇಕು. ಒಂದು ವೇಳೆ ಸುಪ್ರೀಂಕೋರ್ಟ್‌ನ ಸಲಹೆ ಅಳವಡಿಸಿಕೊಂಡಲ್ಲಿ ಎಸ್ಸಿ, ಎಸ್ಟಿ ವರ್ಗದವರಿಗೆ ಐಎಎಸ್, ಎಪಿಎಸ್, ಐಎಫ್‌ಎಸ್‌ನಂತಹ ಉನ್ನತ ಉದ್ಯೋಗಗಳು ದೊರೆಯದೆ ವಂಚಿತರಾಗಬೇಕಾಗುತ್ತದೆ. ಆದ್ದರಿಂದ ಕೇಂದ್ರ ಸರ್ಕಾರ ವಿಶೇಷ ಶಾಸನ ರೂಪಿಸಬೇಕೆಂದು ಸದನದಲ್ಲೂ ಚರ್ಚೆ ನಡೆಸಿ ಒತ್ತಾಯಿಸಲಾಗಿದೆ ಎಂದರು.

ನಂಜನಗೂಡು–ಗುಂಡ್ಲುಪೇಟೆ ರಸ್ತೆ ಅಗಲೀಕರಣ: ಕೇರಳ, ಸುಲ್ತಾನ್ ಬತ್ತೇರಿ ಸೇರಿದಂತೆ ನೆರೆ ರಾಜ್ಯಗಳಿಗೆ ಸಂಪರ್ಕ ಕಲ್ಪಿಸುವ ನಂಜನಗೂಡು–ಗುಂಡ್ಲುಪೇಟೆ ರಸ್ತೆಯಲ್ಲಿ ವಾಹನ ದಟ್ಟಣೆ ಅಧಿಕವಾಗಿ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದೆ ಆದ್ದರಿಂದ ನಂಜನಗೂಡು–ಗುಂಡ್ಲುಪೇಟೆ ರಸ್ತೆ ಅಗಲೀಕರಣಗೊಳಿಸಿ ಚತುಷ್ಪಥ ರಸ್ತೆಯನ್ನಾಗಿ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ರೈಲ್ವೆ ಮೇಲ್ಸೆತುವೆ ನಿರ್ಮಾಣಕ್ಕೆ ಕ್ರಮ: ನಗರದ ಆರ್‌ಪಿ ರಸ್ತೆಯಲ್ಲಿ ರೈಲ್ವೆ ಕ್ರಾಸಿಂಗ್ ವೇಳೆ ಸಂಚಾರ ದಟ್ಟಣೆ ಅಧಿಕಗೊಳ್ಳಲಿದೆ. ಆದ್ದರಿಂದ ಆರ್.ಪಿ ರಸ್ತೆಯಲ್ಲಿ ರೈಲ್ವೆ ಮೇಲ್ಸೆತುವೆ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು. ಜೊತೆಗೆ ರೈಲ್ವೆ ಅಂಡರ್ ಪಾಸ್ ರಸ್ತೆಯನ್ನು ಸರಿಪಡಿಸಲು ಕ್ರಮವಹಿಸುವಂತೆ ರೈಲ್ವೆ ಉನ್ನತ ಮಟ್ಟದ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದರು.

ನಗರಸಭೆ ವಶಕ್ಕೆ ಯತ್ನ: ಎಲ್ಲಾ ಪಕ್ಷದವರಿಗೂ ಅಧಿಕಾರ ಹಿಡಿಯಬೇಕು ಎಂಬ ಹಂಬಲವಿರುತ್ತದೆ. ಅಂತೆಯೇ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರ ಹಿಡಿಯಲು ಸಕಲ ಪ್ರಯತ್ನ ನಡೆಸಲಾಗಿದೆ. ಪಕ್ಷದಲ್ಲಿ ಹಲವು ಆಕಾಂಕ್ಷಿಗಳಿದ್ದು, ಶಾಸಕ ದರ್ಶನ್ ಅವರೊಂದಿಗೆ ಚರ್ಚಿಸಿ ಅಧ್ಯಕ್ಷ ಸ್ಥಾನಕ್ಕೆ ಒಬ್ಬರನ್ನು ಅಂತಿಮಗೊಳಿಸಿ ಅಧಿಕಾರ ಹಿಡಿಯಲು ಪ್ರಯತ್ನ ನಡೆಸಲಾಗಿದೆ ಎಂದರು.

ಇದೇ ವೇಳೆ ಮುಖಂಡರಾದ ಇಂಧನ್ ಬಾಬು, ಬುಲೆಟ್ ಮಹದೇವಪ್ಪ, ವಿಶ್ವಕರ್ಮ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ನಂದಕುಮಾರ್, ಕುರುಬರ ಸಂಘದ ಅಧ್ಯಕ್ಷ ಕೆಂಪಣ್ಣ, ತಾಪಂ ಮಾಜಿ ಸದಸ್ಯ ಚಾಮರಾಜು, ಜಿಪಂ ಮಾಜಿ ಸದಸ್ಯರಾದ ಕೆ.ಬಿ. ಸ್ವಾಮಿ, ಚೋಳರಾಜು, ವಕೀಲರಾದ ಶಿವಬಸಪ್ಪ, ನಗರಸಭಾ ಸದಸ್ಯ ಶ್ರೀಕಂಠ ಸ್ವಾಮಿ, ಯೋಗೀಶ್, ಮುಖಂಡರಾದ ಎನ್.ಟಿ. ಗಿರೀಶ್, ನಂಜುಂಡಸ್ವಾಮಿ, ಅಜ್ಗರ್, ನರ್ಲೆ ಗುರುಪಾದಸ್ವಾಮಿ, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು ಇತರರಿದ್ದರು.

ಆ.25, ಶಿವರಾತ್ರಿ ರಾಜೇಂದ್ರ ಶ್ರೀಗಳ ಜಯಂತಿ

ವಿವಿಧ ಕಾರ್ಯಕ್ರಮಗಳ ಆಯೋಜನೆ



ಮೈಸೂರಿನ ಅಗ್ರಹಾರದಲ್ಲಿರುವ ಜೆಎಸ್ಎಸ್ ಹಳೆ ಆಸ್ಪತ್ರೆಯ ರಾಜೇಂದ್ರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಜೆಎಸ್ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಮಂಜುನಾಥ್ ಮಾತನಾಡಿದರು.

ಮೈಸೂರು,ಆ.22(ಎಂಟಿವೈ)– ಮೈಸೂರಿನ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಸುತ್ತೂರು ಮಠದ ಆವರಣದಲ್ಲಿ ಆ.25ರಂದು ಬೆಳಗ್ಗೆ 10 ಗಂಟೆಯಿಂದ ಸುತ್ತೂರು ಜಗದ್ಗುರು ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನದ 23ನೇ ಪೀಠಾಧಿಪತಿ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ 109ನೇ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಗುತ್ತಿದೆ ಎಂದು ಜೆಎಸ್ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಮಂಜುನಾಥ್ ತಿಳಿಸಿದ್ದಾರೆ.

ಮೈಸೂರಿನ ಅಗ್ರಹಾರದಲ್ಲಿರುವ ಜೆಎಸ್ಎಸ್ ಹಳೆ ಆಸ್ಪತ್ರೆಯ ರಾಜೇಂದ್ರ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ವರ್ಷದಂತೆ ಶ್ರೀಮಠದ 23ನೇ ಜಗದ್ಗುರು ಡಾ.ಶಿವ ರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಜಯಂತಿ ಮಹೋತ್ಸವದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆ.25ರಂದು ಬೆಳಗ್ಗೆ 10ಕ್ಕೆ ಶ್ರೀಗಳ ಮತ್ಥಳಿಗೆ ಆರತಿ ಮತ್ತು ಪುಷ್ಪಾಂಜಲಿ ಕಾರ್ಯಕ್ರಮ ಆಯೋಜಿಸಲಾಗಿದೆ. 10.30ಕ್ಕೆ ಸಭಾಕಾರ್ಯಕ್ರಮ ಆರಂಭವಾಗಲಿದೆ. ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಜಿ, ಸಿದ್ದಗಂಗಾ ಮಠದ ಶ್ರೀ ಸಿದ್ಧಲಿಂಗ ಸ್ವಾಮಿ ಸಾನ್ನಿಧ್ಯದಲ್ಲಿ ಹಾಗೂ ಮುದ್ದೇನಹಳ್ಳಿ ಸತ್ಯಸಾಯಿ ಆಶ್ರಮದ ಸದ್ಗುರು ಮಧು ಸೂದನ ಸಾಯಿಯವರ ಸಮ್ಮುಖದಲ್ಲಿ ನಡೆಯುವ ಕಾರ್ಯಕ್ರಮವನ್ನು ಗೋವಾ ರಾಜ್ಯಪಾಲ ಪಿ.ಎಸ್.ಶ್ರೀಧರನ್ ಪಿಳ್ಳೈ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆ ಯನ್ನು ಮೇಘಾಲಯ ರಾಜ್ಯಪಾಲ ಸಿ.ಹೆಚ್. ವಿಜಯಶಂಕರ್ ವಹಿಸಲಿದ್ದಾರೆ ಎಂದರು.

ಮೃಗಾಲಯಕ್ಕೆ ಕೊಡುಗೆ: ಶ್ರೀಗಳ ಜಯಂತಿಯ ದಿನ ಮೃಗಾಲಯದ ಪ್ರಾಣಿ, ಪಕ್ಷಿ ಸಂಕುಲಕ್ಕೆ ಆಹಾರ ವಿತರಣೆ ಮಾಡಲು ಪ್ರತಿ ವರ್ಷದಂತೆ ಈ ವರ್ಷವೂ ಒಂದು ಲಕ್ಷ ರೂ.ಗಳ ಚೆಕ್ ನೀಡಲಾಗುತ್ತದೆ. ಜತೆಗೆ ರಕ್ತದಾನ, ನೇತ್ರದಾನ ಹಾಗೂ ದೇಹದಾನಗಳ ಬಗ್ಗೆ ಅರಿವು ಮೂಡಿಸುವ ಕೆಲಸವನ್ನೂ ಮಾಡಲಾಗುತ್ತದೆ ಎಂದರು.

ಜೆಎಸ್ಎಸ್ ಗ್ರಂಥಮಾಲೆಯ ಪ್ರಕಟಣೆಗಳಿಗೆ ಆ.25ರಿಂದ ಸೆ.30ರವರೆಗೆ ಶೇ.50ರಷ್ಟು ರಿಯಾಯಿತಿ ನೀಡಲಾಗುತ್ತದೆ. ಪ್ರತಿ ವರ್ಷದಂತೆ ಜೆಎಸ್ಎಸ್ ಮಹಾವಿದ್ಯಾಪೀಠದ ಎಲ್ಲ ಅಂಗಸಂಸ್ಥೆಗಳು, ವಿವಿಧ ಸಂಘಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ವಿವಿಧೆಡೆಗಳಲ್ಲಿ ಜಯಂತಿ ಮಹೋತ್ಸವ ಆಚರಿಸಲಾಗುತ್ತದೆ. ಸಂಸ್ಥೆಗಳಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಏರ್ಪಡಿಸಲಾಗುತ್ತದೆ. ರೋಗಿಗಳಿಗೆ ಹಣ್ಣು ಹಂಪಲು ವಿತರಣೆ, ಶಾಲಾ ಕಾಲೇಜುಗಳಲ್ಲಿ ಸಸಿ ನೆಡುವುದು, ವಿಚಾರಸಂಕಿರಣ, ಕ್ರೀಡಾಕೂಟ ಆಯೋಜನೆ, ಪುಸ್ತಕಗಳು, ನೋಟ್ ಪುಸ್ತಕಗಳು, ಶಾಲಾ ಬ್ಯಾಗ್‌ಗಳು, ಸಮವಸ್ತ್ರಗಳನ್ನು ಅಗತ್ಯವಿರುವ ವಿದ್ಯಾರ್ಥಿಗಳಿಗೆ ವಿತರಿಸಲಾಗುತ್ತದೆ ಎಂದು ವಿವರಿಸಿದರು.

14ನೇ ವಿಶೇಷ ಉಪನ್ಯಾಸ

ಜೆಎಸ್ಎಸ್ ಮಹಾವಿದ್ಯಾಪೀಠದ ಸುವರ್ಣ ಮಹೋತ್ಸವದ 14ನೇ ಉಪನ್ಯಾಸ ಕಾರ್ಯಕ್ರಮವನ್ನು ಆ.24ರಂದು ಸಂಜೆ 4 ಗಂಟೆಗೆ ಜೆಎಸ್ಎಸ್ ಆಸ್ಪತ್ರೆಯ ರಾಜೇಂದ್ರ ಶತಮಾನೋತ್ಸವ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಮುದ್ದೇನಹಳ್ಳಿ ಸತ್ಯಸಾಯಿ ಆಶ್ರಮದ ಸದ್ಗುರು ಮಧುಸೂದನ ಸಾಯಿ ಅವರು 'ಆತ್ಮಾನೋ ಕೋಕ್ಷಾರ್ಥಂ ಜಗತ್ ಹಿತಾಯ ಚ' ವಿಷಯ ಕುರಿತು ಉಪನ್ಯಾಸ ನೀಡಲಿದ್ದಾರೆ. ಇನ್ಫೋಸಿಸ್ ಪ್ರತಿಷ್ಠಾನದ ಡಾ.ಸುಧಾಮೂರ್ತಿ ಅವರ ದಾನಶೀಲತೆ ಅಗತ್ಯವೇ ಕೃತಿಯ ಅನುವಾದ 'ಈಸ್ ಚಾರಿಟಿ ಎಸೆನ್ಷಿಯಲ್' ಕೃತಿ, ತಮಿಳುನಾಡಿನ ರಾಜ್ಯಪಾಲ ತಿರು ಆರ್.ಎನ್.ರವಿ ಅವರ 'ಲೀಡರ್‌ಶಿಪ್ ಆಫ್ ಜಿ–20 ಆಪರ್ಚುನಿಟೀಸ್ ಫಾರ್ ಭಾರತ್' ಹಾಗೂ ಅಂತಾರಾಷ್ಟ್ರೀಯ ವೃತ್ತಿಪರ ಲೆಕ್ಕ ಪರಿಶೋಧಕರ ಸಂಘದ ಅಧ್ಯಕ್ಷರಾಗಿದ್ದ ಅನೂಪ್ ಎನ್.ಮೆಹ್ತಾ ಅವರ 'ಟುಮಾರೋಸ್ ಇಂಡಿಯಾ ಬಿಗಿನ್ಸ್ ಟುಡೇ ಲಿವರೇಜಿಂಗ್ ಅಕೌಂಟಬಿಲಿಟಿ ಫಾರ್ ಇಎಸ್‌ಜಿ' ಕೃತಿಗಳನ್ನು ವಿಶ್ರಾಂತ ಕುಲಪತಿ ಪ್ರೊ.ಜೆ.ಶಶಿಧರ ಪ್ರಸಾದ್ ಲೋಕಾರ್ಪಣೆ ಮಾಡಲಿದ್ದು, ಪ್ರಾದೇಶಿಕ ಆಯುಕ್ತ ಡಿ.ಎಸ್.ರಮೇಶ್ ಅಧ್ಯಕ್ಷತೆ ವಹಿಸುವರು

ನಿವೃತ್ತ ಸಿಬ್ಬಂದಿಗೆ ಸನ್ಮಾನ

ಕಾರ್ಯಕ್ರಮದ ಅಂಗವಾಗಿ ಮಧ್ಯಾಹ್ನ 3 ಗಂಟೆಗೆ ಜೆಎಸ್ಎಸ್ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದವರನ್ನು ಅಭಿನಂದಿಸಲಾಗುತ್ತಿದೆ. ಈ ಸಾಲಿನಲ್ಲಿ ಸುಮಾರು 102 ಮಂದಿ ನಿವೃತ್ತರಾಗಿದ್ದಾರೆ. 63 ಮಂದಿ ಕೆಲಸದಿಂದ ಬಿಡುಗಡೆ ಪಡೆದಿದ್ದಾರೆ. 12 ಮಂದಿ ಸೇವೆಯಲ್ಲಿರುವಾಗಲೇ ಮೃತಪಟ್ಟಿದ್ದು ಅವರ ಕುಟುಂಬದವರಿಗೆ ಸಾಂತ್ವನ ಹೇಳಿ, ನಿವೃತ್ತರಾದವರನ್ನು ಅಭಿನಂದಿಸಲಾಗುತ್ತದೆ. ಜತೆಗೆ ಜೆಎಸ್ಎಸ್ ವಿದ್ಯಾಸಂಸ್ಥೆಗಳಲ್ಲಿ ಎಸ್ಎಸ್ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತದೆ ಎಂದು. ಜೆಎಸ್ಎಸ್ ಶಾಲಾ ಕಾಲೇಜುಗಳ ಉತ್ತಮ ವಾರ್ಷಿಕ ಸಂಚಿಕೆಗಳಿಗೆ ಹಾಗೂ ಪ್ರಸಾದ ಮಾಸಿಕ ಪ್ರಬಂಧಸ್ಪರ್ಧೆ ವಿಜೇತರಿಗೆ ಬಹುಮಾನ ನೀಡಲಾಗುತ್ತದೆ. ಜೆಎಸ್ಎಸ್ ಪ್ರಸಾದ ನಿಲಯಗಳ ಹಿರಿಯ ವಿದ್ಯಾರ್ಥಿಗಳ ಸಂಘದಿಂದ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾನ್ವಿತರಿಗೆ ವಿದ್ಯಾರ್ಥಿವೇತನ ನೀಡಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜೆಎಸ್ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಶಿವಕುಮಾರಸ್ವಾಮಿ, ಪ್ರಕಟಣ ವಿಭಾಗದ ನಿರ್ದೇಶಕ ಮೊರಬದ ಮಲ್ಲಿಕಾರ್ಜುನ, ಕಾನೂನು ಕಾಲೇಜಿನ ಕಾರ್ಯನಿರ್ವಾಹಕ ಪ್ರೊ.ಕೆ.ಎಸ್.ಸುರೇಶ್ ಇದ್ದರು.

ಇಂದು ಮೈಸೂರು ಅರಮನೆಗೆ ದಸರಾ ಗಜಪಡೆ ಪ್ರವೇಶ

● ಬೆಳಗ್ಗೆ 10ರಿಂದ 10.30ಕ್ಕೆ ತುಲಾ ಲಗ್ನದಲ್ಲಿ ಅರಮನೆ ಜಯಮಾರ್ತಾಂಡ ದ್ವಾರ ಪ್ರವೇಶ ● ಅರಣ್ಯ ಭವನದಲ್ಲೂ ಸಾಂಪ್ರದಾಯಿಕ ಪೂಜೆ



ಮೈಸೂರು, ಆ.22(ಎಂಟಿವೈ)– ಅರಣ್ಯ ಭವನದಲ್ಲಿ ಬೀಡು ಬಿಟ್ಟಿರುವ ದಸರಾ ಗಜಪಡೆ ಮೊದಲ ತಂಡ 9 ಆನೆಗಳು ಶುಕ್ರವಾರ(ಆ.22) ಮೈಸೂರು ಅರಮನೆ ಆವರಣ ಪ್ರವೇಶಿಸಲಿವೆ.

ಮೈಸೂರಿನ ಅಶೋಕಪುರಂನಲ್ಲಿರುವ ಅರಣ್ಯ ಭವನದಲ್ಲಿ ನಾಳೆ(ಆ.23) ಬೆಳಗ್ಗೆ 8.30ಕ್ಕೆ ಅರಣ್ಯ ಇಲಾಖೆಯಿಂದ ಹಿರಿಯ ಅರಣ್ಯಾಧಿಕಾರಿಗಳ ತಂಡ ಹಾಗೂ ಸಿಬ್ಬಂದಿಗಳು ಸಾಂಪ್ರದಾಯಿಕ ಪೂಜೆ ಸಲ್ಲಿಸಿದ ಬಳಿಕ ಮಂಗಳವಾದ್ಯ ತಂಡದೊಂದಿಗೆ ದಸರಾ ಗಜಪಡೆಯನ್ನು ಅಶೋಕಪುರಂ, ಬಲ್ಲಾಳ್ ವೃತ್ತ ಜೆಎಲ್‌ಬಿ ರಸ್ತೆ ರಾಮ ಸ್ವಾಮಿ ವೃತ್ತ ಚಾಮರಾಜ ಜೋಡಿ ರಸ್ತೆ, ಗನ್ ಹೌಸ್ ವೃತ್ತ, ಬಿ.ಎನ್.ರಸ್ತೆಯ ಮೂಲಕ ಜಯ ಮಾರ್ತಾಂಡ ದ್ವಾರದ ಬಳಿಗೆ ಕರೆತರಲಾಗುತ್ತದೆ.

ತುಲಾ ಲಗ್ನದಲ್ಲಿ ಅರಮನೆ ಪ್ರವೇಶ: ಬಳಿಕ ಅರಮನೆಯ ಜಯಮಾರ್ತಾಂಡ ದ್ವಾರದ ಬಳಿ ಬೆಳಗ್ಗೆ 10ರಿಂದ 10.30ರೊಳಗೆ ಸಲ್ಲುವ ಶುಭ ತುಲಾ ಲಗ್ನದಲ್ಲಿ ಅರಮನೆ ವತಿಯಿಂದ ಗಜಪಡೆಗೆ ಸಾಂಪ್ರದಾಯಿಕ ಪೂಜೆ ಮಾಡಿ, ಅರಮನೆಗೆ ಗಜಪಡೆಯನ್ನು ಬರಮಾಡಿಕೊಳ್ಳಲಾಗುತ್ತದೆ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಚಿವ ಕೆ.ವೆಂಕಟೇಶ್ ಪೂಜೆ ಸಲ್ಲಿಸುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಟಿ.ಎಸ್.ಶ್ರೀವತ್ಸ ವಹಿಸಲಿದ್ದಾರೆ.


ಬಳಿಕ ನಗರ ಪೊಲೀಸರಿಂದ ಗಜಪಡೆಗೆ ಗಾರ್ಡ್ ಆಫ್ ಹಾನರ್ ನೀಡಿ, ಗೌರವ ಸಲ್ಲಿಸಲಾಗುತ್ತದೆ. ಬಳಿಕ ಮಂಗಳವಾದ್ಯ, ಕಳಸ ಹೊತ್ತ ಮುತ್ತೈದೆಯರು ಹಾಗೂ ಇನ್ನಿತರ ಜಾನಪದ ಕಲಾತಂಡಗಳೊಂದಿಗೆ ಅಭಿಮನ್ಯು ನೇತೃತ್ವದ ಗಜಪಡೆಯನ್ನು ಅರಮನೆಯ ಆನೆ ಬಾಗಿಲ ಬಳಿ ಕರೆತರಲಾಗುತ್ತದೆ ಬಳಿಕ ಎಲ್ಲಾ ಆನೆಗಳ ಮಾವುತರಿಗೆ ಅರಮನೆ ಮಂಡಳಿ ವತಿಯಿಂದ ಅಗತ್ಯ ವಸ್ತುಗಳ ಕಿಟ್ ವಿತರಿಸಲಾಗುತ್ತದೆ. ಬಳಿಕ ಪ್ರತಿವರ್ಷದಂತೆ ಎಲ್ಲಾ ಆನೆಗಳ ಅರಮನೆ ಆವರಣದಲ್ಲಿರುವ ಕೋಡಿ ಸೋಮೇಶ್ವರ ದೇವಾಲಯದ ಬಳಿ ನಿರ್ಮಿಸಿರುವ ಶೆಡ್‌ನಲ್ಲಿ ಬೀಡು ಬಿಡಲಿವೆ. ಆ.24ರಂದು ಎಲ್ಲಾ ಆನೆಗಳಿಗೂ ತೂಕ ಮಾಡಿಸಲಾಗುತ್ತದೆ. ಆ.25ರಿಂದ ಜಂಬೂಸವಾರಿ ತೆರಳುವ ಮಾರ್ಗದಲ್ಲಿ ತಾಲೀಮು ಆರಂಭಿಸಲಿವೆ.

ಆ.26ರಂದು ಶ್ರೀ ಕೃಷ್ಣ ಜಯಂತಿ

ಮೈಸೂರು,ಆ.22– ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆ.26ರಂದು ಬೆಳಿಗ್ಗೆ 10 ಗಂಟೆಗೆ ಕರ್ನಾಟಕ ಕಲಾಮಂದಿರ ಆವರಣದ ಕಿರುರಂಗ ಮಂದಿರದಲ್ಲಿ ಶ್ರೀ ಕೃಷ್ಣ ಜಯಂತಿ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಾಗೂ ಉಕ್ಕು ಮತ್ತು ಬೃಹತ್ ಕೈಗಾರಿಕಾ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಉಪಸ್ಥಿತಿಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ ಮಹದೇವಪ್ಪನವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆಹರೀಶ್‌ಗೌಡ ಅಧ್ಯಕ್ಷತೆ ವಹಿಸಲಿದ್ದಾರೆ.

ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್, ಹೆಚ್.ಡಿ ಕೋಟೆ ಶಾಸಕ ಅನಿಲ್‌ಕುಮಾರ್.ಸಿ, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತದ ಅಧ್ಯಕ್ಷ ಎ.ಬಿ ರಮೇಶ್ ಬಂಡಿ ಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಗೌರವ ಉಪಸ್ಥಿತರಿರಲಿದ್ದಾರೆ.

ದಸರಾ ಗಜಪಡೆ ನೋಡಲು ಅರಣ್ಯ ಭವನದಲ್ಲಿ ಜನ ಜಾತ್ರೆ



ಅರಣ್ಯ ಭವನದ ಆವರಣದಲ್ಲಿ ವಿರಮಿಸುತ್ತಿರುವ ದಸರಾ ಗಜಪಡೆ.

ಮೈಸೂರು, ಆ.22(ಎಂಟಿವೈ)– ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ವಿವಿಧ ಕ್ಯಾಂಪ್‌ಗಳಿಂದ ಗಜ ಪಯಣದ ಮೂಲಕ ಮೈಸೂರಿನ ಅರಣ್ಯ ಭವನದ ಆವರಣಕ್ಕೆ ಬಂದಿಳಿ ದಿರುವ ಕ್ಯಾಪ್ಟನ್ ಅಭಿಮನ್ಯು ನೇತೃತ್ವದ ಮೊದಲ ತಂಡದ 9 ಆನೆಗಳನ್ನು ನೋಡಲು ವಿವಿಧೆಡೆಯಿಂದ ಆಗಮಿಸಿದ್ದ ಜನ ಗಜಪಡೆಯನ್ನು ಕಂಡು ಸಂಭ್ರಮಿಸಿದರು.

ಹುಣಸೂರು ತಾಲೂಕಿನ ವೀರನ ಹೊಸಳ್ಳಿ ಗೇಟ್ ಬಳಿಯಿಂದ ಬುಧವಾರ ಬೆಳಗ್ಗೆ ಗಜಪಯಣಕ್ಕೆ ವಿಜೃಂಭಣೆಯಿಂದ ಚಾಲನೆ ನೀಡಲಾಗಿತ್ತು. ಸಂಜೆ ವೇಳೆಗೆ ಲಾರಿ ಮೂಲಕ ಮೈಸೂರಿಗೆ ಆಗಮಿಸಿದ್ದ ಆನೆಗಳು ವಿಶ್ರಾಂತಿ ಪಡೆದಿದ್ದವು. ಇಂದು ಬೆಳಗ್ಗಿನಿಂದಲೂ ದಸರಾ ಗಜಪಡೆ ರಿಲ್ಯಾಕ್ಸ್ ಮೂಡ್‌ನಲ್ಲಿ ವಿಹರಿಸಿದವು. ಯಾವುದೇ ತಾಲೀಮು ಇಲ್ಲದೆ, ಆಹಾರ, ನೀರು ಸೇವಿಸಿ ಲವಲವಿಕೆಯಿಂದ ದಿನ ದೂಡಿದವು.

ಆನೆ ಕಾಣಲು ಜನಜಂಗುಳಿ: ಅರಣ್ಯ ಭವನದಲ್ಲಿ ಬೀಡು ಬಿಟ್ಟಿರುವ ದಸರಾ ಗಜಪಡೆಯನ್ನು ಕಾಣಲು ಜನಜಂಗುಳಿ ನೆರೆದಿತ್ತು. ಅಶೋಕಪುರಂ, ಕೃಷ್ಣಮೂರ್ತಿಪುರಂ, ಚಾಮುಂಡಿಪುರಂ, ಜಯನಗರ, ವಿದ್ಯಾರಣ್ಯಪುರಂ ಸೇರಿದಂತೆ ವಿವಿಧ ಬಡಾವಣೆಗಳಿಂದ ನೂರಾರು ಮಂದಿ ಆನೆ ನೋಡಲು ಮಕ್ಕಳೊಂದಿಗೆ ಅರಣ್ಯ ಭವನದ ಆವರಣಕ್ಕೆ ಬಂದು ಆನೆಗಳನ್ನು ನೋಡಿ ಆನಂದಿಸಿದರು.

ಸುರಕ್ಷತಾ ದೃಷ್ಟಿಯಿಂದ ಅಂಬಾರಿ ಆನೆ, ಗಜಪಡೆಯ ನಾಯಕ ಅಭಿಮನ್ಯು (58) ಆನೆಯನ್ನು ಪ್ರತ್ಯೇಕ ಸ್ಥಳದಲ್ಲಿ ಕಟ್ಟಿ ಹಾಕಲಾಗಿದ್ದು, ಅದರ ಬಳಿ ಜನ ಹೋಗದಂತೆ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಉಳಿದಂತೆ ಭೀಮ (24), ಗೋಪಿ (42), ಧನಂಜಯ (44), ಕಂಜನ್ (25), ರೋಹಿತ(22), ಲಕ್ಷ್ಮೀ(23), ವರಲಕ್ಷ್ಮೀ(68), ಏಕಲವ್ಯ(39) ಆನೆಗಳನ್ನು ಅಂತರ ಕಾಯ್ದುಕೊಂಡು ಕಟ್ಟಿ ಹಾಕಲಾಗಿತ್ತು. ಎಲ್ಲಾ ಆನೆಗಳ ಬಳಿ ಅನಗತ್ಯವಾಗಿ ಯಾರೂ ಹೋಗದಂತೆ ಕಟ್ಟೆಚ್ಚರ ವಹಿಸಲಾಗಿತ್ತು.

ಕುಣಿದು ಕುಪ್ಪಳಿಸಿದ ಚಿಣ್ಣರು: ಪೋಷಕರೊಂದಿಗೆ ಅರಣ್ಯ ಭವನದ ಆವರಣಕ್ಕೆ ಬಂದಿದ್ದ ಚಿಣ್ಣರು ದಸರಾ ಆನೆಗಳನ್ನು ಕಂಡು ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. ವರ್ಷಕ್ಕೊಮ್ಮೆ ಆನೆ ನೋಡುವ ಸೌಭಾಗ್ಯ ಮೈಸೂರಿನ ಜನತೆಗೆ ದೊರೆಯುವುದರಿಂದ ಇಂದು ಸುತ್ತಮುತ್ತಲಿನ ಬಡಾವಣೆಗಳ ನಿವಾಸಿಗಳು ತಮ್ಮ ಮಕ್ಕಳಿಗೆ ಆನೆಗಳನ್ನು ತೋರಿಸಿ ಸಂಭ್ರಮಿಸಿದರು.

ರೈಲು ಕಂಡು ದಿಟ್ಟಿಸಿದ ಕಂಜನ್: ಅರಣ್ಯ ಭವನದ ಹಿಂಭಾಗದ ಮೈಸೂರು–ನಂಜನಗೂಡು ರೈಲ್ವೆ ಹಳಿಯಿದ್ದು, ರೈಲು ಸಂಚಾರದ ವೇಳೆ ಶಬ್ದ ಕಂಡು ಕಂಜನ್ ಆನೆ ರೈಲನ್ನೇ ದಿಟ್ಟಿಸಿ ನೋಡುತ್ತಿತ್ತು ಐದಾರು ಬಾರಿ ರೈಲು ಎರಡೂ ದಿಕ್ಕಿನಲ್ಲೂ ಸಂಚರಿಸಿದ್ದರಿಂದ ಕುತೂಹಲದಿಂದ ರೈಲು ಸಾಗುತ್ತಿರುವುದನ್ನು ನೋಡುತ್ತಾ ನಿಲ್ಲುತ್ತಿತ್ತಲ್ಲದೆ, ಸಣ್ಣದಾಗಿ ಘೀಳಿಡುತ್ತಾ ಆಶ್ಚರ್ಯ ವ್ಯಕ್ತಪಡಿಸುತ್ತಿದ್ದ ದೃಶ್ಯ ಕಂಡು ಬಂದಿತು.

ಯಡಿಯೂರಪ್ಪ ಸಿಎಂ ಆಗಿದ್ದಾಗ ಶ್ರೀವತ್ಸ ಮುಡಾದಿಂದ ಜಿ–ಕೆಟಗರಿ ನಿವೇಶನ ಪಡೆದಿದ್ದಾರೆ

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಆರೋಪ



ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಸುದ್ದಿಗೋಷ್ಠಿ ನಡೆಸಿದರು.

ಮೈಸೂರು, ಆ.22(ಎಂಟಿವೈ)–ಕೆ.ಆರ್.ಕ್ಷೇತ್ರದ ಬಿಜೆಪಿ ಶಾಸಕ ಟಿ.ಎಸ್.ಶ್ರೀವತ್ಸ ಅವರು ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದ ವೇಳೆ ಮುಡಾದಿಂದ ಜಿ–ಕೆಟಗರಿ ನಿವೇಶನ ಪಡೆದಿದ್ದಾರೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಆರೋಪಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಯಡಿಯೂರಪ್ಪ ಮುಖ್ಯಮಂತ್ರಿ ಆಗಿದ್ದ ವೇಳೆ ಶ್ರೀವತ್ಸ ಸೇರಿ ಬಿಜೆಪಿಯ ನಾಲ್ವರು ಪ್ರಮುಖ ಕಾರ್ಯಕರ್ತರಿಗೆ ಮುಖ್ಯಮಂತ್ರಿಗಳ ವಿವೇಚನಾ ಕೋಟಾದಡಿ ನಿವೇಶನ ಹಂಚಿಕೆ ಮಾಡಿದ್ದಾರೆ. ಆ ಸಂದರ್ಭದಲ್ಲಿ ಶ್ರೀವತ್ಸ ಶಾಸಕರಾಗಿಯೂ ಇರಲಿಲ್ಲ. ಹಾಗಿರುವಾಗ ಯಾವ ಅರ್ಹತೆ ಮೇರೆಗೆ ಅವರು ಜಿ–ಕೆಟಗರಿ ನಿವೇಶನ ಪಡೆದಿದ್ದಾರೆ ಎಂಬುದರ ಬಗ್ಗೆ ತನಿಖೆಯಾಗಬೇಕು ಎಂದು ಬಿಜೆಪಿ ಮುಖಂಡರೇ ಮಾತನಾಡಿಕೊಳ್ಳುತ್ತಿದ್ದಾರೆ ಎಂದರು.

ಕೆ.ಆರ್.ಕ್ಷೇತ್ರದಲ್ಲಿ ಲಾಟರಿ ಹೊಡೆದಂತೆ ಶ್ರೀವತ್ಸ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಆಗ ಹಾಲಿ ಶಾಸಕರಾಗಿದ್ದ ಎ.ಎಸ್.ರಾಮದಾಸ್ ಅವರಿಗೆ ಟಿಕೆಟ್ ತಪ್ಪಿಸಿ, ಬಿ.ಎಲ್.ಸಂತೋಷ್ ಅವರು ಶ್ರೀವತ್ಸ ಅವರಿಗೆ ಟಿಕೆಟ್ ಕೊಟ್ಟರು. ಹೀಗೆ ಲಾಟರಿ ಹೊಡೆದಂತೆ ಇವರು ಶಾಸಕರಾಗಿದ್ದಾರೆ. ಇವರು ಮುಖ್ಯಮಂತ್ರಿಗಳ ವಿರುದ್ಧ ಏನು ಬೇಕಾದರೂ ಟೀಕೆ ಮಾಡಬಹುದು. ಆದರೆ ನಾವು ಮಾತ್ರ ಬಾಯಿ ಮುಚ್ಚಿಕೊಂಡಿರಬೇಕೇ? ಇದು ಯಾವ ನ್ಯಾಯ? ನನಗೆ ಲೀಗಲ್ ನೋಟಿಸ್ ಕೊಟ್ಟಿದ್ದಾರೆ. ಅದರ ಜೊತೆಗೆ ಮಾನನಷ್ಟ ಮೊಕದ್ದಮೆ ಬೇಕಾದರೂ ದಾಖಲಿಸಲಿ, ಅದಕ್ಕೆಲ್ಲಾ ನಾನು ಹೆದರುವುದಿಲ್ಲ ಎಂದು ಸವಾಲೆಸೆದರು.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತದಲ್ಲಿ 63 ಪ್ರಕರಣಗಳು ದಾಖಲಾಗಿವೆ ಎನ್ನುತ್ತಾರೆ. ಆದರೆ, ಲೋಕಾಯುಕ್ತ ವಿಶ್ವನಾಥ್ ಶೆಟ್ಟಿ ಅವರೇ ಹೇಳಿರುವಂತೆ ಶಾಲಾ ಕೊಠಡಿ ಇಲ್ಲ, ರಸ್ತೆ ಸರಿ ಇಲ್ಲ ಎಂಬ ಸಾರ್ವಜನಿಕ ದೂರುಗಳಿಗೆ ಸಿದ್ದರಾಮಯ್ಯ ಅವರನ್ನು ಪಾರ್ಟಿ ಮಾಡಿದ್ದಾರೆ. ಅವುಗಳನ್ನು ತೆಗೆದು ಹಾಕುವಂತೆ ಸೂಚಿಸಲಾಗಿದೆ ಎಂದು ಶೆಟ್ಟಿ ಅವರು ತಿಳಿಸಿದ್ದಾರೆ. ಇವಲ್ಲದೆ, 2007– 2022ರವರೆಗೆ ಸಿದ್ದರಾಮಯ್ಯ ಅವರ ವಿರುದ್ಧ ಇರುವ ಪ್ರಕರಣಗಳೆಂದರೆ ಮೇಕೆದಾಟು, ರಸ್ತೆ ತಡೆ ಮುಂತಾದ ಪ್ರತಿಭಟನೆಗಳಿಗೆ ಸಂಬಂಧಿಸಿದ್ದಾಗಿದೆ. ಇದು ಪೊಲೀಸ್ ಮಹಾನಿರ್ದೇಶಕರು ನೀಡಿದ ದಾಖಲೆಗಳು ಎಂದು ಸ್ಪಷ್ಟಪಡಿಸಿದರು.

2007ರಲ್ಲಿ ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಆಗಿದ್ದಾಗ ಶೆಲ್ ಎಂಬ ಕಂಪೆನಿಗೆ ಒಂದೇ ದಿನದಲ್ಲಿ 550 ಎಕರೆ ಜಮೀನಿನಲ್ಲಿ ಗಣಿಗಾರಿಕೆಗೆ ಅನುಮತಿ ನೀಡಿದ್ದಾರೆ. ಈ ಸಂಬಂಧ ಅಂದಿನ ಲೋಕಾಯುಕ್ತ ಸಂತೋಷ್ ಹೆಗ್ಡೆ ಅವರು ತನಿಖೆ ನಡೆಸಿ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಿಸಿದ್ದರು. ನ್ಯಾಯಾಲಯದ ಸೂಚನೆ ಮೇರೆಗೆ ಕೇಂದ್ರ ಸರ್ಕಾರ ವಿಶೇಷ ತನಿಖಾ ದಳವನ್ನು ನೇಮಿಸಿದೆ. ಇದು ಸಿದ್ದರಾಮಯ್ಯ ಅವರು ರಚಿಸಿರುವ ತನಿಖಾ ತಂಡವಲ್ಲ. ಅಂದು ಕುಮಾರಸ್ವಾಮಿ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ತನಿಖಾ ತಂಡದ ಅಧಿಕಾರಿಗಳು ಅನುಮತಿ ಕೇಳುತ್ತಾರೆ. ಆದರೆ ಇಲ್ಲಿಯವರೆಗೂ ಅನುಮತಿ ಕೊಟ್ಟಿಲ್ಲ. ಆದರೆ, ಸಿದ್ದರಾಮಯ್ಯ ಅವರ ವಿರುದ್ಧದ ಪ್ರಕರಣದಲ್ಲಿ ಕೇವಲ 8 ಗಂಟೆ ಅವಧಿಯೊಳಗೆ ನೋಟಿಸ್ ನೀಡಿ, 8 ದಿನಗಳಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ಹೇಗೆ ನೀಡಿದರು ಎಂದು ಪ್ರಶ್ನಿಸಿದರು.

ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಎಂಬಾತ ಈ ಹಿಂದೆ ಪಾರ್ವತಿ ಅವರು ಮುಡಾಗೆ ಸಲ್ಲಿಸಿದ್ದ ಅರ್ಜಿಯನ್ನು ಪ್ರದರ್ಶಿಸಿದ್ದಾರೆ. ಅದರಲ್ಲಿ ವೈಟ್ನರ್ ಹಾಕಿರುವುದನ್ನು ತೋರಿಸಿದ್ದಾರೆ. ಅದನ್ನು ಸೂಕ್ಷ್ಮವಾಗಿ ಗಮನಿಸಿದರೆ ಅಲ್ಲಿ ಬರೆದಿರುವುದು ಏನು ಎಂದು ತಿಳಿಯುತ್ತದೆ. ದೇವನೂರು ಬಡಾವಣೆ ನಂತರ ರಚನೆಯಾದ ಬಡಾವಣೆಯಲ್ಲಿ ಜಮೀನು ನೀಡಿ ಎಂದು ಬರೆದಿದ್ದಾರೆ. ಅಂದು ನಿವೇಶನಗಳು ಲಭ್ಯವಿಲ್ಲ ಎಂದು ಅಧಿಕಾರಿಗಳು ಹೇಳಿದ ಕಾರಣ ಆ ಪದವನ್ನು ವೈಟ್ನರ್ ಹಾಕಿರಬಹುದು. ಅದರ ಸತ್ಯಾಸತ್ಯತೆ ಅರಿಯದೇ ಸುಳ್ಳು ಹೇಳುವ ಮೂಲಕ ತಮ್ಮ ಬೇಳೆ ಬೇಯಿಸಿಕೊಳ್ಳಲು ಆರ್‌ಟಿಐ ಕಾರ್ಯಕರ್ತ ಮುಂದಾಗಿದ್ದಾನೆ. ಆದರೆ ಅದನ್ನೇ ನಿಜವೆಂದು ಭ್ರಮೆಯಲ್ಲಿರುವ ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ವಿನಾಕಾರಣ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ತೇಜೋವಧೆ ಮಾಡುತ್ತಿರುವುದು ಖಂಡನೀಯ ಎಂದು ಲಕ್ಷ್ಮಣ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮೈಸೂರು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಪ್ರಧಾನ ಕಾರ್ಯದರ್ಶಿಗಳಾದ ಎಂ.ಶಿವಣ್ಣ, ಭಾಸ್ಕರ್ ಎಲ್.ಗೌಡ, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ವಕ್ತಾರ ಮಹೇಶ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಮಿ. ಬಚ್ಚನ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಭೀಮಾ (ಕ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೀಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ತಂಗಾಲಾನ್ (ತ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಗೌರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ತ್ರೀ–2 (ಹಿ)	4 ಪ್ರದರ್ಶನಗಳು
ಪ್ರಭಾ	
ತಾಜ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಹೆರಾಲ್ಡ್ ಅಂಡ್ ದಿ ಪರ್ಪಲ್ ಕ್ರಯಾನ್ (ಇಂ): ಬೆ.11ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.1ಕ್ಕೆ, ಸಂ.4.05ಕ್ಕೆ, ಸ್ತ್ರೀ 2 (ಹಿಂ): ರಾ.7.10ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಬೆ.10.45ಕ್ಕೆ, ಹೆರಾಲ್ಡ್ ಅಂಡ್ ದಿ ಪರ್ಪಲ್ ಕ್ರಯಾನ್ (ಇಂ): ಮ.2.10ಕ್ಕೆ, ಪೌಡರ್ (ಕ): ಸಂ.4.30ಕ್ಕೆ, ರಾ.7.15ಕ್ಕೆ, ವಾರ್ಝಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ರಾ.10ಕ್ಕೆ.
ಸ್ಕ್ರೀನ್ 3	ಏಲಿಯನ್ ರೊಮುಲಸ್ (ಇಂ): ಬೆ.10.55ಕ್ಕೆ, ಸಂ.4.50ಕ್ಕೆ, ರಾ.7.30ಕ್ಕೆ, ತಂಗಲಾನ್ (ತ): ಮ.1.25ಕ್ಕೆ, ಭೀಮಾ (ಕ): ರಾ.10ಕ್ಕೆ.
ಸ್ಕ್ರೀನ್ 4	ಸ್ತ್ರೀ 2 (ಹಿಂ): ಬೆ.10.20ಕ್ಕೆ, ಸಂ.4.10ಕ್ಕೆ, ಭೀಮಾ (ಕ): ಮ.1.15ಕ್ಕೆ, ಕೃಷ್ಣಂ ಪ್ರಣಯ ಸಖಿ (ತ): ರಾ.7.05ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಭೀಮಾ (ಕ): ಬೆ.10.50ಕ್ಕೆ, ಪೌಡರ್ (ಕ): ಮ.1.45ಕ್ಕೆ, ಸಂ.4.20ಕ್ಕೆ, ಫೂಟೇಜ್ (ಮ): ಸಂ.6.55ಕ್ಕೆ, ನುನಕ್ಕುಝಿ (ಮ): ರಾ.9.25ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಮ.12.25ಕ್ಕೆ, ಸಂ.6.25ಕ್ಕೆ, ರಾ.9.30ಕ್ಕೆ, ಭೀಮಾ (ಕ): ಮ.3.50ಕ್ಕೆ.
ಸ್ಕ್ರೀನ್ 3	ಸ್ತ್ರೀ 2 (ಹಿಂ): ಬೆ.10ಕ್ಕೆ, ಮ.12.50ಕ್ಕೆ, ಸಂ.6.50ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.45ಕ್ಕೆ, ಹಂಟ್ (ಮ): ರಾ.9.40ಕ್ಕೆ.
ಸ್ಕ್ರೀನ್ 4	ಕೃಷ್ಣಂ ಪ್ರಣಯ ಸಖಿ (ಕ): ಬೆ.10.20ಕ್ಕೆ, ಭೀಮಾ (ಕ): ಮ.1.25ಕ್ಕೆ, ಸಂ.6.35ಕ್ಕೆ, ಹಂಟ್ (ಮ): ಸಂ.4.20ಕ್ಕೆ, ಸ್ತ್ರೀ 2 (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಕಾರಲ್ಲಿ ಬಂದು ವೃದ್ಧೆಯ ಮಾಂಗಲ್ಯ ಸರ ಕಸಿದ ಖದೀಮರು

ಮೈಸೂರು, ಆ.22(ಎಸ್‌ಬಿಡಿ)– ಖದೀಮರು ಕಾರಿನಲ್ಲಿ ಬಂದು ವೃದ್ಧೆಯ ಮಾಂಗಲ್ಯ ಸರ ಕಿತ್ತುಕೊಂಡು ಹೋಗಿರುವ ಘಟನೆ ಮೈಸೂರಿನ ವಸಂತನಗರದಲ್ಲಿ ನಡೆದಿದೆ.

ಇಲ್ಲಿನ ನಾಲ್ಕನೇ ಮುಖ್ಯರಸ್ತೆಯ ಶಾರದಾ(65) ಅವರ ಸುಮಾರು 2.50 ಲಕ್ಷ ರೂ. ಮೌಲ್ಯದ 50 ಗ್ರಾಂ ಚಿನ್ನದ ಮಾಂಗಲ್ಯ ಸರವನ್ನು ಕಳ್ಳರು ಕಿತ್ತುಕೊಂಡು ಪರಾರಿಯಾಗಿದ್ದಾರೆ.

ಶಾರದಾ ಅವರ ಪುತ್ರ ಸೇನೆಯಲ್ಲಿದ್ದು, ಸೊಸೆ ಮತ್ತು ಮೊಮ್ಮಕ್ಕಳು ವಸಂತನಗರದಲ್ಲಿ ನೆಲೆಸಿದ್ದಾರೆ. ಇವರನ್ನು ನೋಡಲೆಂದು ಊರಿನಿಂದ ಬಂದಿದ್ದ ಶಾರದಾ ಅವರು ಮಂಗಳವಾರ ಬೆಳಗ್ಗೆ ಚಾಮುಂಡಿಬೆಟ್ಟಕ್ಕೆ ಹೋಗಿದ್ದರು. ವಾಪಸ್ ಬಸ್ಸಿನಲ್ಲಿ ವಸಂತನಗರ ಬಸ್ ನಿಲ್ದಾಣಕ್ಕೆ ಬಂದಿಳಿದ ಅವರು ಮಧ್ಯಾಹ್ನ ಸುಮಾರು 1 ಗಂಟೆ ಸಮಯದಲ್ಲಿ ನಾಲ್ಕನೇ ಮುಖ್ಯ ರಸ್ತೆಯಲ್ಲಿರುವ ಮಗನ ಮನೆಗೆ ಹೋಗುವಾಗ ಕರೆ ಮಾಡಿದ ತಮ್ಮ ಪತಿಯೊಂದಿಗೆ ಮಾತನಾಡುತ್ತಾ ಮುಂದೆ ಸಾಗಿದ್ದರು.

ಅಷ್ಟರಲ್ಲಿ ಹಿಂಭಾಗದಿಂದ ಬಂದ ನೀಲಿ ಬಣ್ಣದ ಕಾರಿನಿಂದಿಳಿದ ವ್ಯಕ್ತಿಯೊಬ್ಬ ಏಕಾಏಕಿ ಶಾರದಾ ಅವರ ಕೊರಳಿನಲ್ಲಿದ್ದ ಸರ ಕಿತ್ತುಕೊಳ್ಳಲು ಯತ್ನಿಸಿದ್ದಾನೆ. ಆಗ ಜೋರಾಗಿ ಕಿರುಚಿಕೊಂಡ ಶಾರದಾ ಅವರು ಸರವನ್ನು ಬಿಗಿಯಾಗಿ ಹಿಡಿದುಕೊಂಡರೂ ಕಳ್ಳ ಸರ ಕಿತ್ತುಕೊಂಡು ನಿಧಾನವಾಗಿ ಸಾಗುತ್ತಿದ್ದ ಕಾರು ಹತ್ತಿದ್ದಾನೆ. ಬಳಿಕ ಕಾರು ವೇಗವಾಗಿ ಕಣ್ಮರೆಯಾಗಿದೆ.

ಘಟನೆಯಲ್ಲಿ ಶಾರದಾ ಅವರ ಕುತ್ತಿಗೆಗೆ ಸಣ್ಣ ಪ್ರಮಾಣದ ಗಾಯವಾಗಿದೆ. ಈ ಸಂಬಂಧ ಆಲನಹಳ್ಳಿ ಠಾಣೆಗೆ ದೂರು ನೀಡಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ಖದೀಮರ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ.

ಬೈಕ್ ಬಿಟ್ಟು ಕಾರು: ಈ ಹಿಂದೆ ಸರಗಳ್ಳರು ಪಲ್ಸರ್ ಇನ್ನಿತರ ಬೈಕ್‌ಗಳನ್ನು ದುಷ್ಕೃತ್ಯಕ್ಕೆ ಬಳಸುತ್ತಿದ್ದರು. ಆದರೆ ಇತ್ತೀಚೆಗೆ ಬೈಕ್ ಬಿಟ್ಟು ಕಾರಿನಲ್ಲಿ ಕೃತ್ಯ ಮೆರೆಯುತ್ತಿದ್ದಾರೆ. ಹೆಚ್ಚು ಜನ ಸಂಚಾರ ಇಲ್ಲದ ಪ್ರದೇಶಗಳಲ್ಲಿ ಕಾರಿನಲ್ಲಿ ಸುತ್ತಿ ಹೊಂಚು ಹಾಕುವ ಖದೀಮರು, ಒಂಟಿ ಮಹಿಳೆಯರು ಸಿಕ್ಕಾಗ ಸರ ಕಿತ್ತುಕೊಂಡು ಪರಾರಿಯಾಗುತ್ತಾರೆ. 10 ದಿನಗಳ ಹಿಂದೆ ಮೈಸೂರು ತಾಲೂಕು, ಕೋಟೆಹುಂಡಿ ಗ್ರಾಮದ ಬಳಿಯೂ ಇದೇ ರೀತಿಯ ಘಟನೆ ನಡೆದಿತ್ತು. ನಂಬರ್ ಪ್ಲೇಟ್ ಇಲ್ಲದ ಕಾರಿನಲ್ಲಿ ಬಂದಿದ್ದ ಖದೀಮರು ದಾರಿ ಕೇಳುವ ನೆಪದಲ್ಲಿ ಕುರಿ ಮೇಯಿಸುತ್ತಿದ್ದ ಮಹಿಳೆಯ 20 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರವನ್ನೂ ಕಿತ್ತುಕೊಂಡು ಪರಾರಿಯಾಗಿದ್ದರು. ಇಲವಾಲದ ಬಳಿಯೂ ಖದೀಮರು ಕಾರಿನಲ್ಲಿ ಬಂದು ಮಹಿಳೆಯ ಸರ ಕಿತ್ತುಕೊಳ್ಳಲು ಪ್ರಯತ್ನಿಸಿದಾಗ ಅವರು ನೆಲಕ್ಕೆ ಬಿದ್ದು ತೀವ್ರವಾಗಿ ಗಾಯಗೊಂಡು ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದಾರೆ ಎಂದು ತಿಳಿದುಬಂದಿದೆ. ಖದೀಮರು ಸರಕಳ್ಳತನಕ್ಕೆ ಬೈಕ್‌ಗಿಂತ ಕಾರು ಸುರಕ್ಷಿತ ಎಂದು ಯೋಚಿಸಿದಂತಿದೆ. ಈ ಬಗ್ಗೆ ಪೊಲೀಸರು ಗಮನಹರಿಸಬೇಕು. ಸಾರ್ವಜನಿಕರೂ ಜಾಗೃತವಾಗಿರಬೇಕು.

ಸಿದ್ದರಾಮಯ್ಯ ಅಧಿಕಾರದಿಂದ ಕೆಳಗಿಳಿಯುವವರೆಗೂ ವಿಶ್ರಮಿಸುವುದಿಲ್ಲ: ಬಿಜೆಪಿ ಮುಖಂಡರ ಘೋಷಣೆ



ಬೆಂಗಳೂರು, ಆ.22(ಕೆಎಂಶಿ)–ಮುಡಾ ಹಗರಣದಲ್ಲಿ ಸಿಲುಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರದಿಂದ ಕೆಳಗಿಳಿಯುವವರೆಗೂ ವಿಶ್ರಮಿಸುವುದಿಲ್ಲ ಎಂದು ರಾಜ್ಯ ಬಿಜೆಪಿ ಘೋಷಿಸಿದೆ.

ಹಗರಣದ ನೈತಿಕ ಹೊಣೆ ಹೊತ್ತು ರಾಜೀನಾಮೆಗೆ ಒತ್ತಾಯಿಸಿ ರಾಜ್ಯಾದ್ಯಂತ ಬಿಜೆಪಿ ಇಂದು ಪ್ರತಿಭಟನೆ ಹಮ್ಮಿಕೊಂಡಿತ್ತು. ಇದರ ಅಂಗವಾಗಿ ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನಾ ಸಮಾವೇಶದಲ್ಲಿ ಭಾಗವಹಿಸಿದ್ದ ಮುಖಂಡರು, ನಮ್ಮ ಗುರಿ ಮುಟ್ಟುವವರೆಗೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಶಪಥ ಮಾಡಿದರು.

ಭ್ರಷ್ಟಾಚಾರದ ಕಪ್ಪನ್ನು ಅಳಿಸುವವರೆಗೆ, ನಿಮ್ಮನ್ನು ಮನೆಗೆ ಕಳಿಸುವವರೆಗೆ ನಾವು ವಿರಮಿಸುವುದಿಲ್ಲ, ನಾವು ಹೋರಾಟದಿಂದ ಹಿಂದೆ ಸರಿಯುವುದಿಲ್ಲ.

ಸರ್ಕಾರಿ ಜಮೀನನ್ನು ನೀವು ಖರೀದಿಸಿದ್ದೀರಲ್ಲವೇ, ನಿಮ್ಮ ಮಂಡೆಯಲ್ಲಿ ಬುದ್ಧಿ ಉಂಟಾ ಮಾರಾಯರೇ ಎಂದು ಮುಖ್ಯಮಂತ್ರಿಗಳಿಗೆ ಪ್ರಶ್ನೆ ಹಾಕಿದರು. ಹುಲಿಯಾ ಎಂದಾಗ ಖುಷಿ ಪಡುತ್ತಿದ್ದ ನೀವೀಗ ಕರಿಯಾ ಆಗಿ ಕೂತಿದ್ದೀರಲ್ಲಾ ಎಂದು ಪ್ರಶ್ನಿಸಿದರು. ದಲಿತರ ವಿರುದ್ಧದ ಅನ್ಯಾಯ ಪ್ರತಿಭಟಿಸಿ ಕಾಂಗ್ರೆಸ್ಸಿನಲ್ಲಿರುವ ದಲಿತ ಮುಖಂಡರು, ಜನಪ್ರತಿನಿಧಿಗಳು ರಾಜೀನಾಮೆ ಕೊಡಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಪಕ್ಷದಲ್ಲಿರುವ ಎಲ್ಲ ದಲಿತ ಮುಖಂಡರಿಗೂ ಧಿಕ್ಕಾರವಿರಲಿ, ದಲಿತರಿಗೆ ಅನ್ಯಾಯ ಮಾಡಿದ ಮುಖ್ಯಮಂತ್ರಿಗಳು ರಾಜೀನಾಮೆ ಕೊಡಬೇಕು.

ಇಡೀ ರಾಜ್ಯ ಸಿದ್ದರಾಮಯ್ಯನವರ ವಿರುದ್ಧ ಇದೆ. ದಲಿತರಿಗೆ ಮೀಸಲಿಟ್ಟ ಹಣ ವರ್ಗಾವಣೆ ಪ್ರಕರಣ, ವಾಲ್ಮೀಕಿ ನಿಗಮದ ಹಗರಣ, ಮುಡಾ ಹಗರಣ ಎಲ್ಲವೂ ದಲಿತ ಸಮುದಾಯಕ್ಕೆ ಸೇರಿದ ವಿಚಾರಗಳು, ಕಾಂಗ್ರೆಸ್ ಪಕ್ಷ ದಲಿತರ ಸಮಾಧಿ ಮಾಡುತ್ತಿದ್ದರೆ ಸ್ವಾಮೀಜಿಗಳು ಆ ಸಮಾಧಿ ಮೇಲೆ ಕುಳಿತು ಅವರಿಗೆ ಬೆಂಬಲ ಕೊಡುವುದು ಸರಿಯೇ ಎಂದು ಕೇಳಿದರು.

ಜನಹಿತ, ರಾಜ್ಯ ಹಿತದ ರಕ್ಷಣೆಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡಲೇ ರಾಜೀನಾಮೆ ಕೊಡಬೇಕು ಎಂದು ಒತ್ತಾಯಿಸಿದರು. ಭ್ರಷ್ಟ ಸರ್ಕಾರದ ವಿರುದ್ಧ ನಾವು ಜನಜಾಗೃತಿ ಮೂಡಿಸಬೇಕು, ಪ್ರತಿನಿತ್ಯ ಹೋರಾಟ ಮಾಡುವುದೇ ನಮ್ಮ ಕರ್ತವ್ಯವಾಗಿದೆ ಎಂದು ನಾಯಕರು ವಿಶ್ಲೇಷಿಸಿದರು. ಲೂಟಿ ಹೊಡೆಯುವುದೇ ಕಾಂಗ್ರೆಸ್ ಸರ್ಕಾರದ ನೀತಿಯಾಗಿದೆ, ಸಾಕ್ಷಿ ಸಮೇತ ಹಿಡಿದರೂ ಇವರು ರಾಜೀನಾಮೆ ಕೊಡುವುದಿಲ್ಲ, ಜನರ ಭಾವನೆಯನ್ನು ಇವರು ಗೌರವಿಸುವುದಿಲ್ಲ, ಕುರ್ಚಿಗೆ ಅಂಟಿಕೊಂಡೇ ಇರುವ ಭಂಡತನ ಇವರದು ಎಂದು ಟೀಕಿಸಿದರು. ಇವರು ಸಂವಿಧಾನ ಕೈಯಲ್ಲಿ ಹಿಡಿದು ಹಕ್ಕುಗಳ ಬಗ್ಗೆ ಮಾತನಾಡುತ್ತಾರೆ, ಆದರೆ, ತಮ್ಮ ಕರ್ತವ್ಯ, ಜವಾಬ್ದಾರಿಗಳ ಕುರಿತು ಮಾತನಾಡುವುದಿಲ್ಲ, ಸಂವಿಧಾನದ ಆಶಯಗಳನ್ನು ಗೌರವಿಸುವುದಿಲ್ಲ.

ಇವರಿಗೆ ಮದ ಬಂದಿದೆ, ದುರಹಂಕಾರ ಹೆಚ್ಚಾಗಿದೆ, ಬಾಂಗ್ಲಾದೇಶದ ಪರಿಸ್ಥಿತಿ ನಿರ್ಮಿಸುವುದಾಗಿ ಹೇಳುತ್ತಾರೆ, ನಾಲಾಯಕ್ ಗವರ್ನರ್ ಎನ್ನುತ್ತಾರೆ, ರಾಜಭವನಕ್ಕೆ ನುಗ್ಗಿ ಹಲ್ಲೆ ಮಾಡುವುದಾಗಿ ಹೇಳುತ್ತಾರೆ ಎಂದು ಖಂಡಿಸಿದರು. ಸಿದ್ದರಾಮಯ್ಯನವರಿಗೆ ಧಮ್ಮಿದ್ದರೆ, ತಾಕತ್ತಿದ್ದರೆ ಹಗರಣಗಳ ತನಿಖೆಯನ್ನು ಸಿಬಿಐಗೆ ಕೊಡಬೇಕು ಎಂದು ಇನ್ನು ಕೆಲವು ಮುಖಂಡರು ಒತ್ತಾಯಿಸಿದರು. ವೈಟ್ನರ್ ಹಚ್ಚಿದ್ದು ತಮ್ಮ ಸರ್ಕಾರದ ಅವಧಿಯಲ್ಲಿ ಅಲ್ಲ ಎಂದು ಧರ್ಮಸ್ಥಳದ ಮಂಜುನಾಥನ ಸನ್ನಿಧಿಯಲ್ಲಿ ಪ್ರಮಾಣ ಮಾಡಿ ಹೇಳಬೇಕು ಎಂದು ಸಿದ್ದರಾಮಯ್ಯ ಅವರಿಗೆ ಸವಾಲು ಹಾಕಿದರು. ವಿಜಯನಗರದ ಸಮಾನಾಂತರ ಬಡಾವಣೆಯಲ್ಲಿ ನಿವೇಶನ ಕೊಡಿ ಎಂದು ಅರ್ಜಿಯಲ್ಲಿ ಬರೆದದ್ದ ಪದಗಳಿಗೆ ವೈಟ್ನರ್ (ಬಿಳಿ ಬಣ್ಣ) ಹಚ್ಚಿದ್ದಾರೆ, ಸಿದ್ದರಾಮಯ್ಯ ಸುಳ್ಳು ರಾಮಯ್ಯ ಆಗಿದ್ದಾರೆ ಎಂದು ಟೀಕಿಸಿದರು.

ಕಿಡ್ನ್ಯಾಪ್ ಕೇಸ್: ಹೆಚ್.ಡಿ.ರೇವಣ್ಣ, ಭವಾನಿ ಸೇರಿ 9 ಆರೋಪಿಗಳಿಗೆ ಸಮನ್ಸ್, ಖುದ್ದು ಹಾಜರಿಗೆ ಸೂಚನೆ



ಬೆಂಗಳೂರು, ಆ. 22– ಮೈಸೂರು ಜಿಲ್ಲೆಯ ಕೆಆರ್ ನಗರ ಮಹಿಳೆಯ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹೆಚ್.ಡಿ ರೇವಣ್ಣ ಮತ್ತು ಅವರ ಪತ್ನಿ ಭವಾನಿ ರೇವಣ್ಣ ಸೇರಿ 9 ಆರೋಪಿಗಳಿಗೆ ಆಗಸ್ಟ್ 28 ರಂದು ಖುದ್ದು ಹಾಜರಾಗುವಂತೆ ಬೆಂಗಳೂರಿನ 42ನೇ ಎಸಿಎಂಎಂ ಕೋರ್ಟ್‌ನಿಂದ ಸಮನ್ಸ್ ಜಾರಿ ಮಾಡಲಾಗಿದೆ. ಆರೋಪಿ ಭವಾನಿ ರೇವಣ್ಣಗೆ ಹೈಕೋರ್ಟ್ ನೀಡಿದ್ದ ನಿರೀಕ್ಷಣಾ ಜಾಮೀನನ್ನು ಪ್ರಶ್ನಿಸಿ ಎಸ್ಐಟಿ ಅಧಿಕಾರಿಗಳು, ಸುಪ್ರೀಂ ಕೋರ್ಟ್‌ಗೆ ಇತ್ತೀಚೆಗೆ ಮೇಲ್ಮನವಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ್ದ ಸುಪ್ರೀಂಕೋರ್ಟ್‌ನ ದ್ವಿಸದಸ್ಯ ಪೀಠ ಭವಾನಿ ರೇವಣ್ಣಗೆ ನೋಟೀಸ್ ಜಾರಿ ಮಾಡಿದ್ದು, ಅರ್ಜಿ ವಿಚಾರಣೆಯನ್ನು ಮುಂದೂಡಲಾಗಿದೆ.

ಭವಾನಿ ರೇವಣ್ಣ ನಿರೀಕ್ಷಣಾ ಜಾಮೀನು ಅರ್ಜಿ ಪ್ರಶ್ನಿಸಿ ಎಸ್ಐಟಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ್ದ ಸುಪ್ರೀಂ ಕೋರ್ಟ್, ಭವಾನಿ ವಿಚಾರಣೆ ಎದುರಿಸಬೇಕು ಎಂದು ಹೇಳಿತ್ತು. ಮಗನ ಮೇಲೆ ಗಂಭೀರವಾದ ಆರೋಪಗಳಿವೆ, ಮಗ ಮಾಡಿದ ತಪ್ಪಿಗೆ ತಾಯಿಯ ಪಾತ್ರವೇನು ಎಂದು ಎಸ್ಐಟಿ ಪರ ವಕೀಲ ಕಪಿಲ್ ಸಿಬಲ್ ಅವರನ್ನು ನ್ಯಾಯಪೀಠ ಪ್ರಶ್ನೆ ಮಾಡಿತ್ತು. ನ್ಯಾಯಮೂರ್ತಿಗಳ ಪ್ರಶ್ನೆಗೆ ಉತ್ತರಿಸಿದ್ದ ಕಪಿಲ್ ಸಿಬಲ್ ಸಂತ್ರಸ್ತೆಯನ್ನು ಕಿಡ್ನ್ಯಾಪ್ ಮಾಡಿದ ಆರೋಪ ಭವಾನಿ ಮೇಲಿದೆ ಎಂದು ವಾದಿಸಿದ್ದರು. ವಾದ ಆಲಿಸಿದ ನ್ಯಾಯಮೂರ್ತಿಗಳು ಆಕೆ ಆರೋಪದಿಂದ ಮುಕ್ತ ಎನ್ನುವಂತಿಲ್ಲ. ವಿಚಾರಣೆ ಎದುರಿಸಬೇಕು ಎಂದಿದ್ದರು. ಈ ಹಿನ್ನೆಲೆಯಲ್ಲಿ ಭವಾನಿಗೆ ನೋಟಿಸ್ ಜಾರಿ ಮಾಡಲಾಗಿದೆ.

ಮನೆ ಮನೆಗೆ ಶರಣ ಸಂದೇಶ

ಮೈಸೂರು, ಆ.22– ಇಂದು ನಾವುಗಳು ಸ್ವಾರ್ಥದ ಬದುಕಿಗೆ ಹಾಗೂ ಅಂಧಾನುಕರಣೆಯಿಂದ ಕೂಡಿದ ಬದುಕಿಗೆ ಒಳಗಾಗಿ ವಚನ ಶರಣರ ಬದುಕನ್ನು ಮೂಲೆಗುಂಪು ಮಾಡಿದ್ದೇವೆ. ಲೋಕವನ್ನು ಶುದ್ಧವಾಗಿ ಇರಿಸಿಕೊಳ್ಳಬೇಕಾದರೆ ನಾನು ಎಂಬುದನ್ನು ಬಿಟ್ಟು ಶರಣರ ವಚನಗಳನ್ನು ಅಧ್ಯಯನ ಮಾಡಿ, ಆಚರಣೆಗೆ ತಂದರೆ ಸಾಧ್ಯ ಎಂದು ಶರಣ ಸಾಹಿತ್ಯ ಪರಿಷತ್ತು ಮನೆ ಮನೆಗೆ ಶರಣ ಸಂದೇಶ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜಿನ ಅಧ್ಯಾಪಕ ಕೆ.ಎಂ. ಸಿದ್ದಪ್ಪ ಹೇಳಿದರು. ಸಕಲೇಶ ಮಾದರಸನ ಜನ ಮೆಚ್ಚಿ ನಡೆವರಲ್ಲದೆ ಮನಮೆಚ್ಚಿ ನಡೆಯರಯ್ಯ ಎಂಬ ವಚನವನ್ನು ವಿವರಿಸುತ್ತಾ ಇಂದು ಬಾಹ್ಯ ಆಕರ್ಷಣೆಯೇ ಶೇಕಡ 50 ಭಾಗ ನಮ್ಮನ್ನು ಹಾಳು ಮಾಡುತ್ತಿದೆ ಸುಳ್ಳಿನ ಸರಮಾಲೆಗೆ ನಮ್ಮ ಬದುಕಿನ ಧ್ಯೇಯವಾಗಿದೆ. ವೃತ್ತಿ ಕಾಯಕಕ್ಕೆ ನಿಜವಾದ ಅರ್ಥವನ್ನು ತಂದು ಕೊಟ್ಟವರು ಮತ್ತು ಅದರಂತೆ ಬಾಳಿದವರು ಶರಣರು. ಇಂದು ಅದಕ್ಕೆ ವಿರುದ್ಧವಾದ ಬದುಕು ನಮ್ಮದಾಗಿದೆ ಎಂದು ಹೇಳಿದರು.

ಭಾರಿ ಭದ್ರತೆಯಲ್ಲಿ ರಾಜ್ಯಪಾಲರ ಮೈಸೂರು ಭೇಟಿ

ಸಿಎಂ ಸಿದ್ದರಾಮಯ್ಯರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ಬಳಿಕ ಸಾಂಸ್ಕೃತಿಕ ನಗರಿಗೆ ಮೊದಲ ಪ್ರವಾಸ ಕೈಗೊಂಡಿದ್ದ ಥಾವರ್‌ಚಂದ್ ಗೆಹ್ಲೋಟ್



ಮೈಸೂರಿನ ಸಾರಾ ಕನ್ವೇನ್‌ಷನ್ ಹಾಲ್‌ನಲ್ಲಿ ಗುರುವಾರ ನಡೆದ ವಿವಾಹ ಆರತಕ್ಷತೆಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಭಾಗವಹಿಸಿದ್ದರು.

ಮೈಸೂರು,ಆ.22(ಪಿಎಂ)– ಕರ್ನಾಟಕ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಖಾಸಗಿ ಕಾರ್ಯಕ್ರಮ ನಿಮಿತ್ತ ಗುರುವಾರ ಸಂಜೆ ಮೈಸೂರಿಗೆ ಆಗಮಿಸಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ಬಳಿಕ ಮೊದಲ ಬಾರಿಗೆ ಅವರು ಮೈಸೂರಿಗೆ ಭೇಟಿ ನೀಡಿ ಖಾಸಗಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆಗಳು ಜರುಗುತ್ತಿವೆ. ಈ ಹಿನ್ನೆಲೆಯಲ್ಲಿ ರಾಜ್ಯಪಾಲರಿಗೆ ಭಾರೀ ಬಿಗಿ ಭದ್ರತೆ ಒದಗಿಸಲಾಗಿದೆ. 'ಮೈಸೂರು' ಸಿಎಂ ತವರು ಆದ ಕಾರಣ ಇಲ್ಲಿ ಭದ್ರತೆ ಮತ್ತಷ್ಟು ಬಿಗಿಯಿಂದಲೇ ಕೂಡಿತ್ತು.

ಇಂದು ಸಂಜೆ ಬೆಂಗಳೂರು ರಾಜಭವನದಿಂದ ರಸ್ತೆ ಮೂಲಕ ಮೈಸೂರಿಗೆ ಬಂದ ರಾಜ್ಯಪಾಲರು, ದಟ್ಟಗಳ್ಳಿಯಲ್ಲಿರುವ ಸಾರಾ ಕನ್ವೇನ್‌ಷನ್ ಹಾಲ್‌ನಲ್ಲಿ ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಇ.ಎಸ್. ಇಂದ್ರೇಶ್ ಅವರ ಸಹೋದರರಾದ ಇ.ಎಸ್.ರಾಧಾಕೃಷ್ಣ ಅವರ ಪುತ್ರಿ ಆರ್.ವರ್ಷಿಣಿ ಅವರ ವಿವಾಹ ಆರತಕ್ಷತೆಯಲ್ಲಿ ಭಾಗವಹಿಸಿದ್ದರು. ಝೆಡ್ ಪ್ಲಸ್ ಭದ್ರತೆಯೊಂದಿಗೆ ಬಂದ ರಾಜ್ಯಪಾಲರು, ನವಜೋಡಿಗೆ ಶುಭಾಶಯ ಕೋರಿದರು. ಬಳಿಕ ಭೋಜನ ಸ್ವೀಕರಿಸಿದರು. ಅರ್ಧ ತಾಸಿಗೂ ಹೆಚ್ಚು ಕಾಲ ವಿವಾಹ ಆರತಕ್ಷತೆಯಲ್ಲಿ ಇದ್ದ ಅವರು, ಬಳಿಕ ಬೆಂಗಳೂರು ರಾಜಭವನಕ್ಕೆ ಮರಳಿದರು. ರಾಜ್ಯಪಾಲರು ಸಂಚರಿಸುವ ಮಾರ್ಗದುದ್ದಕ್ಕೂ ಬಿಗಿ ಪೊಲೀಸ್ ಭದ್ರತೆ ಒದಗಿಸಲಾಗಿತ್ತು. ಮೈಸೂರು ನಗರದಲ್ಲೂ ಅವರು ಬಂದು ಮರಳುವ ಮಾರ್ಗದೆಲ್ಲೆಡೆ ಭಾರಿ ಪೊಲೀಸ್ ಬಂದೋಬಸ್ತ್‌ಗೆ ಕ್ರಮ ವಹಿಸಲಾಗಿತ್ತು. ನಗರದ ಪ್ರಮುಖ ಜಂಕ್ಷನ್‌ಗಳಲ್ಲಿ ಪೊಲೀಸರನ್ನು ನಿಯೋಜಿಸಲಾಗಿತ್ತು. ಅಲ್ಲದೆ, ಕೆಲವೆಡೆ ಬೆಂಗಾವಲು ಪಡೆಗಳ ಗಸ್ತಿಗೆ ವ್ಯವಸ್ಥೆ ಮಾಡಲಾಗಿತ್ತು. ಡಿಸಿಪಿ, ಎಸಿಪಿ ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್ ಮಟ್ಟದ ಅಧಿಕಾರಿಗಳು ಭದ್ರತಾ ಕರ್ತವ್ಯದಲ್ಲಿ ಭಾಗವಹಿಸಿದ್ದರು.

ಸಾರಾ ಕನ್ವೇನ್‌ಷನ್ ಹಾಲ್ ಆವರಣದಲ್ಲಿ ಕೆಎಸ್‌ಆರ್‌ಪಿ, ಸಿಎಆರ್ ತುಕಡಿಗಳನ್ನು ನಿಯೋಜಿಸಲಾಗಿತ್ತು. ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ, ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಭಾರಿ ಪೊಲೀಸ್ ಪಹರೆಯಲ್ಲಿ ರಾಜ್ಯಪಾಲರು ಮೈಸೂರಿಗೆ ಭೇಟಿ ನೀಡಿ, ಮರಳಿದರು.

ಮಾಜಿ ಪ್ರಧಾನಿ ಹೆಚ್‌ಡಿಡಿ ಭಾಗಿ: ಇದಕ್ಕೂ ಮುನ್ನ ಮಾಜಿ ಪ್ರಧಾನಿಗಳೂ ಆದ ರಾಜ್ಯಸಭಾ ಸದಸ್ಯ ಹಾಗೂ ಜೆಡಿಎಸ್ ವರಿಷ್ಠ ಹೆಚ್.ಡಿ.ದೇವೇಗೌಡರು ಸದರಿ ವಿವಾಹ ಆರತಕ್ಷತೆಯಲ್ಲಿ ಪಾಲ್ಗೊಂಡಿದ್ದರು. ನವಜೋಡಿಗೆ ಶುಭ ಕೋರಿ ಮರಳುವ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡದೇ ಕೈ ಮುಗಿದು ನಿರ್ಗಮಿಸಿದರು. ಅವರೊಂದಿಗೆ ಮಾಜಿ ಸಚಿವರಾದ ಸಾ.ರಾ.ಮಹೇಶ್, ಸಿ.ಎಸ್.ಪುಟ್ಟರಾಜು ಸೇರಿದಂತೆ ಅನೇಕ ಮುಖಂಡರು ಸಹ ಇದ್ದರು. ಬಳಿಕ ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಗಣ್ಯಾತಿಗಣ್ಯರು ಸದರಿ ವಿವಾಹ ಆರತಕ್ಷತೆಯಲ್ಲಿ ಪಾಲ್ಗೊಂಡಿದ್ದರು.